

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ನೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 248, ಪುಟಗಳು: 8, ಭಾನುವಾರ, 16 ಜೂನ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

### ಸುಭಾಷಿತ

ಸಾವಿರ ಯುದ್ಧಗಳನ್ನು ಗೆಲ್ಲುವುದಕ್ಕಿಂತ ನಿಮ್ಮನ್ನು ನೀವು ಗೆಲ್ಲುವುದು ಉತ್ತಮ. ಇದೇ ನಿಜವಾದ ವಿಜಯ. ಇದನ್ನು ನಿಮ್ಮಿಂದ ಕಿತ್ತುಕೊಳ್ಳಲು ಯಾರಿಗೂ ಸಾಧ್ಯವಿಲ್ಲ.

। ಗೌತಮ ಬುದ್ಧ

### ಪಂಚಾಂಗ

(ಭಾನುವಾರ 16, ಜೂನ್-2024)

- ಕ್ರೋಧಿ ನಾಮ, ಗ್ರೀಷ್ಮ ಋತು
- ಉತ್ತರಾಯಣ, ಜೇಷ್ಠ ಮಾಸ
- ಶುಕ್ಲ ಪಕ್ಷ, ದಶಮಿ, ಹಸ್ತಾ ನಕ್ಷತ್ರ
- ರಾಹುಕಾಲ : 05:10 : 06:47
- ಗುಳಿಕಕಾಲ : 03:33 : 5:10
- ಯಮಗಂಡಕಾಲ : 12:20 : 01:57




# ಸಿರಿಗೆರೆ ತರಳಬಾಳು ಬೃಹನ್ಮಠದ ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಜನ್ಮದಿನ

**ಚಿತ್ರದುರ್ಗ:** ಚಿತ್ರದುರ್ಗ ಜಿಲ್ಲೆಯಲ್ಲಿನ ಸಿರಿಗೆರೆಯ ತರಳಬಾಳು ಬೃಹನ್ಮಠ ಕೇವಲ ರಾಜ್ಯವಲ್ಲದೆ, ರಾಷ್ಟ್ರವ್ಯಾಪಿ ಹೆಸರುವಾಸಿಯಾಗಿದೆ. ಈ ಮಠವು ಬಹಳ ಪಾರಂಪರಿಕ ಕಾಲದಿಂದಲೇ ಅಸ್ತಿತ್ವಕ್ಕೆ ಬಂದಿದೆ. ಈ ಮಠವನ್ನು 12ನೇ ಶತಮಾನದಲ್ಲಿ ಬಸವಣ್ಣನವರ ಸಮಕಾಲಿನರಾದ ಶ್ರೇಷ್ಠ ಸನ್ಯಾಸಿಯಾದ ''ಮರುಳಸಿದ್ದ''ರು ಸ್ಥಾಪಿಸಿ, 'ತರಳಬಾಳು' ಎಂದು ಆರ್ಶೀವದಿಸಿದ್ದಾರೆ. ತರಳಬಾಳು ಹುಣ್ಣಿಮೆ ಮಹೋತ್ಸವ ಸಾಕಷ್ಟು ಪ್ರಸಿದ್ಧಿ ಪಡೆದಿದೆ. ತರಳಬಾಳ ಬೃಹನ್ಮಠವನ್ನು ಅನೇಕ ಭಕ್ತರು ನ್ಯಾಯಪೀಠ ಎಂದೂ ಕರೆಯುತ್ತಾರೆ. ತರಳಬಾಳು ಜಗದ್ಗುರು ಬೃಹನ್ಮಠದ ಪೀಠಾಧಿಕಾರಿಯಾಗಿರುವ ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಯವರ ಜನ್ಮದಿನ ಇಂದು. ಸ್ವಾಮೀಜಿ ಅವರ ಜನ್ಮದಿನಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಶುಭ ಹಾರೈಸಿದ್ದಾರೆ.




ತರಳಬಾಳು ಜಗದ್ಗುರು ಬೃಹನ್ಮಠದ ಪೀಠಾಧಿಕಾರಿಯಾಗಿರುವ ಡಾ. ಶಿವಮೂರ್ತಿ ಸ್ವಾಮೀಜಿಯವರು ಹುಟ್ಟಿದ್ದು ಶಿವಮೊಗ್ಗದ ಜಿಲ್ಲೆಯ ತುಂಗಾ ಮತ್ತು ಭದ್ರಾ ನದಿಗಳ ಸಂಗಮ ಸ್ಥಳದ ಬಳಿಯ ಸೂಗೂರು ಗ್ರಾಮದಲ್ಲಿ. ಇವರ ಪೂರ್ವಾಶ್ರಮದ ಹೆಸರು 'ಶಿವಮೂರ್ತಿ'. ಬಾಲ್ಯದಲ್ಲಿಯೇ ಸಂಗೀತದ ಆಸಕ್ತಿ ಹೊಂದಿದ್ದ ಬಾಲಕ ಶಿವಮೂರ್ತಿ, ವಿಜ್ಞಾನ ವಿಷಯದಲ್ಲಿಯೂ ಮುಂದು. ವಿಜ್ಞಾನದ ಪದವೀಧರರಾಗಿ, ನಂತರ, 1976ರಲ್ಲಿ ಬನಾರಸ್ ವಿಶ್ವವಿದ್ಯಾಲಯದಲ್ಲಿ ಓದಿ, 'ಎ ಕ್ರಿಟಿಕಲ್ ಸ್ಟಡಿ ಆಫ್ ಸೂತ್ರ ಸಂಹಿತಾ' ಕುರಿತ ಸಂಸ್ಕೃತ ಅಧ್ಯಯನದಲ್ಲಿ ಡಾಕ್ಟರೇಟ್ ಪಡೆದರು. 1977-79ರ ಅವಧಿಯಲ್ಲಿ ಆಸ್ಟ್ರಿಯಾ ದೇಶದ ವಿಯೆನ್ನಾ ವಿಶ್ವವಿದ್ಯಾಲಯದ ಇಂಡಾಲಜಿ ಸಂಸ್ಥೆಯಲ್ಲಿ ಡಾಕ್ಟರೇಟ್ ಪಡೆದರು.

12ನೇ ಶತಮಾನದ ಮಹಾನ್ ಸಂತರಾದ ಶ್ರೀ ಮರುಳಸಿದ್ಧರು ಸ್ಥಾಪಿಸಿದ ಸಿರಿಗೆರೆಯ ತರಳಬಾಳು ಜಗದ್ಗುರು ಬೃಹನ್ಮಠದ 21ನೇ ಪೀಠಾಧಿಕಾರಿಯಾಗಿ 1979ರಲ್ಲಿ ಡಾ. ಶಿವಮೂರ್ತಿಯವರಿಗೆ ಪಟ್ಟಾಭಿಷೇಕವಾಯಿತು. ಅಂದಿನಿಂದ ಅವರು, ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಎಂಬ ಹೆಸರಿನಿಂದ ಧರ್ಮಪೀಠದಲ್ಲಿ ಕಾರ್ಯನಿರ್ವಹಿಸಿಕೊಂಡು ಬರುತ್ತಿದ್ದಾರೆ.

ಸ್ವಾಮೀಜಿಯವರು ಶ್ರೀ ತರಳಬಾಳು ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾಗಿದ್ದಾರೆ. ಈ ಶಿಕ್ಷಣ ಸಂಸ್ಥೆಯು ಶಿಶುವಿಹಾರದಿಂದ ತಾಂತ್ರಿಕ ಮಹಾ ವಿದ್ಯಾಲಯಗಳವರೆಗೆ ಸುಮಾರು 200 ಶೈಕ್ಷಣಿಕ ಅಂಗಸಂಸ್ಥೆಗಳನ್ನು ಹೊಂದಿದ್ದು, ಕರ್ನಾಟಕ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯಾದಾನದ ಮಹತ್ತದ ಉದ್ದೇಶದಿಂದ ಜ್ಞಾನದಾಸೋಹದ ಪರಂಪರೆಯನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಮೇಲುಕೋಟೆ ಚೆಲುವನಾರಾಯಣ ಸ್ವಾಮಿ ದೇವಾಲಯದ ಪ್ರಥಮ ಸ್ಥಾನಿಕ ವಿಧಿವಶ

**ಮಂಡ್ಯ:** ಮೇಲುಕೋಟೆ ಚೆಲುವನಾರಾಯಣಸ್ವಾಮಿ ದೇವಾಲಯದ ಪ್ರಥಮ ಸ್ಥಾನಿಕ ಕರಗಂ ನಾರಾಯಣ ಅಯ್ಯಂಗಾರ್ (82) ಅವರು ಭಾನುವಾರ ವಿಧಿವಶರಾಗಿದ್ದಾರೆ.



ಅಂತ್ಯಕ್ರಿಯೆ ಮುಗಿಯುವವರೆಗೂ ಮೇಲುಕೋಟೆ ದೇವಾಲಯ ಬಾಗಿಲು ಮುಚ್ಚಿರಲಿದ್ದು ಮಧ್ಯಾಹ್ನ 12 ಗಂಟೆ ನಂತರ ದೇವರ ದರ್ಶನಕ್ಕೆ ಅವಕಾಶ ನೀಡಲಾಗುತ್ತೆ ಎಂದು ದೇವಸ್ಥಾನದ ಆಡಳಿತ ಮಂಡಳಿ ಮಾಹಿತಿ ನೀಡಿದೆ.

ಪುಟ 2

### ಅಡ್ಡಾದಿಡ್ಡಿ ಕಾರು ಚಲಾಯಿಸಿದ್ದನ್ನು ಪ್ರಶ್ನಿಸಿದ್ದಕ್ಕೆ ಕೊಲೆ




**ಹೊಸಕೋಟೆ:** ಅಡ್ಡಾದಿಡ್ಡಿ ಕಾರು ಚಲಾಯಿಸಿದ್ದನ್ನು ಪ್ರಶ್ನಿಸಿದ್ದಕ್ಕೆ ಯುವಕನನ್ನು ಕೊಲೆ ಮಾಡಿರುವ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ಹೊರವಲಯದ ರಾಷ್ಟ್ರೀಯ ಹೆದ್ದಾರಿ 75ರ ಡಾಬಾ ಬಳಿ ನಡೆದಿದೆ. ಹೊಸಕೋಟೆ ತಾಲೂಕಿನ ಗಂಗಾಪುರ ನಿವಾಸಿ ನವೀನ್ ನಾಯಕ್ (27) ಕೊಲೆಯಾದ ಯುವಕ. ನವೀನ್ ತರಕಾರಿ ವ್ಯಾಪಾರಕ್ಕೆಂದು ಹೊಸಕೋಟೆ ಕಡೆ ಬರುತ್ತಿದ್ದರು. ಇದೇ ವೇಳೆ ಗುಂಪೊಂದು ಹೆದ್ದಾರಿಯಲ್ಲಿ ಅಡ್ಡಾದಿಡ್ಡಿ ಕಾರು ಚಲಾಯಿಸಿಕೊಂಡು ಹೋಗುತ್ತಿತ್ತು. ಇದನ್ನು ಕಂಡು ನವೀನ್ ಗುಂಪನ್ನು ಪ್ರಶ್ನಿಸಿದ್ದಾರೆ. ಇಷ್ಟಕ್ಕೆ ಗುಂಪು ನವೀನ್ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆಮಾಡಿ ಕೊಲೆ ಮಾಡಿದೆ. ಕೊಲೆ ಮಾಡಿದ ಬಳಿಕ ದುಷ್ಕರ್ಮಿಗಳು ವಾಹನ ಸಮೇತ ಪರಾರಿಯಾಗಿದ್ದಾರೆ.

ಪುಟ 2

# ಮೈಸೂರಿನಲ್ಲಿ 'ದಾಸ' ತಂಗಿದ್ದ ಹೋಟೇಲ್, ಇತರೆಡೆ ಮಹಜರ್

# ಕಾರಿಗೆ ಬರುತ್ತಾ ಕಂಟಕ?

**ಬೆಂಗಳೂರು:** ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಪ್ರಕರಣವು ದಿನಕ್ಕೊಂದು ಟ್ವಿಸ್ಟ್ ಪಡೆದುಕೊಳ್ಳುತ್ತಿದೆ. ಪ್ರಕರಣದ ಕುರಿತು ಬಿರುಸಿನ ತನಿಖೆ ನಡೆಸುತ್ತಿರುವ ಪೊಲೀಸರು ಮೈಸೂರಿನಲ್ಲಿಯೂ ಮಹಜರು ನಡೆಸಲಿದ್ದಾರೆ.

ರೇಣುಕಾಸ್ವಾಮಿ ಕೊಲೆ ಬಳಿಕ ಎ-2 ಆರೋಪಿ ದರ್ಶನ್ ಮೈಸೂರಿಗೆ ತೆರಳಿದ್ದರು. ಖಾಸಗಿ ಹೋಟೇಲ್ ನಲ್ಲಿ ವಾಸ್ತವ್ಯ ಹೂಡಿದ್ದ ದರ್ಶನ್, ಅಲ್ಲಿಂದಲೇ ಮೃತದೇಹ ವಿಲೇವಾರಿ ಮಾಡಲು ಫೋನ್ ಮಾಡಿರುವ ಶಂಕೆ ವ್ಯಕ್ತವಾಗುತ್ತಿದೆ. ಅಲ್ಲದೇ ಆರೋಪಿಗಳು ಸರೆಂಡರ್ ಆಗಲು ಮೀನಾಮೇಷ ಎಣಿಸಲಾಗಿತ್ತು. ಮೈಸೂರಿನಲ್ಲಿ ದರ್ಶನ್ ಭೇಟಿಯಾಗಿದ್ದ ಬಗ್ಗೆ ಮಾಹಿತಿ ಸಿಕ್ಕಿದ್ದರಿಂದ ಪೊಲೀಸರು ಮೈಸೂರಿಗೆ ತೆರಳಿ ತನಿಖೆ ನಡೆಸಲಿದ್ದಾರೆ.

ದರ್ಶನ್ ತಂಗಿದ್ದ ಹೋಟೇಲ್ ರೂಂ ಹಾಗೂ ಇತರೆಡೆ ತನಿಖೆ ನಡೆಸಲಿದ್ದಾರೆ. ಹೋಟೇಲ್‌ನಲ್ಲಿ ಪರಿಶೀಲನೆ ನಡೆಸಿ ಮಹಜರು ನಡೆಸುವ ಸಾಧ್ಯತೆಗಳಿವೆ. ಹೀಗಾಗಿ ಇಂದು ದರ್ಶನ್ ಮೈಸೂರಿಗೆ ಕರೆದೊಯ್ಯಲು ಸಿದ್ಧತೆ ನಡೆಸಲಾಗುತ್ತಿದೆ. ದರ್ಶನ್ ವಿಚಾರವಾಗಿ ಎಲ್ಲಾ ಆಯಾಮಗಳಲ್ಲಿಯೂ ತನಿಖೆ ನಡೆಸಲಾಗುತ್ತಿದ್ದು, ಹೆಚ್ಚಿನ ಸಾಕ್ಷ್ಯಗಳನ್ನ ಸಂಗ್ರಹಿಸಲು ಇಂಚಿಂಚೂ ಪರಿಶೀಲನೆ ನಡೆಸಲಾಗುತ್ತಿದೆ.

ಪುಟ 2






### ದರ್ಶನ್ ಪ್ರಕರಣ: ಪತ್ರಕರ್ತನ ಮೇಲೆ ಹಲ್ಲೆ ದೂರು ದಾಖಲು

**ಬೆಂಗಳೂರು:** ದರ್ಶನ್ ಕೊಲೆ ಆರೋಪಿಯಾಗಿ ಜೈಲು ಸೇರಿದ್ದಾರೆ. ದರ್ಶನ್ ರೀತಿ ಅವರ ಅಭಿಮಾನಿಗಳು ಸಹ ಒರಟು ಸ್ವಭಾವದವರೇ. ದರ್ಶನ್ ಅನ್ನು ಇರಿಸಲಾಗಿರುವ ಜೈಲಿನ ಬಳಿ, ಕೋರ್ಟ್‌ಗೆ ಕರೆದುಕೊಂಡು ಹೋದಾಗ ಹಿಂಬಾಲಿಸುವುದು, 'ಡಿ ಬಾಸ್' ಘೋಷಣೆಗಳನ್ನು ಕೂಗುವುದು ಮಾಡುತ್ತಲೇ ಇದ್ದಾರೆ. ಸಾಮಾಜಿಕ ಜಾಲತಾಣದಂತೂ ಕೊಲೆ ಆರೋಪಿ ದರ್ಶನ್ ಅವರನ್ನು ಬೆಂಬಲಿಸಿ ಚಿತ್ರ-ವಿಚಿತ್ರ ಪೋಸ್ಟ್‌ಗಳನ್ನು ಮಾಡುತ್ತಿದ್ದಾರೆ. ಇದೀಗ ದರ್ಶನ್ ಪ್ರಕರಣ ವರದಿ ಮಾಡಲು ತೆರಳಿದ್ದ ಪತ್ರಕರ್ತರೊಬ್ಬರ ಮೇಲೆ ತೀವ್ರವಾಗಿ ಹಲ್ಲೆಮಾಡಿರುವ ಆರೋಪಕ್ಕೆ ಕೆಲ ದರ್ಶನ್ ಅಭಿಮಾನಿಗಳು ಗುರಿಯಾಗಿದ್ದಾರೆ.

ನಿನ್ನೆ ದರ್ಶನ್, ಪವಿತ್ರಾ ಗೌಡ ಹಾಗೂ ಇನ್ನೂ ಹಲವು ಆರೋಪಿಗಳನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿತ್ತು.

ಪುಟ 2

### ಉಕ್ರೇನ್ ನ ಶಾಂತಿ ಶೃಂಗಸಭೆಯಲ್ಲಿ ಭಾರತ ಭಾಗಿ

# ರಷ್ಯಾಗಿಲ್ಲ ಆಹ್ವಾನ

**ಉಕ್ರೇನ್:** ರಷ್ಯಾಮತ್ತು ಉಕ್ರೇನ್ ನಡುವೆ ಕದನ ಆರಂಭವಾಗಿ 840 ದಿನಗಳು ಕಳೆದಿವೆ. ಈ ಯುದ್ಧದಲ್ಲಿ ಸಾವಿರಾರು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಈ ಯುದ್ಧವನ್ನು ಶಾಂತಿಯುತವಾಗಿ ಕೊನೆಗೊಳಿಸಲು ಉಕ್ರೇನ್ ಬಯಸಿದೆ. ಹಾಗಾಗಿ ಶಾಂತಿ ಶೃಂಸಭೆಯನ್ನು ಆಯೋಜಿಸಿದೆ. ಸ್ವಿಟ್ಜರ್ಲೆಂಡ್‌ನ ಬರ್ಗೆನ್‌ಸ್ಟಾಕ್ ರೆಸಾರ್ಟ್‌ನಲ್ಲಿ ಶಾಂತಿ ಶೃಂಗಸಭೆ ಇಂದಿನಿಂದ ಆರಂಭವಾಗಲಿದೆ. ಭಾರತವು ಈ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದು, ರಷ್ಯಾಗೆ ಆಹ್ವಾನ ನೀಡಿಲ್ಲ. ರಷ್ಯಾ-ಉಕ್ರೇನ್ ಶಾಂತಿ ಯೋಜನೆಯನ್ನು ರಚಿಸಲು ಇದು ಅತ್ಯಂತ ಮಹತ್ವಾಕಾಂಕ್ಷೆಯ ಪ್ರಯತ್ನಗಳಲ್ಲಿ ಒಂದಾಗಿದೆ. ಈ ವರ್ಷದ ಮಾರ್ಚ್‌ನಲ್ಲಿ ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಅವರು ಔಪಚಾರಿಕ ಶಾಂತಿ ಶೃಂಗಸಭೆಗೆ ಭಾರತವನ್ನು ಆಹ್ವಾನಿಸಿದ್ದರು. ಜನವರಿ 2024 ರಲ್ಲಿ, ಸ್ವಿಸ್ ಸರ್ಕಾರವು ರಷ್ಯಾ-ಉಕ್ರೇನ್ ಯುದ್ಧದ ಶಾಂತಿ ಸೂತ್ರದ ಕುರಿತು ದೇಶವು ಜಾಗತಿಕ ಶೃಂಗಸಭೆಯನ್ನು ಆಯೋಜಿಸುತ್ತದೆ ಎಂದು ಘೋಷಿಸಿತು.

ಪುಟ 2



### ಗ್ಯಾರಂಟಿ ಭರವಸೆಯಲ್ಲಿದ್ದ ಜನರಿಗೆ ಬೆಲೆ ಏರಿಕೆ ಬರೆ

# ಪೆಟ್ರೋಲ್-ಡೀಸೆಲ್ ತೆರಿಗೆ ಹೆಚ್ಚಳ

**ಬೆಂಗಳೂರು:** ತಕ್ಷಣದಿಂದಲೇ ಜಾರಿಗೆ ಬರುವಂತೆ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ತೆರಿಗೆಯನ್ನು ರಾಜ್ಯ ಸರಕಾರ ಹೆಚ್ಚಳ ಮಾಡಿದೆ. ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ಕರ್ನಾಟಕ ಮಾರಾಟ ತೆರಿಗೆ ಸುಮಾರು ಶೇಕಡಾ 4ರಷ್ಟು ಏರಿಕೆ ಮಾಡಲಾಗಿದೆ. ಇದರಿಂದ ಲೀಟರ್‌ಗೆ 3 ರೂ. ಗಿಂತ ಹೆಚ್ಚು ಏರಿಕೆ ಕಾಣಲಿದೆ ಪೆಟ್ರೋಲ್ ಹಾಗೂ ಡೀಸೆಲ್ ದರ. ಬೆಂಗಳೂರಿನಲ್ಲಿ ಪೆಟ್ರೋಲ್ ದರ 102.87 ರೂ.ಗೆ ತಲುಪಲಿದೆ, ಒಂದು ಲೀಟರ್ ಡೀಸೆಲ್ ಬೆಲೆ 88.95 ರೂ.ಗೆ ಮುಟ್ಟಲಿದೆ.

ಸರ್ಕಾರದ ನಿರೀಕ್ಷೆಗಿಂತ ಪಂಚ ಗ್ಯಾರಂಟಿಗಳ ವೆಚ್ಚ ಹೆಚ್ಚಾಗಿದೆ. ಐದು ಗ್ಯಾರಂಟಿಗಳಿಗೆ 36 ಸಾವಿರ ಕೋಟಿ ಎಂದು ಕಾಂಗ್ರೆಸ್ ಸರ್ಕಾರ ನಿರೀಕ್ಷೆಯಲ್ಲಿತ್ತು. ಆದರೆ ಎಂಟು ತಿಂಗಳಿಗೆ 46 ಸಾವಿರ ಕೋಟಿಗೂ ಹೆಚ್ಚು ವೆಚ್ಚವಾಗಿದೆ. ಈ ವರ್ಷ 52 ಸಾವಿರ ಕೋಟಿಗೂ ಹೆಚ್ಚು ವೆಚ್ಚವಾಗುವ ಸಾಧ್ಯತೆ ಇದೆ. ನಿರಂತರವಾಗಿ ವೆಚ್ಚ ಹೆಚ್ಚಳದಿಂದ ಸರ್ಕಾರಕ್ಕೆ ಟೆನ್ಶನ್ ಶುರುವಾಗಿದೆ. ಈ ಹಿನ್ನೆಲೆ ಕರ್ನಾಟಕ ರಾಜ್ಯ ಸರಕಾರ ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ತೆರಿಗೆಯನ್ನು ಹೆಚ್ಚಿಸಿದೆ.



ಹಣಕಾಸು ಇಲಾಖೆ ಹೊರಡಿಸಿದ ಅಧಿಸೂಚನೆ ಪ್ರಕಾರ, ಪೆಟ್ರೋಲ್ ಮೇಲಿನ ಕರ್ನಾಟಕ ಮಾರಾಟ ತೆರಿಗೆ (ಕೆಎಸ್‌ಟಿ) ಯನ್ನು ಸರಕಾರ ಶೇ. 25.92ರಿಂದ ಶೇ. 29.84ಕ್ಕೆ ಹೆಚ್ಚಿಸಿದೆ. ಇದೇ ರೀತಿ ಡೀಸೆಲ್ ಮೇಲಿನ ತೆರಿಗೆಯನ್ನು ಶೇ. 14.34ರಿಂದ ಶೇ. 18.44ಕ್ಕೆ ಏರಿಕೆ ಮಾಡಿದೆ. ಈ ಹೊಸ ತೆರಿಗೆಗಳು ತಕ್ಷಣದಿಂದಲೇ ಜಾರಿಗೆ ಬರಲಿವೆ ಎಂದು ಹೊರಡಿಸಲಾದ ಕರ್ನಾಟಕ ರಾಜ್ಯ ಪತ್ರದಲ್ಲಿ ತಿಳಿಸಲಾಗಿದೆ. ಪೆಟ್ರೋಲ್ ಮೇಲಿನ ಕರ್ನಾಟಕ ಮಾರಾಟ ತೆರಿಗೆಯನ್ನು ಶೇ. 3.92ರಷ್ಟು ಹೆಚ್ಚಿಸಲಾಗಿದ್ದರೆ, ಡೀಸೆಲ್ ಮೇಲಿನ ತೆರಿಗೆಯನ್ನು ಶೇ. 4.1ರಷ್ಟು ಏರಿಕೆ ಮಾಡಲಾಗಿದೆ.

ಪುಟ 2

### ಫ್ರಿಡ್ಜ್ ಗಳಲ್ಲಿ ಗೋಮಾಂಸ ಪತ್ತೆ, 11 ಮನೆಗಳ ನೆಲಸಮ

# 150 ಗೋವುಗಳ ರಕ್ಷಣೆ

**ಮಧ್ಯಪ್ರದೇಶ:** ಫ್ರಿಡ್ಜ್ ಗಳಲ್ಲಿ ಗೋಮಾಂಸವಿಟ್ಟಿರುವ ಆರೋಪದ ಮೇರೆಗೆ ಜಿಲ್ಲಾಡಳಿತವು 11 ಮನೆಗಳನ್ನು ನೆಲಸಮಗೊಳಿಸಿದೆ. ಮಧ್ಯಪ್ರದೇಶದ ಬುಡಕಟ್ಟು ಪ್ರಾಬಲ್ಯದ ಮಾಂಡ್ಲಾದಲ್ಲಿ ಅಕ್ರಮ ಗೋಮಾಂಸ ವ್ಯಾಪಾರದ ವಿರುದ್ಧದ ಕ್ರಮದ ಭಾಗವಾಗಿ, ಸರ್ಕಾರಿ ಭೂಮಿಯಲ್ಲಿ 11 ಜನರು ನಿರ್ಮಿಸಿದ್ದ ಮನೆಗಳನ್ನು ಆಡಳಿತವು ನೆಲಸಮಗೊಳಿಸಿದೆ.

ನೈನ್‌ಪುರದ ಭೈಸವಾಹಿ ಪ್ರದೇಶದಲ್ಲಿ ಬಲಿ ಕೊಡಲು ಹೆಚ್ಚಿನ ಸಂಖ್ಯೆಯಲ್ಲಿ ಗೋವುಗಳನ್ನು ತರಲಾಗಿದೆ ಎಂಬ ರಹಸ್ಯ ಮಾಹಿತಿ ಮೇರೆಗೆ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಮಂಡ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ರಜತ್ ಸಕ್ಲೇಚಾ ತಿಳಿಸಿದ್ದಾರೆ. ಆರೋಪಿಗಳ ಅಡಗುತಾಣದ ಹಿಂದೆ 150 ಹಸುಗಳನ್ನು ಕಟ್ಟಿ ಹಾಕಿರುವುದು ಪತ್ತೆಯಾಗಿದೆ ಎಂದು ಎಸ್ಪಿ ಸಕ್ಲೇಚಾ ತಿಳಿಸಿದ್ದಾರೆ.



ಎಲ್ಲಾ 11 ಆರೋಪಿಗಳ ಮನೆಗಳಲ್ಲಿನ ರೆಫ್ರಿಜರೇಟರ್ ಗಳಿಂದ ಹಸುವಿನ ಮಾಂಸವನ್ನು ವಶಪಡಿಸಿಕೊಳ್ಳಲಾಗಿದೆ. ನಾವು ಪ್ರಾಣಿಗಳ ಕೊಬ್ಬು, ಚರ್ಮ ಮತ್ತು ಮೂಳೆಗಳನ್ನು ಸಹ ಕಂಡುಕೊಂಡಿದ್ದೇವೆ, ಅದನ್ನು ಕೋಣೆಯಲ್ಲಿ ಇರಿಸಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

ವಶಪಡಿಸಿಕೊಂಡ ಮಾಂಸವು ಗೋಮಾಂಸ ಎಂದು ಸ್ಥಳೀಯ ಸರ್ಕಾರಿ ಪಶುವೈದ್ಯರು ಖಚಿತಪಡಿಸಿದ್ದಾರೆ ಎಂದು ಎಸ್ಪಿ ಹೇಳಿದರು.

ಪುಟ 2

### ಬಲಿಕೊಡಲು ಹಸುಗಳನ್ನು ಖರೀದಿ ಮಾಡಿದ ಆರೋಪ

# ಮದರಸಾ ಮೇಲೆ ದಾಳಿ

**ತೆಲಂಗಾಣ:** ಬಲಿಕೊಡಲು ಹಸುಗಳನ್ನು ಖರೀದಿ ಮಾಡಿದ್ದಾರೆ ಎನ್ನುವ ಆರೋಪದ ಮೇಲೆ ಗುಂಪೊಂದು ಮದರಸಾ ಮೇಲೆ ದಾಳಿ ನಡೆಸಿರುವ ಘಟನೆ ತೆಲಂಗಾಣದ ಮೇದಕ್ ನಲ್ಲಿ ನಡೆದಿದೆ. ಈ ಘಟನೆಯಲ್ಲಿ ಹಲವು ಮಂದಿ ಗಾಯಗೊಂಡಿದ್ದಾರೆ, ಮಿರಾಜ್ ಉಲ್ ಉಲೂಮ್ ಮದರಸಾದ ಆಡಳಿತ ಮಂಡಳಿಯು ಬಕ್ರೀದ್ ನಿಮಿತ್ತ ಹಸುಗಳನ್ನು ಬಲಿಗಾಗಿ ಖರೀದಿಸಿತ್ತು. ಅವರು ದನಗಳನ್ನು ಕರೆತಂದ ಕೂಡಲೇ ಮದರಸಾದ ಸುತ್ತಲೂ ಗುಂಪು ಜಮಾಯಿಸಿ ಬಲಿಯನ್ನು ವಿರೋಧಿಸಿತ್ತು, ಆದರೆ ಪೊಲೀಸರು ಸ್ಥಳಕ್ಕಾಗಮಿಸಿ ಗುಂಪನ್ನು ಚದರಿಸಿದರು.

ಆರ್‌ಎಸ್‌ಎಸ್‌ನ ಸಾವಿರಾರು ಮಂದಿ ಹಾಗೂ ಹಿಂದೂಪರ ಸಂಘಟನೆಗಳು ಮದರಸಾ ಮೇಲೆ ದಾಳಿ ಮಾಡಿ ಆಡಳಿತ ಮಂಡಳಿಯ ಸದಸ್ಯರ ಮೇಲೂ ಹಲ್ಲೆ ನಡೆಸಿದ್ದಾರೆ ಎಂದು ಎಐಎಂಐಎಂ ಶಾಸಕ ಎಂ ಕೌಸರ್ ಮೊಹಿಯುದ್ದೀನ್ ಆರೋಪಿಸಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಂತೆ, ಗುಂಪು ಆಸ್ಪತ್ರೆಯನ್ನು ಧ್ವಂಸ ಮಾಡಿದೆ ಎಂದು ಅವರು ಹೇಳಿದರು. ಮೇಡಕ್ ಪಟ್ಟಣದಲ್ಲಿ ಶಾಂತಿ ನೆಲೆಸುವಂತೆ ಪೊಲೀಸ್ ಇಲಾಖೆಯಲ್ಲಿ ಉನ್ನತ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುತ್ತಿದ್ದಾರೆ ಎಂದು ಕೌಸರ್ ಹೇಳಿದ್ದಾರೆ.



ಪುಟ 2

### ಚಿತ್ರಹಿಂಸೆ ನೀಡಿ ಕೊಲೆಗೈದು ಮೈಮೇಲಿದ್ದ ಚಿನ್ನಾಭರಣವನ್ನೂ ದೋಚಿದ್ದ

# ಗ್ಯಾಂಗ್!

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ 'ಡೆವಿಲ್' ಗ್ಯಾಂಗ್ ಕರಾಳ ಮುಖಗಳು ಒಂದೊಂದಾಗಿಯೇ ರಿವೀಲ್ ಆಗುತ್ತಿದೆ. ಬಡಪಾಯಿಯನ್ನು ಚಿತ್ರ-ವಿಚಿತ್ರವಾಗಿ ಹಿಂಸೆ ನೀಡಿ ಕೊಲೆ ಮಾಡಿದ್ದು ಮಾತ್ರವಲ್ಲದೇ ಮೈಮೇಲಿದ್ದ ಒಡವೆಯನ್ನು ಕೂಡ ದೋಚಿರುವುದು ತನಿಖೆಯ ವೇಳೆ ಬಯಲಾಗಿದೆ.



ರೇಣುಕಾಸ್ವಾಮಿ ಬರ್ಬರ ಕೊಲೆಯ ಬಳಿಕ ಅವರ ಮೈಮೇಲಿದ್ದ ಚಿನ್ನಾಭರಣವನ್ನು ಕಳವು ಮಾಡಲಾಗಿದೆ. ಪೊಲೀಸರ ತನಿಖೆ ವೇಳೆ ಈ ಸ್ಫೋಟಕ ಮಾಹಿತಿಯನ್ನು ಆರೋಪಿ ರವಿ ಬಾಯ್ಬಿಟ್ಟಿದ್ದಾನೆ. ರೇಣುಕಾಸ್ವಾಮಿ ಮೈಮೇಲಿದ್ದ ಚಿನ್ನವನ್ನು ಆರೋಪಿ ಜಗ್ಗ ದೋಚಿದ್ದಾನೆ ಎಂದು ಪೊಲೀಸರ ಮುಂದೆ ರವಿ ಸತ್ಯ ಕಕ್ಕಿದ್ದಾನೆ.

ಪುಟ 2

## ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ ಹೆಚ್‌ಡಿಕೆ

**ಬೆಂಗಳೂರು:** ಸಂಸತ್ ಸದಸ್ಯರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಚನ್ನಪಟ್ಟಣ ವಿಧಾನಸಭೆ ಕ್ಷೇತ್ರದ ಶಾಸಕ ಸ್ಥಾನಕ್ಕೆ ಹೆಚ್‌ಡಿ ಕುಮಾರಸ್ವಾಮಿ ರಾಜೀನಾಮೆ ನೀಡಿದ್ದಾರೆ.ನಿನ್ನೆ ಬೆಳಗ್ಗೆ ಸ್ಪೀಕರ್ ಯಟಿ ಖಾದರ್ ಕೊಠಡಿಗೆ ಆಗಮಿಸಿದ ಕುಮಾರಸ್ವಾಮಿ ಅವರು ರಾಜೀನಾಮೆ ಸಲ್ಲಿಸಿದರು.

ರಾಜೀನಾಮೆ ಸಲ್ಲಿಸುವ ವೇಳೆ ಜಿಟಿ ದೇವೇಗೌಡ, ಭೋಜೇಗೌಡರು ಉಪಸ್ಥಿತರಿದ್ದರು.ಲೋಕಸಭಾ ಚುನಾವಣೆಯಲ್ಲಿ ಮಂಡ್ಯದಿಂದ ಗೆದ್ದ ಕುಮಾರಸ್ವಾಮಿ ಮೋದಿ ಸಂಪುಟದಲ್ಲಿ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆಯ ಸಚಿವರಾಗಿ ನೇಮಕವಾಗಿದ್ದಾರೆ.

ಇಂದು ರಾಜೀನಾಮೆ ನೀಡುವ ಮೊದಲು ಬೆಳಗ್ಗೆ ಕುಮಾರಸ್ವಾಮಿ ತಿರುಪತಿಗೆ ತೆರಳಿ ತಿಮ್ಮಪ್ಪನ ದರ್ಶನ ಪಡೆದಿದ್ದರು. ಈ ವೇಳೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ನನಗೆ ದೊಡ್ಡ ಜವಾಬ್ದಾರಿ ನೀಡಿದ್ದಾರೆ. ಕೇಂದ್ರ ಸರ್ಕಾರದ ಸಚಿವನಾಗಿ ನನ್ನ ಕೆಲಸ ಯಶಸ್ವಿಯಾಗಲು ವೆಂಕಟೇಶ್ವರನ ಆಶೀರ್ವಾದ ಪಡೆಯಲು ನಾನು ಬಂದಿದ್ದೇನೆ ಎಂದು ಹೇಳಿದ್ದರು.



## ಯುವಕನಿಗೆ ಜೀವಬೆದರಿಕೆ, ದರ್ಶನ್ ಅಭಿಮಾನಿ ಬಂಧಿಸಿದ ಪೊಲೀಸ್!

**ಯಾದಗಿರಿ:** ನಟ ದರ್ಶನ್ ಅಭಿಮಾನಿಯಿಂದ ಯುವಕನಿಗೆ ಜೀವಬೆದರಿಕೆ ಹಾಕಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಜೀವಬೆದರಿಕೆ ಹಾಕಿದ್ದ ರಾಜುನನ್ನು ಯಾದಗಿರಿ ನಗರ ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ದರ್ಶನ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ರಾಜುನನ್ನು ಪೋಲಿಸರು ಬಂಧಿಸಿದ್ದಾರೆ. ಆಡಿಯೋ ವೈರಲ್ ಆಗ್ತಿದ್ದಂತೆ ಯಾದಗಿರಿ ನಗರ ಠಾಣೆಯ ಪೊಲೀಸರು ಅಲರ್ಟ್ ಆಗಿ ಆರೋಪಿಯನ್ನ ಬಂಧಿಸಿದ್ದಾರೆ.



**ಪ್ರಕರಣದ ಹಿನ್ನಲೆ:** ಯಾದಗಿರಿಯ ಗಂಗಾನಗರದ ಪಂಚರ್ ಅಂಗಡಿ ಯುವಕ ಅಭಿ ಎಂಬಾತನಿಗೆ ದರ್ಶನ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ರಾಜು ಕೊಲೆ ಬೆದರಿಕೆ ಹಾಕಿದ್ದನಂತೆ. ಬಾಸ್ ಬಾಸ್ ಎಂದು ಯಾಕೆ ಬಕೆಟ್ ಹಿಡಿಯುತ್ತಿರಿ, ಬಕೆಟ್ ಯಾಕ್ ಹಿಡಿತೀರಿ. ತಾಯಿ-ತಂದೆಗೆ ಬಕೆಟ್ ಹಿಡಿಯಿರಿ ಎಂದು ಅಭಿ ಇನ್ಸ್ಟಾಗ್ರಾಂನಲ್ಲಿ ಪೋಸ್ಟ್‌ವೊಂದನ್ನು ಹಾಕಿದ್ದನು. ಹೀಗಾಗಿ ಅಭಿಗೆ ಕಾಲ್ ಮಾಡಿ ಜೀವಂತವಾಗಿ ಸುಡೋದಾಗಿ ರಾಜು ಬೆದರಿಸಿದ್ದ. ನಿನ್ನ ಮನೆ ಹಾಗೂ ಅಂಗಡಿಗೆ ಬೆಂಕಿ ಹಚ್ಚಬೇಕಾಗುತ್ತದೆ ಎಂದು ಕರೆ ಮಾಡಿ ಹೆದರಿಸಿದ್ದನು. ಬಾಸ್ ಅಂದ್ರೂ ಅಷ್ಟೇ, ಡಿ ಬಾಸ್ ಅಂದ್ರೂ ಅಷ್ಟೇ. ಬಾಸ್ ಬಗ್ಗೆ ಮಾತಾಡಿದ್ರೆ, ಖಾಲಿಯಾಗ್ತಿದಿ ನೀನು, ಅಂಗಡಿ ಸಮೇತ ಬೆಂಕಿ ಹಚ್ತಾರೆ. ಕೂಡಲೇ ಕ್ಷಮೆ ಕೇಳಿ ವಿಡಿಯೋ ಮಾಡಿ ಹಾಕು. ಹಾಕಿರೋ ವಿಡಿಯೋ ಡಿಲೀಟ್ ಮಾಡು ಎಂದು ದರ್ಶನ್ ಅಭಿಮಾನಿ ಸಂಘದ ಜಿಲ್ಲಾಧ್ಯಕ್ಷ ರಾಜು ಬೆದರಿಕೆ ಹಾಕಿದ್ದನು. ಹೀಗಾಗಿ ರಾಜುನನ್ನು ಪೊಲೀಸರು ಬಂಧಿಸಿದ್ದಾರೆ.

# ಮಾಜಿ ಸಿಎಂ ಯಡಿಯೂರಪ್ಪ ವಿಚಾರದಲ್ಲಿ ಕೋರ್ಟ್‌ನಿಂದ ಸರ್ಕಾರಕ್ಕೆ ಕಪಾಳಮೋಕ್ಷ

**ಹುಬ್ಬಳ್ಳಿ:** ಬಿಎಸ್ ಯಡಿಯೂರಪ್ಪ ವಿರುದ್ಧದ ಪ್ರಕರಣದಲ್ಲಿ ಹೈಕೋರ್ಟ್ ಕರ್ನಾಟಕ ಸರ್ಕಾರಕ್ಕೆ ಕಪಾಳಮೋಕ್ಷ ಮಾಡಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಮೊದಲೇ ನೋಟಿಸ್ ಕೊಟ್ಟು, ಲೋಕಸಭಾ ಚುನಾವಣೆ ಮುಗಿದು ನಮ್ಮ ಸರ್ಕಾರ ಬಂದಿರುವ ಸಮಯದಲ್ಲಿ ಹೀಗೆ ಮಾಡಿದ್ದಾರೆ. ಯಡಿಯೂರಪ್ಪ ನಮ್ಮ ಪಕ್ಷದ ಹಿರಿಯ ನಾಯಕರು. ಸಂಸದೀಯ ಮಂಡಳಿ ಮೆಂಬರ್ ಆಗಿ ದೆಹಲಿಯಲ್ಲಿ ಇರುವುದು ಸಹಜ. ಅವರಿಗೆ ಜಾಮೀನು ರಹಿತ ವಾರೆಂಟ್ ಹೊರಡಿಸಿದ್ದು ತಪ್ಪು ಎಂದು ನ್ಯಾಯಾಲಯವೇ ಹೇಳಿದೆ. ರಾಜ್ಯ ಸರ್ಕಾರವೇ ಇದರ ಸೂತ್ರಧಾರಿ ಎಂದರು.

ಈ ಎಲ್ಲ ಬೆಳವಣಿಗೆಯ ನಂತರ ಇದು ರಾಹುಲ್ ಗಾಂಧಿ ಒತ್ತಡದ ಮೇಲೆ ನಡೆದಿದೆ ಎಂಬುದು ಸ್ಪಷ್ಟ. ಸಿದ್ದರಾಮಯ್ಯ ಖುರ್ಚಿ ಉಳಿಸಿಕೊಳ್ಳಲು ಅತ್ಯಂತ ಹಿರಿಯ ನಾಯಕ ಯಡಿಯೂರಪ್ಪರನ್ನು ಬಂಧಿಸುವ ಮೂಲಕ ಸೇಡಿನ ರಾಜಕಾರಣಕ್ಕೆ ಕಾಂಗ್ರೆಸ್ ಸರ್ಕಾರ ಮುಂದಾಗಿತ್ತು. ಆದರೆ, ದೇಶದಲ್ಲಿ ನ್ಯಾಯಾಂಗ ವ್ಯವಸ್ಥೆ ಬಲವಾಗಿದೆ ಎಂದು ಜೋಶಿ ಹೇಳಿದರು.



ಧಾರವಾಡದಲ್ಲಿ ಹಿಂದೂ ಕಾರ್ಯಕರ್ತನ ಮೇಲೆ ಹಲ್ಲೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದಾಗಿನಿಂದ ಹಿಂದೂಗಳ ಮೇಲೆ ಹಲ್ಲೆಗಳಾಗುತ್ತಿವೆ. ಧಾರವಾಡದಲ್ಲಿ ಅಕ್ರಮವಾಗಿ ಗೋವು ಸಾಗಾಟ ಮಾಡುತ್ತಿದ್ದರು. ಆರೋಗ್ಯವಂತ ದೇಶಿ ಗೋವುಗಳ ಸಾಗಾಟ ಮಾಡುತ್ತಿದ್ದರು. ಹಲ್ಲೆ ಮಾಡಿರುವ ವ್ಯಕ್ತಿ ಮಾಹಿತಿ ಕೊಟ್ಟಿದ್ದಕ್ಕೆ ಹಲ್ಲೆಯಾಗಿದೆ. ಮುಸ್ಲಿಂ ಮತಾಂಧರಿಗೆ ಯಾವುದೇ ಭಯ ಇಲ್ಲ. ರಾಜ್ಯದಲ್ಲಿ ಸಿದ್ದರಾಮಯ್ಯ ಹಿಂದೂ ವಿರೋಧಿ ಸರ್ಕಾರ ನಡೆಸುತ್ತಿದ್ದಾರೆ. ತಪ್ಪಿತಸ್ಥರ ವಿರುದ್ಧ ಸರಿಯಾದ ಕ್ರಮ ತಗೆದುಕೊಳ್ಳದೆ ಹೋದರೆ ನಾವು ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಕೊಲೆ ಆರೋಪದಲ್ಲಿ ದರ್ಶನ ಬಂಧನ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಅಭಿಮಾನಿಗಳ ಅತೀರೇಕದ ವರ್ತನೆಯನ್ನು ನಾಯಕ ನಟರು ನಿಯಂತ್ರಣ ಮಾಡಬೇಕು. ಯಾರೋ ಒಬ್ಬರು ನಟ ತಪ್ಪು ಮಾಡಿದರೆ ಎಲ್ಲರನ್ನೂ ಒಂದೇ ತರಹ ನೋಡಬಾರದು ಎಂದರು. ದರ್ಶನ ಕೃಷಿ ರಾಯಭಾರಿ ಆಗಿರುವ ಬಗ್ಗೆ ಪ್ರತಿಕ್ರಿಯಿಸಿ, ಯಾವುದೇ ಸರ್ಕಾರ ಮಾಡಲಿ, ಅವರ ಪೂರ್ವಾಪರ ಯೋಚನೆ ಮಾಡಬೇಕು. ರಾಯಭಾರಿ ನೇಮಕ ಮಾಡುವ ಸಮಯದಲ್ಲಿ ಪೂರ್ವಾಪರ ಯೋಚನೆ ಮಾಡಬೇಕು. ಅದು ಹಿಂದಿನ ಸರ್ಕಾರ ಮಾಡಿದ್ದರೂ ತಪ್ಪು. ಯಾಕೆಂದರೆ ಅವರು ಹಲ್ಲೆ ಮಾಡಿ ಜೈಲಲ್ಲಿ ಇದ್ದರು. ಪುನೀತ್ ರಾಜಕುಮಾರ್ ಹಲವಾರು ಯೋಜನೆಗೆ ರಾಯಭಾರಿ ಆಗಿದ್ದರು. ಅಂಬರೀ಼ ಒಳ್ಳೆಯ ನಟ, ವಿಷ್ಣುವರ್ಧನ್ ಒಳ್ಳೆಯ ನಟರಾಗಿದ್ದರು. ಹೀಗಾಗಿ ಎಲ್ಲರನ್ನೂ ಒಂದೇ ರೀತಿ ನೋಡಬಾರದು ಎಂದರು.

# ದರ್ಶನ್‌ಗೆ ಹೆಣ್ಣು-ಹೆಂಡದ ನಶೆ ಹೆಚ್ಚಾಗಿತ್ತು, ಸಂಸ್ಕಾರ ಇರಲಿಲ್ಲ

**ಮೈಸೂರು:** ಹೆಣ್ಣು ಮತ್ತು ಹೆಂಡದ ನಶೆ ದರ್ಶನ್‌ಗೆ ಈ ಸ್ಥಿತಿ ತಂದಿಟ್ಟಿದೆ ಎಂದು ರೇಣುಕಾಸ್ವಾಮಿ ಹತ್ಯೆ ಪ್ರಕರಣದ ಕುರಿತು ನಟ ದರ್ಶನ್ ಅವರ ಮೊದಲ ಗುರು ಅಡ್ಡಂಡ ಕಾರ್ಯಪ್ಪ ಹೇಳಿದ್ದಾರೆ.



ಮೈಸೂರಿನಲ್ಲಿ ಮಾತನಾಡಿದ ಅವರು, ದರ್ಶನ್‌ಗೆ ಸಂಸ್ಕಾರ ಇಲ್ಲದ ಕಾರಣ ಆತನಿಗೆ ಈ ಪರಿಸ್ಥಿತಿ ಬಂದಿದೆ. ಪವಿತ್ರಾಗೌಡ ಆತನ ಪಾಲಿಗೆ ಶನಿ ಆಗಿದ್ದಾಳೆ. ಯಶಸ್ಸು ಎಂಬುದು ದರ್ಶನ್ ಒಳಗೆ ಅಹಂ ಬೆಳೆಸಿತು. ಸಿನಿಮಾದಲ್ಲಿ ಮಾಡುವ ಪಾತ್ರವನ್ನು ನಿಜ ಜೀವನದಲ್ಲಿ ಮಾಡೋಕೆ ಹೋಗಿ ಈಗ ಜೈಲು ಸೇರಿದ್ದಾನೆ ಎಂದರು.

ಆತ ನನ್ನ ಶಿಷ್ಯ. ನಾನು ಅವನ ಮೊದಲ ಗುರು. 1987ರಲ್ಲಿ ನಾನು ಆಗ ತಾನೇ ನೀನಾಸಂ ಮುಗಿಸಿ ಬಂದಿದ್ದೆ. ನಾವು ಪ್ರತಿ ವರ್ಷ ಹುಟ್ಟೂರು ಪೊನ್ನಂಪೇಟೆಯಲ್ಲಿ ಮಕ್ಕಳ ಶಿಬಿರವನ್ನು ಮಾಡುತ್ತಿದ್ದೆವು. ದರ್ಶನ್ ಅವರ ಅಜ್ಜಿ ಮನೆ ಕೂಡ ಪೊನ್ನಂಪೇಟೆ. ಅಲ್ಲಿಗೆ ದರ್ಶನ್ ಬೇಸಿಗೆ ರಜೆ ಕಳೆಯಲು ಬರುತ್ತಿದ್ದ. ಅದೇ ಸಮಯಕ್ಕೆ ನಮ್ಮ ಶಿಬಿರ ನಡೆಯುತ್ತಿತ್ತು. ನಾಟಕದಲ್ಲಿ ಸೇರಿಕೋ ಎಂದು ದರ್ಶನ್‌ಗೆ ಹೇಳಿದ್ದೆ. ದರ್ಶನ್ ಆಗ 7ನೇ ತರಗತಿಯಲ್ಲಿದ್ದ. 7ನೇ ತರಗತಿಗೆ 10ನೇ ತರಗತಿಯವರ ರೀತಿ ಕಾಣುತ್ತಿದ್ದ. ನಮ್ಮ ನಾಟಕದಲ್ಲಿ ದರ್ಶನ್‌ಗೆ ರಾಜನ ಪಾತ್ರ ಕೊಟ್ಟಿದ್ದೆ. ತುಂಬಾ ಚೆನ್ನಾಗಿ ಅಭಿನಯಿಸಿದ್ದ. ನನ್ನ ಹೆಂಡತಿಯೇ ದರ್ಶನ್‌ಗೆ ಬಣ್ಣ ಹಚ್ಚಿದ್ದಳು. ಇದಾದ ಬಳಿಕ ಇವರ ಮೊದಲ ಸಿನಿಮಾ ನನಗೆ ಇಷ್ಟವಾಗಲಿಲ್ಲ. ಮತ್ತೊಮ್ಮೆ ಭೇಟಿಯಾದ ಸಂದರ್ಭ ನೀನಾಸಂಗೆ ಹೋಗುವಂತೆ ಪತ್ರ ಕೊಟ್ಟೆ. ಕಲಾವಿದನಾಗಿರುವ ನಾನು ಬೇರೊಬ್ಬ ಕಲಾವಿದನನ್ನು ಬೆಳೆಸುವುದು ನನ್ನ ಜವಾಬ್ದಾರಿ. ಮಂಡ್ಯ ರಮೇಶ್ ಕೂಡ ಒಂದು ಪತ್ರ ಕೊಟ್ಟರು. ಇದಾದ ಬಳಿಕ ದರ್ಶನ್ ಹೆಗ್ಗೋಡುನಲ್ಲಿರುವ ನೀನಾಸಂನಲ್ಲಿ ತರಬೇತಿ ಪಡೆದುಕೊಂಡ ಎಂದು ಹೇಳಿದರು.

ಈಗ ಅವನ ಸ್ಥಿತಿ ಕಂಡು ನನಗೆ ಬೇಸರವಿದೆ. ಅವನ ಫ್ಯಾನ್ಸ್‌ಗಳು ಅವರಿವರನ್ನು ಟ್ರೋಲ್ ಮಾಡುವುದು ಬಿಟ್ಟು ಕೊಲೆಯಾದ ವ್ಯಕ್ತಿಯ ಕುಟುಂಬಕ್ಕೆ ಆರ್ಥಿಕ ಸಹಾಯ ಮಾಡಲಿ ಎಂದು ಹೇಳಿದರು.

# ಮಾಲೀಕರ ಮನೆಯಲ್ಲೇ 225 ಗ್ರಾಂ ಚಿನ್ನ ಕದ್ದ ಕೆಲಸದ ಮಹಿಳೆ ಬಂಧನ

**ಬೆಂಗಳೂರು:** ಮಾಲೀಕರ ಮನೆಯಲ್ಲೇ ಚಿನ್ನಾಭರಣ ಕಳವು ಮಾಡಿದ್ದ ಅಡುಗೆ ಕೆಲಸದ ಮಹಿಳೆಯನ್ನು ಹಲಸೂರು ಠಾಣೆ ಪೊಲೀಸರು ಬಂಧಿಸಿದ್ದಾರೆ. ಜೋಗುಪಾಳ್ಯದ ಮಮತಾ(36) ಬಂಧಿತೆ. ಆರೋಪಿಯಿಂದ 16 ಲಕ್ಷ ಮೌಲ್ಯದ 225 ಗ್ರಾಂ ತೂಕದ ಮೂರು ಚಿನ್ನದ ಗಟ್ಟಿಗಳು ಹಾಗೂ ಎರಡು ಚಿನ್ನ ಬಳೆಗಳನ್ನು ಜಪ್ತಿ ಮಾಡಲಾಗಿದೆ. ಜೋಗುಪಾಳ್ಯ ನಿವಾಸಿ ಅಮರೇಂದ್ರ ಅವರ ಮನೆಯಲ್ಲಿ ಕಳೆದ ನವೆಂಬರ್‌ನಲ್ಲಿ ಚಿನ್ನಾಭರಣ ಕಳ್ಳತನವಾಗಿತ್ತು. ಈ ಸಂಬಂಧ ದಾಖಲಾದ ದೂರಿನ ಮೇರೆಗೆ ತನಿಖೆ ನಡೆಸಿ ಆರೋಪಿಯನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



**ಪ್ರಕರಣದ ಹಿನ್ನೆಲೆ:** ಉದ್ಯಮಿ ಅಮರೇಂದ್ರ ಅವರ ಮನೆಯಲ್ಲಿ ಮಮತಾ ಹಲವು ವರ್ಷಗಳಿಂದ ಅಡುಗೆ ಕೆಲಸ ಮಾಡಿಕೊಂಡಿದ್ದರು. ಮಾಲೀಕರ ನಂಬಿಕೆ ಗಿಟ್ಟಿಸಿದ್ದರು. 2023ರ ನವೆಂಬರ್ 25ರಂದು ಮನೆಯ ಮಾಲೀಕ ಅಮರೇಂದ್ರ ಅವರು ಕುಟುಂಬದ ಸದಸ್ಯರ ಜತೆಗೆ ಕಾರ್ಯಕ್ರಮಕ್ಕೆ ತೆರಳಿದ್ದರು. ಈ ವೇಳೆ ಮಮತಾ ಮಾತ್ರ ಮನೆಯಲ್ಲೇ ಇದ್ದರು. ಇದೇ ಸಮಯ ಬಳಸಿಕೊಂಡು ಮನೆಯ ಕೊಠಡಿಯಲ್ಲಿದ್ದ ಕೀ ತೆಗೆದುಕೊಂಡು ಅಲ್ಮೇರಾದ ತೆರೆದು ಚಿನ್ನದ ಒಡವೆಗಳನ್ನು ಕಳ್ಳತನ ಮಾಡಿದ್ದರು. ಕಾರ್ಯಕ್ರಮ ಮುಗಿಸಿಕೊಂಡು ಮನೆಗೆ ಬಂದರೂ ಮಾಲೀಕರು ಅಲ್ಮೇರಾದಲ್ಲಿದ್ದ ಚಿನ್ನದ ಒಡವೆಗಳನ್ನು ಗಮನಿಸಿರಲಿಲ್ಲ. ಮಮತಾ ಸಹಜವಾಗಿ ಯಾವುದೇ ಅನುಮಾನ ಬಾರದಂತೆ ಮನೆಯಲ್ಲೇ ಅಡುಗೆ ಕೆಲಸ ಮಾಡಿಕೊಂಡು ಇದ್ದರು.

**ಆರು ತಿಂಗಳ ಬಳಿಕ ಕಳ್ಳತನ ಬೆಳಕಿಗೆ:** ಮನೆಯ ಮಾಲೀಕ ಅಮರೇಂದ್ರ ಅವರು ಜೂ.7ರಂದು ಅಲ್ಮೇರಾ ತೆರೆದು ನೋಡಿದಾಗ ಚಿನ್ನಾಭರಣ ಇಲ್ಲದಿರುವುದು ಕಂಡು ಬಂದಿದೆ. ಮನೆಯವರನ್ನು ವಿಚಾರಿಸಿದಾಗ ತಮಗೆ ಗೊತ್ತಿಲ್ಲ ಎಂದು ಹೇಳಿದ್ದಾರೆ. ಈ ಸಂಬಂಧ ಹಲಸೂರು ಠಾಣೆಗೆ ದೂರು ನೀಡಿದ್ದರು. ಮನೆಯ ಅಡುಗೆ ಕೆಲಸದ ಮಮತಾ ಕಳ್ಳತನ ಮಾಡಿರುವ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದರು. ಈ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ ಪೊಲೀಸರು, ಮಮತಾಳನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಮಾಲೀಕರ ಮನೆಯಲ್ಲಿ ಚಿನ್ನಾಭರಣ ಕಳ್ಳತನ ತಾನೇ ಮಾಡಿದ್ದಾಗಿ ತಪ್ಪೊಪ್ಪಿಕೊಂಡಿದ್ದಾರೆ.

**ಆಭರಣ ಕರಗಿಸಿ ಚಿನ್ನದ ಗಟ್ಟಿ ಮಾಡಿದ್ದ ಆರೋಪಿ:** ಪೊಲೀಸರು ಮಮತಾಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ಐದು ದಿನ ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ಮಾಡಿದಾಗ, ಕದ್ದ ಚಿನ್ನಾಭರಣಗಳನ್ನು ಕರಗಿಸಿ ಮೂರು ಚಿನ್ನದ ಗಟ್ಟಿಗಳಾಗಿ ಮಾರ್ಪಡಿಸಿ ತನ್ನ ಮನೆಯಲ್ಲೇ ಇರಿಸಿರುವುದಾಗಿ ಮಮತಾ ಹೇಳಿದ್ದಾರೆ. ಅದರಂತೆ ಪೊಲೀಸರು ಆಕೆಯ ಮನೆಯಲ್ಲಿ ಮೂರು ಚಿನ್ನದ ಗಟ್ಟಿಗಳು ಹಾಗೂ ಎರಡು ಚಿನ್ನದ ಬಳೆಗಳನ್ನು ಜಪ್ತಿ ಮಾಡಿದ್ದಾರೆ. ಸದ್ಯಕ್ಕೆ ಆರೋಪಿ ಮಮತಾ ನ್ಯಾಯಾಂಗ ಬಂಧನದಲ್ಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಶಾಸಕ ಸ್ಥಾನಕ್ಕೆ ಮಾಜಿ ಸಿಎಂ ಬೊಮ್ಮಾಯಿ ರಾಜೀನಾಮೆ

**ಬೆಂಗಳೂರು:** ಹಾವೇರಿ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ ಆಯ್ಕೆಯಾಗಿರುವ ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿಯವರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.



ಸಂಸತ್ ಸದಸ್ಯರಾಗಿ ಆಯ್ಕೆಯಾದ ಹಿನ್ನಲೆಯಲ್ಲಿ ಶಿಗ್ಗಾವಿ ವಿಧಾನಸಭೆ ಕ್ಷೇತ್ರದ ಶಾಸಕ ಸ್ಥಾನಕ್ಕೆ ಅವರು ರಾಜೀನಾಮೆ ನೀಡಿದ್ದಾರೆ. ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್ ಅವರನ್ನು ಕಚೇರಿಯಲ್ಲಿ ಭೇಟಿಯಾಗಿ ರಾಜೀನಾಮೆ ಪತ್ರ ಸಲ್ಲಿಸಿದರು. ಈ ವೇಳೆ ಬೊಮ್ಮಾಯಿಯವರಿಗೆ ವಿಪಕ್ಷ ನಾಯಕ ಆರ್.ಅಶೋಕ್, ಶಾಸಕ ಮುನಿರಾಜು, ಜಿಟಿ ದೇವೇಗೌಡ ಹಾಗೂ ಭೋಜೇ ಗೌಡ ಅವರು ಸಾಥ್ ನೀಡಿದರು. ಬಳಿಕ ರಾಜೀನಾಮೆ ಸ್ವೀಕಾರ ಮಾಡಿದ ಸ್ಪೀಕರ್ ಖಾದರ್ ಅವರು ಬೊಮ್ಮಾಯಿಯವರಿಗೆ ಶುಭಕೋರಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸದನಾಗಿ ಆಯ್ಕೆಯಾದ ಹಿನ್ನಲೆಯಲ್ಲಿ ಎರಡರಲ್ಲಿ ಒಂದು ಸ್ಥಾನ ಇಟ್ಟುಕೊಳ್ಳಬೇಕು. ಹೀಗಾಗಿ ಸ್ಪೀಕರ್ ಭೇಟಿಯಾಗಿ ರಾಜೀನಾಮೆ ನೀಡಿದ್ದೇನೆ. ನನ್ನ ಮತದಾರರಿಗೆ, ಜನತೆಗೆ ಧನ್ಯವಾದ ತಿಳಿಸುತ್ತೇನೆ. ನಿರಂತರವಾಗಿ ನನ್ನ ಕ್ಷೇತ್ರದ ಜನ ನನಗೆ 4 ಬಾರಿ ಆಶೀರ್ವಾದ ಮಾಡಿದ್ದಾರೆ. ಈ ಮೂಲಕ ಕ್ಷೇತ್ರದ ಅಭಿವೃದ್ಧಿ ಮಾಡಲು ಅವಕಾಶ ಮಾಡಿಕೊಟ್ಟಿದ್ದಾರೆ ಎಂದರು. ನನ್ನ ಕ್ಷೇತ್ರವನ್ನು ಹಿಂದುಳಿದ ಕ್ಷೇತ್ರ ಎನ್ನುವ ಹಣೆಪಟ್ಟಿ ತೆಗೆದು ಹಾಕಿದ್ದೇನೆ. ಮೂಲಭೂತ ಸೌಕರ್ಯಗಳನ್ನು ಕೊಟ್ಟಿದ್ದೇನೆ. ಎರಡು ಕೆರೆ ತುಂಬಿಸುವ ಯೋಜನೆ ಮಾಡಿದ್ದೇನೆ. ಉತ್ತಮ ಶಿಕ್ಷಣ ಸಂಸ್ಥೆಗಳನ್ನ ತಂದಿದ್ದೇನೆ. ಎಂಜಿನಿಯರಿಂಗ್, ಮೆಡಿಕಲ್ ಕಾಲೇಜುಗಳನ್ನು ತಂದಿದ್ದೇನೆ. ಕೈಗಾರಿಕೆ ಅಭಿವೃದ್ಧಿ ಮಾಡಿದ್ದೇನೆ. ಬಾಕಿ ಇರುವ ಕೆಲಸ ಮುಗಿಸಲು ಸಿಎಂಗೆ ಮನವಿ ಮಾಡಿದ್ದು, ಸಿಎಂ ಕೂಡಾ ಒಪ್ಪಿಗೆ ನೀಡಿದ್ದಾರೆ ಎಂದರು. ಬೊಮ್ಮಾಯಿ ಅವರು ಹಾವೇರಿ ಲೋಕಸಭಾ ಕ್ಷೇತ್ರದಿಂದ ಈ ಬಾರಿ 43,513 ಮತಗಳಿಂದ ಜಯಗಳಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ 6,62,025 ಮತಗಳನ್ನು ಪಡೆದರೆ ಬೊಮ್ಮಾಯಿ 7,05,538 ಮತಗಳನ್ನು ಪಡೆದು ಗೆಲುವು ಸಾಧಿಸಿದ್ದರು. 2019ರ ಚುನಾವಣೆಯಲ್ಲಿ ಶಿವಕುಮಾರ್ ಉದಾಸಿ ಅವರು ಬಿಜೆಪಿಯಿಂದ ಸ್ಪರ್ಧಿಸಿ ಜಯಗಳಿಸಿದ್ದರು. ಈ ಬಾರಿ ಅವರು ಚುನಾವಣಾ ರಾಜಕೀಯಕ್ಕೆ ನಿವೃತ್ತಿ ಹೇಳಿದ ಹಿನ್ನೆಲೆಯಲ್ಲಿ ಬಿಜೆಪಿ ಹೈಕಮಾಂಡ್ ಬೊಮ್ಮಾಯಿ ಅವರಿಗೆ ಟಿಕೆಟ್ ನೀಡಿತ್ತು.

## ಸ್ವಾಮೀಜಿ ಜನ್ಮದಿನ

ಸುಮಾರು 40 ಸಾವಿರ ವಿದ್ಯಾರ್ಥಿಗಳು ಈ ಅಂಗಸಂಸ್ಥೆಗಳಲ್ಲಿ ಅಧ್ಯಯನ ನಿರತರಾಗಿದ್ದಾರೆ.

ಒಂದು ಧಾರ್ಮಿಕ ಪೀಠದ ಸಮಸ್ತ ಕಾರ್ಯಚಟುವಟಿಕೆಗಳ ಸುಸೂತ್ರ ನಿರ್ವಹಣೆಗೆ ಆಧುನಿಕ ಕಂಪ್ಯೂಟರ್ ತಂತ್ರಜ್ಞಾನವನ್ನು ಭಾರತ ದೇಶದಲ್ಲಿಯೇ ಮೊಟ್ಟಮೊದಲ ಬಾರಿಗೆ ಅಳವಸಿಕೊಂಡು, ಇಂದಿಗೂ ಅದನ್ನು ಯಶಸ್ವಿಯಾಗಿ ಬಳಸಿಕೊಳ್ಳುತ್ತಿರುವ ಕೀರ್ತಿಗೆ ಪಾತ್ರರಾಗಿರುವವರು ತರಳಬಾಳು ಜಗದ್ಗುರು ಬೃಹನ್ಮಠದ ಪೀಠಾಧಿಕಾರಿಗಳಾದ ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು.

ಕರ್ನಾಟಕ ರಾಜ್ಯದಲ್ಲಿ ಅಷ್ಟೇ ಅಲ್ಲ ಭಾರತದ ಯಾವುದೇ ಸ್ವಯಂಸೇವಾ ಅಥವಾ ಧಾರ್ಮಿಕ ಸಂಸ್ಥೆಗಳು ಕಂಪ್ಯೂಟರ್ ಕುರಿತು ಆಲೋಚಿಸುವ ಮುನ್ನವೇ ತಮ್ಮ ಬೃಹನ್ಮಠದ ಕಾರ್ಯಚಟುವಟಿಕೆಗಳಿಗೆ 1984ರಲ್ಲಿಯೇ ಕಂಪ್ಯೂಟರನ್ನು ಬಳಸುವ ಮೂಲಕ ದೇಶದ ಗಮನ ಸೆಳೆದಿದ್ದಾರೆ.

ಪಾಣಿನಿಯ ಸಂಸ್ಕೃತ ಸೂತ್ರಗಳನ್ನು ಆಧರಿಸಿದ 'ಗಣಕಾಷ್ಟಾಧ್ಯಾಯಿ' ತಂತ್ರಾಂಶ ಮತ್ತು 12ನೇ ಶತಮಾನದ ವಚನ ಸಾಹಿತ್ಯ ಕುರಿತು 'ಗಣಕ ವಚನ ಸಂಪುಟ' ತಂತ್ರಾಂಶವನ್ನು ಸಿದ್ಧಪಡಿಸಿದ್ದಾರೆ.

ಭಾರತೀಯ ಸಾಹಿತ್ಯ ಪ್ರಕಾರದಲ್ಲಿಯೇ ವಿಶಿಷ್ಟ ಸ್ಥಾನವನ್ನು ಹೊಂದಿರುವ ವಚನ ಸಾಹಿತ್ಯದ ಪ್ರಸಾರದಲ್ಲಿ ಮಹತ್ವದ ಪಾತ್ರವನ್ನು ವಹಿಸಿರುವ ಸ್ವಾಮೀಜಿಯವರು ಈ ವಚನ ಸಂಪುಟದಲ್ಲಿ ಬಸವಣ್ಣನವರ 1426 ವಚನಗಳು ಮತ್ತು ಇತರ ಶರಣರ 18 ಸಾವಿರ ವಚನಗಳನ್ನು ಇದರಲ್ಲಿ ಅಳವಡಿಸಿದ್ದಾರೆ. ಕಂಪ್ಯೂಟರ್ ತಂತ್ರಾಂಶ ಗುಣಲಕ್ಷಣಗಳಾದ ಹುಡುಕುವುದು ಮತ್ತು ಸೂಚೀಕರಣ ಹಾಗೂ ವಿಂಗಡಣೆಯ ಸೌಲಭ್ಯಗಳನ್ನು ಬಳಸಿ ವಿವಿಧ ವಿಷಯ ಕುರಿತು, ವಿವಿಧ ರಚನೆಕಾರರ ವಚನಗಳನ್ನು ಸುಲಭವಾಗಿ ಹುಡುಕಿ, ವಿಂಗಡಿಸಿ ಪತ್ತೆಮಾಡಿ, ಅವುಗಳನ್ನು ಓದಿಕೊಳ್ಳಬಹುದು, ಕನ್ನಡೇತರರಿಗೆ ಈ ವಚನ ಸಾಹಿತ್ಯದ ಸೊಗಡನ್ನು ಪರಿಚಯಿಸುವ ಉದ್ದೇಶದಿಂದ ಈ ಎಲ್ಲಾ ವಚನಗಳ ಅರ್ಥವನ್ನು ಇಂಗ್ಲಿಷ್ ಭಾಷೆಯಲ್ಲಿಯೂ ಸಹ ನೀಡಲಾಗಿದೆ.

ತರಳಬಾಳು ಬೃಹನ್ಮಠದ ವಾರ್ಷಿಕ ಆಚರಣೆಯಾದ ತರಳಬಾಳು ಹುಣ್ಣಿಮೆ ಮಹೋತ್ಸವನ್ನು ಪ್ರತಿವರ್ಷ ತಪ್ಪದೆ ಸ್ವಾಮೀಜಿ ನಡೆಸುಕೊಂಡು ಬಂದಿದ್ದಾರೆ. ಈ ಮಹೋತ್ಸವಕ್ಕೆ ವಿವಿಧ ಕ್ಷೇತ್ರಗಳ ವಿದ್ವಾಂಸರು ಮತ್ತು ತಜ್ಞರನ್ನು ಆಹ್ವಾನಿಸಿ, ಹಲವು ವಿಷಯಗಳ ಬಗ್ಗೆ ಚರ್ಚೆ ನಡೆಸುತ್ತಾರೆ.

## ಕಾರಿಗೆ ಬರುತ್ತಾ ಕಂಟಕ?

**3 ಕೋಟಿಯ ಕಾರಿಗೂ ಬರುತ್ತಾ ಕಂಟಕ?:** ತನಿಖೆ ಸಾಗುತ್ತಿದ್ದಂತೆ ದರ್ಶನ್ ಕಾರಿನ ಮೇಲೆ ಖಾಕಿ ಕಣ್ಣು ಬಿದ್ದಿದೆ. ಕೃತ್ಯ ನಡೆದ ಬಳಿಕ ದರ್ಶನ್ 3 ಕೋಟಿ ಮೌಲ್ಯದ ಡಿಫೆಂಡರ್ ಕಾರಿನಲ್ಲಿ ಮೈಸೂರಿಗೆ ತೆರಳಿದ್ದರು. ಆ ಸಮಯದಲ್ಲಿ ದರ್ಶನ್ ಬಳಸಿದ್ದ ಕಾರನ್ನು ಇದೀಗ ಪೊಲೀಸರು ಪರಿಶೀಲಿಸೋ ಸಾಧ್ಯತೆ ಇದೆ.

ದರ್ಶನ್‌ನ ವಶಕ್ಕೆ ಪಡೆಯುವಾಗ ತನ್ನ ಕಾರಲ್ಲೇ ಬರೋದಾಗಿ ಹೇಳಿದ್ದರು. ಇದಕ್ಕೆ ಒಪ್ಪದ ಪೊಲೀಸರು ತಮ್ಮ ಬೊಲೆರೊ ಜೀಪ್‌ನಲ್ಲೇ ಕರೆತಂದಿದ್ದರು. ಹೀಗಾಗಿ ಕಳೆದ ಮಂಗಳವಾರದಿಂದ ಕಾರು ಮೈಸೂರಿನ ಹೋಟೆಲ್ ಬಳಿ ಇದೆ. ಈ ಆಯಾಮದಲ್ಲೂ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ದೂರು ದಾಖಲು

ಈ ವೇಳೆ ಮ್ಯಾಜಿಸ್ಟ್ರೇಟ್ ಕೋರ್ಟ್ ಆವರಣದಲ್ಲಿ ಭಾರಿ ಸಂಖ್ಯೆಯ ಜನ ಸೇರಿದ್ದರು. ಪತ್ರಕರ್ತರೂ ಸಹ ಸಾಕಷ್ಟು ಸಂಖ್ಯೆಯಲ್ಲಿದ್ದರು. ಈ ವೇಳೆ ಮೊಬೈಲ್ ಹಿಡಿದು ವರದಿ ಮಾಡುತ್ತಿದ್ದ ಇಂಗ್ಲೀಷ್ ಪತ್ರಿಕೆಯ ವರದಿಗಾರನೊಬ್ಬನ ಮೇಲೆ ಅನಾಮಿಕ ಗುಂಪೊಂದು ತೀವ್ರವಾಗಿ ಹಲ್ಲೆ ಮಾಡಿ ಪರಾರಿಯಾಗಿದೆ.

ನೃಪತುಂಗ ರಸ್ತೆಯ ಹೆಚ್ಚುವರಿ ಮುಖ್ಯ ಮೆಟ್ರೊಪಾಲಿಟನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ದರ್ಶನ್ ಕುರಿತ ವಿಚಾರಣೆ ಆರಂಭವಾಗುವ ಸಮಯದಲ್ಲಿ ಅಲ್ಲಿಯೇ ನೀರಿನ ಟ್ಯಾಂಕ್ ಒಂದರ ಬಳಿ ಪತ್ರಕರ್ತ ರಕ್ಷಿತ್ ಗೌಡ ಎಂಬುವರು ನಿಂತಿದ್ದರು. ಆಗ ಅಲ್ಲಿಗೆ ಬಂದ ಕೆಲವು ಅಪರಿಚಿತರು ನೀನು ಯಾರು ಎಂದು ಪ್ರಶ್ನಿಸಿದ್ದಾರೆ.

### ಮೊದಲನೇ ಪುಟದಿಂದ...

ಪತ್ರಕರ್ತ ಎಂದಾಗ ರಕ್ಷಿತ್ ಗೌಡ ಮೇಲೆ ಹಲ್ಲೆ ಮಾಡಲು ಆರಂಭಿಸಿದ್ದಾರೆ. ಆ ಅಪರಿಚಿತರು ರಕ್ಷಿತ್ ಗೌಡ ಸುಮಾರು 50 ಮೀಟರ್ ಎಳೆದೊಯ್ದು ಹಲ್ಲೆ ಮಾಡಿದ್ದಾರೆ ಎನ್ನಲಾಗುತ್ತಿದೆ. ಹಲ್ಲೆಯಿಂದ ರಕ್ಷಿತ್ ಗೌಡ ಮೂಗು, ಬಾಯಿಗಳಲ್ಲಿ ರಕ್ತ ಬಂದಿದೆ.

ರಕ್ಷಿತ್ ಗೌಡ ಮೇಲೆ ಅವಾಚ್ಯ ಶಬ್ದಗಳಿಂದ ನಿಂದಿಸಿರುವ ಅಪರಿಚಿತರು, ಇನ್ನೊಮ್ಮೆ ಕೋರ್ಟ್ ಆವರಣದಲ್ಲಿ ಕಾಣಿಸಿಕೊಂಡರೆ ಕೊಲ್ಲುತ್ತೇವೆಂದು ಬೆದರಿಕೆ ಹಾಕಿದ್ದಾರೆ. ಅಲ್ಲದೆ ಅವರ ಮೊಬೈಲ್ ಅನ್ನು ಸಹ ಕಸಿದುಕೊಂಡು ಪರಾರಿಯಾಗಿದ್ದಾರೆ. ಘಟನೆಯ ಸಂಬಂಧ ರಕ್ಷಿತ್ ಗೌಡ ಹಲಸೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ವರದಿ ಮಾಡಲು ನ್ಯಾಯಾಲಯಕ್ಕೆ ಹೋಗಿದ್ದ ಹಲವು ಪತ್ರಕರ್ತರಿಗೆ ಕಹಿ ಅನುಭವ ಆಗಿದೆ ಎನ್ನಲಾಗುತ್ತಿದೆ. ಹಲವು ವರದಿಗಾರರಿಂದ ಅವರ ಮೊಬೈಲ್‌ಗಳನ್ನು ಕೆಲವು ಅಪರಿಚಿತರು ಕಸಿದುಕೊಂಡಿದ್ದಾರೆ ಎನ್ನಲಾಗುತ್ತಿದೆ. ಅದಾದ ಬಳಿಕ ಪೊಲೀಸರು ಮಧ್ಯ ಪ್ರವೇಶಿಸಿ ಕೆಲವರ ಮೊಬೈಲ್‌ಗಳನ್ನು ಮರಳಿ ಕೊಡಿಸಿದ್ದಾರೆ. ಹೀಗೆ ಮೊಬೈಲ್‌ಗಳನ್ನು ಏಕೆ ಕಸಿದುಕೊಳ್ಳಲಾಯ್ತು ಎಂಬುದು ತಿಳಿದು ಬರಬೇಕಿದೆ.

ದರ್ಶನ್ ಬಂಧನವಾಗಿದ್ದ ದಿನ, ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಯ ಬಳಿ ಪೊಲೀಸ್ ಅಧಿಕಾರಿಯೊಬ್ಬರು ಪತ್ರಕರ್ತರೊಬ್ಬರ ಮೇಲೆ ಹಲ್ಲೆ ಮಾಡಿದ್ದು ವರದಿಯಾಗಿತ್ತು. ಈಗ ದರ್ಶನ್ ಅಭಿಮಾನಿಗಳು ಎನ್ನಲಾಗುತ್ತಿರುವ ಕೆಲವು ಅಪರಿಚಿತರು ಹಲ್ಲೆ ಮಾಡಿದ್ದಾರೆ.

## ಗ್ಯಾಂಗ್!

ಸುಮ್ಮನಹಳ್ಳಿ ಬಳಿ ರೇಣುಕಾಸ್ವಾಮಿ ಶವವನ್ನ ಎಸೆದರು. ಬಳಿಕ ಪೊಲೀಸ್ ಠಾಣೆಗೆ ಶರಣಾಗುವಂತೆ ಹೇಳಿದರು. ಆದರೆ ಭಯದಿಂದ ಠಾಣೆಗೆ ಹೋಗದೆ ಕಾರಿನಲ್ಲಿ ದುರ್ಗಕ್ಕೆ ಬಂದೆ. ಕಾರಿನಲ್ಲಿ ಜಗ್ಗನ ಜೊತೆ ಚಿತ್ರದುರ್ಗಕ್ಕೆ ಬಂದುಬಿಟ್ಟೆ. ಆರೋಪಿ ಜಗ್ಗ ಚಿನ್ನಾಭರಣ ತೆಗೆದುಕೊಂಡು ಬಂದಿದ್ದ ಎಂದು ರವಿ ಹೇಳಿದ್ದಾನೆ.

**ಘಟನೆ ವಿವರ:** ಜೂನ್ 8 ರಂದು ಚಿತ್ರದುರ್ಗ ಮೂಲದ ರೇಣುಕಾಸ್ವಾಮಿಯನ್ನು ಕಿಡ್ನಾಪ್ ಮಾಡಿ ಬೆಂಗಳೂರಿಗೆ ಕರೆತರಲಾಗಿತ್ತು. ಬಳಿಕ ಬೆಂಗಳೂರಿನ ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾಸ್ವಾಮಿಗೆ ಚಿತ್ರಹಿಂಸೆ ನೀಡಿ ಕೊಲೆ ಮಾಡಲಾಗಿತ್ತು. ಹತ್ಯೆಯ ನಂತರ ಶವವನ್ನು ಸುಮ್ಮನಹಳ್ಳಿ ಮೋರಿಗೆ ಬಿಸಾಕಿ ಪಾತಕಿಗಳು ತೆರಳಿದ್ದಾರೆ. ಇತ್ತ ಮೂವರು ಹಣದ ವಿಚಾರಕ್ಕೆ ಕೊಲೆ ನಡೆದಿರುವುದಾಗಿ ಕಾಮಾಕ್ಷಿಪಾಳ್ಯ ಪೊಲೀಸರ ಮುಂದೆ ಶರಣಾಗಿದ್ದಾರೆ. ಈ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡ ಪೊಲೀಸರಿಗೆ ಸ್ಟಾರ್ ನಟ ಭಾಗಿಯಾಗಿರುವುದು ಗಮನಕ್ಕೆ ಬಂದಿದೆ.

ಕೂಡಲೇ ಎಸಿಪಿ ಚಂದನ್ ಮತ್ತು ಇನ್ಸ್‌ಪೆಕ್ಟರ್ ಗಿರೀಶ್ ನಾಯ್ಕ್ ತಂಡ ಮೈಸೂರಗೆ ತೆರಳಿ ದರ್ಶನ್‌ನನ್ನು ಅರೆಸ್ಟ್ ಮಾಡಿ ಬೆಂಗಳೂರಿಗೆ ಕರೆತಂದಿದ್ದಾರೆ. ಇತ್ತ ದರ್ಶನ್ ಗೆಳತಿ ಪವಿತ್ರಾ ಗೌಡರನ್ನು ಕೂಡ ಪೊಲೀಸರು ಬಂಧಿಸಿದ್ದಾರೆ. ಸದ್ಯ ಪ್ರಕರಣ ಸಂಬಂಧ ಇದುವರೆಗೆ 17 ಮಂದಿಯನ್ನು ಪೊಲೀಸರು ಬಂಧಿಸಿದ್ದು, ಸ್ಥಳ ಮಹಜರು ಜೊತೆಗೆ ತನಿಖೆ ನಡೆಸುತ್ತಿದ್ದಾರೆ.

## ತೆರಿಗೆ ಹೆಚ್ಚಳ

ನವೆಂಬರ್ 4, 2021ರಂದು ಕೇಂದ್ರ ಸರಕಾರ ಪೆಟ್ರೋಲ್ ಹಾಗೂ ಡೀಸೆಲ್ ದರವನ್ನು ಕ್ರಮವಾಗಿ 5 ರೂ. ಮತ್ತು 10 ರೂ. ಇಳಿಕೆ ಮಾಡಿತ್ತು. ಇದಾದ ಬೆನ್ನಲ್ಲೇ ಆಗಿನ ಬಸವರಾಜ ಬೊಮ್ಮಾಯಿ ಸರಕಾರ ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರನ್ನು ಲೀಟರ್‌ಗೆ ತಲಾ 7 ರೂ. ಇಳಿಸಿತ್ತು. ಅಷ್ಟೇ ಅಲ್ಲದೇ ಸತತವಾಗಿ ಬೆಲೆ ನಿಯಂತ್ರಣಕ್ಕೆ ಕೇಂದ್ರ ಸರ್ಕಾರ ಒಂದಿಷ್ಟು ಕ್ರಮ ಕೈಗೊಂಡಿದ್ದರಿಂದ ಪೆಟ್ರೋಲ್ ಬೆಲೆ ಶತಕದ ಗಡಿಯಲ್ಲೇ ನಿಂತಿತ್ತು. ಆದರೆ ಇದೀಗ ರಾಜ್ಯ ಸರ್ಕಾರ ತನ್ನ ತೆರಿಗೆ ಹೆಚ್ಚಳ ಮಾಡಿರುವುದರಿಂದ ಸಹಜವಾಗಿಯೇ ಬೆಲೆ ಏರಿಕೆ ಬಿಸಿ ಮಧ್ಯಮ ವರ್ಗವನ್ನು ತಟ್ಟಲಿದೆ.

**ಗ್ಯಾರಂಟಿ ಹಣ ಹೊಂದಿಸಲು ವಿವಿಧ ಆಯಾಮಗಳಲ್ಲಿ ಹಣ ಕ್ರೋಡೀಕರಣ:** ಇನ್ನು ಗ್ಯಾರಂಟಿಗಳಿಗೆ ಹಣ ಹೊಂದಿಸಲು ವಿವಿಧ ಆಯಾಮಗಳಲ್ಲಿ ಹಣ ಕ್ರೋಡೀಕರಣ ಮಾಡಲಾಗುತ್ತಿದೆ. ಮದ್ಯದ ಬೆಲೆ ಹೆಚ್ಚಳ, ಆಸ್ತಿ ನೋಂದಣಿ ದರ ಬಳಿಕ ಪೆಟ್ರೋಲ್, ಡಿಸೇಲ್ ಬೆಲೆ ಏರಿಕೆ, ರಿಟೇಲ್ ಸೇಲ್ಸ್ ಟ್ಯಾಕ್ಸ್ ದರ ಹೆಚ್ಚಳ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

## ರಷ್ಯಾಗಿಲ್ಲ ಆಹ್ವಾನ

2 ದಿನಗಳ ಸುದೀರ್ಘ ಶೃಂಗಸಭೆಯು ಯುದ್ಧವನ್ನು ತಡೆಗಟ್ಟುವ ನಿಟ್ಟಿನಲ್ಲಿ ಆಯೋಜನೆಗೊಂಡ ನಾಲ್ಕನೇ ಶೃಂಗಸಭೆಯಾಗಿದೆ. ಈ ಹಿಂದೆ ಕೋಪನ್ ಹ್ಯಾಗನ್, ಜೆಡ್ಡಾ ಮತ್ತು ಮಾಲ್ಟಾದಲ್ಲಿ ಮೂರು ಶೃಂಗಸಭೆಗಳು ನಡೆದಿವೆ. ಸ್ವಿಸ್ ಅಧಿಕಾರಿಗಳು ಸಮ್ಮೇಳನಕ್ಕೆ 160 ದೇಶಗಳನ್ನು ಆಹ್ವಾನಿಸಿದ್ದಾರೆ. ಇದರಲ್ಲಿ ಭಾರತ ಸೇರಿದಂತೆ ಸುಮಾರು 90 ದೇಶಗಳ ನಾಯಕರು ಅಥವಾ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಆದಾಗ್ಯೂ, ಅನೇಕ ಪ್ರಮುಖ ದೇಶಗಳು ಭಾಗವಹಿಸಲು ನಿರಾಕರಿಸಿದವು.

ರಷ್ಯಾದ ಪ್ರಮುಖ ಮಿತ್ರ ರಾಷ್ಟ್ರ ಚೀನಾ ಕೂಡ ಶೃಂಗಸಭೆಯಿಂದ ದೂರ ಉಳಿಯಲು ನಿರ್ಧರಿಸಿದೆ. ಸದ್ಯ ಜಿ20 ಅಧ್ಯಕ್ಷ ಬ್ರೆಜಿಲ್ ಕೂಡ ಅದನ್ನೇ ಮಾಡಿದೆ. ಅದೇ ಸಮಯದಲ್ಲಿ, ಸೌದಿ ಅರೇಬಿಯಾ ಮತ್ತು ಪಾಕಿಸ್ತಾನ ಕೂಡ ಶೃಂಗಸಭೆಯಲ್ಲಿ ಭಾಗವಹಿಸುವುದಿಲ್ಲ.

ಉಕ್ರೇನ್‌ನ ಅತಿದೊಡ್ಡ ಬೆಂಬಲಿಗರಾದ ಯುಎಸ್ ಅಧ್ಯಕ್ಷ ಜೋ ಬಿಡೆನ್ ಕೂಡ ಶೃಂಗಸಭೆಯಲ್ಲಿ ಭಾಗವಹಿಸುವುದಿಲ್ಲ. ಆದರೆ, ಅವರ ಸ್ಥಾನದಲ್ಲಿ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಹಾಜರಾಗಲಿದ್ದಾರೆ.

ಸ್ವಿಟ್ಜರ್ಲೆಂಡ್‌ನಲ್ಲಿ ವಿಶ್ವ ನಾಯಕರ ಸಭೆಯ ರಕ್ಷಣೆಗೆ 4 ಸಾವಿರ ಸೈನಿಕರನ್ನು ನಿಯೋಜಿಸಲಾಗಿದೆ. ಇದಲ್ಲದೆ, ಸ್ಥಳದ ಬಳಿ ಸ್ಟೀಲ್ ರಿಂಗ್ ಅನ್ನು ಹಾಕಲಾಗಿದೆ. 6.5 ಕಿಮೀ ಸುತ್ತಲಿನ ಪ್ರದೇಶದಲ್ಲಿ ಬೇಲಿ ಹಾಕಲಾಗಿದೆ. ಇಲ್ಲಿ 8 ಕಿ.ಮೀ ಉದ್ದದ ತಂತಿಗಳ ಜಾಲವನ್ನೂ ಹಾಕಲಾಗಿದೆ.

ಸ್ವಿಸ್ ಮಿಲಿಟರಿಗೆ ಈ ಪ್ರದೇಶದಲ್ಲಿ ಭದ್ರತೆಯನ್ನು ವಹಿಸಲಾಗಿದೆ. ಅವರ ವಾಯುಪಡೆಯು ನಿರಂತರವಾಗಿ ಪ್ರದೇಶವನ್ನು ಮೇಲ್ವಿಚಾರಣೆ ಮಾಡುತ್ತಿದೆ. ಸ್ಥಳದ ಬಳಿ ನಿರ್ಮಿಸಲಾದ ಹೆಲಿಪೋರ್ಟ್‌ನ ರಕ್ಷಣೆಗಾಗಿ ಐದು ಮಿಲಿಟರಿ ಹೆಲಿಕಾಪ್ಟರ್‌ಗಳನ್ನು ನಿಯೋಜಿಸಲಾಗಿದೆ. ಇದಲ್ಲದೇ ಡಬಲ್ ಲೇಯರ್ ಫೆನ್ಸಿಂಗ್ ಕೂಡ ನಡೆದಿದೆ.

ಶೃಂಗಸಭೆಯ ಮೊದಲು, ಪ್ರಧಾನಿ ಮೋದಿ ಅವರು ಶುಕ್ರವಾರ ಇಟಲಿಯಲ್ಲಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರನ್ನು ಭೇಟಿಯಾದರು. ರಷ್ಯಾ-ಉಕ್ರೇನ್ ಸಂಘರ್ಷಕ್ಕೆ ಶಾಂತಿಯುತ ಪರಿಹಾರವನ್ನು ಭಾರತ ಬೆಂಬಲಿಸುತ್ತದೆ ಎಂದು ಪ್ರಧಾನಿ ಝೆಲೆನ್ಸ್ಕಿ ಅವರಿಗೆ ತಿಳಿಸಿದರು. ರಾಜತಾಂತ್ರಿಕತೆ ಮತ್ತು ಮಾತುಕತೆಯಿಂದ ಮಾತ್ರ ಈ ಯುದ್ಧವನ್ನು ಕೊನೆಗೊಳಿಸಬಹುದು.

ಬ್ರಿಟನ್ ಪ್ರಧಾನಿ ರಿಷಿ ಸುನಕ್, ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಜರ್ಮನ್ ಚಾನ್ಸೆಲರ್ ಓಲಾಫ್ ಸ್ಕೋಲ್ಜ್, ಯುಎಸ್ ಉಪಾಧ್ಯಕ್ಷ ಕಮಲಾ ಹ್ಯಾರಿಸ್, ಜಪಾನ್ ಪ್ರಧಾನಿ ಫ್ಯೂಮಿಯೊ ಕಿಶಿಡಾ ಮತ್ತು ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

## ಮದರಸಾ ಮೇಲೆ ದಾಳಿ

ಹನುಮ ಜಯಂತಿ ವೇಳೆ ಇದೇ ರೀತಿಯ ಘಟನೆ ನಡೆದಿದ್ದು, ಹಲವು ಮುಸ್ಲಿಮರ ಮೇಲೆ ದಾಳಿ ನಡೆಸಿ ಅವರ ಅಂಗಡಿಗಳನ್ನು ಧ್ವಂಸಗೊಳಿಸಲಾಗಿದೆ ಎಂದು ಶಾಸಕ ಕೌಸರ್ ತಿಳಿಸಿದ್ದಾರೆ. ಬಿಜೆಪಿ, ಆರ್‌ಎಸ್‌ಎಸ್ ಮತ್ತು ಹಿಂದೂ ವಾಹಿನಿ ರಾಜ್ಯದಲ್ಲಿ ಹಿಂಸಾಚಾರವನ್ನು ಪ್ರಚೋದಿಸುತ್ತದೆ ಮತ್ತು ಶಾಂತಿ ಕದಡುತ್ತಿದೆ ಎಂದು ಆರೋಪಿಸಿದ್ದಾರೆ.

## 150 ಗೋವುಗಳ ರಕ್ಷಣೆ

ಡಿಎನ್‌ಎ ವಿಶ್ಲೇಷಣೆಗಾಗಿ ನಾವು ಮಾದರಿಗಳನ್ನು ಹೈದರಾಬಾದ್‌ಗೆ ಕಳುಹಿಸಿದ್ದೇವೆ. ಸರ್ಕಾರಿ ಜಮೀನಿನಲ್ಲಿದ್ದ 11 ಆರೋಪಿಗಳ ಮನೆಗಳನ್ನು ನೆಲಸಮಗೊಳಿಸಲಾಗಿದೆ ಎಂದರು.

ಶುಕ್ರವಾರ ರಾತ್ರಿ ಹಸುಗಳು ಮತ್ತು ಗೋಮಾಂಸ ಪತ್ತೆಯಾದ ನಂತರ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಅವರು ಹೇಳಿದರು. ಓರ್ವ ಆರೋಪಿಯನ್ನು ಬಂಧಿಸಲಾಗಿದ್ದು, ಉಳಿದ 10 ಮಂದಿಗಾಗಿ ಶೋಧ ನಡೆಯುತ್ತಿದೆ. 150 ಹಸುಗಳನ್ನು ಗೋಶಾಲೆಗೆ ಕಳುಹಿಸಲಾಗಿದೆ ಎಂದು ಸಕ್ಲೇಚಾ ತಿಳಿಸಿದರು.

ಭೈನಸ್ವಾಹಿ ಪ್ರದೇಶವು ಕೆಲವು ಸಮಯದಿಂದ ಗೋವು ಕಳ್ಳಸಾಗಣೆಯ ಕೇಂದ್ರವಾಗಿದೆ. ಮಧ್ಯಪ್ರದೇಶದಲ್ಲಿ ಗೋಹತ್ಯೆಗೆ ಏಳು ವರ್ಷ ಜೈಲು ಶಿಕ್ಷೆ ವಿಧಿಸುವ ಅವಕಾಶವಿದೆ. ಇಬ್ಬರು ಆರೋಪಿಗಳ ಕ್ರಿಮಿನಲ್ ಇತಿಹಾಸವನ್ನು ಸಂಗ್ರಹಿಸಲಾಗಿದ್ದು, ಉಳಿದವರ ವಿವರಗಳನ್ನು ಪತ್ತೆ ಮಾಡಲಾಗುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ವಿಧಿವಶ

ಕರಗಂ ನಾರಾಯಣ ಅಯ್ಯಂಗಾರ್ ಅವರು ಮುಖ್ಯಶಿಕ್ಷಕರಾಗಿ ಸೇವೆ ಸಲ್ಲಿಸಿ, ನಿವೃತ್ತಿ ಬಳಿಕ ದೇವಾಲಯದಲ್ಲಿ ಸ್ಥಾನಿಕರಾಗಿದ್ದರು. ಅಲ್ಲದೆ ರಾಜ್ಯ ಪ್ರಶಸ್ತಿಗೂ ಭಾಜನರಾಗಿದ್ದರು. ನಿವೃತ್ತಿ ಬಳಿಕ ಚೆಲುವನಾರಾಯಣನ ಸೇವೆಗಾಗಿಯೇ ತಮ್ಮ ಇಡೀ ಜೀವನ ಮುಡಿಪಾಗಿಟ್ಟಿದ್ದರು. ಶಿಕ್ಷಣ ಕ್ಷೇತ್ರದಲ್ಲೂ ದೀರ್ಘ ಅನುಪಮ ಸೇವೆ ಸಲ್ಲಿಸಿದ್ದರು. ದೇವಾಲಯದ ಸಾಂಪ್ರದಾಯಿಕ ಮರ್ಯಾದೆಯೊಡನೆ ಅಂತ್ಯಕ್ರಿಯೆ ನಡೆಸಲು ನಿರ್ಧರಿಸಲಾಗಿದೆ. ಮೇಲುಕೋಟೆಯಲ್ಲಿ ಇಂದು ಕರಗಂ ನಾರಾಯಣ ಅಯ್ಯಂಗಾರ್ ಅಂತ್ಯಕ್ರಿಯೆ ನಡೆಯಲಿದೆ. ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ.

ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿನಲ್ಲಿರುವ ಮೇಲುಕೋಟೆ ಮೈಸೂರಿನಿಂದ 50 ಕಿ.ಮೀ ಮತ್ತು ಬೆಂಗಳೂರಿನಿಂದ 133 ಕಿ.ಮೀ ದೂರದಲ್ಲಿದೆ. ತಿರುನಾರಾಯಣಪುರಂ ಎಂದೂ ಕರೆಯಲ್ಪಡುವ ಈ ತಾಣ ಕರ್ನಾಟಕದ ಜನಪ್ರಿಯ ಯಾತ್ರಾಸ್ಥಳಗಳಲ್ಲಿ ಒಂದು. ಮಹಾನ್ ವೈಷ್ಣವ ಸಂತ ಶ್ರೀ ರಾಮಾನುಜಾಚಾರ್ಯರು ಕ್ರಿ.ಶ 12 ನೇ ಶತಮಾನದಲ್ಲಿ ಸುಮಾರು 14 ವರ್ಷಗಳ ಕಾಲ ಇಲ್ಲಿ ವಾಸಿಸುತ್ತಿದ್ದರು. ಆದ್ದರಿಂದ ಇದು ಬ್ರಾಹ್ಮಣರ ಶ್ರೀವೈಷ್ಣವ ಪಂಥದ ಪ್ರಮುಖ ಕೇಂದ್ರವಾಗಿದೆ. ಇಲ್ಲಿ ಎರಡು ಜನಪ್ರಿಯ ದೇವಾಲಯಗಳಿವೆ.

ಒಂದು ಚೆಲುವನಾರಾಯಣ ಸ್ವಾಮಿ ದೇವಸ್ಥಾನ ಮತ್ತು ಇನ್ನೊಂದು ಯೋಗ ನರಸಿಂಹ ಸ್ವಾಮಿ ದೇವಸ್ಥಾನ. ಶ್ರೀ ರಾಮಾನುಜಾಚಾರ್ಯರು ಈ ಸ್ಥಳಕ್ಕೆ ಬರುವ ಮೊದಲೇ ಈ ದೇವಾಲಯಗಳು ಅಸ್ತಿತ್ವದಲ್ಲಿದ್ದವು. ಮುಖ್ಯ ದೇವಾಲಯವನ್ನು ತಿರುನಾರಾಯಣ ಅಥವಾ ಚೆಲುವರಾಯ ಎಂದು ಕರೆಯಲ್ಪಡುವ ವಿಷ್ಣುವಿಗೆ ಸಮರ್ಪಿಸಲಾಗಿದೆ. ದೇವತೆಯ ಉತ್ಸವಮೂರ್ತಿ ಅಥವಾ ಮೆರವಣಿಗೆಯ ವಿಗ್ರಹವನ್ನು ಚೆಲುವಾಪಿಲ್ಲೆ ರಾಯ ಎಂದು ಕರೆಯಲಾಗುತ್ತದೆ, ಇದರ ಮೂಲ ಹೆಸರು ರಾಮಪ್ರಿಯಾ. ಮೊಘಲರು ಈ ಸ್ಥಳವನ್ನು ಆಕ್ರಮಿಸಿದಾಗ ಈ ಉತ್ಸವಮೂರ್ತಿ ಕಳೆದುಹೋಗಿತ್ತಂತೆ. ನಂತರ ಅದನ್ನು ಮೊಹಮ್ಮದ್ ಷಾ ಅವರ ಪುತ್ರಿ ಬೀಬಿ ನಾಚಿಯಾರ್‌ನಿಂದ ರಾಮಾನುಜಾಚಾರ್ಯರು ವಶಪಡಿಸಿಕೊಂಡರು.

## ಕೊಲೆ

ಸ್ಥಳಕ್ಕೆ ಹೊಸಕೋಟೆ ಠಾಣೆ ಪೊಲೀಸರು, ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹೊಸಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಕಾರು ಅಥವಾ ವೈಯಕ್ತಿಕ ವಿಚಾರಕ್ಕೆ ಕೊಲೆಯಾಗಿರುವ ಶಂಕೆ ವ್ಯಕ್ತವಾಗಿದ್ದು, ಈ ಬಗ್ಗೆ ತನಿಖೆ ನಡೆಯುತ್ತಿದೆ.

ಪ್ರಕರಣ ಸಂಬಂಧ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿ, ಹೊಸಕೋಟೆ ಕಡೆಯಿಂದ ಹೆದ್ದಾರಿಯಲ್ಲಿ ಎರಡು ಕಾರುಗಳು ಬಂದಿವೆ. 10 ಕಿ.ಮೀ.ವರೆಗೂ ಎರಡೂ ಕಾರಿನವರು ಓವರ್ ಟೇಕ್ ಮಾಡಿಕೊಂಡು ಬಂದಿದ್ದಾರೆ. ಬಳಿಕ ಎರಡೂ ಕಾರಿನಲ್ಲಿದ್ದವರ ನಡುವೆ ಗಲಾಟೆ ನಡೆದಿದೆ. ಈ ವೇಳೆ ಆಲ್ಟೋಕಾರಲ್ಲಿದ್ದ ನಾಲ್ವರು ಓಮ್ನಿಕಾರಲ್ಲಿದ್ದವರ ಮೇಲೆ ಹಲ್ಲೆ ಮಾಡಿದ್ದಾರೆ. ಹಲ್ಲೆ ವೇಳೆ ಓಮ್ನಿ ಕಾರಲ್ಲಿದ್ದ ಓರ್ವ ಮೃತಪಟ್ಟಿದ್ದು, ಮತ್ತೊಬ್ಬ ಪರಾರಿಯಾಗಿದ್ದಾನೆ ಎಂದು ಹೇಳಿದರು.

ಪ್ರಕರಣದ ಬಗ್ಗೆ ಹೊಸಕೋಟೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆದಷ್ಟು ಶೀಘ್ರದಲ್ಲೇ ಆರೋಪಿಗಳನ್ನು ಪತ್ತೆ ಮಾಡಿ ಬಂಧಿಸುತ್ತೇವೆ ಎಂದು ತಿಳಿಸಿದರು.

## ರೇಣುಕಾ ಸ್ವಾಮಿಯ ಕೊಲ್ಲುವ ಮುಂಚೆ ಕೊಟ್ಟಿದ್ದರು ಎಲೆಕ್ಟ್ರಿಕ್ ಶಾಕ್

**ಬೆಂಗಳೂರು:** ದಿನಗಳೆದಂತೆ ರೇಣುಕಾ ಸ್ವಾಮಿ ಕೊಲೆ ಪ್ರಕರಣದ ಭೀಕರ ಅಂಶಗಳು ಹೊರಬೀಳುತ್ತಿವೆ. ಆರಂಭದಲ್ಲಿ, ಭಯಪಡಿಸಲು ಹೋಗಿ ಮಾಡಲಾಗಿರುವ ಹತ್ಯೆ ಎನ್ನಲಾಗಿತ್ತು,



ಆದರೆ ಪ್ರಕರಣ ಮುಂದುವರೆದಂತೆ ರೇಣುಕಾ ಸ್ವಾಮಿಯನ್ನು ದರ್ಶನ್ ಹಾಗೂ ಗ್ಯಾಂಗ್ ಹೇಗೆಲ್ಲ ಚಿತ್ರಹಿಂಸೆ ಕೊಟ್ಟಿದ್ದಾರೆ ಎಂಬ ಅಂಶಗಳು ಬಹಿರಂಗವಾಗುತ್ತಿವೆ. ನಿನ್ನೆ (ಜೂನ್ 15) ದರ್ಶನ್ ಮತ್ತು ಗ್ಯಾಂಗ್ ಅನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾಗ ನಡೆದ ವಾದ ವಿವಾದದಲ್ಲಿ ದರ್ಶನ್ ಮತ್ತು ಗ್ಯಾಂಗ್? ರೇಣುಕಾ ಸ್ವಾಮಿಗೆ ನೀಡಿದ್ದ ರಾಕ್ಷಸ ರೀತಿಯ ಚಿತ್ರಹಿಂಸೆಯ ವಿವರ ಹೊರಬಿದ್ದಿದೆ.

ದರ್ಶನ್ ಮತ್ತು ಗ್ಯಾಂಗ್ ಅನ್ನು ಮತ್ತೆ ಒಂಬತ್ತು ದಿನಗಳ ಕಾಲ ವಶಕ್ಕೆ ಕೋರಿ ಪೊಲೀಸರು ಅರ್ಜಿ ಸಲ್ಲಿಸಿದ್ದರು. ನೃಪತುಂಗ ರಸ್ತೆಯ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ವಿಚಾರಣೆ ನಡೆಯಿತು, ಈ ಹಂತದಲ್ಲಿ ಸರ್ಕಾರದ ವತಿಯಿಂದ ವಿಶೇಷ ಅಭಿಯೋಜಕರಾಗಿ ನೇಮಕವಾಗಿರುವ ಪ್ರಸನ್ನ ಕುಮಾರ್ ಅವರು ಪೊಲೀಸರ ಪರ ವಾದ ಮಂಡಿಸಿ, ನ್ಯಾಯಾಲಯದ ಗಮನಕ್ಕೆ ತಂದ ಅಂಶವೆಂದರೆ ರೇಣುಕಾ ಸ್ವಾಮಿಯನ್ನು ಕೊಲ್ಲುವ ಮುಂಚೆ ಆತನಿಗೆ ಕರೆಂಟ್ ಶಾಕ್ ನೀಡಲಾಗಿತ್ತು ಎಂಬುದು.

ನ್ಯಾಯಾಲಯದಲ್ಲಿ ದರ್ಶನ್ ಹಾಗೂ ಗ್ಯಾಂಗ್?ನ ಕ್ರೂರತೆಯ ಬಗ್ಗೆ ಸಣ್ಣ ಸುಳಿವೊಂದನ್ನು ನೀಡಿದ ಹಿರಿಯ ವಕೀಲ ಪ್ರಸನ್ನ ಕುಮಾರ್ ಅವರು ರೇಣುಕಾ ಸ್ವಾಮಿಗೆ ಕರೆಂಟ್ ಶಾಕ್ ನೀಡಲಾಗಿದ್ದು, ಆ ಕರೆಂಟ್ ಶಾಕ್ ನೀಡಲು ಬಯಸಿದ್ದ ಮೆಗ್ಗರ್ ಯಂತ್ರವನ್ನು ಸಹ ವಶಪಡಿಸಿಕೊಳ್ಳಬೇಕಿದೆ ಎಂದು ಮಾಹಿತಿ ನೀಡಿದ್ದರು. ಅಲ್ಲದೆ, ಮೈಸೂರಿನಲ್ಲಿ ಕೆಲವು ಕಡೆ ಆರೋಪಿಯೊಟ್ಟಿಗೆ ಮಹಜರು ಮಾಡಬೇಕಿದೆ. ಆರೋಪಿಯ ಬಟ್ಟೆ ಹಾಗೂ ಚಪ್ಪಲಿಗಳನ್ನು ಸಹ ವಶಪಡಿಸಿಕೊಳ್ಳಬೇಕಿದೆ' ಎಂದು ಸಹ ವಾದಿಸಿದ್ದಾರೆ.

ಕೆಲವು ಆರೋಪಿಗಳು ರೇಣುಕಾ ಸ್ವಾಮಿ ಕೊಲೆಯಾದ ದಿನ ನಡೆದ ಘಟನೆಗಳನ್ನು ಈಗಾಗಲೇ ವಿವರಿಸಿದ್ದು, ಕೆಲವರು ಅಪ್ರೂವರ್ ಆಗಿ ಸಹ ಬದಲಾಗಿದ್ದಾರೆ ಎನ್ನಲಾಗುತ್ತಿದೆ. ರೇಣುಕಾ ಸ್ವಾಮಿಯ ಮರ್ಮಾಂಗಕ್ಕೆ ಹಲ್ಲೆ ಮಾಡಲಾಗಿದೆ, ಕೃಷ ದೇಹಿಯಾಗಿದ್ದ ರೇಣುಕಾ ಸ್ವಾಮಿಯನ್ನು ಎತ್ತಿ ಗೋಡೆಗೆ ಹೊಡೆಯಲಾಗಿದೆ, ಸಿಗರೇಟಿನಿಂದ ದೇಹದ ಮೇಲೆ ಸುಡಲಾಗಿದೆ. ತಲೆಯನ್ನು ಬಲವಾಗಿ ಟ್ಯಾಂಕರ್ ವಾಹನಕ್ಕೆ ಹೊಡೆಯಲಾಗಿದೆ. ಇದೆಲ್ಲದರ ಬಳಿಕ ಶೆಡ್?ನಲ್ಲಿ ಕೆಲಸ ಮಾಡುತ್ತಿದ್ದ ಮೂವರು ಅಮಾಯಕ ಕೂಲಿ ಕೆಲಸದವರನ್ನು ಪುಸಲಾಯಿಸಿ ಹತ್ಯೆ ಆರೋಪವನ್ನು ಒಪ್ಪಿಕೊಳ್ಳಲಂತೆ ಮಾಡಲಾಗಿದೆ.

## ಶಾಂತಿರಾಜು ಮೂಗೂರು ಗ್ರಾಪಂಗೆ ಉಪಾಧ್ಯಕ್ಷ

**ಟಿ.ನರಸೀಪುರ:** ಮೂಗೂರು ಗ್ರಾಮ ಪಂಚಾಯತಿಯ ನೂತನ ಉಪಾಧ್ಯಕ್ಷರಾಗಿ ಬಿಜೆಪಿ,ಜೆಡಿಎಸ್, ಬೆಂಬಲಿತ ಎಂ. ಶಾಂತಿ ರಾಜು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಮೂಗೂರು ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಲಕ್ಷ್ಮಿ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಇಂದು ನಡೆದ ಚುನಾವಣೆಯಲ್ಲಿ ಎಂ, ಶಾಂತಿ ರಾಜ ರವರು ಹೊರತುಪಡಿಸಿ ಬೇರೆ ಯಾರು ನಾಮಪತ್ರ ಸಲ್ಲಿಸಿದ ಕಾರಣ ಎಂ. ಶಾಂತಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಪಂಚಾಯತಿಯಲ್ಲಿ 25 ಸದಸ್ಯರ ಸಂಖ್ಯೆ ಬಲವಿದ್ದು, ಚುನಾವಣಾ ಪ್ರಕ್ರಿಯೆಯಲ್ಲಿ 16 ಮಂದಿ ಸದಸ್ಯರು ಹಾಜರಿದ್ದರು ಚುನಾವಣಾ ಅಧಿಕಾರಿಯಾಗಿ ಬನ್ನೂರು ನೀರಾವರಿ ಇಲಾಖೆ ಎ ಇ ಇ ರತೀಶ್ ಕಾರ್ಯನಿರ್ವಹಿಸಿದ್ದರು. ಸಹಾಯಕರಾಗಿ. ಪಿ ಆರ್‌ಡಿ ಇಲಾಖೆ ಗುಮಾಸ್ತ ನಾಗರಾಜು ಕಾರ್ಯ ನಿರ್ವಹಿಸಿದರು. ಗ್ರಾಂ. ಪಂ ಅಧ್ಯಕ್ಷ ಶಿವಣ್ಣ, ಸದಸ್ಯರುಗಳಾದ ಚಂದ್ರಮ್ಮ, ನಿಂಗರಾಜು,ಎಂ ಪುಟ್ಟಮಾದಯ್ಯ,ಭಾಗ್ಯ, ಎಂಎಸ್ ಗೌರೀಶ್, ರತ್ನಮ್ಮ, ಟಿ.ಎಂ., ಚೇತನ್,ಆಶಾ, ಎಂ.ಡಿ.ಲೋಕೇಶ್, ನಾಗಮ್ಮ, ಸವಿತಾ,ತಂಗಮ್ಮ ಹಾಗೂ ಮುಖಂಡರುಗಳಾದ.ಮಾಜಿ ತಾ. ಪಂ. ಸದಸ್ಯ ಎಂ ಚಂದ್ರಶೇಖರ್, ಎಂ.ಕೆ.ಸಿದ್ದರಾಜು ಮರಿಸ್ವಾಮಿ, ಮಾಜಿ ಪಿ.ಎ. ಸಿ.ಸಿ.ಬಿ. ಅಧ್ಯಕ್ಷ ಸುಂದರ್. ಬಾಬು ಜಗಜೀವನ ರಾಮ್ ತಾಲೂಕು ಮಾಜಿ ಅಧ್ಯಕ್ಷ ಸಿದ್ದರಾಜು ಜಯಶಂಕರ್, ಕಾಂತರಾಜು ನಾಗೇಂದ್ರ, ರಮೇಶ್ ನಾಯ್ಕ್, ಶಿವಕುಮಾರ್,.ಶಾಂತನಾಗರಾಜು, ರಾಜು, ಪಿಡಿಒ ಎಸ್ ಪ್ರಕಾಶ್ ಹಾಜರಿದ್ದರು.



# ತಗ್ಗಿದ ಮುಂಗಾರು: ಕುಸಿದ ಕಬಿನಿ ಒಳ ಹರಿವು

**ಎಚ್.ಡಿ.ಕೋಟೆ (ಬಿ.ನಿಂಗಣ್ಣಕೋಟೆ) :** ಈ ವರ್ಷ ಸಮಯಕ್ಕೆ ಸರಿಯಾಗಿ ಮುಂಗಾರು ಆಗಮನವಾಗಿ ಕಳೆದ ಹದಿನೈದು ದಿನಗಳಿಂದ ತಾಲೂಕು ಸೇರಿದಂತೆ ನೆರೆಯ ಕೇರಳ ರಾಜ್ಯದಲ್ಲಿ ವರುಣ ಅಬ್ಬರಿಸಿದ ಪರಿಣಾಮ ರಾಜ್ಯದ ಜೀವನಾಡಿ ತಾಲೂಕಿನ ಕಬಿನಿ ಜಲಾಶಯಕ್ಕೆ ಹೆಚ್ಚಿನ ನೀರು ಹರಿದು ಪರಿಣಾಮ ಜಲಾಶಯದ ಇತಿಹಾಸದಲ್ಲೇ ತೀರಾ ಕುಸಿತ ಕಂಡಿದ್ದ ಜಲಾಶಯದ ಸಂಗ್ರಹ ಮಟ್ಟದಲ್ಲಿ ಚೇತರಿಕೆ ಕಂಡು ಜಲಾಶಯಕ್ಕೆ ಜೀವಕಳೆ ಬಂದಿತ್ತು.

ಈಗ ಕೇರಳ ರಾಜ್ಯದ ವೈನಾಡು ಪ್ರದೇಶ ಸೇರಿದಂತೆ ತಾಲೂಕಿನ ಕಬಿನಿ ಜಲಾಶಯದ ಹಿನ್ನೀರು ವ್ಯಾಪ್ತಿಯಲ್ಲಿ ಮುಂಗಾರು ಮಳೆ ಅಬ್ಬರ ತಣ್ಣಗಾಗಿದೆ, ಪರಿಣಾಮ ಜಲಾಶಯಕ್ಕೆ ಹರಿದು ಬರುತ್ತಿದ್ದ ಒಳ ಹರಿವಿನಲ್ಲಿ ತೀವ್ರ ಕುಸಿತ ಕಂಡಿದೆ.

ಸಾವಿರಕ್ಕೆ ಕುಸಿದ ಒಳ ಹರಿವು!: ಈ ಬಾರಿ ಸಕಾಲದಲ್ಲಿ ಮುಂಗಾರು ಆಗಮನವಾಗಿದೆ, ಅದರಲ್ಲೂ ನೆರೆಯ ಕೇರಳದ ವೈನಾಡು ಪ್ರದೇಶಕ್ಕೆ ರಾಜ್ಯಕ್ಕೂ ಮೊದಲೇ ಮಾನ್ಸೂನ್ ಆಗಮನವಾದ ಕಾರಣ ವೈನಾಡು ಪ್ರದೇಶದಲ್ಲಿ ಹೆಚ್ಚಿನ ಮಳೆಯಾದ ಪರಿಣಾಮ ಭೀಕರ ಬರಗಾಲದಿಂದ ಬಸವಳಿದಿದ್ದ ಕಬಿನಿ ಜಲಾಶಯದ ಒಳ ಹರಿವಿನಲ್ಲಿ ಚೇತರಿಕೆ ಕಂಡು ನಿತ್ಯ 6 ಸಾವಿರ ಕೂಸೆಕ್‌ಗೂ ಹೆಚ್ಚಿನ ನೀರು ಹರಿದು ಬಂದು 2257 ಅಡಿಗಳಿಗೆ ಕುಸಿದಿದ್ದ



ಜಲಾಶಯದ ಸಂಗ್ರಹ ಮಟ್ಟದಲ್ಲಿ ಭಾರೀ ಏರಿಕೆ ಕಂಡಿದೆ, ಸದ್ಯ ಜಲಾಶಯದ ಸಂಗ್ರಹ ಮಟ್ಟ 2263 ಅಡಿಗಳಿಗೆ ಏರಿಕೆ ಕಂಡಿದ್ದು, ಜಲಾಶಯಕ್ಕೆ 1863 ಕ್ಯೂಸೆಕ್ ಒಳ ಹರಿವು ಬರುತ್ತಿದ್ದು ಜಲಾಶಯದಿಂದ ಮುಂಭಾಗದ ನದಿಗೆ 300 ಕ್ಯೂಸೆಕ್ ನೀರನ್ನು ಹರಿಸಲಾಗುತ್ತಿದೆ ಎಂದು ಜಲಾಶಯದ ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯ ಹವಾಮಾನ ಇಲಾಖೆ ಈ ಬಾರಿ ಮುಂಗಾರು ಮಳೆ ಹೆಚ್ಚಿನ ಪ್ರಮಾಣದಲ್ಲಿ ಬರಲಿದೆ ಎಂದು ಹೇಳಿದೆ, ಜೊತೆಗೆ ಈಗಲೂ ಕೇರಳದ ವೈನಾಡು ಹಾಗೂ ಜಲಾಶಯದ ಹಿನ್ನೀರಿ ವ್ಯಾಪ್ತಿಯಲ್ಲಿ ರಣ ಬಿಸಿಲು ಮಾಯವಾಗಿ ಮೋಡ ಕವಿದ ವಾತಾವರಣ ಇದ್ದು, ಮುಂದಿನ ದಿನಗಳಲ್ಲೂ ಹೆಚ್ಚಿನ ಮಳೆ ನಿರೀಕ್ಷೆ ಇರುವುದರಿಂದ ವಾಡಿಕೆಯಂತೆ ಜೂನ್ ಮತ್ತು ಜುಲೈ ತಿಂಗಳಲ್ಲಿ ವರುಣ ಅಬ್ಬರಿಸಿದರೇ ಆಗಸ್ಟ್ ತಿಂಗಳಿಗೂ ಮುನ್ನವೇ ಜಲಾಶಯ ಈ ಬಾರಿ ಭರ್ತಿ ಆಗುವ ಭರವಸೆ ಮೂಡಿದೆ, ಹಾಗಾಗಿ ಈ ಬಾರಿ ಮುಂಗಾರು ಮಳೆ ಕಬಿನಿ ಜಲಾಶಯದ ಇಲ್ಲಿನ ಅಚ್ಚುಕಟ್ಟು ಪ್ರದೇಶದ ರೈತರಲ್ಲಿ ಸಂತಸ ತಂದಿದೆ.

> **“ರಾಜ್ಯಕ್ಕೂ ಮೊದಲು ಕೇರಳ ರಾಜ್ಯಕ್ಕೆ ಮಾನ್ಸೂನ್ ಆಗಮನವಾಗಿ ವೈನಾಡು ಪ್ರದೇಶದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದೆ, ಜೊತೆಗೆ ಜಲಾಶಯದ ಹಿನ್ನೀರು ವ್ಯಾಪ್ತಿಯಲ್ಲೂ ಕಳೆದ ಹತ್ತಾರೂ ದಿನಗಳಿಂದ ಸತತ ಮಳೆಯಾಗುತ್ತಿರುವುದರಿಂದ ಜಲಾಶಯಕ್ಕೆ ಹೆಚ್ಚಿನ ನೀರು ಹರಿದು ಬಂದಿದೆ, ಈಗ ವೈನಾಡು ಹಾಗೂ ಹಿನ್ನೀರು ಪ್ರದೇಶದಲ್ಲಿ ಮಳೆ ತಗ್ಗಿರುವುದರಿಂದ ಹರಿದು ಬರುತ್ತಿದ್ದ ಒಳ ಹರಿನಲ್ಲಿ ಕುಸಿತ ಕಂಡಿದ್ದು, ಹೆಚ್ಚಿನ ಮಳೆಯಿಂದಾಗಿ ಜಲಾಶಯದ ಸಂಗ್ರಹ ಮಟ್ಟದಲ್ಲಿ 6 ಅಡಿಗಳಷ್ಟು ಏರಿಕೆ ಕಂಡಿದೆ, ಜೂನ್ ಮತ್ತು ಜುಲೈ ತಿಂಗಳಲ್ಲಿ ವಾಡಿಕೆ ಮಳೆ ಬಂದರೆ ಜಲಾಶಯ ಬೇಗ ಭರ್ತಿಯಾಗುವ ಸಾಧ್ಯತೆ ಹೆಚ್ಚಿದೆ.**
>
> **-ಚಂದ್ರಶೇಖರ್.ಇಇ,**
> **ಕಬಿನಿ ಜಲಾಶಯ**

## ವಿಶೇಷ ಲೋಕ ಅದಾಲತ್

**ಮೈಸೂರು:** ಸರ್ವೋಚ್ಚ ನ್ಯಾಯಾಲಯದಿಂದ ವಿಶೇಷ ಲೋಕ್ ಆದಾಲತ್ ಅನ್ನು ಜು.29ರಿಂದ ಆ.3ರವರೆಗೆ ನಡೆಸಲು ಉದ್ದೇಶಿಸಲಾಗಿದೆ. ಈ ಹಿನ್ನಲೆ ಪಕ್ಷಕಾರರುಗಳಿಗೆ ಎದುರುದಾರರ ಜೊತೆ ಪೂರ್ವಭಾವಿ ಲೋಕ್ ಆದಾಲತ್ ಅನ್ನು ನಡೆಸಲು ವಿಡಿಯೋ ಕಾನ್ಫರೆನ್ಸ್ ವ್ಯವಸ್ಥೆ ಮಾಡಲಾಗಿದೆ. ಎಲ್ಲಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳಲ್ಲಿ ಹಾಗೂ ತಾಲೂಕು ಕಾನೂನು ಸೇವಾ ಸಮಿತಿಗಳಲ್ಲಿ ವಿಡಿಯೋ ಕಾನ್ಫರೆನ್ಸ್ ಕೇಂದ್ರಗಳನ್ನು ಸ್ಥಾಪಿಸಲು ತೀರ್ಮಾನಿಸಲಾಗಿದ್ದು, ಎಲ್ಲಾ ಪಕ್ಷಕಾರರು ವಿಡಿಯೋ ಕಾನ್ಫರೆನ್ಸ್ ಮೂಲಕ ಸರ್ವೋಚ್ಚ ನ್ಯಾಯಾಲಯ ನಡೆಸುವ ಪೂರ್ವಭಾವಿ ಲೋಕ್ ಆದಾಲತ್‌ನಲ್ಲಿ ಭಾಗವಹಿಸಲು ಅನುಕೂಲ ಮಾಡಲಾಗಿದೆ. ಈ ವಿಶೇಷ ಲೋಕ ಅದಾಲತ್‌ನಲ್ಲಿ ರಾಜೀ-ಸಂಧಾನಕ್ಕೆ ಗುರುತಿಸಲಾದ ಪ್ರಕರಣಗಳ ಪಟ್ಟಿಯನ್ನು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ವರದಿಯಾಗಿದ್ದು, ಇದರಿಂದ ಸದರಿ ಪ್ರಕರಣಗಳಲ್ಲಿನ ಎಲ್ಲಾ ಪಕ್ಷಕಾರರುಗಳು ತಮ್ಮ ವಾಸಸ್ಥಳಗಳ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳಲ್ಲಿ ತೆರೆಯಲಾಗಿರುವ ವಿಡಿಯೋ ಕಾನ್ಫರೆನ್ಸ್ ಕೇಂದ್ರಗಳಿಗೆ ಭೇಟಿ ಕೊಟ್ಟು ಜು.29ರಿಂದ ಆ.3ರವರೆಗೆ ನಡೆಯುವ ವಿಶೇಷ ಲೋಕ್ ಆದಾಲತ್‌ನಲ್ಲಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್, ಸಹಾಯವಾಣಿ ಸಂಖ್ಯೆ: 15100 ಅಥವಾ ಆಯಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಗಳ ಸದಸ್ಯ ಕಾರ್ಯದರ್ಶಿಯವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶ,ಸದಸ್ಯ ಕಾರ್ಯದರ್ಶಿ ದಿನೇಶ್ ಬಿ.ಜಿ ತಿಳಿಸಿದ್ದಾರೆ.

## ಬಹಿರಂಗ ಹರಾಜು ಪ್ರಕ್ರಿಯೆ

**ಮೈಸೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮೈಸೂರು ಕಚೇರಿಯಲ್ಲಿರುವ ಹಳೆ ನಿರುಪಯುಕ್ತ ಸಾಮಗ್ರಿಗಳನ್ನು ಜೂ.25ರಂದು ಮಧ್ಯಾಹ್ನ 12 ಗಂಟೆಗೆ ಕಚೇರಿಯ ಆವರಣದಲ್ಲಿ ಬಹಿರಂಗ ಹರಾಜು ಮಾಡುವ ಮೂಲಕ ವಿಲೇವಾರಿ ಮಾಡಲಾಗುತ್ತದೆ. ಹರಾಜಿನಲ್ಲಿ ಕುರ್ಚಿಗಳು (45), ಬೀರುಗಳು (17), ಟೇಬಲ್‌ಗಳು (15), ರ್‍ಯಾಕ್‌ಗಳು (06), ಹಳೆ ಟೈರುಗಳು (06), ಹಳೇ ಪ್ಲಾಸ್ಟಿಕ್ ಚೇರುಗಳು (07), ಹಾಗೂ ಇತರೆ ಪೇಪರ್ ಪುಸ್ತಕಗಳು, ಹಳೇ ಕಬ್ಬಿಣದ ಪದಾರ್ಥಗಳು (30ಕೆಜಿ) ಸಾಕ್ಷ್ಯ ಚಿತ್ರದ ಹಳೇ ಸ್ಕ್ರೀನ್ (02), ಕ್ಷೇತ್ರ ಪ್ರಚಾರದ ಸ್ಟ್ಯಾಂಡ್ ಸ್ಕ್ರೀನ್ ಫಲಕಗಳು (30), ಕ್ಷೇತ್ರ ಪ್ರಚಾರದ ಸ್ಪೀಕರ್ ಸ್ಟ್ಯಾಂಡ್ ಗಳು (04), ಕ್ಷೇತ್ರ ಪ್ರಚಾರದ ಫೋಕಸ್ ಲೈಟ್ ಸ್ಟ್ಯಾಂಡ್‌ಗಳು (04), ಕ್ಷೇತ್ರ ಪ್ರಚಾರದ ಹಳೆ ಫೋಕಸ್ ಲೈಟ್‌ಗಳು (04), ವಾಹನದ ಹಳೆ ಬಿಡಿ ಭಾಗಗಳು ಲಭ್ಯವಿರುತ್ತವೆ. ಆಸಕ್ತರು ಹರಾಜಿಗೆ ಇಟ್ಟಿರುವ ಸಾಮಗ್ರಿಗಳನ್ನು ಜೂ.20 ರಿಂದ 21ರವರೆಗೆ ಕಚೇರಿಯ ವೇಳೆಯಲ್ಲಿ ಪರಿವೀಕ್ಷಿಸಬಹುದಾಗಿದ್ದು, 1000ರೂ ಠೇವಣಿ ಪಾವತಿಸಿ ಹರಾಜಿನಲ್ಲಿ ಭಾಗವಹಿಸಬಹುದಾಗಿದೆ ಎಂದು ಮೈಸೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕ ಅಶೋಕ್ ಕುಮಾರ್.ಡಿ ತಿಳಿಸಿದ್ದಾರೆ.

## ಟೊಮ್ಯಾಟೋ ಬೆಳೆ ವಿಮೆ

**ಬೆಂಗಳೂರು ಗ್ರಾಮಾಂತರ:** 2024ನೇ ಸಾಲಿನ ರೈತ ಸುರಕ್ಷ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಅಧಿಸೂಚಿಸಿದೆ. ಇದಕ್ಕಾಗಿ ಅಗ್ರಿಕಲ್ಚರ್ ಇನ್ಸೂರೆನ್ಸ್ ಕಂಪನಿ(ಎಐಸಿ) ರವರನ್ನು ಆಯ್ಕೆ ಮಾಡಿರುತ್ತಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಟೊಮ್ಯಾಟೋ ಬೆಳೆಯನ್ನು ಹೋಬಳಿವಾರು ಬೆಳೆ ವಿಮೆ ಯೋಜನೆಗೆ ಒಳಪಡಿಸಿದೆ. ದೇವನಹಳ್ಳಿ ತಾಲ್ಲೂಕಿನಲ್ಲಿ ಕುಂದಾಣ ಮತ್ತು ವಿಜಯಪುರ, ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕಸಬಾ ಮತ್ತು ತೂಬಗೆರೆ, ಹೊಸಕೋಟೆ ತಾಲ್ಲೂಕಿನಲ್ಲಿ ಅನುಗೊಂಡನಹಳ್ಳಿ,ಜಡಿಗೇನಹಳ್ಳಿ ಮತ್ತು ನಂದಗುಡಿ, ನೆಲಮಂಗಲ ತಾಲ್ಲೂಕಿನಲ್ಲಿ ಕಸಬಾ ಈ ಹೋಬಳಿಗಳಲ್ಲಿ ಟೊಮ್ಯಾಟೊ ಬೆಳೆಗೆ ವಿಮೆ ಮಾಡಿಸುವ ರೈತರು ಕೂಡಲೇ ನಿಗದಿತ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಭೂಮಿ ಹೊಂದಿರುವ ದಾಖಲೆಗಳಾದ ಪಹಣಿ, ಬ್ಯಾಂಕ್ ಖಾತೆ ಪುಸ್ತಕ, ಆಧಾರ್ ನಕಲು ಪ್ರತಿಗಳನ್ನು ಮತ್ತು ಸ್ವಯಂ ಘೋಷಿತ ಬೆಳೆ ವಿವರಗಳೊಂದಿಗೆ ಆಯಾ ತಾಲ್ಲೂಕಿನ ಯಾವುದಾದರೂ ರಾಷ್ಟ್ರೀಯ ಅಧಿಕೃತ ಬ್ಯಾಂಕುಗಳಲ್ಲಿ ನೋಂದಣಿ ಮಾಡಿಸಬಹುದಾಗಿರುತ್ತದೆ. ಈ ಯೋಜನೆಯಲ್ಲಿ ಸಾಲ ಪಡೆದ ರೈತರು ಬೆಳೆ ವಿಮೆ ಯೋಜನೆಯಲ್ಲಿ ನೋಂದಾಯಿಸಿಕೊಳ್ಳಲು ಇಚ್ಛಿಸದೇ ಇದ್ದಲ್ಲಿ ಸಂಬಂಧಿಸಿದ ಬ್ಯಾಂಕ್ ಶಾಖೆಯ ವ್ಯವಸ್ಥಾಪಕರಿಗೆ ನೋಂದಣಿಯ ಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದಲ್ಲಿ ಅಂತಹ ರೈತರನ್ನು ಯೋಜನೆಯಿಂದ ಕೈಬಿಡಲು ಅವಕಾಶವಿರುತ್ತದೆ. ವಿಮಾ ಕಂತಿನ ವಿವರಗಳು: ಟೊಮ್ಯಾಟೊ ಬೆಳೆಗೆ ಪ್ರತಿ ಹೆಕ್ಟೇರ್ ಗೆ ವಿಮಾ ಮೊತ್ತ 1,41,500 ರೈತರು ಪಾವತಿಸಬೇಕಾದ ವಿಮಾ ಕಂತಿನ ದರ ಶೇಕಡಾ(5%) ರೂ. ಗಳಲ್ಲಿ-7075 ವಿಮಾ ಕಂತು ನೊಂದಾಯಿಸಿಕೊಳ್ಳಲು ಕೊನೆಯ ದಿನ 2024ರ ಜುಲೈ 15 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಈ ಕೆಳಕಂಡ ತಾಲ್ಲೂಕು ಮಟ್ಟದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ತಾಂತ್ರಿಕ ಅಧಿಕಾರಿಗಳನ್ನು ಸಂಪರ್ಕಿಸುವುದು. ದೇವನಹಳ್ಳಿ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ಮಲ್ಲಿಕಾರ್ಜುನ ಬಾಬು- (ಮೊ) 9480461234, ತಾಂತ್ರಿಕ ಸಹಾಯಕ ಉಮಾಪತಿ ಹೆಚ್.ಜಿ 9606117615., ದೊಡ್ಡಬಳ್ಳಾಪುರ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ)- ದೀಪಾ ಎಂ. ಎಸ್.- 9880210892, ತಾಂತ್ರಿಕ ಸಹಾಯಕರು ಜ್ಯೋತಿ-9535412975. ಹೊಸಕೋಟೆ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ರೇಖಾ.ಬಿ.ಪಿ, (ಮೊ)8217210320, ತಾಂತ್ರಿಕ ಸಹಾಯಕ ಸೋಮಶೇಖರ್. -8453966868., ನೆಲಮಂಗಲ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ) ಹರೀಶ್ ಆರ್. (ಮೊ)9880461607, ತಾಂತ್ರಿಕ ಸಹಾಯಕ ವಿಜಯಕುಮಾರ್ -9902581832. ಇವರನ್ನು ಸಂಪರ್ಕಿಸಬಹುದಾಗಿದೆ.

## ಮುಂಗಾರಿಗೆ ಪೂರ್ವಸಿದ್ಧತೆ

**ಕೋಲಾರ:** ಮಳೆಗಾಲ ಆರಂಭವಾಗಿದ್ದು ಕೊಳಚೆ ನೀರು ಕುಡಿಯುವ ನೀರಿನೊಂದಿಗೆ ಬೆರೆಯದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕೆಂದು ಜಿಲ್ಲಾಧಿಕಾರಿ ಅಕ್ರಂ ಪಾಷಾ ಅವರು ತಿಳಿಸಿದರು.

ಮುಂಗಾರು ಪೂರ್ವಸಿದ್ಧತೆಗೆ ಮತ್ತು ಕೈಗೊಂಡ ಕ್ರಮದ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಮಿತಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಮಳೆಗಾಲದಲ್ಲಿ ಮನೆಗಳು ಬೀಳುವುದು ಜೀವ ಹಾನಿಯಾಗುತ್ತಿರುವುದು ಕಂಡು ಬಂದಾಗ ಆಯಾ ತಹಸಿಲ್ದಾರ್‌ಗೆ ಮಾಹಿತಿ ನೀಡಬೇಕು. ಸಾಂಕ್ರಾಮಿಕ ರೋಗಗಳು ಹರಡಲು ಅವಕಾಶ ನೀಡದಂತೆ ಚರಂಡಿಗಳ ಸ್ವಚ್ಛತೆಗೆ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ವಹಿಸಬೇಕೆಂದರು.

ಕಸ ವಿಲೇವಾರಿ : ಕಸ ವಿಲೇವಾರಿ ಬಗ್ಗೆ ಮಾಧ್ಯಮಗಳಲ್ಲಿ ಪ್ರಕಟವಾಗುತ್ತಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.ಪ್ರತಿಯೊಬ್ಬ ಅಧಿಕಾರಿಗಳು ಪ್ರತಿನಿತ್ಯ ಬೆಳಿಗ್ಗೆ ನಗರ, ತಾಲ್ಲೂಕು ಹಾಗೂ ಗ್ರಾಮಗಳಲ್ಲಿ ಸಂಚರಿಸಿ ಕಸ ವಿಲೇವಾರಿ ಬಗ್ಗೆ ಮಾಹಿತಿಯನ್ನು ಕಡ್ಡಾಯವಾಗಿ ನೀಡಬೇಕೆಂದರು.

ಜಿಲ್ಲೆಯ ಎಲ್ಲಾ ತಹಶೀಲ್ದಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ತಮ್ಮ ಕಛೇರಿಗಳಲ್ಲಿ 24/7 ಕಂಟ್ರೋಲ್ ರೂಂಗಳನ್ನು ಚಾಲನೆಗೊಳಿಸಲಾಗಿದ್ದು, ಈ ಸೇವೆಯ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕೆಂದು ಸೂಚಿಸಿದರು.

ಅತಿವೃಷ್ಠಿಯಿಂದ ಸಂಭವಿಸುವ ಸಾರ್ವಜನಿಕ ಆಸ್ತಿ ಹಾನಿ, ಮಾನವ, ಜಾನುವಾರು ಜೀವಹಾನಿ, ಬೆಳೆ ಹಾನಿ, ಮನೆಗಳ ಹಾನಿ ಬಗ್ಗೆ ಗ್ರಾಮಲೆಕ್ಕಿಗರು, ರಾಜಸ್ವ ನಿರೀಕ್ಷಕರಿಂದ ವರದಿ ಪಡೆದು. ತಾಲ್ಲೂಕುವಾರು ಕ್ರೋಢೀಕರಿಸಿ ನಿಗಧಿತ ನಮೂನೆಯಲ್ಲಿ ಈ ಕಛೇರಿಗೆ ತಪ್ಪದೇ ವರದಿ ಸಲ್ಲಿಸಬಹುದೆಂದು ತಹಶೀಲ್ದಾರರಿಗೆ ಸೂಚಿಸಿದರು. ನಗರ ಮತ್ತು ಗ್ರಾಮಗಳಲ್ಲಿ ಮಳೆ ನೀರು ಸರಾಗವಾಗಿ ಹರಿಯಲು ಕಾಲುವೆ, ಚರಂಡಿ, ಸೇತುವೆ ಹೂಳು ತೆಗೆದು ಸ್ವಚ್ಛಗೊಳಿಸುವುದರ ಸಂಬಂಧ ಕ್ರಮವಹಿಸಬೇಕೆಂದು ತಾಲ್ಲೂಕು ಪಂಚಾಯತ್, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಯ ಅಧಿಕಾರಿಗಳಿಗೆ ಸೂಚಿಸಿದರು.

ಮಳೆಗಾಲದಲ್ಲಿ ವಿದ್ಯುತ್ ಸರಬರಾಜು ಮೇಲೆ ಉಂಟಾಗಬಹುದಾದ ಅಂಶಗಳನ್ನು ಗಮನದಲ್ಲಿರಿಸಿ ವಿದ್ಯುತ್ ಮೂಲ ಸೌಕರ್ಯಗಳನ್ನು ಬಲಪಡಿಸುವುದು, ಯಾವುದೇ ವಿದ್ಯುತ್ ಕಸಿತ, ತುರ್ತುಸ್ಥಿತಿಗೆ ಹಾಜರಾಗಲು ಮತ್ತು ವಿದ್ಯುತ್ ಸರಬರಾಜನ್ನು ತ್ವರಿತವಾಗಿ ಪುನಃ ಸ್ಥಾಪಿಸಲು ರಚಿಸುವುದು ಮತ್ತು ವಿದ್ಯುತ್ ತಂತಿ ಹಾದು ಹೋಗುವ ಮಾರ್ಗಗಳಲ್ಲಿ ಮಳೆ ಗಾಳಿಗೆ ಬೀಳುವಂತಹ ಮರಗಳನ್ನು ಕೊಂಬೆಗಳನ್ನು ಕತ್ತರಿಸಬೇಕೆಂದು ಕೋಲಾರ ಮತ್ತು ಕೆಜಿಎಫ್ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು. ಜಿ.ಪಂ. ಮುಖ್ಯಕಾರ್ಯನಿರ್ವಹಣಾಧಿಕಾರಿ ಪದ್ಮ ಬಸವಂತಪ್ಪ, ಅಪರ ಜಿಲ್ಲಾಧಿಕಾರಿ ಡಾ. ಶಂಕರ ವಣಿಕ್ಯಾಳ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



### ಕರವೇ ಪದಾಧಿಕಾರಿಗಳ ಎಚ್ಚರಿಕೆ

# ಗೂಡಂಗಡಿಗೆ ಅವಕಾಶ ಬೇಡ

**ಬೇಲೂರು:** ಪ್ರವಾಸಿ ತಾಣ ಬೇಲೂರಿನ ಮುಖ್ಯರಸ್ತೆ, ದೇಗುಲ ಸೇರಿದಂತೆ ಬಹುತೇಕ ಕಡೆಗಳಲ್ಲಿ ಸೌಂದರ್ಯಕ್ಕೆ ಹಾಗೂ ಆರೋಗ್ಯಕ್ಕೆ ಮಾರಕವಾಗಿರುವ ಪೆಟ್ಟಿಗೆ ಅಂಗಡಿಗಳನ್ನು ತೆರವುಗೊಳಿಸಲಾಗಿತ್ತು. ಆದರೆ ಅಂಗಡಿಗಳು ಮತ್ತೆ ತಲೆ ಎತ್ತಲು ಅವಕಾಶ ನೀಡಿದರೆ ಪ್ರತಿಭಟನೆ ನಡೆಸುವುದಾಗಿ ಕರವೇ ಎಚ್ಚರಿಕೆ ನೀಡಿದಎ.

ಎಲ್ಲೆಂದರಲ್ಲಿ ಅಕ್ರಮ ಗೂಡಂಗಡಿಗಳು, ಶೆಡ್ ಮತ್ತು ತಳ್ಳುವಗಾಡಿಗಳಿಂದ ಪಟ್ಟಣದ ಸೌಂದರ್ಯಕ್ಕೆ ತೀವ್ರ ಧಕ್ಕೆ ಉಂಟಾಗುವ ಜೊತೆಗೆ ಅನಾರೋಗ್ಯಕ್ಕೆ ಕಾರಣವಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ನೇತೃತ್ವದ ತಂಡ ಗೂಡಂಗಡಿಗಳ ತೆರವು ಕಾರ್ಯಾಚರಣೆ ನಡೆಸಿತ್ತು. ಆದರೆ ಕೆಲ ಪುರಸಭಾ ಸದಸ್ಯರು ಗೂಡಂಗಡಿಗಳನ್ನು ಪುನಃ ರಸ್ತೆಬದಿಯಲ್ಲಿ ಇಟ್ಟುಕೊಳ್ಳಲು ಹುನ್ನಾರ ನಡೆಸುತ್ತಿದ್ದಾರೆ ಎಂಬ ವದಂತಿಯ ಮೇಲೆ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣಶೆಟ್ಟಿ ಬಣದ ಪದಾಧಿಕಾರಿಗಳು ಶುಕ್ರವಾರ ಪುರಸಭೆ ಅಧಿಕಾರಿಗಳಿಗೆ ಮನವಿ ಪತ್ರ ನೀಡಿ, ಯಾವ ಕಾರಣಕ್ಕೂ ರಾಜಕೀಯ ಒತ್ತಡಕ್ಕೆ ಬಲಿಯಾಗಿ ಗೂಡಂಗಡಿಗಳಿಗೆ ಅವಕಾಶ ನೀಡಿದರೆ ಉಗ್ರ ಹೋರಾಟ ನಡೆಸುವ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಪತ್ರಿಕೆಯೊಂದಿಗೆ ಮಾತನಾಡಿದ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣಶೆಟ್ಟಿ ಬಣದ ತಾಲ್ಲೂಕು ಅಧ್ಯಕ್ಷ ವಿ.ಎಸ್.ಬೋಜೇಗೌಡ, ಹೇಳಿ-ಕೇಳಿ ಬೇಲೂರು ಪ್ರವಾಸಿ ತಾಣ, ಇಲ್ಲಿಗೆ ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ಬರುವ ಪಟ್ಟಣದಲ್ಲಿ ರಸ್ತೆ, ವೃತ್ತಗಳ ಬಳಿ ಅಕ್ರಮ ಗೂಡಂಗಡಿಗಳು, ಶೆಡ್ ನಿರ್ಮಾಣ ಮತ್ತು ತಳ್ಳುವಗಾಡಿಗಳಿಂದ ಪಟ್ಟಣದ ಸೌಂದರ್ಯಕ್ಕೆ ಧಕ್ಕೆಯಾಗಿದೆ ಎಂದು ಕಳೆದ ಹತ್ತು ವರ್ಷದಿಂದ ನಿರಂತ ಕರವೇ ಹೋರಾಟ ನಡೆಸಿದ ಫಲದಿಂದ ಸದ್ಯ ಇಲ್ಲಿನ ಮುಖ್ಯಾಧಿಕಾರಿ



> **ಬೇಲೂರಿನ ಮುಖ್ಯರಸ್ತೆ ಮತ್ತು ದೇಗುಲರಸ್ತೆಯ ಫುಟ್‌ಪಾತ್‌ಗಳನ್ನು ಕೆಲ ಪ್ರಭಾವಿ ಅಂಗಡಿ ಮಾಲೀಕರು ಒತ್ತುವರಿ ನಡೆಸಿ ಪಾದಚಾರಿಗಳಿಗೆ ತೊಂದರೆ ನೀಡುತ್ತಿದ್ದಾರೆ ಅಲ್ಲದೆ ಜೂನಿಯರ್ ಕಾಲೇಜು ಅವರಣದಲ್ಲಿರುವ ಅಕ್ರಮ ಶೆಡ್ ಗಗಳನ್ನು ಶೀಘ್ರವೇ ತೆರವುಗೊಳಿಸಬೇಕು.**
>
> **-ವಿ.ಎಸ್.ಬೋಜೇಗೌಡ**
> **ಕರವೇ ಅಧ್ಯಕ್ಷರು**

ಸುಜಯಕುಮಾರ್ ಕಳೆದ ಮೂರು ದಿನದ ಹಿಂದೆ ಯಾವುದೇ ಮುಲಾಜಿಲ್ಲದೆ ಗೂಡಂಗಡಿಗಳು, ಶೆಡ್ ಮತ್ತು ತಳ್ಳುವಗಾಡಿಗಳನ್ನು ತೆರವುಗೊಳಿಸಿದ್ದು ನಿಜಕ್ಕೂ ಸ್ವಾಗತಾರ್ಹ ಕಾರ್ಯವಾಗಿದೆ. ಆದರೆ ಪುರಸಭೆಯ ಕೆಲ ಸದಸ್ಯರು ತಮ್ಮ ಸ್ವಾರ್ಥದಿಂದ ಗೂಡಂಗಡಿಗಳು, ತಳ್ಳುವಗಾಡಿ ಮತ್ತು ಅಕ್ರಮ ಶೆಡ್ ನಿರ್ಮಾಣಕ್ಕೆ ಕುಮ್ಮಕ್ಕು ನೀಡುತ್ತಾ ಪುನಃ ನಿರ್ಮಾಣಕ್ಕೆ ಅವಕಾಶ ಮಾಡುತ್ತಿದ್ದಾರೆ. ಈ ಬಗ್ಗೆ ಪುರಸಭೆ ಅಧಿಕಾರಿಗಳಿಗೆ ಮತ್ತು ಕನ್ನಡಪರ ಸಂಘಟನೆಗಳಿಗೆ ಬೆದರಿಕೆ ಹಾಕುವ ಕೆಲಸ ಮಾಡುತ್ತಿದ್ದಾರೆ. ನಾವುಗಳು ಕನ್ನಡ ನಾಡಿನ ನಾಡು,ನುಡಿ, ಜಲಕ್ಕೆ ಅನ್ಯಾಯವಾದ ಸಂದರ್ಭದಲ್ಲಿ ಹೋರಾಟ ನಡೆಸುತ್ತಾ ಬಂದಿರುವ ನಮಗೆ ನಿಮ್ಮ ಬೆದರಿಕೆಗೆ ಜಗ್ಗುವ ಮಾತುಗಳಿಲ್ಲ ಎಂದು ಸ್ಪಷ್ಟ ಪಡಿಸಿದರು.

ಪುರಸಭೆ ಅಧಿಕಾರಿಗಳು ಯಾವ ಕಾರಣಕ್ಕೂ ರಾಜಕೀಯ ಅಥಾವ ಹಣದ ಆಮಿಷಕ್ಕೆ ಬಲಿಯಾಗಬಾರದು, ಕಾರಣ ಸಂಘಟನೆ ನಿಮ್ಮ ಜೊತೆಯಲ್ಲಿರುವ ಹಿನ್ನಲೆಯಲ್ಲಿ ನಿಮಗೆ ಬೆದರಿಕೆ ಹಾಕಿದ ವ್ಯಕ್ತಿಯ ಹೆಸರುನ್ನು ಬಹಿರಂಗ ಪಡಿಸಿ ಅವರ ವಿರುದ್ದ ಉಗ್ರ ಹೋರಾಟದ ಮೂಲಕ ಉತ್ತರ ನೀಡಲಾಗುತ್ತದೆ. ಈಗಾಗಲೇ ತರಕಾರಿ, ಹಣ್ಣು ಸೇರಿದಂತೆ ಇನ್ನಿತರ ವ್ಯಾಪಾರಕ್ಕೆ ಎಂದೇ ಪಟ್ಟಣದ ಐಡಿಎಸ್‌ಎಂಟಿಸಿ ವ್ಯಾಣಿಜ್ಯ ಮಳಿಗೆಯಲ್ಲಿ ಅವಕಾಶ ನೀಡಿದೆ. ಅಲ್ಲಿಯೇ ವ್ಯಾಪಾರ ನಡೆಸಬೇಕು ಅದನ್ನು ಬಿಟ್ಟು ಪುನಃ ರಸ್ತೆಬದಿ ಮತ್ತು ಸಾರ್ವಜನಿಕರ ಸ್ಥಳಗಳಲ್ಲಿ ಅಸ್ವಚ್ಛತೆ ನಡೆಸಿದರೆ ಹೋರಾಟ ಅನಿವಾರ್ಯವೆಂದರು. ಕರವೇ ಪದಾಧಿಕಾರಿಗಳಾದ ಜಯಪ್ರಕಾಶ್, ಕಾರ್ತಿಕ್, ಮಂಜುಚಾರ್, ಅರುಣ್ ಸಿಂಗ್, ಲೋಕೇಶ್, ಕುಮಾರ್, ಚಂದನ್, ಸೀನಣ್ಣ, ಹುಸೇನ್, ಸತೀಶ್ ಇನ್ನು ಮುಂತಾದವರು ಇದ್ದರು.

# ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಚಾಮರಾಜನಗರ ಹಾಗೂ ಸಂತೇಮರಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ 1ನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಜೂನ್ 16 ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಬದನಗುಪ್ಪೆ, ಪಣ್ಯದಹುಂಡಿ, ಬೆಂಡರವಾಡಿ, ಕೆಲ್ಲಂಬಳ್ಳಿ ಎನ್‌ಜೆವೈ, ಇಂಡಸ್ಟ್ರಿಯಲ್ ಏರಿಯಾ, ಕೆಇಡಿಪಿ 10 ಮತ್ತು 11, ಮುತ್ತಿಗೆ, ಹೆಗ್ಗೋಠಾರ, ಕೆಐಎಡಿಬಿ ಇಂಡಸ್ಟ್ರಿಯಲ್ ಏರಿಯಾ ಮರಿಯಾಲ, ಬೇಡರಪುರ, ಕೆಲ್ಲಂಬಳ್ಳಿ, ಬಸವನಪುರ, ಹಿರಿಕೆರೆ, ಕಾಳಿಕಾಂಬ ಕಾಲೋನಿ, ಚಂದಕವಾಡಿ, ರೇಚಂಬಳ್ಳಿ, ಮಲ್ಲೇದೇವನಹಳ್ಳಿ, ನವೋದಯ, ಹೊಂಡರಬಾಳು, ಜ್ಯೋತಿಗೌಡನಪುರ, ಉಮ್ಮತ್ತೂರು, ಬಾಗಳಿ, ಲಿಂಗಣಾಪುರ, ಜನ್ನೂರು, ಜನ್ನೂರು ಹೊಸೂರು, ಹಳ್ಳಿಕೆರೆಹುಂಡಿ, ಗಣಗನೂರು, ಗಣಗನೂರುಪುರ, ನವಿಲೂರು, ಆಲ್ದೂರು, ಬಿಎಂಕೆ ಹುಂಡಿ, ಗೊದ್ದಲಹುಂಡಿ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಸಂಬಂಧಿತ ದೂರುಗಳಿಗಾಗಿ ದೂ.ಸಂ 1912 ಸಂಪರ್ಕಿಸಬಹುದು.

## ಅನಿರೀಕ್ಷಿತ ದಾಳಿ; 2 ಕಿಶೋರ ಕಾರ್ಮಿಕರ ರಕ್ಷಣೆ

**ಬೆಂಗಳೂರು ಗ್ರಾಮಾಂತರ:** ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಮಕ್ಕಳ ಸಹಾಯವಾಣಿ-1098 ಜಂಟಿಯಾಗಿ ದೊಡ್ಡಬಳ್ಳಾಪುರದ ವಿವಿಧ ಸ್ಥಳಗಳಲ್ಲಿ ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕರನ್ನು ದುಡಿಮೆಗೆ ನೇಮಿಸಿಕೊಂಡಿರುವ ಅಂಗಡಿಗಳು, ಗ್ಯಾರೇಜುಗಳು, ಬೇಕರಿಗಳು, ಚಿಕನ್ ಮತ್ತು ಮಟನ್ ಅಂಗಡಿಗಳು ಹಾಗೂ ವಿವಿಧ ವಾಣಿಜ್ಯ ಸಂಸ್ಥೆಗಳಿಗೆ ಭೇಟಿ ನೀಡಿ, ತಪಾಸಣೆ ಕೈಗೊಂಡು 02 ಮಕ್ಕಳನ್ನು ರಕ್ಷಿಸಲಾಗಿದೆ.

ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದ್ದು 14 ವರ್ಷದೊಳಗಿನ ಯಾವುದೇ ಮಕ್ಕಳನ್ನು ಯಾವುದೇ ಕ್ಷೇತ್ರದಲ್ಲಿ ಹಾಗೂ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿದಲ್ಲಿ ಅಂತಹವರಿಗೆ ಕನಿಷ್ಠ 06 ತಿಂಗಳಿಗಿಂತ ಕಡಿಮೆ ಇಲ್ಲದಂತೆ ಮತ್ತು ಗರಿಷ್ಠ 02 ವರ್ಷದವರೆಗೂ ಜೈಲು ಶಿಕ್ಷೆ ಹಾಗೂ ರೂ. 20,000/- ಗಳಿಗಿಂತ ಕಡಿಮೆ ಇಲ್ಲದಂತೆ ಮತ್ತು ರೂ. 50,000/- ಸಾವಿರದವರೆಗೊಂಡ ದಂಡ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ ಹಾಗೂ ವಿವಿಧ ಅಂಗಡಿಗಳು, ಗ್ಯಾರೇಜುಗಳು, ಬೇಕರಿಗಳು, ಚಿಕನ್ ಮತ್ತು ಮಟನ್ ಅಂಗಡಿಗಳು ಹಾಗೂ ವಿವಿಧ ವಾಣಿಜ್ಯ ಸಂಸ್ಥೆಗಳ ಮಾಲೀಕರಿಗೆ ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ಹಾಗೂ ತಿದ್ದುಪಡಿ ಕಾಯ್ದೆ 2016ರ ಕುರಿತು ಕರಪತ್ರವನ್ನು ಮತ್ತು ಭಿತ್ತಿಪತ್ರಗಳನ್ನು ಅಂಗಡಿಗಳ ಮಾಲೀಕರಿಗೆ ವಿತರಿಸುವ ಮೂಲಕ ಇನ್ನು ಮುಂದೆ ತಮ್ಮ ಸುತ್ತಮುತ್ತಲಿನಲ್ಲಿ ಯಾವುದೇ ಮಕ್ಕಳನ್ನು ನೇಮಿಸಿ ಕೊಂಡಿರುವುದು ಕಂಡುಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ 1098 ಮತ್ತು ಪೋಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆ 112 ಕರೆ ಮಾಡುವುದರ ಮೂಲಕ ಮಕ್ಕಳನ್ನು ರಕ್ಷಣೆ ಮಾಡಲು ಸಾರ್ವಜನಿಕರು ಸಹಕಾರ ನೀಡಬೇಕೆಂದು ಅಧಿಕಾರಿಗಳು ಸೂಚಿಸಿದರು.

ರಕ್ಷಿಸಿದ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಿ, ಮಕ್ಕಳನ್ನು ದುಡಿಮೆಗೆ ನೇಮಿಸಿಕೊಂಡ ಮಾಲೀಕರ ವಿರುದ್ಧ ಕಾನೂನು ಕ್ರಮಜರುಗಿಸಲು ಕ್ರಮವಹಿಸಲಾಗಿದೆ. ಅನಿರೀಕ್ಷಿತ ತಪಾಸಣೆ ಹಾಗೂ ದಾಳಿಯಲ್ಲಿ ಕಾರ್ಮಿಕ ಅಧಿಕಾರಿ ನಾಗೇಂದ್ರ ಹೆಚ್ ಆರ್ , ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಸುಬ್ಬಾರಾವ್ ಎಸ್, ನಗರ ಪೊಲೀಸ್ ಠಾಣೆಯ ಪಿ ಎಸ್ ಐ ಕೃಷ್ಣಪ್ಪ, ಕಾರ್ಮಿಕ ನಿರೀಕ್ಷಕ ದಯಾನಂದ್ ಸಾಗರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರವಿ ಕುಮಾರ್, ಮಕ್ಕಳ ರಕ್ಷಣಾ ಘಟಕದ ನರಸಿಂಹರಾಜು, ಮಕ್ಕಳ ಸಹಾಯ ವಾಣಿಯ ಸಿಬ್ಬಂದಿ ಶ್ರೀನಿವಾಸ್, ಸೌಮ್ಯ ಹಾಜರಿದ್ದರು.

## ವಿಶ್ವ ರಕ್ತದಾನಿಗಳ ದಿನಾಚರಣೆ



**ಬೆಂಗಳೂರು:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೆಂಗಳೂರು ನಗರ ಜಿಲ್ಲೆ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಹಾಗೂ ಎಮ್ ಎಲ್ ಎ ಅಕಾಡಮಿ ಆಫ್ ಹೈಯರ್ ಲರ್ನಿಂಗ್ ಕಾಲೇಜು ಮಲ್ಲೇಶ್ವರಂ ಇವರ ಸಹಯೋಗದಲ್ಲಿ ಎಲ್ ಎ ಅಕಾಡಮಿ ಆಫ್ ಹೈಯರ್ ಲರ್ನಿಂಗ್ ಕಾಲೇಜು ಮಲ್ಲೇಶ್ವರಂ ನಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ - 2024 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ರಾಜ್ಯ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ್ ಗುಂಡೂರಾವ್ ಪಾಲ್ಗೊಂಡು ಉದ್ಘಾಟನೆ ಮಾಡಿದರು. ಸ್ಥಳೀಯ ಶಾಸಕರು ಹಾಗೂ ಮಾಜಿ ಉಪ ಮುಖ್ಯಮಂತ್ರಿ ಗಳಾದ ಸಿ ಎನ್ ಅಶ್ವಥ್ ನಾರಾಯಣ ಮಹಾಲಕ್ಷ್ಮಿ ಲೇಔಟ್ ವಿಕಲಚೇತನರ ಅಧ್ಯಕ್ಷ ಗುಣಶೇಖರ್, ಮಲ್ಲಿಕಾರ್ಜುನ ಹಿರೇಮಠ, ಬಾಲಕೃಷ್ಣ ಸೇರಿದಂತೆ ಅರೋಗ್ಯ ಇಲಾಖೆಯ ಅಧಿಕಾರಿಗಳು ಕಾಲೇಜು ಸಿಬ್ಬಂದಿ ಮತ್ತು ರೆಡ್ ಕ್ರಾಸ್ ಸಂಸ್ಥೆ ಪ್ರತಿನಿಧಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಮಹಾಲಕ್ಷ್ಮಿ ಲೇಔಟ್ ವಿಕಲಚೇತನರ ಅಧ್ಯಕ್ಷ ಗುಣಶೇಖರ್ ಅವರನ್ನು ಸನ್ಮಾನಿಸಲಾಯಿತು.

# ನಿರ್ಲಕ್ಷ್ಯದಿಂದ ಆರೋಗ್ಯ ವ್ಯತ್ಯಯ

**ಕೆ.ಆರ್.ನಗರ:** ಮನುಷ್ಯನ ಆರೋಗ್ಯ ಹದಗೆಡಲು ಆತ ನಿತ್ಯ ಸೇವಿಸುವ ಆಹಾರದ ಗುಣಮಟ್ಟ, ಅವನಲ್ಲಿರುವ ಸೋಮಾರಿತನ ಮತ್ತು ನಿರ್ಲಕ್ಷ್ಯ ಕಾರಣ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಡಿ.ನಟರಾಜು ಹೇಳಿದರು.

ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಮತ್ತು ಪುರಸಭಾ ಕಾರ್ಯಾಲಯದ ಆಶ್ರಯದಲ್ಲಿ ನಡೆದ ವಿಶ್ವ ಆಹಾರ ಸುರಕ್ಷತಾ ದಿನಾಚರಣೆ ಕಾರ್ಯಕ್ರಮ ಮತ್ತು ಹೋಟೆಲ್ ಮಾಲೀಕರ ಸಂಘದ ಸಭೆಯಲ್ಲಿ ಮಾತನಾಡಿದರು.

ನಾವು ಆಹಾರ ಸೇವನೆ ಮಾಡುವುದು ಕೇವಲ ಹಸಿವು ನೀಗಿಸಲು ಅಲ್ಲ ಜತೆಗೆ ಅದು ನಮ್ಮ ಆರೋಗ್ಯಕ್ಕೂ ಪೂರಕವಾಗಿರಬೇಕು ಆದ್ದರಿಂದ ಈ ವಿಚಾರದಲ್ಲಿ ಪ್ರತಿಯೊಬ್ಬರೂ ಕಾಳಜಿ ವಹಿಸಿ ಗುಣಮಟ್ಟದ ಆಹಾರ ಸೇವನೆ ಮಾಡುವ ಮೂಲಕ ಆರೋಗ್ಯವಂತರಾಗಿರ ಬೇಕೆಂದು ಸಲಹೆ ನೀಡಿದರು.

ಹಸಿವಾದಾಗ ಮಾತ್ರ ಊಟ ಮಾಡಬೇಕು ಅದನ್ನು ಹೊರತುಪಡಿಸಿ ಇತರರ ಬಲವಂತಕ್ಕೆ ಮತ್ತು ಸಿಕ್ಕ ಸಮಯದಲ್ಲಿ ಆಹಾರ ಸೇವಿಸಿದರೆ ಅದು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದ್ದು ಇದನ್ನು ಪ್ರತಿಯೊಬ್ಬರು ಅರಿತು ಸಮಯಕ್ಕೆ ಸರಿಯಾಗಿ ಆಹಾರ ಸೇವನೆ ಮಾಡಬೇಕೆಂದು ತಿಳಿಸಿದರು.

ಆಹಾರ ಸೇವನೆಯ ವಿಚಾರದಲ್ಲಿ ಸ್ವಚ್ಛತೆ ಬಹಳ ಪ್ರಮುಖವಾಗಿದ್ದು ಮನೆಯ ಜತೆಗೆ ಹೊರಗಡೆ ಹೋಟೆಲ್ ಮತ್ತು ಶುಭ ಸಮಾರಂಭಗಳಲ್ಲಿ ಊಟ ಮಾಡುವಾಗ ಬಹಳ ಎಚ್ಚರಿಕೆ ವಹಿಸಿ ಶುಚಿತ್ವದ ಬಗ್ಗೆ ನೇರವಾಗಿ ಪ್ರಶ್ನಿಸಬೇಕೆಂದು ಕಿವಿಮಾತು ಹೇಳಿದರು.



ಹೋಟೆಲ್ ಮಾಲೀಕರು ನಿಮ್ಮಲ್ಲಿಗೆ ಬರುವ ಗ್ರಾಹಕರಿಗೆ ಗುಣಮಟ್ಟದ ಆಹಾರ ನೀಡಿ ಅವರ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ತಾಲೂಕು ಆರೋಗ್ಯಾಧಿಕಾರಿಗಳು ಮಾರ್ಗದರ್ಶನ ಮಾಡಿದರು.

ಆಹಾರ ಸಂರಕ್ಷಾಣಾಧಿಕಾರಿ ಎಂ.ಸಂದೀಪ್, ಪುರಸಭೆ ಮುಖ್ಯಾಧಿಕಾರಿ ಡಾ.ಜಯಣ್ಣ, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಪರಮೇಶ್, ತಾಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ವಿ.ರಮೇಶ್, ಆರೋಗ್ಯ ಶಿಕ್ಷಣಾಧಿಕಾರಿ ಸಿ.ಎಂ.ರೇಖಾ, ಟಿಎಪಿಸಿಎಂಎಸ್ ಕಾರ್ಯದರ್ಶಿ ಕೆ.ಸಿ ಧರ್ಮರಾಜು, ಪುರಸಭೆ ಆರೋಗ್ಯ ನಿರೀಕ್ಷಕ ಹೆಚ್.ಎಸ್. ಲೋಕೇಶ್, ಆರೋಗ್ಯ ನಿರೀಕ್ಷಣಾಧಿಕಾರಿ ಹೆಚ್.ಜೆ.ಮಹೇಶ್, ಹೋಟೇಲ್ ಮಾಲೀಕರಾದ ನರಸಿಂಹ, ವೈ.ಪಿ.ಮಹದೇವ್, ಮಂಜುನಾಥ್ ನಾಯ್ಡು, ನಟರಾಜು, ಕಲ್ಯಾಣ ಮಂಟಪ ವ್ಯವಸ್ಥಾಪಕರಾದ ಯು.ಕೃಷ್ಣಭಟ್, ಸದಾಶಿವಯ್ಯ ಮತ್ತಿತರರು ಇದ್ದರು.

### ಚಿಕ್ಕಳುವಾರ ಕೊಡಗು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಅಶೋಕ ಸಲಹೆ

# ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಿ

**ಮಡಿಕೇರಿ:** ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಕ್ತನಿಧಿ ಕೇಂದ್ರ, ಜಿಲ್ಲಾಸ್ಪತ್ರೆ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಸೋಮವಾರಪೇಟೆ ತಾಲ್ಲೂಕು, ಕೊಡಗು ವಿಶ್ವ ವಿದ್ಯಾಲಯ, ಭಾರತೀಯ ರೆಡ್‌ಕ್ರಾಸ್ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಜ್ಞಾನ ಕಾವೇರಿ ಕ್ಯಾಂಪಸ್, ಕೊಡಗು ವಿಶ್ವವಿದ್ಯಾಲಯ ಚಿಕ್ಕ ಅಳುವಾರದಲ್ಲಿ ಶುಕ್ರವಾರ ವಿಶ್ವ ರಕ್ತದಾನಿಗಳ ದಿನಾಚರಣೆ ನಡೆಯಿತು.

ಚಿಕ್ಕಳುವಾರ ಕೊಡಗು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಅಶೋಕ ಆಲೂರ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ರಕ್ತದಾನ ದಿನಾಚರಣೆ ಕಾರ್ಯಕ್ರಮವನ್ನು 20 ವರ್ಷಗಳಿಂದ ಆಚರಿಸುತ್ತಾ ಬಂದಿದ್ದು, ನಿರಂತರವಾಗಿ ರಕ್ತದಾನ ಮಾಡಿದ ರಕ್ತದಾನಿಗಳಿಗೆ ಈ ಸಂದರ್ಭದಲ್ಲಿ ಧನ್ಯವಾದ ತಿಳಿಸಿದರು.

ರಕ್ತದಾನದ ಬಗ್ಗೆ ಸ್ಪಷ್ಟತೆಯನ್ನು ಪಡೆಯುವಂತೆ ತಿಳಿಸಿದರು. ಮುಂಬರುವ ದಿನಗಳಲ್ಲಿ ಕೊಡಗು ವಿಶ್ವ ವಿದ್ಯಾಲಯಕ್ಕೆ ಒಳಪಟ್ಟ ಎಲ್ಲಾ ಕಾಲೇಜುಗಳಲ್ಲಿ ರಕ್ತದಾನ ಶಿಬಿರಗಳನ್ನು ಏರ್ಪಡಿಸಲು ಕ್ರಮವಹಿಸುವ ಬಗ್ಗೆ ತಿಳಿಸಿದರು.



ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸತೀಶ್ ಕುಮಾರ್ ಅವರು ಜಿಲ್ಲೆಯಲ್ಲಿ ರಕ್ತದ ಅವಶ್ಯಕತೆ ಇರುವ ಬಗ್ಗೆ ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಡೆಂಗ್ಯೂ ಜ್ವರ ಇರುವ ಕಾರಣ ರಕ್ತ ಹಾಗೂ ಪ್ಲೇಟ್‌ಲೇಟ್‌ಗಳ ಅವಶ್ಯಕತೆ ತುಂಬಾ ಇದೆ. ಆದ್ದರಿಂದ ಎಲ್ಲರೂ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡುವಂತೆ ಹೇಳಿದರು.

ರಕ್ತದ ಅವಶ್ಯಕತೆ ಹಾಗೂ ರಕ್ತದಾನದ ಮಹತ್ವ ಮತ್ತು ಉಪಯೋಗಗಳ ಕುರಿತು ಜಿಲ್ಲಾಸ್ಪತ್ರೆಯ ರಕ್ತನಿಧಿ ಕೇಂದ್ರದ ವೈದ್ಯಾಧಿಕಾರಿ ಡಾ.ಕರುಂಬಯ್ಯ ಅವರು ಅರಿವು ಮೂಡಿಸಿದರು. ಕೊಡಗು ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ಸೀನಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಜಿಲ್ಲೆಯಲ್ಲಿ ಯಾವುದೇ ಸಂದರ್ಭದಲ್ಲಿ ರಕ್ತದ ಕೊರತೆಯಾಗಬಾರದು. ರಕ್ತದ ಅವಶ್ಯಕತೆ ಇದ್ದಾಗ ತಾವು ಕೈಜೋಡಿಸುವುದಾಗಿ ತಿಳಿಸಿದರು. ಕುಲಸಚಿವರಾದ ಡಾ.ಸೀನಪ್ಪ ರಕ್ತದಾನದ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು. ಈ ದಿನ ಅತಿ ಹೆಚ್ಚು ರಕ್ತದಾನ ಮಾಡಿ ಸನ್ಮಾನ ಸ್ವೀಕರಿಸಿದ ದಾನಿಗಳು ಶ್ರೇಷ್ಠರು. ಮುಂದಿನ ದಿನಗಳಲ್ಲಿ ಎಲ್ಲಾ ವಿದ್ಯಾರ್ಥಿ ವಿದ್ಯಾರ್ಥಿನಿಯರು ಅತಿ ಹೆಚ್ಚು ರಕ್ತದಾನ ಮಾಡಿ ಸನ್ಮಾನ ಸ್ವೀಕರಿಸುವಂತಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿ ಡಾ.ಆನಂದ್, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಕೆ.ಶಾಂತಿ, ಜಿಲ್ಲಾ ಮೇಲ್ವಿಚಾರಕರಾದ ಸುನಿತಾ, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಉಷಾ, ಕಮಲ, ಮುತ್ತಮ್ಮ, ಐಸಿಟಿಸಿ ಆಪ್ತ ಸಮಾಲೋಚಕರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

ಅತೀ ಹೆಚ್ಚು ರಕ್ತದಾನ ಮಾಡಿದ ರಕ್ತದಾನಿಗಳನ್ನು ಸನ್ಮಾನಿಸಲಾಯಿತು. ಕೊಡಗು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಉಪನ್ಯಾಸಕರು, ಸಿಬ್ಬಂದಿಗಳು ರಕ್ತದಾನ ಮಾಡಿದರು. ಎಂ.ಎ.ವಿದ್ಯಾರ್ಥಿ ಅಮೃತ್‌ರಾಜ್ ಅವರು ಪ್ರಾರ್ಥಿಸಿದರು. ಕೊಡಗು ವಿಶ್ವವಿದ್ಯಾಲಯದ ಪ್ರೊಫೆಸರ್ ಡಾ.ಜಮೀರ್ ಅಹಮದ್ ಅವರು ಸ್ವಾಗತಿಸಿದರು. ಕೊಡಗು ವಿಶ್ವವಿದ್ಯಾಲಯದ ಉಪನ್ಯಾಸಕರಾದ ಸುದರ್ಶನ್ ಕುಮಾರ್ ಅವರು ವಂದಿಸಿದರು.

## ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25 ನೇ ಸಾಲಿಗೆ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ-ಎನ್.ಯು.ಎಲ್.ಎಂ.) ಯೋಜನೆಯ ಉಪಘಟಕವಾದ ಸ್ವಯಂ ಉದ್ಯೋಗ ಕಾರ್ಯಕ್ರಮದಲ್ಲಿ ವೈಯಕ್ತಿಕ ಮತ್ತು ಗುಂಪು ಹಾಗೂ ಕ್ರೆಡಿಟ್ ಬ್ಯಾಂಕ್ ಲಿಂಕೇಜ್ (ಖಇಕ(ಖ) (ಉ) ಃ ಚಿಟಿಇ ಅಡಿಜಜಣ ಐಟಿಇಚಿರಜ) ನಡಿ ಸಾಲ ಪಡೆಯುವುದಕ್ಕೆ ಬಡತನ ರೇಖೆಗಿಂತ ಕೆಳಗಿರುವ (ಃಕಐ) 18 ರಿಂದ 45 ವರ್ಷದೊಳಗಿನ ನಗರ ಪ್ರದೇಶದ ಅರ್ಹ ವ್ಯಕ್ತಿಗಳು ಮತ್ತು ಡೇ-ನಲ್ಮ್ ಯೋಜನೆಯಡಿ ರಚಿಸಲಾದ ಸ್ವ-ಸಹಾಯ ಗುಂಪುಗಳ ಸದಸ್ಯರು ಗುಂಪು ಉದ್ದಿಮೆಗೆ ಹಾಗೂ ಬ್ಯಾಂಕ್ ಕ್ರೆಡಿಟ್ ಲಿಂಕೇಜ್ ನಡಿ ಬ್ಯಾಂಕ್ ಸಾಲ ಸೌಲಭ್ಯಕ್ಕೆ ಅರ್ಹರಾಗಿದ್ದು, ಜಿಲ್ಲೆಯ ಎಲ್ಲಾ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಆಸಕ್ತ ಅರ್ಹ ವ್ಯಕ್ತಿಗಳು ಅಗತ್ಯ ದಾಖಲೆಗಳೊಂದಿಗೆ ಉಚಿತವಾಗಿ ಅರ್ಜಿಗಳನ್ನು ಪಡೆದು ಜೂನ್ 30 ಒಳಗಾಗಿ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಡೇ-ನಲ್ಮ್ ವಿಭಾಗಕ್ಕೆ ಸಲ್ಲಿಸಬೇಕು. ಅಗತ್ಯ ದಾಖಲೆಗಳು: ಅರ್ಜಿಯನ್ನು ದ್ವಿ-ಪ್ರತಿಯಲ್ಲಿ ಭರ್ತಿ ಮಾಡಿ ಎಲ್ಲಾ ದಾಖಲೆಗಳೊಂದಿಗೆ (ಜೆರಾಕ್ಸ್ ಪ್ರತಿಗಳು) ಸಲ್ಲಿಸತಕ್ಕದ್ದು, ವಿದ್ಯಾರ್ಹತೆ (ಅಂಕಪಟ್ಟಿ), ಪಡಿತರ ಚೀಟಿ, ಆಧಾರ್‌ಕಾರ್ಡ್, ಚುನಾವಣಾ ಗುರುತಿನ ಚೀಟಿ, ಜಾತಿ, ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಉಳಿತಾಯ ಖಾತೆ ಪುಸ್ತಕ, ವ್ಯಾಪಾರ ಚಟುವಟಿಕೆ ಅಂದಾಜುಪಟ್ಟಿ, ಅಂಗಡಿಯ ಬಾಡಿಗೆ ಪತ್ರ. ವ್ಯಾಪಾರ ಪರವಾನಗಿ ಪತ್ರ. ಬ್ಯಾಂಕ್ ಬೇ ಬಾಕಿ ಪ್ರಮಾಣ ಪತ್ರ ಎನ್.ಒ.ಸಿ.) ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಚಿಕ್ಕಬಳ್ಳಾಪುರ ನಗರಸಭೆಯ ವಿಷಯ ನಿರ್ವಾಹಕರ ದೂರವಾಣಿ ಸಂಖ್ಯೆ: 7353529646, ಚಿಂತಾಮಣಿ ನಗರಸಭೆ: 8494977163, ಶಿಡ್ಲಘಟ್ಟ ನಗರಸಭೆ: 9845899235, ಗೌರಿಬಿದನೂರು ನಗರಸಭೆ: 7026976948, ಬಾಗೇಪಲ್ಲಿ ಪುರಸಭೆ: 8861050570, ಗುಡಿಬಂಡೆ ಪಟ್ಟಣ ಪಂಚಾಯಿತಿ: 9008596343 ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿಯ 9448557509 ಮತ್ತು 9449726008 ಸಂಖ್ಯೆಗಳಿಗೆ ಸಂಪರ್ಕಿಸಬಹುದೆಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ್ಯಾಯಾಧೀಕರಣ ತರಬೇತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನಲ್ಲಿ 18 ರಿಂದ 40 ವರ್ಷದೊಳಗಿನ ಪರಿಶಿಷ್ಟ ವರ್ಗದ ಕಾನೂನು ಪದವೀಧರರಿಗೆ ಆಡಳಿತ ನ್ಯಾಯಾಧೀಕರಣ ತರಬೇತಿಗೆ ಪರಿಶಿಷ್ಟ ವರ್ಗದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ ಪಡೆಯಲು ಇಚ್ಚಿಸುವ ಅಭ್ಯರ್ಥಿಯ ವಾರ್ಷಿಕ ಆದಾಯ ರೂ. 2 ಲಕ್ಷಗಳ ಒಳಗಿರಬೇಕು. ತರಬೇತಿ ಅವಧಿ 2 ವರ್ಷಗಳಾಗಿದ್ದು, ಪ್ರತಿ ತಿಂಗಳಿಗೆ 10,000 ರೂ. ಗಳ ಶಿಷ್ಯ ವೇತನ ನೀಡಲಾಗುತ್ತದೆ. ಸರ್ಕಾರಿ ವಕೀಲರು ಅಥವಾ ಕನಿಷ್ಠ 20 ವರ್ಷ ವಕೀಲ ವೃತ್ತಿಯಲ್ಲಿ ನುರಿತ ವಕೀಲರ ಅಧೀನದಲ್ಲಿ ತರಬೇತಿಗೆ ನಿಯೋಜಿಸಲಾಗುತ್ತದೆ. ಮುಖಾಂತರ ಜೂನ್ 17 ರೊಳಗೆಅರ್ಜಿಗಳನ್ನು ಸಲ್ಲಿಸಿ, ಸ್ವೀಕೃತಿ ಅರ್ಜಿ ಮತ್ತು ಮೂಲ ದಾಖಲೆಗಳ ಜೆರಾಕ್ಸ್ ಪ್ರತಿಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಗೌರಿಬಿದನೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯ ದೂ.ಸಂ:08156-277117 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಥಿತಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ಗೊರ್ಲಗುಮ್ಮನಹಳ್ಳಿಯ 11ನೇ ಮೈಲಿಯ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜಿನಲ್ಲಿ ಖಾಲಿ ಇರುವ ಜೀವಶಾಸ್ತ್ರ ವಿಷಯದ ಉಪನ್ಯಾಸಕರ ಹುದ್ದೆಗೆ ಇಲಾಖೆಯ ನಿರ್ದೇಶನದಂತೆ ಅಥಿತಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ನಿವೃತ್ತಿ ಹೊಂದಿರುವ ಅಥವಾ ಜೀವಶಾಸ್ತ್ರ ವಿಷಯದಲ್ಲಿ ಎಂ.ಎಸ್ಸಿ, ಬಿ.ಇಡಿ ಪದವಿ ಹೊಂದಿರುವ ಅರ್ಹ ಅಭ್ಯರ್ಥಿಗಳ ಅರ್ಜಿಗಳನ್ನು ಜಿಲ್ಲಾ ಅಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಇಲ್ಲಿ ಪಡೆದು ಜೂನ್ 20 ರೊಳಗೆ ಸಲ್ಲಿಸಬೇಕು, ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ದೂ. ಸಂ: 08156-277053, 9731613955 ಗೆ ಸಂಪರ್ಕಿಸಬಹುದೆಂದು ವಸತಿ ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ

**ಚಿಕ್ಕಬಳ್ಳಾಪುರ:** ನಂದಿ ಹೋಬಳಿಯ ಚಿಕ್ಕಹಳ್ಳಿ ಗ್ರಾಮದ ನಿವಾಸಿ 48 ವರ್ಷದ ನಾಗರಾಜು .ಎಸ್.ಎ ಎಂಬ ವ್ಯಕ್ತಿಯು ಬುದ್ಧಿ ಭ್ರಮಣೆಯುಳ್ಳ ಮತ್ತು ಕುರುಡ ವ್ಯಕ್ತಿಯಾಗಿದ್ದು, ಮನೆಯಿಂದ ಹೊರಟು ಹೋದವರು ಕಾಣೆಯಾಗಿರುವ ಬಗ್ಗೆ ದೂರು ದಾಖಲಾಗಿದೆ.

ಚಹರೆ: ನಾಗರಾಜು .ಎಸ್.ಎ 48 ವರ್ಷ, ಎಣ್ಣೆಗೆಂಪು ಮೈ ಬಣ್ಣ, ಸಾದರಣ ಮೈ ಕಟ್ಟು, ಕೋಲು ಮುಖ ಹೊಂದಿದ್ದು, ಮೀಸೆ ಗಡ್ಡ ಬಿಟ್ಟಿರುತ್ತಾರೆ. 5.5 ಅಡಿ ಎತ್ತರವಿದ್ದು, ತಿಳಿ ಕೆಂಪು ಶರ್ಟ್ ಮತ್ತು ನಿಕ್ಕರ್ ಧರಿಸಿದ್ದು, ಕನ್ನಡ ಮತ್ತು ತೆಲುಗು ಮಾತನಾಡುತ್ತಾರೆ. ಈ ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ನಂದಿ ಗಿರಿಧಾಮ ಪೊಲೀಸ್ ಠಾಣೆಗೆ ಅಥವಾ ಠಾಣೆಯ ದೂ.ಸಂ: 08156-275511, 08156-272423, 08156-274000 ಗಳಿಗೆ ಸಂಪರ್ಕಿಸಬಹುದೆಂದು ನಂದಿ ಗಿರಿಧಾಮ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಎಸ್ ಎಸ್ ಎಲ್ ಸಿ ಮರು ಮೌಲ್ಯಮಾಪನದಲ್ಲಿ 625 ಕ್ಕೆ 625 ಅಂಕ ಗಳಿಸಿದ ಭಾವನ

ಮಂಡ್ಯ. ನಾಗಮಂಗಲ ತಾಲ್ಲೂಕಿನ ತಟ್ಟಳ್ಳಿ ಗ್ರಾಮದ ಭಾವನ ಎಂಬ ವಿದ್ಯಾರ್ಥಿನಿಗೆ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿಯವರು ಬೆಂಗಳೂರಿನಲ್ಲಿ ಅಭಿನಂದಿಸಿದರು.

## ಅಜ್ಜಂದಿರು ನೆಟ್ಟಿರುವ ಗಿಡಗಳಿಂದಲೇ ಉತ್ತಮ ಗಾಳಿ

**ಹುಳಿಯಾರು:** ಹಿಂದಿನ ಕಾಲದಲ್ಲಿ ಅಜ್ಜಂದಿರು ನೆಟ್ಟಿರುವ ಸಸಿಗಳು ಈಗ ಹೆಮ್ಮರವಾಗಿ ಬೆಳದು ಉತ್ತಮ ಗಾಳಿ ನೀಡುತ್ತಾ ಪರಿಸರ ಮಾಲಿನ್ಯ ತಡೆಗಟ್ಟುತ್ತಿವೆ. ಆದರೆ, ಈಗ ಜನ ಮರಗಳನ್ನು ಬೆಳೆಸದೆ ಕಡಿಯುತ್ತಿರುವುದು ಆತಂಕಕಾರಿಯಾಗಿದೆ. ಸಸಿಗಳನ್ನು ಬೆಳೆಸಿ ಪೋಷಿಸಿದರೆ ಸಸಿಗಳೇ ನಮ್ಮ ಮುಂದಿನ ಭವಿಷ್ಯದ ಜನರ ಉಸಿರಾಗುತ್ತವೆ. ಹಾಗಾಗಿ ವಿದ್ಯಾರ್ಥಿಗಳು ಮರಗಿಡಗಳನ್ನು ಬೆಳೆಸುವ ಹವ್ಯಾಸ ರೂಢಿಸಿಕೊಳ್ಳಬೇಕು ಎಂದು ಧರ್ಮಸ್ಥಳ ಯೋಜನೆಯ ಪ್ರಾದೇಶಿಕ ನಿರ್ದೇಶಕರಾದ ಸೀನಪ್ಪ ತಿಳಿಸಿದರು.



ಹುಳಿಯಾರು ಹೋಬಳಿಯ ನಂದಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹಮ್ಮಿಕೊಂಡಿದ್ದ ಪರಿಸರ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪ್ರಪಂಚದಲ್ಲಿ ದಿನೇ ದಿನೇ ಪರಿಸರ ಮಾಲಿನ್ಯ ಹೆಚ್ಚಾಗುತ್ತಿದೆ. ಉಸಿರಾಡಲು ಶುದ್ಧ ಗಾಳಿಯ ಕೊರತೆ ಉಂಟಾಗುತ್ತಿದೆ. ಅದರಿಂದ ಶ್ವಾಸಕೋಶದ ರೋಗಗಳಿಗೆ ಜನರು ಹೆಚ್ಚಾಗಿ ಬಲಿಯಾಗುತ್ತಿದ್ದಾರೆ. ಪರಿಸರ ಸಂರಕ್ಷಣೆ ನಿರ್ಲಕ್ಷ್ಯದಿಂದ ಈ ರೀತಿ ದುಷ್ಪರಿಣಾಮ ಉಂಟಾಗುತ್ತಿದೆ. ಅದನ್ನು ಅರ್ಥ ಮಾಡಿಕೊಳ್ಳಬೇಕು. ಮನೆಗೊಂದು ಸಸಿ ನೆಟ್ಟು ಪೋಷಿಸಬೇಕು. ಪ್ರಕೃತಿಯ ಋಣ ತೀರಿಸಬೇಕು ಎಂದರು.

ಯೋಜನಾಧಿಕಾರಿ ರಾಮಚಂದ್ರ ಡಿ, ವಲಯದ ಮೇಲ್ವಿಚಾರಕಿ ಉಮಾದೇವಿ, ಕೃಷಿ ಮೇಲ್ವಿಚಾರಕರಾದ ಸಿದ್ದರಾಜು, ಶಾಲೆಯ ಮುಖ್ಯ ಶಿಕ್ಷಕ ರಂಗಧಾಮಯ್ಯ, ಎಸ್‌ಡಿಎಂಸಿ ಅಧ್ಯಕ್ಷರಾದ ಗವಿರಂಗಯ್ಯ, ಒಕ್ಕೂಟದ ಅಧ್ಯಕ್ಷರಾದ ರೇಣುಕಮ್ಮ, ಸೇವಾ ಪ್ರತಿನಿಧಿ ಸುಜಾತ ಮತ್ತಿತರರು ಉಪಸ್ಥಿತರಿದ್ದರು.

ಪರಿಸರ ಆಟೋಟ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತ ಮಕ್ಕಳಿಗೆ ಬಹುಮಾನವಾಗಿ ಗಿಡಗಳನ್ನು ವಿತರಣೆ ಮಾಡಲಾಯಿತು.

# ದಾನಗಳಲ್ಲಿ ಶ್ರೇಷ್ಠ ದಾನ ರಕ್ತದಾನ

### ಜಿಲ್ಲಾ ಆರೋಗ್ಯ, ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ ಮೋಹನ್ ಅಭಿಮತ

**ಮಂಡ್ಯ:** ರಕ್ತದಾನ ಎಂಬುವುದು ಎಲ್ಲ ದಾನಕ್ಕಿಂತಲೂ ಮಿಗಿಲಾದದ್ದು, ರಕ್ತದಾನ ಮಾಡಿದರೆ ಬೇರೊಬ್ಬ ರಿಗೆ ಜೀವದಾನ ಮಾಡಿದಂತೆ. ಆದರಿಂದ ದಾನಗಳಲ್ಲಿ ಶ್ರೇಷ್ಠ ದಾನ ರಕ್ತದಾನ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ ಮೋಹನ್ ಅವರು ಅಭಿಪ್ರಾಯಪಟ್ಟರು.

ಮಂಡ್ಯ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ವಿಶ್ವ ರಕ್ತ ದಾನಿಗಳ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಜನಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದರು.

ಮಾತನಾಡಿ ರಕ್ತದಾನ ಎಂಬುವುದು ದಾನಗಳಲ್ಲೇ ಶ್ರೇಷ್ಠವಾದ ದಾನ, ನಿಯಮಿತವಾಗಿ ರಕ್ತದಾನ ಮಾಡುವುದರಿಂದ ಮನುಷ್ಯನು ಆರೋಗ್ಯ ವೃದ್ಧಿಯಾಗುತ್ತದೆ. ರಕ್ತದಾನದಿಂದ ಆರೋಗ್ಯಕ್ಕೆ ತೊಂದರೆಯಾಗುತ್ತದೆ ಎಂಬ ಮನೋಭಾವವನ್ನು ದೂರಮಾಡಿಕೊಳ್ಳಬೇಕು ಎಂದರು.

ಈ ವರ್ಷದ ಘೋಷವಾಕ್ಯ ವಾದ 20 ವರ್ಷಗಳ ರಕ್ತದಾನ ಸಂಭ್ರಮ, ಧನ್ಯವಾದ ರಕ್ತದಾನಿಗಳಿಗೆ ಎಂಬ ವಾಕ್ಯವನ್ನು ಇಟ್ಟುಕೊಂಡು ಇಂದು ನಾವು ಜನಗಳಿಗೆ ಅರಿವು ಮೂಡಿಸುವುದಕ್ಕೆ ಜನಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಎಂದರು.

ಆರೋಗ್ಯವಂತ ಯುವಜನತೆಯು ರಕ್ತದಾನ ಮಾಡುವುದರಿಂದ ಅಪಘಾತ,ಶಸ್ತ್ರಚಿಕಿತ್ಸೆ ಯ ಸಂದರ್ಭದಲ್ಲಿ, ಡೆಂಗ್ಯೂ,ರಕ್ತದ ಕೊರತೆ ಇರುವವರಿಗೆ ಬಹಳ ಪ್ರಯೋಜನವಾಗುತ್ತದೆ ಯುವಜನತೆಯು ರಕ್ತದಾನ ಮಾಡುವುದಕ್ಕೆ ಮುಂದೆ ಬನ್ನಿ ಎಂದು ಹೇಳಿದರು. ಮಂಡ್ಯ ಜಿಲ್ಲೆಯಲ್ಲಿ ಪ್ರತಿ ತಿಂಗಳಿಗೆ 2000 ಯೂನಿಟ್ ಗಳಷ್ಟು ರಕ್ತದ ಅವಶ್ಯಕತೆ ಇದೆ ಡಾ.ಎಂ.ಎನ್ ಆಶಾಲತಾ

ಜಿಲ್ಲೆಯಲ್ಲಿ 2000 ಯೂನಿಟ್ ಗಳಷ್ಟು ರಕ್ತದ ಅವಶ್ಯಕತೆ ಇದೆ. ಯುವಜನತೆಯು ಸ್ವಯಂ ಪ್ರೇರಿತರಾಗಿ ಮುಂದೆ ಬಂದು ರಕ್ತದಾನ ಮಾಡಿ ಎಂದು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ.ಎಂ.ಎನ್ ಆಶಾಲತಾ ಅವರು ಹೇಳಿದರು.

ಇಂದಿನ ಯುವಕ ಯುವತಿಯರು ಮುಂದೆ ಬಂದು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬೇಕು, ಇಂದಿಗೆ ವಿಶ್ವ ರಕ್ತದಾನ ದಿನಾಚರಣೆ ಪ್ರಾರಂಭವಾಗಿ 20 ವರ್ಷಗಳು ಆಗುತ್ತದೆ. ಈ ಬಾರಿ ಕಾರ್ಯಕ್ರಮವನ್ನು ವಿಶಿಷ್ಠವಾಗಿ ಆಚರಿಸಲು ಯೋಜಿಸಿದ್ದು, ಜಿಲ್ಲಾ ಮಟ್ಟದಲ್ಲಿ ಅತಿ ಹೆಚ್ಚು ರಕ್ತದಾನ ಮಾಡಿರುವ ಮತ್ತು



ಬೇರೆಲ್ಲೂ ಸನ್ಮಾನ ಮಾಡಿಸಿಕೊಂಡಿರದ ರಕ್ತ ದಾನಿಗಳಿಗೆ ಅಭಿನಂದನಾ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗುವುದು ಎಂದರು.

ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಿಂದ ಹಮ್ಮಿಕೊಳ್ಳುವ ರಕ್ತದಾನ ಶಿಬಿರ ಗಳಿಂದ ಶೇಕಡಾ 32 ರಿಂದ 60 ರಷ್ಟು ರಕ್ತ ಮಾತ್ರ ಸಂಗ್ರಹವಾಗುತ್ತದೆ, ಶೇ 100 ರಷ್ಟು ಜಿಲ್ಗೆಗೆ ಅವಶ್ಯಕವಿರುವ ರಕ್ತವನ್ನು ಸಂಗ್ರಹಿಸಲು 18 ವರ್ಷ ಮೇಲ್ಪಟ್ಟ ಆರೋಗ್ಯವಂತ ಯುವಕ ಯುವತಿಯರು ಸ್ವತಃ ಬಂದು ರಕ್ತದಾನ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕುಷ್ಠ ರೋಗ ನಿರ್ಮೂಲನಾಧಿಕಾರಿ ಡಾ.ಸೋಮಶೇಖರ್, ತಾಲ್ಲೂಕು ಆರೋಗ್ಯ ವೈದ್ಯಾಧಿಕಾರಿ (ಟಿ.ಎಚ್.ಒ) ಡಾ.ಜವರೇಗೌಡ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ಗಾಯಿತ್ರಿ, ಜಿಲ್ಲಾ ಆರೋಗ್ಯ ಇಲಾಖೆಯ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಡಾ.ಮಮತಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಅಪರ ಜಿಲ್ಲಾಧಿಕಾರಿ ಎಚ್ ಎಲ್ ನಾಗರಾಜ್‌ಅವರು ರಕ್ತದಾನ ದಿನಾಚರಣೆಯ ಅಂಗವಾಗಿ ಮಾತನಾಡಿ ರಕ್ತದಾನಿಗಳ ಮೂಲಕ ಹೆಚ್ಚು ರಕ್ತವನ್ನು ಸಂಗ್ರಹಿಸಿ ಅಗತ್ಯವಿರುವ ಎಲ್ಲಾ ರೋಗಿಗಳಿಗೆ, ಶಸ್ತ್ರಚಿಕಿತ್ಸೆಯ ಸಂದರ್ಭದಲ್ಲಿ ಬೇರೆ ಬೇರೆ ರಕ್ತದ ಅವಶ್ಯಕತೆಯಿರುವ ರೋಗಿಗಳಿಗೆ ಉಚಿತವಾಗಿ ರಕ್ತದ ವ್ಯವಸ್ಥೆ ಮಾಡುವ ಉದ್ದೇಶದಿಂದ ಈ ವಿಶೇಷವಾದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ರಕ್ತದ ಅವಶ್ಯತೆ ಇರುವ ಎಲ್ಲರಿಗೂ ರಕ್ತ ನಿಧಿಯಿಂದ ಒದಗಿಸುವಂತೆ ರಕ್ತ ಸಂಗ್ರಹಣೆಯಾಗಬೇಕು.

ಎಷ್ಟೋ ಜನರು ರಕ್ತದಾನ ಮಾಡಲು ಹಿಂಜರಿಯುತ್ತಾರೆ. ರಕ್ತದಾನ ಮಾಡಲು ಯಾವುದೇ ಭಯ ಪಡುವ ಅಗತ್ಯವಿಲ್ಲ ರಕ್ತದಾನ ಮಾಡಿದರೆ ಆರೋಗ್ಯ ಚೆನ್ನಾಗಿ ಇರುತ್ತದೆ ಮತ್ತು ದಾನಗಳಲ್ಲಿ ಶ್ರೇಷ್ಟವಾದ ದಾನವು ರಕ್ತದಾನ, ನಾನೇ ಸ್ವತಃ ಇಲ್ಲಿಯವರೆಗೂ 18 ಬಾರಿ ರಕ್ತದಾನ ಮಾಡಿದ್ದೇನೆ ಮತ್ತು ವರ್ಷಕ್ಕೆ ಮೂರು ಬಾರಿಯಾದರೂ ರಕ್ತದಾನಮಾಡುತ್ತೇನೆ ಆದ್ದರಿಂದ ಯಾರೂ ಕೂಡ ಭಯ ಪಡದೆ ರಕ್ತದಾನ ಮಾಡಿ ಎಂದು ಹೇಳಿದರು.

ಎಲ್ಲಾ ಜಿಲ್ಲೆಗಳಿಗೆ ಹೋಲಿಸಿದರೆ ಮಂಡ್ಯ ಜಿಲ್ಲೆಯು ಅತಿ ಹೆಚ್ಚು ರಕ್ತದಾನ ಮಾಡುವ ಜಿಲ್ಲೆಯಾಗಿದೆ ಎಂಬುದು ಸಂತೋಷದ ಸಂಗತಿಯಾಗಿದೆ. ಅನೇಕ ಯುವ ಸಂಘಟನೆಗಳು ರಕ್ತದಾನ ಶಿಬಿರ ಮಾಡಿ ರಕ್ತದಾನ ಮಾಡಿಸುತ್ತಿರುವುದು ಶ್ಲಾಘನೀಯ ವಿಷಯವಾಗಿದೆ ಎಂದರು.

ಇದೇ ತಿಂಗಳು 21 ರಂದು ನಾಡಪ್ರಭು ಕೆಂಪೇಗೌಡರ ಜನ್ಮ ದಿನಾಚರಣೆಯ ಪ್ರಯುಕ್ತ ಮಳವಳ್ಳಿಯಲ್ಲಿ ಜಿಲ್ಲಾ ಆರೋಗ್ಯ ಇಲಾಖೆ ಹಾಗೂ ಹಲವು ಸಂಘಟನೆಗಳ ವತಿಯಿಂದ ಬೃಹತ್ ರಕ್ತದಾನ ಶಿಬಿರವನ್ನು ಆಯೋಜನೆ ಮಾಡಿದ್ದೇವೆ, ಇಡೀ ಜಿಲ್ಲೆಯಲ್ಲಿ ರಕ್ತದಾನ ಮಾಡುವ ಮೂಲಕ, ರಕ್ತ ದಾನಿಗಳಿಗೆ ಪ್ರೋತ್ಸಾಹಿಸುವ ಮೂಲಕ, ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದರು.

## ಜಿಲ್ಲೆಯಲ್ಲಿ ಮೊದಲ ಸರ್ಕಾರಿ ಗೋಶಾಲೆ ಪ್ರಾರಂಭ: ಡಾ: ಕುಮಾರ

**ಮಂಡ್ಯ:** ಮದ್ದೂರು ತಾಲ್ಲೂಕಿನ ಅತಗೂರು ಹೋಬಳಿಯ ಹೂತಗೆರೆ ಗ್ರಾಮದಲ್ಲಿ 50 ಲಕ್ಷ ರೂ ವೆಚ್ಚದಲ್ಲಿ ಮೊದಲ ಸರ್ಕಾರಿ ಗೋಶಾಲೆಯನ್ನು ನಿರ್ಮಾಣವಾಗಿದ್ದು, ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಾಣಿ ದಯಾ ಸಂಘ ಸಮಿತಿಯ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗೋಶಾಲೆ ಕಾಮಗಾರಿ ಅಂತಿಮ ಹಂತದಲ್ಲಿದ್ದು, ಉದ್ಘಾಟನೆಗೆ ಸಿದ್ಧತೆ ಮಾಡಿಕೊಳ್ಳಿ, ಪ್ರಾಣಿಗಳಿಗೆ ವಸತಿ, ಕುಡಿಯುವ ನೀರು, ಮೇವಿಗೆ ಯಾವುದೇ ತೊಂದರೆಯಾಗಬಾರದು. ಹೂತಗೆರೆ ಗ್ರಾಮದ ಗೋಶಾಲೆಯು 10 ಎಕರೆ ವಿಸ್ತೀರ್ಣದಲ್ಲಿದ್ದು, ಇದರ ಸುತ್ತ ಕಾಂಪೌಂಡ್ ಅಥವಾ ಬೇಲಿ ನಿರ್ಮಿಸಿ ಸ್ಥಳದ ರಕ್ಷಣೆ ಮಾಡಿಕೊಳ್ಳಬೇಕು ಇಲ್ಲಾವದಲ್ಲಿ ಒತ್ತುವರಿಯಾಗುವ ಸಾಧ್ಯತೆ ಹೆಚ್ಚು. ಗೋಶಾಲೆಯ ಸುತ್ತ ಕಾಂಪೌಂಡ್ ನಿರ್ಮಿಸಲು ಯೋಜನೆ ಸಿದ್ಧಪಡಿಸಿ ಎಂದರು. ಖಾಸಗಿಯಾಗಿ ಕಾರ್ಯನಿರ್ವಹಿಸುವ ಗೋಶಾಲೆಗಳಿಗೆ ಪ್ರತಿ ಗೋವಿಗೆ ಪ್ರತಿದಿನಕ್ಕೆ ರೂ 17.30 /- ರಂತೆ ಸಹಾಯಧನ ನೀಡಲಾಗುವುದು.

ಈ ಹಿನ್ನಲೆಯಲ್ಲಿ ಸಹಾಯಧನ ಕೋರಿ ಮನವಿ ಸಲ್ಲಿಸಿರುವ ಮಂಡ್ಯ ತಾಲ್ಲೂಕು ಸಾತನೂರಿನಲ್ಲಿರುವ ಶ್ರೀ ಅದಿಚುಂಚನಗಿರಿ ಗೋಶಾಲೆ- 159, ನಾಗಮಂಗಲ ತಾಲ್ಲೂಕಿನ ಅದಿಚುಂಚನಗಿರಿ ಗೋಶಾಲೆ- 100, ಪಾಂಡವಪುರ ತಾಲ್ಲೂಕಿನ ದೊಡ್ಡಬ್ಯಾಡರಹಳ್ಳಿಯಲ್ಲಿರುವ ಶ್ರೀ ಧ್ಯಾನ ಪೌಂಡೇಶನ್ ಗೋರಕ್ಷಾ ಟ್ರಸ್ಟ್ ನ ಚೈತ್ರ ಗೋಶಾಲೆ- 891, ಕೆರೆತೊಣ್ಣೂರು ಯತಿರಾಜ್ ಸೇವಾ ಟ್ರಸ್ಟ್- 116, ಮದ್ದೂರು ತಾಲ್ಲೂಕಿನ ಹರಕನಹಳ್ಳಿಯಲ್ಲಿರುವ ಕೃಷ್ಣ ಗೀರ್ ಗೋಶಾಲೆ ಟ್ರಸ್ಟ್- 128, ಹೊಸಗಾಮಿ ಗ್ರಾಮದ ಗಣೇಶ್ ದೇಶಿ ಗೋಶಾಲೆ ಟ್ರಸ್ಟ್ -202, ಕದಲೂರಿನಲ್ಲಿರುವ ನಿಧಿಗೌಡ ಸಾಮಾಜಿಕ ಹಾಗೂ ಸಾಂಸ್ಕೃತಿಕ ಸೇವಾ ಟ್ರಸ್ಟ್- 53ಹಾಗೂ ಮಂಡ್ಯ ತಾಲ್ಲೂಕಿನ ಕಾಮದೇನು ಗೋ ಸಂರಕ್ಷಣಾ ಟ್ರಸ್ಟ್- 22 ಸಹಾಯಧನ ಮಂಜೂರಾತಿ ಕುರಿತಂತೆ ಸಭೆಯಲ್ಲಿ ಚರ್ಚಿಸಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್, ಪಶುಪಾಲನಾ ಇಲಾಖೆಯ ಉಪನಿರ್ದೇಶಕ ಡಾ:ಸುರೇಶ್, ಮಂಡ್ಯ ನಗರಸಭೆ ಆಯುಕ್ತ ಮಂಜುಮಾಥ್ , ವಿವಿಧ ಗೋಶಾಲೆಯ ಮುಖ್ಯಸ್ಥರು ಉಪಸ್ಥಿತರಿದ್ದರು.




## ಮಂಡ್ಯ ಜಿಲ್ಲೆಯ ಇಬ್ಬರಿಗೆ ಮುಖ್ಯಮಂತ್ರಿ ಅವರ ಚಿನ್ನದ ಪದಕ

**ಮಂಡ್ಯ:** ಸದಾಪ್ರಕೃತಿಯ ಸವಾಲನ್ನೇ ಎದುರಿಸಿ ಹೋರಾಡುವ ಆಪತ್ಬಾಂಧವ ಸೇವಾ ಇಲಾಖೆಯಾದ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯ ಮಂಡ್ಯ ಜಿಲ್ಲೆಯ ಮಂಡ್ಯ ಅಗ್ನಿಶಾಮಕ ಠಾಣೆಯ ಪ್ರಮುಖ ಅಗ್ನಿಶಾಮಕರಾದ ಪ್ರಭಾಕರ್ ಶೆಟ್ಟಿ ಮತ್ತು ಪಾಂಡವಪುರ ಅಗ್ನಿಶಾಮಕ ಠಾಣೆಯ ಪ್ರಮುಖ ಅಗ್ನಿಶಾಮಕರಾದ ಹರೀಶ್ ಎನ್ ಎಸ್ ಇವರಿಬ್ಬರಿಗೆ ಇತ್ತೀಚೆಗೆ ಬೆಂಗಳೂರಿನ ಆರ್.ಎ ಮುಂಡ್ಕೂರು ಅಗ್ನಿಶಾಮಕ ಅಕಾಡೆಮಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾನ್ಯ ಗೃಹ ಸಚಿವರಾದ ಜಿ ಪರಮೇಶ್ವರ್ ರವರು 2024ನೇ ಸಾಲಿನ ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯಮಂತ್ರಿ ಅವರ ಚಿನ್ನದ ಪದಕವನ್ನು ನೀಡಿ ಗೌರವಿಸಿರುತ್ತಾರೆ.

ಯಾವುದೇ ಅನಾಹುತಗಳು ಸಂಭವಿಸಿದಾಗ ಮೊದಲು ಮುನ್ನುಗ್ಗಿ ಬಂದು ಕಾರ್ಯಾಚರಣೆಯಲ್ಲಿ ಪಾಲ್ಗೊಳ್ಳುವ ಅಗ್ನಿಶಾಮಕ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರಿಗೆ ಅವರ ಕಾರ್ಯವೈಕರಿ ಮತ್ತು ದಕ್ಷತೆಯನ್ನು ಗುರುತಿಸಿ ಸರಕಾರ ಚಿನ್ನದ ಪದಕವನ್ನು ನೀಡಿದೆ . ಈ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ ಇಬ್ಬರು ಚಿನ್ನದ ಪದಕ ವಿಜೇತರನ್ನು ಜಿಲ್ಲಾ ಅಗ್ನಿಶಾಮಕ ಅಧಿಕಾರಿಗಳು, ಅಧಿಕಾರಿ ವೃಂದ ಮತ್ತು ಸಹೋದ್ಯೋಗಿಗಳು, ಸಾರ್ವಜನಿಕರು ಅಭಿನಂದಿಸಿರುತ್ತಾರೆ.



### ನೌಕಾಪಡೆಯಲ್ಲಿ ಸಹಾಯಕ ಕಮಾಂಡೆಂಟ್

## ಹುದ್ದೆ ಪಡೆದ ಬೇಲೂರಿನ ವಿಷ್ಣು

**ಬೇಲೂರು:** ಬದುಕಿನಲ್ಲಿ ಏನಾದರೊಂದು ಸಾಧನೆಗೆ ಗುರಿ ಮುಖ್ಯ. ಇಂತಹ ಸಾಧನೆಯ ಹಾದಿಯಲ್ಲಿ ಸಾಗಿದ ಬೇಲೂರಿನ ಯುವಕ ತನ್ನದೇ ಚಿಂತನೆಯ ಗುರಿ ತಲುಪಿ ರಾಷ್ಟ್ರದ ರಕ್ಷಣಾ ಪಡೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ 14 ನೇ ರ್‍ಯಾಂಕ್ ಪಡೆಯುವ ಮೂಲಕ ಉನ್ನತ ಹುದ್ದೆಯೊಂದನ್ನು ಅಲಂಕರಿಸಿದ್ದಾರೆಂದರೆ ಸಂತಸದ ವಿಷಯವೆ.



» ರಕ್ಷಣಾಪಡೆ ರಾಷ್ಟ್ರಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ 14 ನೇ ರ್‍ಯಾಂಕ್

ದೇಶ ಸೇವೆಗಾಗಿ ತೆರಳಿರುವ ಈ ಬಾಲಕ ರಕ್ಷಣಾ ಪಡೆಯ ರಾಷ್ಟ್ರಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ 14 ನೇ ರ್‍ಯಾಂಕ್ ಪಡೆದು ತಾಲ್ಲೂಕು, ಜಿಲ್ಲೆ, ರಾಜ್ಯಕ್ಕೆ ಹೆಸರು ತಂದಿದ್ದಾರೆ. ಬೇಲೂರು ಅಷ್ಟೇ ಅಲ್ಲ, ಹಾಸನ ಜಿಲ್ಲೆ, ಕರ್ನಾಟಕದ ಪರವಾಗಿ ಪ್ರಥಮವಾಗಿ ಈ ಸೆಲ್ಯೂಟ್ ಹೊಡೆಯಲೇಬೇಕು.

ಪಟ್ಟಣದ ಕಟ್ಟಡ ನಿರ್ಮಾಣ ಕಾರ್ಮಿಕ ಬಿ.ಟಿ.ಸತೀಶ್‌ರೇಣುಕಾ ಪುತ್ರ ಬಿ.ಎಸ್.ವಿಷ್ಣು, ದೇಶಕ್ಕೆ 14 ನೇ ರ್‍ಯಾಂಕ್ ಪಡೆದು ಸಹಾಯಕ ಕಮಾಂಡೆಂಟ್ ಹುದ್ದೆಗೆ ಆಯ್ಕೆಯಾಗಿದ್ದಾರೆ. ಇದೆ ತಿಂಗಳು 28 ರಿಂದ ಕೇರಳದಲ್ಲಿ ನಡೆಯುವ 6 ತಿಂಗಳ ಅವಧಿಯ ಪ್ರತಿಷ್ಠಿತ ಭಾರತೀಯ ದಡರಕ್ಷಕ ಪಡೆಯ ಹೆಚ್ಚುವರಿ ತರಬೇತಿಗೆ ತೆರಳಲಿದ್ದು ನಂತರ ರಕ್ಷಣಾ ಪಡೆಯ ಮುಖ್ಯಸ್ಥರು ನಿಯೋಜಿಸುವ ಸ್ಥಳದಲ್ಲಿ ಹುದ್ದೆ ಅಲಂಕರಿಸಲಿದ್ದಾರೆ.

6ನೇ ತರಗತಿಯವರಗೆ ಪಟ್ಟಣದ ಶಾಂತಳಾ ವಿದ್ಯಾಸಂಸ್ಥೆ, 7 ರಿಂದ 10 ನೇ ತರಗತಿ ಶೃಂಗೇರಿ ಸಮೀಪದ ಸಾಯಿಬಾಬಾ ವಿದ್ಯಾ ಸಂಸ್ಥೆ, ಪದವಿಪೂರ್ವ ಕಾಲೇಜು ಕಾರ್ಕಳದ ಜ್ಞಾನಸುಧಾ ಸಂಸ್ಥೆ, ಪದವಿ ಬೆಂಗಳೂರಿನ ಎಂ.ಎಸ್. ರಾಮಯ್ಯ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡಿದ್ದು ರಕ್ಷಣಾ ಪಡೆಗೆ ಸೇರ್ಪಡೆಗೊಂಡು ಪೈಲೆಟ್ ಆಗಬೇಕೆಂಬ ಉದ್ದೇಶದಿಂದ ಏರೋನಾಟಿಕ್ ವಿಷಯವನ್ನು ಆಯ್ಕೆ ಮಾಡಿಕೊಂಡಿದ್ದರು. ಆಯ್ಕೆ ಮಾಡಿಕೊಂಡಿದ್ದ ವಿಷಯಕ್ಕೆ ಅನುಗುಣವಾಗಿ ನಡೆದ ರಾಷ್ಟ್ರಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಬಿ.ಎಸ್.ವಿಷ್ಣು 14 ನೇ ರ್‍ಯಾಂಕ್ ತಮ್ಮದಾಗಿಸಿಕೊಂಡಿದ್ದಾರೆಂದರೆ ಅದು ಸುಲಭದ ಮಾತಲ್ಲ. ಇಂದಿನ ಬಹುತೇಕ ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ದಿಸೆಯಲ್ಲಿ ಹಾದಿ ತಪ್ಪುವ, ದುಶ್ಚಟಗಳಿಗೆ ಬಲಿಯಾಗುವುದು ಕಂಡುಬರುತ್ತಿದೆಯಾದರೂ ಇಂತಹವರ ನಡುವೆ ನಕ್ಷತ್ರದಂತೆ ಪುಟಿದೆದ್ದಿರುವ ಈ ಬಾಲಕನ ಶ್ರಮ, ಶ್ರದ್ಧೆ, ಆಲೋಚನೆಗೆ ಇಂತಹ ಪುತ್ರನನ್ನು ಪಡೆದ ತಂದೆ ತಾಯಿಯ ಬಗ್ಗೆ ಹೆಮ್ಮೆ ಪಡೆಯಬೇಕಿದೆ.

### ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ ಮಾಹಿತಿ

# 27ಕ್ಕೆ ಕೆಂಪೇಗೌಡ ಜಯಂತಿ ಆಚರಣೆ

**ಚಿಕ್ಕಬಳ್ಳಾಪುರ:** ಇದೇ ಜೂನ್ 27 ರಂದು ನಗರದ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ನಾಡಪ್ರಭು ಕೆಂಪೇಗೌಡ ಅವರ ಜಯಂತಿಯನ್ನು ಸಂಭ್ರಮ ಸಡಗರದಿಂದ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ ಅವರು ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೆಂಪೇಗೌಡ ಜಯಂತಿ ಅಂಗವಾಗಿ ಶುಕ್ರವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಜೂನ್ 27 ರಂದು ನಗರದ ಮರುಳಸಿದ್ದೇಶ್ವರ ಸ್ವಾಮಿ ದೇವಾಲಯದಿಂದ (ಎಂ.ಜಿ.ರಸ್ತೆ) ಒಕ್ಕಲಿಗರ ಕಲ್ಯಾಣ ಮಂಟಪದವರೆಗೆ ಪಲ್ಲಕ್ಕಿ ಮತ್ತು ಜಾನಪದ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಯಲಿದೆ. ನಂತರ ಶ್ರೀ ಕೆಂಪೇಗೌಡರ ಪುತ್ಥಳಿಗೆ ಮಾಲಾರ್ಪಣೆ ಕಾರ್ಯಕ್ರಮ ನಡೆಯಲಿದೆ. ಆ ನಂತರ ವೇದಿಕೆ ಕಾರ್ಯಕ್ರಮಗಳು ಜರುಗಲಿವೆ ಎಂದು ತಿಳಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ನಾಡಪ್ರಭು ಕೆಂಪೇಗೌಡರ ವಿಚಾರದಾರೆಗಳ ಕುರಿತು ಭಾಷಣ, ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ಸಮುದಾಯದ ಪ್ರತಿಭಾನ್ವಿತ



20 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುವುದು. ಕೃಷಿ, ತೋಟಗಾರಿಕೆ, ರೇಷ್ಮೆ ಮತ್ತು ಪಶುಸಂಗೋಪನೆ ಕ್ಷೇತ್ರಗಳಲ್ಲಿ ಸಾಧನೆಗೈದಿರುವ ಸಮುದಾಯದ ಪ್ರಗತಿಪರ ರೈತರು ಸೇರಿದಂತೆ ಇನ್ನಿತರ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ 10 ಮಂದಿ ಸಾಧಕರಿಗೆ ಸನ್ಮಾನ ಮಾಡಲು ತೀರ್ಮಾನಿಸಲಾಯಿತು.

ಈ ಕಾರ್ಯಕ್ರಮಕ್ಕೆ ಆಹ್ವಾನ ಪತ್ರಿಕೆ ಮುದ್ರಣ, ವಿತರಣೆ, ವೇದಿಕೆ ಸಿದ್ಧತೆ, ಸಾಧಕ ರೈತರಿಗೆ ಸನ್ಮಾನ, ಪ್ರತಿಭಾ ಪುರಸ್ಕಾರ, ಕಲಾತಂಡಗಳೊಂದಿಗೆ ಮೆರವಣಿಗೆ, ಸಾಧಕರ ಆಯ್ಕೆ ಸೇರಿದಂತೆ ಕಾರ್ಯಕ್ರಮ ಆಯೋಜನೆಗೆ ಅಗತ್ಯ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲು ಅಧಿಕಾರಿಗಳಿಗೆ ಇಲಾಖಾವಾರು ಕಾರ್ಯಭಾರ ಹಂಚಿಕೆ ಮಾಡಿ ಜವಾಬ್ದಾರಿ ವಹಿಸಿದರು. ಜಯಂತ್ಯೋತ್ಸವಕ್ಕೆ ಯಾವುದೇ ಲೋಪವಾಗದಂತೆ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ಸಂಬಂಧ ಪಟ್ಟ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳಿಗೆ ನೀಡಿದರು.

ಜಿಲ್ಲೆಯ ಸಮಸ್ತ ನಾಗರಿಕರು, ಸಮುದಾಯದ ಮುಖಂಡರು, ಪದಾಧಿಕಾರಿಗಳು, ಸರ್ಕಾರೇತರ ಸಂಸ್ಥೆಗಳ ಮುಖಂಡರು, ಪದಾಧಿಕಾರಿಗಳು, ರೈತಬಾಂಧವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಅಪರ ಜಿಲ್ಲಾಧಿಕಾರಿಗಳು ಮನವಿ ಮಾಡಿದರು. ಸಭೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಪ್ರೊ.ಕೋಡಿರಂಗಪ್ಪ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಈಶ್ವರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮನಿಷಾ, ಸಮುದಾಯದ ಮುಖಂಡರಾದ ಬಿ.ಎನ್. ಚನ್ನಪ್ಪರೆಡ್ಡಿ, ಚದಲಪುರ ನಾರಾಯಣಸ್ವಾಮಿ, ಬಿ.ಕೆ. ಮಂಜುನಾಥ್, ಪ್ರಕಾಶ್.ಎಂ, ನಾರಾಯಣಸ್ವಾಮಿ, ಯಲುವಳ್ಳಿ ಸೊಣ್ಣೇಗೌಡ, ವಕ್ಕಲಿಗ ಸಮುದಾಯದ ಸಂಘ ಸಂಸ್ಥೆಗಳ ಮುಖ್ಯಸ್ಥರು, ಪದಾಧಿಕಾರಿಗಳು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ವೃತ್ತಿಯು ಜೀವನ ನಿರ್ವಹಣೆಯ ಅವಿಭಾಜ್ಯ ಅಂಗ

**ವಿಜಯಪುರ:** ಪ್ರಪಂಚದಲ್ಲಿನ ಪ್ರತಿಯೊಬ್ಬ ವ್ಯಕ್ತಿಯು ಕಾಯಕದೊಡನೆ ಜೀವನ ನಡೆಸಬೇಕೆಂಬುದು ಕ್ರಾಂತಿಯೋಗಿ ಬಸವಣ್ಣನವರ ಉದ್ದೇಶ ಮತ್ತು ಗುರಿಯಾಗಿದ್ದು ಮಾಡುವ ವೃತ್ತಿಯೂ ಸಹ ಸತ್ಯನಿಷ್ಠ ಕಾಯಕವಾಗಿ ಇರಬೇಕೆಂದು ತಿಳಿಸಿದ್ದರು ಎಂದು ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ಹಡಪದ್ ತಿಳಿಸಿದರು.

ಪಟ್ಟಣದ ಎಲುವಳ್ಳಿ ರಸ್ತೆಯಲ್ಲಿರುವ ಜೆಸಿಐ ಅಧ್ಯಕ್ಷರು ಪುರಸಭಾ ಸದಸ್ಯರು ಆದ ಬೈರೇಗೌಡರ ನಿವಾಸದಲ್ಲಿ ಜೆಸಿಐ ಸಂಸ್ಥೆ ಹಾಗೂ ಟೌನ್ ಕನ್ನಡ ಸಾಹಿತ್ಯ ಪರಿಷತ್ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ವೃತ್ತಿ ಸೇವಾ ಪ್ರಶಸ್ತಿ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಟೌನ್ ಕಸಾಪ ಅಧ್ಯಕ್ಷ ಜೆಎನ್ ಶ್ರೀನಿವಾಸ್ ಮಾತನಾಡಿ ಯುಗಯುಗಗಳಿಂದಲೂ ವೃತ್ತಿ ಎಂಬುದು ಮನುಷ್ಯನ ಜೀವನದಲ್ಲಿ ಬಂದಿದ್ದು, ವೇದ ಉಪನಿಷತ್ತು ಪಠಿಸುವ ಹಾಗೂ ಪೂಜೆ ಮಾಡುವವರನ್ನು ಬ್ರಾಹ್ಮಣರೆಂದು, ವ್ಯಾಪಾರ ವ್ಯವಹಾರ ಮಾಡುವವರನ್ನು ವೈಶ್ಯರೆಂದು, ದೇಶ ಕಾಯುವ ವ್ಯವಸಾಯ ಮಾಡುವ ವೃತ್ತಿಯವರನ್ನು ಕ್ಷತ್ರಿಯರೆಂದು, ಸ್ವಚ್ಛತಾ ಕೆಲಸದಲ್ಲಿ ತೊಡಗಿಕೊಂಡವರನ್ನು ಶೂದ್ರವೆಂದು ಚಾತುವರ್ಣತೆಯಿಂದ ಪರಿಗಣಿಸಿದ್ದು



ಬದಲಾದ ಕಾಲಮಾನದಲ್ಲಿ ಯಾರು ಯಾವುದೇ ಉದ್ಯೋಗವನ್ನು ಮಾಡಬಹುದಾದರು ಮಾಡುವ ಕೆಲಸದಲ್ಲಿ ಪ್ರಾವೀಣ್ಯತೆ ಹೊಂದಿ ಸಾಧನೆ ಮಾಡಬೇಕೆಂದರು.

ಜೆ ಸಿ ಐ ಅಧ್ಯಕ್ಷರಾದ ಬೈರೇಗೌಡರವರು ಮಾತನಾಡಿ ದಶಕಗಳ ಕಾಲದಿಂದ ಜೆಸಿಐ ಸಂಸ್ಥೆ ಸಾರ್ವಜನಿಕ ಸೇವಾ ಕಾರ್ಯಕ್ರಮಗಳಲ್ಲಿ ತೊಡಗಿಕೊಂಡಿದ್ದು ಸಮಾಜದಲ್ಲಿ ಉತ್ತಮ ಸೇವಾ ನಿರತರನ್ನು ಗುರುತಿಸಿ ಗೌರವಿಸುವ ಮೂಲಕ ಅವರ ವೃತ್ತಿಯಲ್ಲಿ ಇನ್ನಷ್ಟು ಪರಿಪೂರ್ಣತೆ ದೊರಕುವಂತಾಗಲೆಂದು ಇದರಿಂದ ಅವರ ಜವಾಬ್ದಾರಿಯು ಹೆಚ್ಚಲೆಂದು ತಿಳಿಸಿದರು.

ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ವಿಜಯಪುರ ಘಟಕದ ಅಧ್ಯಕ್ಷರಾದ ಕೆ ವೆಂಕಟೇಶ್, ಜೆಸಿಐ 14ರ ವಲಯ ಅಧಿಕಾರಿಗಳಾದ ಎನ್ ಸಿ ಮುನಿ ವೆಂಕಟರಮಣ, ಪುರಸಭಾ ಸದಸ್ಯರಾದ ಸಿಎಂ ರಾಮು, ರಾಮಣ್ಣ, ಸೀನಿಯರ್ ಚೇಂಬರ್ ನ ರಾಷ್ಟ್ರೀಯ ಉಪಾಧ್ಯಕ್ಷರಾದ ಡಾ|| ಎಂ ಶಿವಕುಮಾರ್, ಕಸಾಪ ತಾಲ್ಲೂಕು ಕಾರ್ಯದರ್ಶಿಗಳಾದ ಎಬಿ ಪರಮೇಶ್ವಯ, ಕೋಶಾಧಿಕಾರಿಗಳಾದ ಎಸ್ ಆರ್ ಎಸ್ ಬಸವರಾಜು, ಜೆಸಿಐ ಮಾಜಿ ಅಧ್ಯಕ್ಷರಾದ ಎಸ್ ರಮೇಶ್, ಜೆ ಆರ್ ಮುನಿ ವೀರಣ್ಣ, ವಿ ವೆಂಕಟೇಶ್, ಕಾರ್ಯದರ್ಶಿಗಳಾದ ಮಾಧವಿ ರಮೇಶ್, ರೇಷ್ಮೆ ಗೂಡು ಮಾರುಕಟ್ಟೆಯ ವೆಂಕಟೇಶ್ ಉಪಸ್ಥಿತರಿದ್ದರು. ಕಾರ್ಪೆಂಟರ್ ಗಡ್ಡದ ಶಿವಕುಮಾರ್, ಅಂಗನವಾಡಿ ಕಾರ್ಯಕರ್ತೆಯರಾದ ಉಮಾದೇವಿ, ಮಹಾದೇವಣ್ಣ, ಪಾರ್ವತಮ್ಮ ರವರುಗಳಿಗೆ ವೃತ್ತಿ ಸೇವಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.




## ಉಚಿತ ರಕ್ತದಾನ ಶಿಬಿರ

ಮೈಸೂರು ನಗರದ ಸರಸ್ವತಿಪುರಂನಲ್ಲಿರುವ ಜ್ಞಾನೋದಯ ಪದವಿ ಪೂರ್ವ ಕಾಲೇಜಿನಲ್ಲಿ ಜಿಎಸ್‌ಎಸ್ ಗ್ರೂಪ್, ಲಯನ್ಸ್ ಮೈಸೂರು ಮತ್ತು ಜೀವಧಾರಾ ಬ್ಲಡ್ ಇವರ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು. ಹೆಚ್ಚಿನ ಸಂಖ್ಯೆಯಲ್ಲಿ ಜ್ಞಾನೋದಯ ಪಿಯು ಕಾಲೇಜಿನ ಪೋಷಕರು ಹಾಗೂ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದರು. ಸುಮಾರು 25 ಯೂನಿಟ್ ರಕ್ತವನ್ನು ಕಾಲೇಜು ಸಿಬ್ಬಂದಿ, ಪೋಷಕರು, ಹಳೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ದಾನ ಮಾಡಿದರು. ಮುಖ್ಯ ಅತಿಥಿಯಾಗಿ ಯೋಗಾತ್ಮ ಶ್ರೀಹರಿ ಎಂದೇ ಪ್ರಸಿದ್ಧಿ ಪಡೆದಿರುವ ಶ್ರೀಹರಿ ದ್ವಾರಕ್‌ನಾಥ್ ಅವರು ಆಗಮಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ರಕ್ತದಾನದ ಅವಶ್ಯಕತೆ ಮತ್ತು ಅಗತ್ಯತೆ ಬಗ್ಗೆ ತಿಳಿಸಿಕೊಟ್ಟರು. ಕಾರ್ಯಕ್ರಮದಲ್ಲಿ ವಿವಿಧ ಆಸ್ಪತ್ರೆಗಳ ಮತ್ತು ಆರೋಗ್ಯ ಚಿಕಿತ್ಸಾಲಯಗಳ ವೈದ್ಯಕೀಯ ಬಂಧುಗಳು, ಜ್ಞಾನೋದಯ ಪಿಯು ಕಾಲೇಜಿನ ಆಡಳಿತ ಮಂಡಳಿಯ ರಾಮಚಂದ್ರ, ಎಸ್.ಕೆ.ಭಾಸ್ಕರ್, ಪ್ರಾಂಶುಪಾಲರಾದ ಶ್ರೀಮತಿ ಪದ್ಮಾರವಿ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ಹುಳಿಯಾರು ಕಾಲೇಜಿನಲ್ಲಿ ಸುಗಮ ಸಂಗೀತ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಾಂಸ್ಕೃತಿಕ ವಿಭಾಗದ ವತಿಯಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಗಾಯಕರಾದ ಚಿತ್ರದುರ್ಗ ಜಿಲ್ಲೆಯ ವೀರಭದ್ರಾಚಾರ್ ಜಿ.ಬಿ. ಕೆರೆ ಅವರು ಸದರಿ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದರು. ವರಕವಿ ಬೇಂದ್ರೆ, ರಾಷ್ಟ್ರಕವಿ ಕುವೆಂಪು, ಜಿ.ಎಸ್. ಶಿವರುದ್ರಪ್ಪ ಮುಂತಾದವರ ಭಾವಗೀತೆಗಳು, ಕನ್ನಡ ನಾಡು-ನುಡಿ ಅಭಿಮಾನದ ಗೀತೆಗಳು ಹಾಗೂ ಸದಭಿರುಚಿಯ ಕನ್ನಡ ಚಲನಚಿತ್ರಗೀತೆಗಳನ್ನು ಹಾಡುವ ಮೂಲಕ ಗಂಟೆಗಳ ಕಾಲ ಶ್ರೋತೃಗಳನ್ನು ಸಮ್ಮೋಹನಗೊಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಪ್ರೊ. ವೀರಣ್ಣ ಮಾತನಾಡಿ ಆಡುತ್ತಾ ಸಂಗೀತಕ್ಕೆ ಮಾನಸಿಕ ನೆಮ್ಮದಿ ನೀಡುವ ಮತ್ತು ನಮ್ಮ ಮನಸ್ಸಿನ ಅಪಸವ್ಯಗಳನ್ನು ದೂರ ಮಾಡುವ ಮಾಂತ್ರಿಕ ಶಕ್ತಿಯಿದೆ ಎಂದು ಅಭಿಪ್ರಾಯಪಟ್ಟರು. ಅಲ್ಲದೆ ಇದೇ ಸಂದರ್ಭದಲ್ಲಿ ತಾವೂ ಕೂಡ ತಮ್ಮ ಸ್ವರಚಿತ ಭಾವಗೀತೆಯೊಂದನ್ನು ಹಾಡಿದರು. ಲಾವಣ್ಯ ಕೆ.ಎಂ. ಮತ್ತು ಮೇಘನ ಡಿ. ಆರಂಭ ಗೀತೆಯನ್ನು ಹಾಡಿದರು. ರೂಪ ಕೆ.ಇ. ವಂದಿಸಿದರು. ಕಾರ್ಯಕ್ರಮದ ಸಂಚಾಲಕರಾದ ಡಾ. ಮೋಹನ್ ಕುಮಾರ್ ಮಿರ್ಲೆ ಹಾಗೂ ಉಪನ್ಯಾಸಕರಾದ ಚಂದ್ರಹಾಸ ಬಿ.ಆರ್. ವೇದಿಕೆಯಲ್ಲಿ ಉಪಸ್ಥಿತರಿದ್ದರು. ಕಾಲೇಜಿನ ಬೋಧಕ ಮತ್ತು ಬೋಧಕೇತರ ವರ್ಗದವರು ಹಾಗೂ ವಿದ್ಯಾರ್ಥಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು



# ಬಕ್ರೀದ್ ಹಿನ್ನೆಲೆ : ಜಿಲ್ಲಾಧಿಕಾರಿ ಸಮ್ಮುಖದಲ್ಲಿ ಸೌಹಾರ್ದ ಸಭೆ

**ಚಾಮರಾಜನಗರ:** ಮುಂಬರಲಿರುವ ಬಕ್ರೀದ್ ಹಬ್ಬವನ್ನು ಜಿಲ್ಲೆಯಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಾಮರಸ್ಯದಿಂದ ಆಚರಿಸುವಂತಾಗಲೆಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಬಕ್ರೀದ್ ಹಬ್ಬದ ಹಿನ್ನೆಲೆಯಲ್ಲಿ ನಡೆದ ಜಿಲ್ಲಾ ಮಟ್ಟದ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಕ್ರೀದ್ ಹಬ್ಬವನ್ನು ಈ ಹಿಂದಿನ ವರ್ಷಗಳಲ್ಲಿ ಆಚರಿಸುತ್ತಿದ್ದ ರೀತಿಯಲ್ಲಿಯೇ ಈ ಬಾರಿಯೂ ಶಾಂತಿ, ಸೌಹಾರ್ದತೆಯಿಂದ ಆಚರಿಸಬೇಕು. ಹಬ್ಬಕ್ಕೆ ಪೂರ್ವಭಾವಿಯಾಗಿ ಕೈಗೊಳ್ಳಬೇಕಿರುವ ಸೌಲಭ್ಯಗಳ ಬಗ್ಗೆ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಲಾಗುವುದು ಎಂದರು.

ಸಭೆಯಲ್ಲಿ ಮಾತನಾಡಿದ ಸಮುದಾಯದ ಮುಖಂಡರು ಪ್ರಾರ್ಥನೆಗೆ ಹೆಚ್ಚಿನ ಬಾಂಧವರು ಸೇರುವುದರಿಂದ ಉಂಟಾಗಬಹುದಾದ ಸಂಚಾರ ದಟ್ಟಣೆ ಸುಗಮಗೊಳಿಸಲು ಏಕಮುಖ ಸಂಚಾರ ಇರಬೇಕು. ಮಾಂಸದ ತ್ಯಾಜ್ಯ ವಿಲೇವಾರಿಗೆ ಸೂಕ್ತ ಏರ್ಪಾಡು ಮಾಡಬೇಕು. ಹಬ್ಬದ ಹಿನ್ನೆಲೆಯಲ್ಲಿ ಕುಡಿಯುವ ನೀರು, ನಿರಂತರ ವಿದ್ಯುತ್ ಸರಬರಾಜು, ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂಬೂದು ಸೇರಿದಂತೆ ಇನ್ನಿತರ ಸಲಹೆ ಅಭಿಪ್ರಾಯಗಳನ್ನು ನೀಡಿದರು. ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ ನಗರ, ಪಟ್ಟಣ ಸೇರಿದಂತೆ ವಿವಿಧೆಡೆ ಹಬ್ಬದ ಸಂದರ್ಭದಲ್ಲಿ ಕುಡಿಯುವ ನೀರು ಪೂರೈಕೆಗೆ ತೊಂದರೆಯಾಗದಂತೆ ಕ್ರಮವಹಿಸಬೇಕು. ಸ್ವಚ್ಛತೆ ಕಾರ್ಯವನ್ನು ಆಗಿದ್ದಾಂಗೆ ಕೈಗೊಳ್ಳಬೇಕು. ನಿರಂತರ ವಿದ್ಯುತ್ ಪೂರೈಸಲು ಸಂಬಂಧಪಟ್ಟ ಇಲಾಖೆ ನಿಗಾ ವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉದೇಶ ಅವರು ಹಬ್ಬದ ಪ್ರಾರ್ಥನೆ ಹಿನ್ನೆಲೆಯಲ್ಲಿ ಸುಗಮ ಸಂಚಾರಕ್ಕೆ ಅಗತ್ಯ ವ್ಯವಸ್ಥೆ ಮಾಡಲಾಗುವುದು. ಇನ್ನಿತರ ಕ್ರಮಗಳನ್ನು ಪೊಲೀಸ್ ಇಲಾಖೆಯಿಂದ ತೆಗೆದುಕೊಳ್ಳಲಾಗುವುದು ಎಂದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮೀ, ತಹಶೀಲ್ದಾರರಾದ ಬಸವರಾಜು, ಮಂಜುಳ, ನಗರಸಭೆ ಆಯುಕ್ತರಾದ ಎಸ್.ವಿ. ರಾಮದಾಸ್, ಮುಖಂಡರಾದ ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನ, ನಗರಸಭಾ ಸದಸ್ಯರಾದ ಅಬ್ರಾರ್ ಅಹಮದ್, ಸಯ್ಯದ್ ರಫಿ, ಚಾ.ರಂ. ಶ್ರೀನಿವಾಸಗೌಡ ಸೇರಿದಂತೆ ಇನ್ನಿತರ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



### ಜಿಲ್ಲಾಧಿಕಾರಿ ಶಿಲ್ಪಾನಾಗ್ ಸಲಹೆ

# ರಕ್ತದಾನ ಜಾಗೃತಿ ಅಗತ್ಯ



**ಚಾಮರಾಜನಗರ:** ಪ್ರತಿಯೊಬ್ಬರು ರಕ್ತದಾನ ಮಾಡಬಹುದು ಇದರಿಂದ ಯಾವುದೇ ಆರೋಗ್ಯ ಸಮಸ್ಯೆಯಾಗುವುದಿಲ್ಲ. ಈ ಕುರಿತು ಜನರಿಗೆ ಅರಿವು ಮೂಡಿಸಬೇಕಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ಅಭಿಪ್ರಾಯಪಟ್ಟರು.

ನಗರದ ರೋಟರಿ ಭವನದಲ್ಲಿಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ರೋಟರಿ ಸಿಲ್ಕ್ ಸಿಟಿ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಮತ್ತು ಸಿಮ್ಸ್ ರಕ್ತನಿಧಿ ಕೇಂದ್ರದ ಸಹಯೋಗದೊಂದಿಗೆ ವಿಶ್ವ ರಕ್ತದಾನಿಗಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲ ದಾನಗಳಿಗಿಂತ ರಕ್ತದಾನ ಮಹಾದಾನವಾಗಿದೆ. ಅವಶ್ಯಕತೆ ಇರುವವರಿಗೆ ರಕ್ತ ನೀಡಿದರೆ ಅವರ ಜೀವ ಉಳಿಸಿದಂತಾಗುತ್ತದೆ. ನಾನು ಸಹ ಇದುವರೆಗೆ 6 ಬಾರಿ ರಕ್ತದಾನ ಮಾಡಿದ್ದೇನೆ. ರಕ್ತಕ್ಕಾಗಿ ಬೇರೆ ಕಡೆ ಹೋಗುವ ಬದಲು ಜಿಲ್ಲೆಯಲ್ಲಿಯೇ ದೊರೆತರೆ ಅನುಕೂಲವಾಗಲಿದೆ ಎಂದು ಹೇಳಿದರು. ಜಿಲ್ಲೆಯಲ್ಲಿ 11 ಲಕ್ಷ ಜನಸಂಖ್ಯೆಯಿದ್ದು, ಸರ್ಕಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧನಾ ಆಸ್ಪತ್ರೆ, ತಾಲ್ಲೂಕು ಮಟ್ಟದ ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ. ಆರೋಗ್ಯ ಸೇವೆಗಾಗಿ ಸೌಲಭ್ಯಗಳನ್ನು ಒದಗಿಸಲು ಬದ್ಧರಾಗಿದ್ದೇವೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಜಿಲ್ಲೆಯ ರಕ್ತನಿಧಿ ಕೇಂದ್ರಕ್ಕೆ 12 ಸಾವಿರ ಯೂನಿಟ್ ರಕ್ತದ ಅವಶ್ಯತೆಯಿದೆ. ಆದರೆ 6 ರಿಂದ 7 ಸಾವಿರ ಯೂನಿಟ್ ರಕ್ತವು ಶಿಬಿರಗಳ ಮೂಲಕ ಸಂಗ್ರಹವಾಗುತ್ತಿದೆ. ರಕ್ತನಿಧಿ ಕೇಂದ್ರದ ಮೂಲಕ ಸೌಕರ್ಯಗಳನ್ನು ಹೆಚ್ಚಿಸಬೇಕಿದೆ. ಅಮೂಲ್ಯವಾದ ಸಮಯದಲ್ಲಿ ರಕ್ತ ಲಭಿಸಿದರೆ ಮತ್ತೊಂದು ಜೀವಕ್ಕೆ ಅನುಕೂಲವಾಗಲಿದೆ. ಎಲ್ಲರ ಸಹಕಾರದೊಂದಿಗೆ ರಕ್ತದಾನ ಜಾಗೃತಿ ಮೂಡಿಸಬೇಕಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಹೇಳಿದರು.

ರೋಟರಿ ಸಿಲ್ಕ್ ಸಿಟಿ ಮಾಜಿ ಅಧ್ಯಕ್ಷರಾದ ದೊಡ್ಡರಾಯಪೇಟೆ ಡಿ.ಎಸ್. ಗಿರೀಶ್ ಮಾತನಾಡಿ, 2004ರಿಂದಲೂ ವಿಶ್ವ ರಕ್ತದಾನಿಗಳ ದಿನವನ್ನು ಆಚರಿಸಲಾಗುತ್ತಿದೆ. ರಕ್ತದಾನದ ಬಗ್ಗೆ ಜಾಗೃತಿ ಮೂಡಿಸಿ 2 ಸಾವಿರಕ್ಕೂ ಹೆಚ್ಚು ದಾನಿಗಳಿಂದ ರಕ್ತ ಸಂಗ್ರಹಿಸಲಾಗಿದೆ. ರೋಟರಿ ಸಿಲ್ಕ್ ಸಿಟಿಯಿಂದ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲಾಗುತ್ತಿದೆ ಎಂದರು.

ಇದೇ ವೇಳೆ ಅತಿ ಹೆಚ್ಚು ಬಾರಿ ರಕ್ತದಾನ ಮಾಡಿದ ರೋಟರಿ ಸಿಲ್ಕ್ ಸಿಟಿ ಮಾಜಿ ಅಧ್ಯಕ್ಷರಾದ ಎಚ್.ಎಂ. ಅಜಯ್, ಸಂಜೀವಿನ ಟ್ರಸ್ಟ್ ನ ಸತೀಶ್‌ಕುಮಾರ್, ಅಗ್ನಿ ಶಾಮಕ ಠಾಣೆಯ ಜಯಪ್ರಕಾಶ್ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಶಿಬಿರದಲ್ಲಿ ಒಟ್ಟು 78 ಮಂದಿ ರಕ್ತದಾನ ಮಾಡಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ರವಿಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್, ಜಿಲ್ಲಾ ಮೇಲ್ವಿಚಾರಕರಾದ ಎನ್.ಜಿ. ಮಹದೇವಪ್ರಸಾದ್, ಡಾ. ತಾರಾ, ರಘು, ವೈದ್ಯರಾದ ಡಾ. ನಾಗಾರ್ಜುನ್, ರೋಟರಿ ಸಂಸ್ಥೆಯ ಪ್ರಕಾಶ್, ಆರ್.ಎಂ. ಸ್ವಾಮಿ, ಚಂದ್ರು, ರೋಟರಿ ಸಿಲ್ಕ್ ಸಿಟಿಯ ಅಧ್ಯಕ್ಷರಾದ ಅಕ್ಷಯ್, ಕಾರ್ಯದರ್ಶಿ ಮಾಣಿಕ್ ಚಂದ್ ಶಿರ್ವಿ, ಬೋಧನಾ ಆಸ್ಪತ್ರೆಯ ರಕ್ತನಿಧಿ ಕೇಂದ್ರದ ವೈದ್ಯರಾದ ಡಾ. ದಿವ್ಯಾ, ಇತರರು ಕಾರ್ಯಕ್ರಮದಲ್ಲಿ ಇದ್ದರು.

ಕಾರ್ಯಕ್ರಮಕ್ಕೂ ಮೊದಲು ನಗರದ ಚಾಮರಾಜೇಶ್ವರ ದೇವಾಲಯದ ಮುಂಭಾಗ ವಿಶ್ವ ರಕ್ತದಾನಿಗಳ ದಿನಾಚರಣೆ ಜಾಗೃತಿ ಜಾಥಾಕ್ಕೆ ಕರ್ನಾಟಕ ಏಡ್ಸ್ ಪ್ರಿವೆನ್ಷನ್ ಕಂಟ್ರೋಲ್ ಯೂನಿಟ್ ಜಂಟಿ ನಿರ್ದೇಶಕರು ಹಾಗೂ ಆರೋಗ್ಯ ಇಲಾಖೆಯ ಜಿಲ್ಲಾ ನೋಡಲ್ ಅಧಿಕಾರಿ ಡಾ. ಡಿ. ಜಯರಾಜು ಅವರು ಚಾಲನೆ ನೀಡಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಿದಂಬರ, ವೈದ್ಯರಾದ ಡಾ. ಬಸವರಾಜೇಂದ್ರ, ಪ್ರಾಂಶುಪಾಲರಾದ ಗಂಗಮ್ಮ, ಉಪನ್ಯಾಸಕರಾದ ಮಧು ಇತರರಿದ್ದರು. ಜಾಥಾವು ಭುವನೇಶ್ವರಿ ವೃತ್ತದ ಮೂಲಕ ಬಿ. ರಾಚಯ್ಯ ಜೋಡಿರಸ್ತೆ ಮೂಲಕ ಸಾಗಿ ರೋಟರಿ ಭವನ ತಲುಪಿತು.

## ಶ್ರೀನಿವಾಸ ಕಲ್ಯಾಣೋತ್ಸವ

**ಮೈಸೂರು:** ನಗರದ ವಿನಾಯಕನಗರ 6ನೇ ಮುಖ್ಯ ರಸ್ತೆಯಲ್ಲಿರುವ ಶ್ರೀ ವಿದ್ಯಾಗಣಪತಿ ಹಾಗೂ ಶ್ರೀ ಮಹಾಲಕ್ಷ್ಮಿ ದೇವಸ್ಥಾನ ಟ್ರಸ್ಟ್ ವತಿಯಿಂದ ಜೂ.20ರಿಂದ 22ರವರೆಗೆ 5ನೇ ವರ್ಷದ ಶ್ರೀನಿವಾಸ ಕಲ್ಯಾಣೋತ್ಸವವನ್ನು ಆಯೋಜಿಸಲಾಗಿದೆ. ಜೂ.20ರಂದು ಸಂಜೆ 6 ಗಂಟೆಗೆ ಮಹಾಮಂಗಳಾರತಿ ಪೂಜೆ, ಪುಣ್ಯಾಹ, ಅಂಕುರಾರ್ಪಣೆ, ಪಂಚಗನ್ಯ, ದೇವನಾಂಬಿ, ಧ್ವಜಾರೋಹಣ, ಶ್ರೀ ಸ್ವಾಮಿಯವರಿಗೆ ಪಂಚಾಮೃತಾಭಿಷೇಕ, ಶೋಡಷ ದ್ರವ್ಯಾಭಿಷೇಕ, ಭಕ್ತಾದಿಗಳಿಂದ ಸ್ವಾಮಿಗೆ ಸಾಮೂಹಿಕ ಅರಿಶಿಣ ನೀರಿನಿಂದ ಅಭಿಷೇಕ ನಂತರ ತೈಲಮಜ್ಜನ ಸ್ನಾನ, ಇದಾದ ನಂತರ ಮಹಾಮಂಗಳಾರತಿ ಇರುತ್ತದೆ. ಜೂ.21ರಂದು ಬೆಳಿಗ್ಗೆ 7ಕ್ಕೆ ಸುಪ್ರಭಾತ ಸೇವೆ ನಂತರ ಕಾಶಿಯಾತ್ರೆ, ಕಂಕಣಧಾರಣೆ, ಅಂತರಪಟ, ಅಕ್ಷತರೋಹಣ, ಕನ್ಯಾದಾನ ನಂತರ ಶ್ರೀನಿವಾಸ ಸ್ವಾಮಿಗೆ ಕಲ್ಯಾಣೋತ್ಸವ, ಮಾಂಗಲ್ಯಧಾರಣೆ ನಂತರ ಮಹಾಮಂಗಳಾರತಿ ಪುಷ್ಪವೃಷ್ಠಿ ನಂತರ ತೀರ್ಥ ಪ್ರಸಾದ ವಿನಿಯೋಗ. ಇದೇ ದಿನ ಸಂಜೆ 6.30ಕ್ಕೆ ವಿಷ್ಣು ದೀಪೋತ್ಸವ ನಂತರ 7.30ಕ್ಕೆ ಮಹಾಮಂಗಳಾರತಿ. ತೀರ್ಥ ಪ್ರಸಾದ ವಿನಿಯೋಗ. ಜೂ.22ರಂದು ಶನಿವಾರ ಹುಣ್ಣಿಮೆಯ ಪ್ರಯುಕ್ತ ಶ್ರೀ ಸತ್ಯನಾರಾಯಣ ಸ್ವಾಮಿ ಪೂಜೆ ಇರುತ್ತದೆ. ಇದೇ ದಿನ ಸಂಜೆ 5ಕ್ಕೆ ಊರಿನ ಪ್ರಮುಖ ರಸ್ತೆಗಳಲ್ಲಿ ಶ್ರೀ ಸ್ವಾಮಿಯವರ ದಿವ್ಯ ರಥೋತ್ಸವ ನಂತರ ಮಹಾಮಂಗಳಾರತಿ, ತೀಥ ಪ್ರಸಾದ ಏರ್ಪಡಿಸಲಾಗಿದೆ ಎಂದು ದೇವಸ್ಥಾನದ ಪುರೋಹಿತರಾದ ರಾಕೇಶ್‌ಶರ್ಮ ತಿಳಿಸಿದ್ದಾರೆ. ಮಾಹಿತಿಗೆ ಮೊಬೈಲ್ 8310204050 ಅಥವಾ 7204076951 ಸಂಪರ್ಕಿಸಬಹುದು.

## ತ್ಯಾಜ್ಯ ಸುರಿಯುವಿಕೆ ತಡೆಗಟ್ಟಲು ಪೆನ್ಸಿಂಗ್ ಹಾಕಲು ಒತ್ತಾಯ

**ಕೋಲಾರ:** ಕೋಲಾರ ನಗರ ವ್ಯಾಪ್ತಿಯ ಕೋಲಾರ ಅಮಾನಿ ಕೆರೆ (ಕೋಲಾರಮ್ಮ ಕೆರೆ) ಅಂಗಳದಲ್ಲಿ ತ್ಯಾಜ್ಯ ವಸ್ತುಗಳನ್ನು ಸುರಿಯುತ್ತಿದ್ದು, ಕುರುಬರಪೇಟೆಯ ಸುವರ್ಣ ಕನ್ನಡ ಭವನದ ಬಳಿ ಪೆನ್ಸಿಂಗ್ ಹಾಕಲು ಒತ್ತಾಯಿಸಿ ಸಾಮಾಜಿಕ ಕಾರ್ಯಕರ್ತರಾದ ಕೋಲಾರ ಕುರುಬರಪೇಟೆಯ ಬೆಮೆಲ್ ಶ್ರೀನಿವಾಸ್, ಮಾಜಿ ಯೋಧರಾದ ಪಿ.ನಾರಾಯಣಪ್ಪ ಮತ್ತು ನಿವೃತ್ತ ಎ.ಎಸ್.ಐ ರವೀಂದ್ರ, ನಾಥ್ ರವರುಗಳು ಕೋಲಾರ ನಗರಸಭೆ ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಿದರು. ಕೋಲಾರ ನಗರ ವ್ಯಾಪ್ತಿಯ ಕೋಲಾರ ಅಮಾನಿ ಕೆರೆ (ಕೋಲಾರಮ್ಮ ಕೆರೆ) ಅಂಗಳದಲ್ಲಿ ಸಾರ್ವಜನಿಕ ಗಣೇಶ ವಿಸರ್ಜನಾ ಕೊಳ ಮತ್ತು ಸುವರ್ಣ ಕನ್ನಡಭವನದ ಪಕ್ಕ ಸಾರ್ವಜನಿಕರು, ವ್ಯಾಪಾರಸ್ಥರು ಮತ್ತು ಕಟ್ಟಡ ಕೆಡವುವವರು ವಿವಿಧ ರೀತಿಯ ತ್ಯಾಜ್ಯ, ಕೊಳೆತ ಹಾಗೂ ಕಟ್ಟಡ ತ್ಯಾಜ್ಯಗಳ ತಂದು ಸುರಿಯುತ್ತಿರುವುದರಿಂದ ಕೆರೆಯ ನೀರು ಜಲಮಾಲೀನ್ಯ ಮತ್ತು ದುರ್ವಾಸನೆಯಿಂದ ವಾಯು ಮಾಲಿನ್ಯವಾಗತ್ತಿದ್ದು, ಹತ್ತಿರದಲ್ಲೇ ಸರ್ಕಾರಿ ಮತ್ತು ಖಾಸತಿ ಆಸ್ಪತ್ರೆಗಳು, ಸಾರ್ವಜನಿಕ ಸಭಾಭವನ ಮತ್ತು ಜನವಸತಿಯ ಕುರುಬರಪೇಟೆ ಇದ್ದು, ಕಲುಷಿತ ಗಾಳಿ, ದುರ್ವಾಸನೆ ಸೇವಿಸುವಂತಾಗಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಜೊತೆಗೆ ಈ ಭಾಗದಲ್ಲಿ ಕೆರೆ ಅಂಗಳವೂ ಕಟ್ಟಡ ತ್ಯಾಜ್ಯಗಳಿಂದ ಮುಚ್ಚಿ ಹೋಗುತ್ತಿದೆ, ಕೆರೆಯ ಅಂದವೂ ಹಾಳಾಗುತ್ತಿದ್ದು, ತ್ಯಾಜ್ಯ ವಸ್ತುಗಳ ಸುರಿಯುವಿಕೆ ತಡೆಗಟ್ಟಲು ಈ ತಕ್ಷಣವೇ ಕ್ರಮ ಕೈಗೊಂಡು ಸುವರ್ಣ ಕನ್ನಡ ಭವನದ ಹತ್ತಿರ ಪೆನ್ಸಿಂಗ್ (ಸುಮಾರು 33 ಅಡಿ ಉದ್ದ) ಹಾಕಲು ಒತ್ತಾಯಿಸಿದ್ದಾರೆ. ನಗರಸಭಾ ಸದಸ್ಯರಾದ ಶ್ರೀಪ್ರಸಾದ್ ಬಾಬು ಉಪಸ್ಥಿತರಿದ್ದು, ಪೆನ್ಸಿಂಗ್ ಕೆಲಸ ಕೈಗೊಳ್ಳಲು ಆಯುಕ್ತರಿಗೆ ಮನವಿ ಮಾಡಿದರು. ಸಾಮಾಜಿಕ ಕಾರ್ಯಕರ್ತರ ಹಾಗೂ ನಗರಸಭಾ ಸದಸ್ಯರ ಮನವಿಗೆ ಸ್ಪಂದಿಸಿದ ಆಯುಕ್ತರು ಸಮಸ್ಯೆ ಬಗೆಹರಿಸುವ ಭರವಸೆ ನೀಡಿದರು.

## ಸಾಮೂಹಿಕ ಉಪನಯನ

**ಮೈಸೂರು:** ನಗರದ ಕೆಆರ್‌ಎಸ್ ಮುಖ್ಯರಸ್ತೆಯಲ್ಲಿರುವ (ಮೊಗರಹಳ್ಳಿ ಸಮೀಪ) ಸಾಧನಹಳ್ಳಿ ಸಪ್ತರ್ಷಿ ಗುರುಕುಲ ಸೇವಾಕೇಂದ್ರದಲ್ಲಿ ಜೂ.24ರಂದು ಸೋಮವಾರ ಬೆಳಿಗ್ಗೆ ಸಾಮೂಹಿಕ ಉಪನಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಂದು ಬೆಳಿಗ್ಗೆ ಮಹಾಸುದರ್ಶನ ಹೋಮ, ಗೃಹದೇವತಾ ಆರಾಧನೆ, ಮಹಾಮಂಗಳಾರತಿ, ಶಾತ್ತುಮೊರೈ, ತೀರ್ಥಪ್ರಸಾದ ವಿನಿಯೋಗ ನಂತರ ಶ್ರೀಮಠದ ಸಂಸ್ಥಾಪಕರಾದ ಶ್ರೀ ಅಭಿನವ ರಾಮಾನುಜ ಜೀಯರ್ ಅವರಿಂದ ಆಶೀರ್ವಚನ ಏರ್ಪಡಿಸಲಾಗಿದೆ. ಜೂ.23ರಂದು ಭಾನುವಾರ ಉದಕಶಾಂತಿ ಪೂಜೆ ಏರ್ಪಡಿಸಲಾಗಿದೆ. ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶಾಲಾ-ಕಾಲೇಜಿನಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ ಸೌಲಭ್ಯವನ್ನು ಕಲ್ಪಿಸಲಾಗುವುದು. ಹೆಚ್ಚಿನ ಮಾಹಿತಿಗೆ ಮೊಬೈಲ್ 9481319111 ಅಥವಾ ಆಶ್ರಮದ ವ್ಯವಸ್ಥಾಪಕರಾದ ರಂಗನಾಥ್ 8861573934 ಸಂಪರ್ಕಿಸಬಹುದು.

## ಅರ್ಜಿ ಆಹ್ವಾನ

**ಚಾಮರಾಜನಗರ:** ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳಿಗೆ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಉದ್ಯಮಶೀಲತಾ ಹಾಗೂ ಸ್ವಾವಲಂಬಿ ಸಾರಥಿ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಈಗಾಗಲೇ ನಿಗಮದಿಂದ ಯಾವುದೇ ಸಾಲ ಸೌಲಭ್ಯ ಪಡೆಯದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿದಾರರು ಕಡ್ಡಾಯವಾಗಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಗಳಾಗಿದ್ದು ಗುರುತಿನ ಚೀಟಿಯನ್ನು ಹೊಂದಿರಬೇಕು. ಅಭ್ಯರ್ಥಿಯು ಭಾವಚಿತ್ರ, ಜಾತಿ, ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಪಡಿತರ ಚೀಟಿ, ಮತದಾರರ ಗುರುತಿನ ಚೀಟಿ, ಬ್ಯಾಂಕ್ ಪಾಸ್ ಬುಕ್ ಪ್ರತಿ, ವಾಹನ ಸೌಲಭ್ಯ ಪಡೆಯ ಬೇಕಿದ್ದಲ್ಲಿ ಸಂಬಂಧಪಟ್ಟ ವಾಹನ ಚಾಲನಾ ಪರವಾನಗಿಯೊಂದಿಗೆ ಜಿಲ್ಲಾ ಕಚೇರಿಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 29 ಕಡೆಯ ದಿನವಾಗಿದೆ. ಮಾಹಿತಿಗಾಗಿ ನಗರದ ಮುಬಾರಕ್ ರಸ್ತೆಯ ಡಾ. ಬಿ.ಆರ್. ಅಂಬೇಡ್ಕರ್ ಭವನದ ಹತ್ತಿರವಿರುವ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಕಚೇರಿಯನ್ನು ಸಂಪರ್ಕಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 24ರಿಂದ ವಿದ್ಯಾರ್ಥಿಗಳಿಗೆ ಪರೀಕ್ಷೆ

**ಚಾಮರಾಜನಗರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2021-22 ಹಾಗೂ 2022-23ನೇ ಶೈಕ್ಷಣಿಕ ಸಾಲಿನ (ಜುಲೈ, ಜನವರಿ ಆವೃತಿಯ) 2023-24ನೇ ಶೈಕ್ಷಣಿಕ ಸಾಲಿನ (ಜುಲೈ ಆವೃತ್ತಿ) ಪ್ರವೇಶಾತಿ ಪಡೆದಿರುವ ಸ್ನಾತಕ, ಸ್ನಾತಕೋತ್ತರ (ಯು.ಜಿ, ಪಿ.ಜಿ) ಕಾರ್ಯಕ್ರಮಗಳ ಸಿ.ಬಿ.ಸಿ.ಎಸ್ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಜೂನ್ 24ರಿಂದ ಪರೀಕ್ಷೆ ನಡೆಯಲಿದೆ. ವಿವಿ ನಿಲಯದ ಅಧಿಕೃತ ವೆಬ್ ಸೈಟ್ www.ksoumysuru.ac.in ಆನ್‌ಲೈನ್ ಎಕ್ಸಾಮಿನೇಷನ್ ಪೋರ್ಟಲ್ ನಲ್ಲಿ ಮಾಹಿತಿ ಲಭ್ಯವಿದೆ ಎಂದು ವಿವಿ ನಿಲಯ ಪ್ರಾದೇಶಿಕ ಕೇಂದ್ರದ ಪ್ರಾದೇಶಿಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಾಮರಾಜನಗರ: 19ರಂದು ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**ಚಾಮರಾಜನಗರ:** ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಜೂನ್ 19ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಅಂದು ಬೆಳಿಗ್ಗೆ 10.45 ಗಂಟೆಗೆ ಗುಂಡ್ಲುಪೇಟೆಗೆ ಆಗಮಿಸುವರು. 11 ಗಂಟೆಗೆ ಗುಂಡ್ಲುಪೇಟೆ ಪಟ್ಟಣದ ಕೆ.ಇ.ಬಿ ಆಫೀಸ್ ಎದುರು ಇರುವ ನಂದಿನಿ ಕೆಫೆ ಮೂ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ಬೆಂಗಳೂರಿಗೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

# ಪತ್ರಕರ್ತರ ಬೇಡಿಕೆ ಈಡೇರಿಕೆಗೆ ಇಲಾಖೆ ಬದ್ಧ

**ಬೆಂಗಳೂರು:** ರಾಜ್ಯದ ಪತ್ರಕರ್ತರಿಗೆ ತ್ವರಿತ ಬಸ್ ಪಾಸ್ ನೀಡಿಕೆಯ ಸಂಬಂದ ಶೀಘ್ರವಾಗಿ ಕ್ರಮ ವಹಿಸಲಾಗುವುದು. ಮೂರು ತಿಂಗಳಿಂದ ಬಾಕಿ ಇದ್ದ ನಿವೃತ್ತ ಪತ್ರಕರ್ತರ ಮಾಸಾಶನಕ್ಕೆ ಸರ್ಕಾರ ಒಪ್ಪಿಗೆ ನೀಡಿದ್ದು, ಶೀಘ್ರವೇ ಮಾಸಾಶನ ಬಿಡುಗಡೆ ಮಾಡಲಾಗುವುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಸುರಳಕರ ವಿಕಾಸ ಕಿಶೋರ ಅವರು ಭರವಸೆ ನೀಡಿದ್ದಾರೆ. ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಅವರ ನೇತೃತ್ವದಲ್ಲಿ ಶುಕ್ರವಾರ ವಾರ್ತಾ ಇಲಾಖೆಯಲ್ಲಿ ಭೇಟಿಯಾಗಿದ್ದ ನಿಯೋಗಕ್ಕೆ ಮಾಹಿತಿ ನೀಡಿದರು.

ಹಿರಿಯ ಪತ್ರಕರ್ತರ ಮಾಸಾಶನಕ್ಕೆ ಇರುವ ಅಡೆ ತಡೆಗಳನ್ನು ಆದಷ್ಟು ಬೇಗ ನಿವಾರಣೆ ಮಾಡಬೇಕು. ಬಾಕಿ ಇರುವ ಪತ್ರಕರ್ತರ ಮಾಸಾಶನ ಅರ್ಜಿಗಳನ್ನು ಪರಿಗಣಿಸಿ ಮಾಸಾಶನ ಮಂಜೂರು ಮಾಡಬೇಕು. ಮಾನ್ಯತೆ ಪಡೆದ ಪತ್ರಕರ್ತರ ಬಸ್ ಪಾಸ್ ಕಾರ್ಡ್‌ಗಳನ್ನು ಕೂಡಲೇ ಕೊಡಬೇಕು ಎಂಬಿತ್ಯಾಧಿ ಬೇಡಿಕೆಗಳ ಬಗ್ಗೆ ಆಯುಕ್ತರ ಜೊತೆಗೆ ಚರ್ಚೆ ನಡೆಸಲಾಯಿತು.

ಪತ್ರಕರ್ತರ ಬೇಡಿಕೆಗಳ ಬಗ್ಗೆ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ಅವರ ಬಳಿಯೂ ಪ್ರಸ್ತಾಪಿಸಿ ಮನವಿ ಸಲ್ಲಿಸಿದ್ದು, ಅವರು ವಾರ್ತಾ ಇಲಾಖೆ ಕಾರ್ಯದರ್ಶಿ ಅವರ ಜೊತೆಗೆ ಚರ್ಚೆ ನಡೆಸಿದ್ದಾರೆ ಎನ್ನುವುದನ್ನು ಗಮನಕ್ಕೆ ತರಲಾಯಿತು.

ಸಂಘದ ಬೇಡಿಕೆಗಳನ್ನು ಸಹಾನುಭೂತಿಯಿಂದ ಆಲಿಸಿದ ಆಯುಕ್ತರಾದ ವಿಕಾಸ ಸುರಳಕರ, ಪತ್ರಕರ್ತರ ಬೇಡಿಕೆಗಳನ್ನು ಈಡೇರಿಸಲು ಇಲಾಖೆ ಬದ್ಧವಾಗಿದ್ದು,



ಬೇಡಿಕೆಗಳನ್ನು ಶೀಘ್ರದಲ್ಲೇ ಅನುಷ್ಠಾನಕ್ಕೆ ತರಲಾಗುವುದು ಎಂದು ನಿಯೋಗಕ್ಕೆ ಭರವಸೆ ನೀಡಿದರು. ನಿಯೋಗದಲ್ಲಿ ವಿಜಯಪುರ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಚೂರಿ, ಹಿರಿಯ ಪತ್ರಕರ್ತ ಅಲ್ಲಮಪ್ರಭು ಮಲ್ಲಿಕಾರ್ಜುನಮಠ, ಚಿತ್ರದುರ್ಗದ ಹಿರಿಯ ಪತ್ರಕರ್ತ ಹೆಂಜಾರಪ್ಪ, ಬೆಂಗಳೂರು ನಗರ ಘಟಕದ ಶಿವರಾಜು ಮತ್ತಿತರರಿದ್ದರು.

# ಮೊಬೈಲ್‌ಗಳು ವಿದ್ಯಾರ್ಥಿಯ ಚಟವಾಗಬಾರದು

**ವಿಜಯಪುರ:** ಮೊಬೈಲ್ ಗಳನ್ನು ಸಾಧ್ಯವಾದಷ್ಟು ವಿದ್ಯಾರ್ಥಿ ದೆಸೆಯಲ್ಲಿ ಬಳಸಬಾರದು ಅವಶ್ಯಕತೆಗೆ ಎಷ್ಟು ಮಾತ್ರವೋ ಅಷ್ಟು ಮಾತ್ರ ಬಳಸಿ ಸಹಾಯ ಪಡೆಯಬೇಕೇ ಹೊರತು ಅದನ್ನೇ ಚಟವನ್ನಾಗಿಸಿಕೊಂಡು ಜೀವನವನ್ನು ಹಾಳು ಮಾಡಿಕೊಳ್ಳಬಾರದೆಂದು ಪ್ರಗತಿ ಶಿಕ್ಷಣ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರಾದ ಎಸ್ ಕೃಪಾಶಂಕರ್ ರವರು ತಿಳಿಸಿದರು.

ಗಿರಿಜಾ ಶಂಕರ ಕಲ್ಯಾಣ ಮಂಟಪದಲ್ಲಿ ಪ್ರಗತಿ ಕೈಗಾರಿಕಾ ತರಬೇತಿ ಸಂಸ್ಥೆಯ ಐಟಿಐ ಕಾಲೇಜಿನ 26ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಮತ್ತು 2023-24ನೇ ಸಾಲಿನ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಗ್ರಾಮೀಣ ಪ್ರದೇಶದಲ್ಲಿನ ವಿದ್ಯಾರ್ಥಿಗಳಿಗೂ ಸುಲಭವಾಗಿ ಉದ್ಯೋಗಗಳು ಸಿಗುವಂತಾಗಲಿ ಎಂಬ ಉದ್ದೇಶದಿಂದ 26 ವರ್ಷಗಳ ಹಿಂದೆ ಪ್ರಗತಿ ಐಟಿಐ ಕಾಲೇಜನ್ನು ಪಿ ಮಾಳಿಗೆಪ್ಪ ಮತ್ತು ಚನ್ನರಸಪ್ಪ ಸಹೋದರರು ಸ್ಥಾಪಿಸಿದ್ದು, ಇದುವರೆಗೂ ಕಾಲೇಜಿನಿಂದ 3000ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮುಗಿಸಿ ಐಟಿಐ ಕಾಲೇಜಿನಿಂದ ಹೊರಹೋಗಿದ್ದು, ಶಿಸ್ತಿಗೆ ಮತ್ತೊಂದು ಹೆಸರಾದ ಪ್ರಗತಿ ಕಾಲೇಜಿನ ಬಗ್ಗೆ ಯಾವುದೇ ಕಂಪನಿಗಳಿಗೆ




ಹೋದರು, ಅಲ್ಲಿ ಪ್ರಗತಿ ಕಾಲೇಜಿನ ಬಹುತೇಕ ವಿದ್ಯಾರ್ಥಿಗಳು ಉದ್ಯೋಗ ಮಾಡುತ್ತಿದ್ದು ಕಳೆದ 26 ವರ್ಷಗಳಿಂದಲೂ ಶೇಕಡ ನೂರರಷ್ಟು ಫಲಿತಾಂಶ ಪಡೆಯುವುದರೊಂದಿಗೆ ಬಿಇಎಲ್, ಆಕ್ಷನ್ ಕೇಬಲ್ಸ್, ಬಿ ಹೆಚ್ ಈ ಎಲ್, ಡೈನಮಿಕ್ ಟೆಕ್ನಾಲಜಿಸ್, ಹೋಂಡಾ, ಬಿ ಎಚ್ ಈ ಎಲ್, ಮಹೇಂದ್ರ, ಹೆಚ್‌ಎಲ್, ಮತ್ತಿತರೆ ನೂರಾರು ಕಂಪನಿಗಳಲ್ಲಿ ಇಲ್ಲಿನಿಂದ ಹೋದ ವಿದ್ಯಾರ್ಥಿಗಳು ಉದ್ಯೋಗಗಳನ್ನು ಮಾಡುತ್ತಿದ್ದು, ಈಗಲೂ ಸಹ ಶಿಕ್ಷಣ ಮುಗಿಯುತ್ತಿದ್ದಂತೆಯೇ ಕ್ಯಾಂಪಸ್ ಸೆಲೆಕ್ಷನ್ ಸಹ ನಡೆಯುತ್ತಿದೆ ಎಂದು ಯಾವುದೇ ವಿದ್ಯಾರ್ಥಿಗಳು ಐಟಿಐ ಮುಗಿದ ಕೂಡಲೇ ಉದ್ಯೋಗಕ್ಕೆ ಸೇರಬೇಕೋ ಇಲ್ಲವೇ ಡಿಪ್ಲೋಮೋ, ಇಂಜಿನಿಯರಿಂಗ್ ಮೊದಲಾಗಿ ಉನ್ನತ ಶಿಕ್ಷಣ ಪಡೆಯಬೇಕೋ ಎಂಬುದನ್ನು ಮೊದಲೇ ನಿರ್ಧರಿಸಬೇಕೆಂದು ಕೊನೆಗಳಿಗೆವರೆಗೂ ಕಾದು ಅತಂತ್ರರಾಗಬಾರದೆಂದು ತಿಳಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ದೇವನಹಳ್ಳಿ ಸರಕಾರಿ ಐಟಿಐ ಕಾಲೇಜಿನ ಪ್ರಾಂಶುಪಾಲರಾದ ಡಿ ಪ್ರಕಾಶ್ ನಾಗರಾಜ್ ರವರು ಮಾತನಾಡುತ್ತಾ ಕೈಗಾರಿಕಾ ತರಬೇತಿ ಸಂಸ್ಥೆಯು ಮಕ್ಕಳಿಗೆ ವೃತ್ತಿಯ ಜೊತೆ ಪ್ರವೃತ್ತಿಯನ್ನು ಬೆಳೆಸಲು ಸಹಕಾರಿಯಾಗುತ್ತದೆ ಎಂದು ಪ್ರಗತಿ ಐಟಿಐ ಕಾಲೇಜಿನ ಎಲ್ಲಾ ತರಬೇತಿದಾರರಿಗೂ ಮಾಹಿತಿ, ಬೆಂಬಲ, ಮಾರ್ಗದರ್ಶನ ನೀಡಲು ಸಿದ್ಧವೆಂದು ತಿಳಿಸಿದರು.

ಇದೇ ಐಟಿಐ ಕಾಲೇಜಿನಲ್ಲಿ ಓದಿ ಉನ್ನತ ದರ್ಜೆಯಲ್ಲಿ ಉತ್ತೀರ್ಣರಾಗಿ ಇದೀಗ ಬಿಇಚ್ ಇಎಲ್ ನಲ್ಲಿ ಉದ್ಯೋಗ ಮಾಡುತ್ತಿರುವ ವಿ ಮಂಜುನಾಥ್ ರವರು ಕಾಲೇಜಿನಿಂದ ನೀಡಿದ ಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿ ಇದುವರಗಿನ ನನ್ನ ಶ್ರೇಯಸ್ಸಿಗೆ, ವೃತ್ತಿಪರ ಜೀವನಕ್ಕೆ ಪ್ರಗತಿ ಐಟಿಐ ಸಂಸ್ಥೆ ಉತ್ತಮ ತಳಪಾಯ ಹಾಕಿ ಕೊಟ್ಟಿದ್ದು, ಐಟಿಐ ಮಾಡುವುದರಿಂದ ಬೇಗನೆ ಶಿಕ್ಷಣ ಮುಗಿಸುವುದರೊಂದಿಗೆ ಬೇಗನೆ ಕೆಲಸ ದೊರಕಿಸಿಕೊಂಡು ಜೀವನದಲ್ಲಿ ನೆಲೆ ನಿಲ್ಲಲು ಸಾಧ್ಯವಾಯಿತು ಎಂದು ತಿಳಿಸಿದರು. ಪ್ರಗತಿ ಐಟಿಐ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಂಶುಪಾಲ , ದೇವನಹಳ್ಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಹಿರಿಯ ತರಬೇತುದಾರರಾದ ರಾಜಣ್ಣ, ಫ್ರಾನ್ಸ್ ನ ಆಕ್ಸನ್ ಕೇಬಲ್ಸ್ನ ಹರಿ ಮಹದೇವನ್, ಪ್ರಗತಿ ಕೈಗಾರಿಕಾ ತರಬೇತಿ ಸಂಸ್ಥೆಯ ಹಿರಿಯ ತರಬೇತುದಾರರಾದ ಸಿ ಎಲ್ ಯೋಗೇಂದ್ರ ಬಾಬು, ಸಂದೀಪ್ ಪಾಟೀಲ್, ಹೇಮಂತ್, ಟಿಬಿ ಹರೀಶ್, ಬಾಲಕೃಷ್ಣ, ಹರಿಣಿ, ರಜನಿ, ವಿಜಯಕುಮಾರ್ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ದಾನಗಳಲ್ಲಿ ಶ್ರೇಷ್ಠ ರಕ್ತದಾನ




**ಕೋಲಾರ :** ನೇತ್ರದಾನ, ಭೂದಾನ, ದೇಹದಾನಕ್ಕಿಂತ ರಕ್ತದಾನ ಶ್ರೇಷ್ಠದಾನ ಎಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಸಭಾಪತಿ ಡಾ. ಎನ್ ಗೋಪಾಲಕೃಷ್ಣ ಗೌಡ ತಿಳಿಸಿದರು. ನಗರದ ಶ್ರೀ ನರಸಿಂಹರಾಜ ಆಸ್ಪತ್ರೆಯ ರಕ್ತದಾನ ಕೇಂದ್ರದಲ್ಲಿ ಶುಕ್ರವಾರ ರಕ್ತದಾನ ದಿನಾಚರಣೆಗೆ ಚಾಲನೆ ನೀಡಿ ಮಾತನಾಡಿದರು. ಸಮಾಜದ ಎಲ್ಲಾ ವರ್ಗದ ಜನರಿಗೆ ಸೇವೆ ಮಾಡಲು ಇದು ಉತ್ತಮ ಮಾರ್ಗವಾಗಿದ್ದು, ಆಕಸ್ಮಿಕ ಮತ್ತು ಅಪಘಾತಗಳಾದಾಗ ಜನರಿಗೆ ತುಂಬಾ ಅತಿ ಅಗತ್ಯ ಇರುವ ರಕ್ತದಾನ ಮಾಡುವುದು ಇಂದಿನ ಅಗತ್ಯ ಮತ್ತು ಅನಿವಾರ್ಯ ಎಂದರು. ರಕ್ತದಾನಿಗಳನ್ನು ಸನ್ಮಾನಿಸಿದ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಆಡಳಿತ ಮಂಡಳಿ ಸದಸ್ಯ ಜಿ ಶ್ರೀನಿವಾಸ್ ಮಾತನಾಡಿ, ಜಿಲ್ಲೆಯ ಎಲ್ಲಾ ಶಾಲೆಗಳನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಆರಂಭಿಸಲು ಈಗಾಗಲೇ ಶಿಕ್ಷಣ ಉಪ ನಿರ್ದೇಶಕರು ಆದೇಶ ನೀಡಿದ್ದು, ಇದರಂತೆ ಕಾಯೋನ್ಮುಖರಾಗಲು ಮತ್ತು ಪ್ರತಿ ಶಾಲೆಗೂ ಪ್ರಥಮ ಚಿಕಿತ್ಸಾ ಕಿಟ್ ಗಳನ್ನು ವಿತರಿಸಲು ಈಗಾಗಲೇ ಕ್ರಮವಹಿಸಲಾಗಿದೆ ಎಂದರು. ಉಪಸಭಾಪತಿ ಆರ್. ಶ್ರೀನಿವಾಸಸ್ ಮಾತನಾಡಿ, ರಕ್ತಧಾನ ಶಿಬಿರಗಳನ್ನು ಆಯೋಜಿಸುವ ಮೂಲಕ ಉತ್ತಮ ಕಾರ್ಯ ಕೈಗೊಳ್ಳಲಾಗುವುದು ಎಂದರು. ಪ್ರಧಾನ ಕಾರ್ಯದರ್ಶಿ ಎಸ್. ನಂದೀಶ ಕುಮಾರ್ ಮಾತನಾಡಿ, ಸೇವ ಮನೋಭಾವದ ಮೂಲಕ ತಮ್ಮನ್ನು ತಾವು ತೊಡಗಿಸಿಕೊಳ್ಳಲು, ರೆಡ್ ಕ್ರಾಸ್ ಸಂಸ್ಥೆ ಸೂಕ್ತ ವೇದಿಕೆ ಎಂದರು 33 ಬಾರಿ ರಕ್ತದಾನ ಮಾಡಿ ಸನ್ಮಾನಿಕರಾದ ಮರಗಲ್ ಮಂಜುನಾಥ, ರಕ್ತನಿಧಿ ವೈದ್ಯಾಧಿಕಾರಿ ಡಾ. ರೇವತಿ, ಶೋಭಾ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಮುಖಂಡರುಗಳಾದ ಎಸ್.ಸಿ.ವೆಂಕಟಕೃಷ್ಣಪ್ಪ, ನಾಗೇಂದ್ರ ಪ್ರಸಾದ್, ಸೀನಪ್ಪ, ಮುರಳೀಧರ, ವೆಂಕಟೇಶ್ ಪಸ್ಥಿತರಿದ್ದರು.

# ಸಂಜೆ ಟಿಪ್ಸ್



## ಶಓಮಿ 14 ಸಿವಿ ಭಾರತದಲ್ಲಿ ಬಿಡುಗಡೆ

ತಂತ್ರಜ್ಞಾನ ಮತ್ತು ಆವಿಷ್ಕಾರದಲ್ಲಿ ಜಾಗತಿಕ ಮುಂಚೂಣಿಯ ಶಓಮಿ ತನ್ನ ಶಓಮಿ 14 ಸೀರೀಸ್ ಗೆ ಅತ್ಯಾಕರ್ಷಕ ಸೇರ್ಪಡೆ ಶಓಮಿ 14 ಸಿವಿ ಬಿಡುಗಡೆ ಮಾಡಿದೆ. ಲೀಕಾದೊಂದಿಗೆ ಸಹಯೋಗದಲ್ಲಿ ವಿನ್ಯಾಸಗೊಳಿಸಲಾದ ಶಓಮಿ 14 ಸಿವಿಯು ಮೊಬೈಲ್ ಇಮೇಜಿಂಗ್ ಮತ್ತು ಸ್ಮಾರ್ಟ್ ಫೋನ್ ಛಾಯಾಗ್ರಹಣದಲ್ಲಿ ಶಓಮಿ ಪರಂಪರೆಯನ್ನು ಮುಂದಕ್ಕೆ ಕೊಂಡೊಯ್ಯಲಿದೆ. ಈ ಶಓಮಿ 14 ಸಿವಿ ಕ್ಯಾಮರಾ ಕಾರ್ಯಕ್ಷಮತೆಯನ್ನು ದುಪ್ಪಟ್ಟುಗೊಳಿಸುತ್ತಿದ್ದು ಶಓಮಿ 14 ಸೀರೀಸ್ ನ ಪ್ರತಿಮಾತ್ಮಕ ವಿನ್ಯಾಸದ ಭಾಷೆಯನ್ನು ತಡೆರಹಿತವಾಗಿ ಪಡೆದಿದ್ದು ಈ ಮುಂಚೂಣಿಯ ವರ್ಗದಲ್ಲಿ ಗಮನಾರ್ಹ ವಿಕಾಸವಾಗಿದೆ. ಇದು ಪ್ರತಿಯೊಬ್ಬರಿಗೂ ಲಭ್ಯವಿರುವ ಅತ್ಯಾಧುನಿಕ ಆವಿಷ್ಕಾರಗಳಿಗೆ ಶಓಮಿಯ ಬದ್ಧತೆಯನ್ನು ನಿರೂಪಿಸುತ್ತದೆ. ''ಲೀಕಾದೊಂದಿಗೆ ರೂಪಿಸಿದ ಶಓಮಿ 14 ಸೀರೀಸ್ ಅಭೂತಪೂರ್ವ ಯಶಸ್ಸಿನಿಂದ ನಾವು ಈ ಸರಣಿಗೆ ನಮ್ಮ ಹೊಚ್ಚಹೊಸ ಸೇರ್ಪಡೆ ಶಓಮಿ 14 ಸಿವಿ ತರಲು ಬಹಳ ಉತ್ಸುಕರಾಗಿದ್ದೇವೆ'' ಎಂದು ಶಓಮಿಇಂಡಿಯಾದ ಚೀಫ್ ಮಾರ್ಕೆಟಿಂಗ್ ಆಫೀಸರ್ ಅನುಜ್ ಶರ್ಮಾ ಹೇಳಿದರು. ''ಶಓಮಿ 14 ಸೀರೀಸ್ ಸ್ಮಾರ್ಟ್ ಫೋನ್ ಛಾಯಾಗ್ರಹಣ, ಆವಿಷ್ಕಾರಕ ವಿನ್ಯಾಸ ಮತ್ತು ಸರಿಸಾಟಿ ಇರದ ಕಾರ್ಯಕ್ಷಮತೆಯ ಮೂಲಕ ಗಡಿಗಳನ್ನು ವಿಸ್ತರಿಸಿದೆ. ನಮ್ಮ ಗುರಿ ಈ ಹೊಚ್ಚಹೊಸ ಆವಿಷ್ಕಾರಗಳನ್ನು ಹೆಚ್ಚಿನ ಗ್ರಾಹಕರಿಗೆ ವಿಸ್ತರಿಸಬೇಕೆನ್ನುವುದು. ಶಓಮಿ 14 ಸಿವಿ ಬಿಡುಗಡೆಯೊಂದಿಗೆ ನಾವು ಆವಿಷ್ಕಾರದ ನಿಯಮಗಳನ್ನು ಮತ್ತೆ ಬರೆಯುತ್ತಿದ್ದೇವೆ ಮತ್ತು ಈ ವರ್ಗದ ಸ್ಮಾರ್ಟ್ ಫೋನ್ ನೀಡಬಹುದಾದ್ದನ್ನು ಮರು ವ್ಯಾಖ್ಯಾನಿಸುತ್ತಿದ್ದೇವೆ. ಇದು ಸಂಪೂರ್ಣ ಫ್ಲಾಗ್ ಶಿಪ್ ಅನುಭವ ನೀಡುತ್ತಿದ್ದು ಅದರ ಅತ್ಯಾಧುನಿಕ ವಿನ್ಯಾಸದಿಂದ ಪ್ರತಿನಿತ್ಯದ ಕಾರ್ಯಕ್ಷಮತೆ ಎಲ್ಲ ಮಾನದಂಡಗಳನ್ನೂ ಮೀರಿದ್ದು ನಾವು ಈ ವರ್ಗದಲ್ಲಿ ನೀಡುತ್ತಿರುವ ಎಲ್ಲವೂ ಅತ್ಯುತ್ತಮ ಕ್ಯಾಮರಾಗಳೊಂದಿಗೆ ಸನ್ನದ್ಧವಾಗಿವೆ. ಶಓಮಿ 14 ಸಿವಿ ಬರೀ ಫೋನ್ ಅಲ್ಲ; ಅದು ಸ್ಟೇಟ್ಮೆಂಟ್'' ಎಂದರು.

## ಖರ್ಜೂರದ ಮಿಲ್ಕ್ ಶೇಕ್

### ಪಾಕ ಶಾಲೆ



### ಮಾಡುವ ವಿಧಾನ

ಮೊದಲು ಖರ್ಜೂರವನ್ನು ಚೆನ್ನಾಗಿ ತೊಳೆದುಕೊಳ್ಳಿ. ನಂತ್ರ ಅದ್ರ ಬೀಜವನ್ನು ತೆಗೆದು ಸಣ್ಣದಾಗಿ ಹೆಚ್ಚಿಕೊಳ್ಳಿ. ಏಲಕ್ಕಿ ಸಿಪ್ಪೆ ತೆಗೆದು ಪುಡಿ ಮಾಡಿಕೊಳ್ಳಿ. ಇನ್ನೊಂದು ಕಡೆ ಗೋಡಂಬಿಯನ್ನು ಸ್ವಲ್ಪ ಬಿಸಿ ಮಾಡಿ. ನಂತ್ರ ಮಿಕ್ಸಿಗೆ ಖರ್ಜೂರ, ಗೋಡಂಬಿ ಹಾಗೂ ಹಾಲನ್ನು ಹಾಕಿ ರುಬ್ಬಿಕೊಳ್ಳಿ. ಇದಕ್ಕೆ ಏಲಕ್ಕಿ ಪುಡಿಯನ್ನು ಹಾಕಿ ಸರಿಯಾಗಿ ಮಿಕ್ಸ್ ಮಾಡಿ.

### ಬೇಕಾಗಿರುವ ಪದಾರ್ಥ

ಸ್ವಲ್ಪ ಖರ್ಜೂರ, 3-4 ಗೋಡಂಬಿ, 2 ಏಲಕ್ಕಿ, 2 ಕಪ್

## ರಮ್ಯಾ ಕೃಷ್ಣ ಇಂದಿಗೂ ಹಾಟ್ ಫೇವರೇಟ್



ರಮ್ಯಾ ಕೃಷ್ಣ ಚೆಂದುಳ್ಳಿ ಚೆಲುವೆ. ಸೌತ್ ಸಿನಿಪ್ರೇಮಿಗಳ ಹೃದಯದರಸಿ. 90 ರ ದಶಕದ ಈ ಸುಂದರಿ ಇಂದಿಗೂ ತನ್ನ ಜನರ ಹಾಟ್ ಫೇವರೇಟ್ ಆಗೇ ಉಳಿದಿದ್ದಾರೆ. ಕಣ್ಣುಗಳಿಂದಲೇ ಜನರ ಮನಸೆಳೆಯುವ ಅದ್ಭುತ ನಟಿ. ಯಾವುದೇ ಪಾತ್ರಕ್ಕೆ ತನ್ನದೇ ಆದ ಅಭಿನಯದಿಂದ ಜೀವ ತುಂಬುವ ನಟಿ. ಸೆಪ್ಟೆಂಬರ್ 15, 1967 ರಂದು ಚೆನ್ನೈನಲ್ಲಿ ಜನಿಸಿದ ರಮ್ಯಾ ಕೃಷ್ಣ 1990 ರಿಂದ 2000 ರವರೆಗೆ ಸುಮಾರು ಒಂದು ದಶಕದ ಕಾಲ ತೆಲುಗು, ತಮಿಳು, ಕನ್ನಡ, ಮಲಯಾಳಂ ಮತ್ತು ಹಿಂದಿ ಭಾಷೆಗಳಲ್ಲಿ ಅನೇಕ ಚಿತ್ರಗಳಲ್ಲಿ ನಟಿಸಿದ್ದಾರೆ. ಚಿಕ್ಕ ವಯಸ್ಸಿನಲ್ಲೇ ನಟಿಯಾಗಿ ಚಿತ್ರರಂಗ ಪ್ರವೇಶಿಸಿದರು. ಎಂಟನೇ ತರಗತಿಯಲ್ಲಿ ಓದುವಾಗಲೇ ಪ್ರಮುಖ ಪಾತ್ರ ನಿರ್ವಹಿಸಿದ್ದರು. ಕೇವಲ ನಾಯಕಿಯಾಗಿ ಮಾತ್ರವಲ್ಲ ರಮ್ಯಾ ಕೃಷ್ಣ ಅವರ ವಿಲನ್ ಪಾತ್ರಗಳೂ ಜನಪ್ರಿಯವಾಗಿವೆ. ನರಸಿಂಹ, ನೀಲಾಂಬರಿ ಹೀಗೆ ಹಲವು ಅದ್ಭುತ ಪಾತ್ರದಲ್ಲಿ ಅತ್ಯುತ್ತಮ ಅಭಿನಯ ನೀಡಿದರು. ಈ ಚಿತ್ರಗಳು ರಮ್ಯಾ ಕೃಷ್ಣ ಅವರಿಗೆ ಒಳ್ಳೆಯ ಹೆಸರು ತಂದುಕೊಟ್ಟಿತು. ಸದ್ಯ ರಮ್ಯಾ ಕೃಷ್ಣ ಪೋಷಕ ನಟಿಯಾಗಿ ಮಿಂಚುತ್ತಿದ್ದಾರೆ. ರಮ್ಯಾ ಕೃಷ್ಣ 30 ವರ್ಷಕ್ಕೂ ಹೆಚ್ಚು ಕಾಲ ಚಿತ್ರರಂಗದಲ್ಲಿದ್ದಾರೆ. ಯಂಗ್ ರೆಬೆಲ್ ಸ್ಟಾರ್ ಪ್ರಭಾಸ್ ಮತ್ತು ರಾಜಮೌಳಿ ಜೋಡಿಯ ಬಾಹುಬಲಿ ಸಿನಿಮಾದಲ್ಲಿ ಶಿವಗಾಮಿ ಪಾತ್ರದಲ್ಲಿ ವಿಶ್ವಾದ್ಯಂತ ಮನ್ನಣೆ ಗಳಿಸಿತು.ವರದಿಗಳ ಪ್ರಕಾರ, ರಮ್ಯಾ ಕೃಷ್ಣ ಅವರ ಒಟ್ಟು ಆಸ್ತಿ 90 ಕೋಟಿ ರೂಪಾಯಿ. ಈಗಿನ ನಟಿಯರಲ್ಲಿ ಅತಿ ಹೆಚ್ಚು ಸಂಭಾವನೆ ಪಡೆಯುವ ನಟಿಯೂ ಹೌದು. ರಮ್ಯಾ ಕೃಷ್ಣ ಪ್ರತಿ ಚಿತ್ರಕ್ಕೆ 3 ರಿಂದ 4 ಕೋಟಿ ರೂಪಾಯಿ ತೆಗೆದುಕೊಳ್ಳುತ್ತಾರೆ. ನಿರ್ದೇಶಕ ಕೃಷ್ಣ ವಂಶಿ ಅವರನ್ನು ರಮ್ಯಾ ಕೃಷ್ಣ ಮದುವೆಯಾಗಿದ್ದು, ಇಬ್ಬರು ಗಂಡು ಮಕ್ಕಳಿದ್ದಾರೆ.

## ಧ್ರುವ ಸರ್ಜಾ ನಟನೆಯ 'ಬಹದ್ದೂರ್' ರೀ ರಿಲೀಸ್



ಆರ್. ಎಸ್. ಪ್ರೊಡಕ್ಷನ್ಸ್ ಲಾಂಛನದಲ್ಲಿ ಆರ್ ಶ್ರೀನಿವಾಸ್ ಹಾಗೂ ಕೆ.ಪಿ.ಶ್ರೀಕಾಂತ್ ನಿರ್ಮಿಸಿರುವ, ಚೇತನ್ ಕುಮಾರ್ ನಿರ್ದೇಶನದ ಹಾಗೂ ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ನಾಯಕ ಹಾಗೂ ರಾಧಿಕಾ ಪಂಡಿತ್ ನಾಯಕಿಯಾಗಿ ನಟಿಸಿದ್ದ ಸೂಪರ್ ಹಿಟ್ ''ಬಹದ್ದೂರ್'' ಚಿತ್ರ 2014 ರಲ್ಲಿ ಬಿಡುಗಡೆಯಾಗಿ ಭರ್ಜರಿ ಯಶಸ್ಸು ಕಂಡಿತ್ತು. ಈಗ ಹತ್ತು ವರ್ಷಗಳ ನಂತರ ಜೂನ್ 21 ರಂದು ಈ ಚಿತ್ರ ಮರು ಬಿಡುಗಡೆಯಾಗುತ್ತಿದೆ. ಗೋಕುಲ್ ಫಿಲಂಸ್ ಅವರು ಅದ್ದೂರಿಯಾಗಿ ಅನೇಕ ಚಿತ್ರಮಂದಿರಗಳಲ್ಲಿ ಚಿತ್ರವನ್ನು ರೀ ರಿಲೀಸ್ ಮಾಡುತ್ತಿದ್ದಾರೆ. 'ಬಹದ್ದೂರ್' ಚಿತ್ರಕ್ಕೆ ಪುನೀತ್ ರಾಜಕುಮಾರ್ ಅವರು ಧ್ವನಿ ನೀಡಿದ್ದರು. ಪುನೀತ್ ಅವರು ತಮ್ಮ ಅಭಿನಯದ ಚಿತ್ರವನ್ನು ಹೊರತುಪಡಿಸಿ ಧ್ವನಿ ನೀಡಿದ ಮೊದಲ ಚಿತ್ರ ''ಬಹದ್ದೂರ್''. ಚಿತ್ರದ ಮೊದಲ ಸನ್ನಿವೇಶಕ್ಕೆ ರವಿಚಂದ್ರನ್ ಅವರು ಕ್ಲ್ಯಾಪ್ ಮಾಡಿ ಹಾರೈಸಿದ್ದರು. ಪುನೀತ್ ರಾಜಕುಮಾರ್ ಅವರೆ ಕ್ಯಾಮೆರಾ ಚಾಲನೆ ಮಾಡಿ ಶುಭ ಕೋರಿದ್ದರು. ವಿ.ಹರಿಕೃಷ್ಣ ಅವರ ಸಂಗೀತದಲ್ಲಿ ಮೂಡಿಬಂದ ಹಾಡುಗಳು ಇಂದಿಗೂ ಜನಪ್ರಿಯ. ''ಬಹದ್ದೂರ್ '' ಬಿಡುಗಡೆಯಾದ ಹತ್ತು ವರ್ಷಗಳಲ್ಲಿ ನೂರಾರೂ ಸಲ ಸುವರ್ಣ ವಾಹಿನಿಯಲ್ಲಿ ಪ್ರಸಾರವಾಗಿದೆ. ಈ ಚಿತ್ರ ಪ್ರಸಾರವಾದಗಲೆಲ್ಲ ಉತ್ತಮ ಟಿ.ಆರ್.ಪಿ ಬರುತ್ತಿರುವುದು ವಿಶೇಷ. ಧ್ರುವ ಸರ್ಜಾ ಹಾಗು ರಾಧಿಕಾ ಪಂಡಿತ್ ಅವರ ಅದ್ಭುತ ಅಭಿನಯ ಈ ಚಿತ್ರದ ಹೈಲೆಟ್. ಇದು ಧ್ರುವ ಸರ್ಜಾ ಅಭಿನಯದ ಎರಡನೇ ಚಿತ್ರ. ಹತ್ತು ವರ್ಷಗಳ ಮೇಲೆ ಈ ಚಿತ್ರ ಮರು ಬಿಡುಗಡೆಯಾಗುತ್ತಿರುವುದು ಸಂತೋಷವಾಗಿದೆ ಎನ್ನುತ್ತಾರೆ ನಿರ್ದೇಶಕ ಚೇತನ್ ಕುಮಾರ್.

## ಗ್ರೀನ್ ಆಪಲ್ ಪ್ರಯೋಜನ ಗೊತ್ತೆ?



### ಹೆಲ್ತ್ ಟಿಪ್ಸ್

ಗ್ರೀನ್ ಆಪಲ್ ಅಪಾಯಕಾರಿ ಕಾಯಿಲೆಗಳು ಮತ್ತು ಹಲವು ಆರೋಗ್ಯ ಸಮಸ್ಯೆಗಳನ್ನು ತೊಡೆದುಹಾಕುತ್ತದೆ. ಪ್ರತಿದಿನ ಅಲ್ಲದಿದ್ದರೂ ವಾರ ಅಥವಾ ಹತ್ತು ದಿನಗಳಿಗೊಮ್ಮೆ ಒಂದು ಗ್ರೀನ್ ಆಪಲ್ ತಿನ್ನುವುದರಿಂದ ಹಲವಾರು ಆರೋಗ್ಯ ಪ್ರಯೋಜನಗಳಿವೆ ಎನ್ನುತ್ತಾರೆ ತಜ್ಞರು.

ಗ್ರೀನ್ ಆಪಲ್ ನಲ್ಲಿ ಕ್ಯಾಲ್ಸಿಯಂ, ಕಬ್ಬಿಣ, ಜೀವಸತ್ವಗಳು ಮತ್ತು ಉತ್ಕರ್ಷಣ ನಿರೋಧಕಗಳಂತಹ ಗುಣಗಳಿವೆ, ಇದು ದೇಹಕ್ಕೆ ಒಳ್ಳೆಯದು ಮತ್ತು ರೋಗಗಳನ್ನು ದೂರವಿಡುತ್ತದೆ. ಗ್ರೀನ್ ಆಪಲ್ ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಇದು ಅನೇಕ ರೋಗಗಳನ್ನು ತಡೆಯಲು ಸಹಾಯ ಮಾಡುತ್ತದೆ. ವಿಶೇಷವೆಂದರೆ ಗ್ರೀನ್ ಆಪಲ್ ಸೇವನೆಯಿಂದ ತ್ವಚೆಯೂ ಆರೋಗ್ಯವಾಗಿರುತ್ತದೆ. ಗ್ರೀನ್ ಆಪಲ್ ಯಕೃತ್ತಿಗೆ ತುಂಬಾ ಒಳ್ಳೆಯದು.

ಆಲ್ಕೋಹಾಲ್ ಮಾತ್ರವಲ್ಲ ಈ 5 ಆಹಾರಗಳು ಸಹ ಲಿವರ್ ಡ್ಯಾಮೇಜ್ಗೆ ಕಾರಣವಾಗಬಹುದು!

ಗ್ರೀನ್ ಆಪಲ್ ಪೋಷಕಾಂಶಗಳ ಉಗ್ರಾಣವಾಗಿದೆ. ಇದರಲ್ಲಿ ಕ್ಯಾಲ್ಸಿಯಂ, ಪ್ರೊಟೀನ್, ಮೆಗ್ನೀಷಿಯಂ, ರಂಜಕ, ಪೊಟ್ಯಾಶಿಯಂ, ತಾಮ್ರ, ಕಬ್ಬಿಣ, ಸತು, ವಿಟಮಿನ್ ಎ, ವಿಟಮಿನ್ ಕೆ ಮುಂತಾದ ಪೋಷಕಾಂಶಗಳಿವೆ. ಆರೋಗ್ಯಕರ ದೇಹಕ್ಕೆ ಇವುಗಳನ್ನು ಬಹಳ ಮುಖ್ಯವೆಂದು ಪರಿಗಣಿಸಲಾಗುತ್ತದೆ. ಅಷ್ಟೇ ಅಲ್ಲ, ಈ ಅಂಶಗಳು ಮೂಳೆಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ.

ಹೃದ್ರೋಗಿಗಳು ಗ್ರೀನ್ ಆಪಲ್ ತಿನ್ನುವುದು ಒಳ್ಳೆಯದು. ಇದು ಹೃದಯದ ಆರೋಗ್ಯವನ್ನು ಕಾಪಾಡುತ್ತದೆ. ಗ್ರೀನ್ ಆಪಲ್ ಹೃದಯದ ಆರೋಗ್ಯವನ್ನು ಸುಧಾರಿಸುತ್ತದೆ.

ಹೃದಯರಕ್ತನಾಳದ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ. ಗ್ರೀನ್ ಆಪಲ್ ಆಹಾರದ ಫೈಬರ್ ಅನ್ನು ಹೊಂದಿರುತ್ತದೆ. ಇದು ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಗ್ರೀನ್ ಆಪಲ್ ತಿನ್ನುವುದರಿಂದ ಮಲಬದ್ಧತೆ ಮತ್ತು ಅತಿಸಾರ ಸಮಸ್ಯೆಗಳು ನಿವಾರಣೆಯಾಗುತ್ತವೆ. ಗ್ರೀನ್ ಆಪಲ್ನಲ್ಲಿರುವ ಪೋಷಕಾಂಶಗಳು ಯಕೃತ್ತನ್ನು ಬಲಪಡಿಸಲು ಕೆಲಸ ಮಾಡುತ್ತವೆ. ಗ್ರೀನ್ ಆಪಲ್ ಸ್ಥೂಲಕಾಯತೆಯನ್ನು ಕಡಿಮೆ ಮಾಡಲು ಸಹ ಸಹಾಯ ಮಾಡುತ್ತದೆ. ಗ್ರೀನ್ ಆಪಲ್ ಉತ್ಕರ್ಷಣ ನಿರೋಧಕಗಳನ್ನು ಹೊಂದಿರುತ್ತವೆ.

## ಐಐಎಂ ಕಾಶಿಪುರ್‌ನಿಂದ ಸಮಾವೇಶ



ಭಾರತದ ಪ್ರಮುಖ ಮ್ಯಾನೇಜ್ಮೆಂಟ್ ಶಾಲೆಗಳಲ್ಲಿ ಒಂದಾಗಿರುವ ಇಂಡಿಯನ್ ಇನ್ಸಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ (ಐಐಎಂ) ಕಾಶಿಪುರ (ಉತ್ತರಾಖಂಡ) ಜಾಗತಿಕ ಉದ್ಯೋಗ ಮಾರುಕಟ್ಟೆಯನ್ನು ಗಮನದಲ್ಲಿಟ್ಟುಕೊಂಡು ಕಂಪನಿಗಳನ್ನು ಆಕರ್ಷಿಸುವ ಸಲುವಾಗಿ ಹಲವಾರು ಕ್ರಮಗಳನ್ನು ಆಯೋಜಿಸುವ ಮೂಲಕ ತನ್ನ ದಿಗಂತವನ್ನು ವಿಸ್ತರಿಸಲಿದೆ.

ಜೂನ್ 15ರಂದು ಬೆಂಗಳೂರಿನ ಹಾಲಿಡೇ ಇನ್ ಹೋಟೆಲ್ನಲ್ಲಿ ನಡೆದ ವಾರ್ಷಿಕ ಹೆಚ್‌ಆರ್ ಸಮಾವೇಶ 'ಪೆರೆನ್ನಿಯಲ್ 2024' ರಲ್ಲಿ ಐಐಎಂ ಕಾಶಿಪುರ ಸಂಸ್ಥೆಯು ದೇಶಾದ್ಯಂತ ಇರುವ ವೈವಿಧ್ಯಮಯ ಕಂಪನಿಗಳನ್ನು ಆಕರ್ಷಿಸಲು ಕ್ಯಾಂಪಸ್ ಪ್ಲೇಸ್ಮೆಂಟ್ಗಳಿಗಾಗಿ ದೆಹಲಿಯಲ್ಲಿ ಕಂಪನಿಗಳ ಸಮಾವೇಶವನ್ನು ಆಯೋಜಿಸಲಿದೆ ಎಂದು ಘೋಷಿಸಿತು. ಸಂಸ್ಥೆಯು ಐಐಎಂ ಕಾಶಿಪುರ್ ಕ್ಯಾಂಪಸ್ನಲ್ಲಿ 2024-25 ಉದ್ಯೋಗ ಋತುವಿನಲ್ಲಿ 200+ ಕಂಪನಿಗಳನ್ನು ಸ್ವಾಗತಿಸಿತ್ತು. ಐಐಎಂ ಕಾಶಿಪುರವು ಸಿಲಿಕಾನ್ ವ್ಯಾಲಿ ಬೆಂಗಳೂರು, ಹೈದರಾಬಾದ್, ಚೆನ್ನೈ ಮತ್ತು ಇತರ ನಗರಗಳ ಮೇಲೆ ಗಮನ ಕೇಂದ್ರೀಕರಿಸುವ ಸಲುವಾಗಿ ದೇಶದ ದಕ್ಷಿಣ ಭಾಗದಲ್ಲಿ ಹೆಚ್‌ಆರ್ ಸಮಾವೇಶಗಳು ಮತ್ತು ಕಾರ್ಯಕ್ರಮಗಳ ಮೂಲಕ ಕಂಪನಿಗಳನ್ನು ತಲುಪುವುದನ್ನು ಮುಂದುವರಿಸಲಿದೆ ಎಂದು ಈ ಸಂದರ್ಭದಲ್ಲಿ ಘೋಷಿಸಿತು. ಸಂಸ್ಥೆಯು ಅದರ ಸಾಂಸ್ಥಿಕ ಸಂಬಂಧಗಳನ್ನು ಹೆಚ್ಚಿಸಲು ಮತ್ತು ಕಂಪನಿಗಳೊಂದಿಗೆ ನಿಕಟ ಬಾಂಧವ್ಯವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಹೆಚ್‌ಆರ್ ಮತ್ತು ಮ್ಯಾನೇಜ್ಮೆಂಟ್ ಉದ್ಯಮದ ಭವಿಷ್ಯವನ್ನು ಚರ್ಚಿಸಲು ಉತ್ತಮ ವೇದಿಕೆಯನ್ನು ಒದಗಿಸುತ್ತದೆ. ಸಂಸ್ಥೆಯು ಕಳೆದ ಒಂದು ವರ್ಷದಲ್ಲಿ ಕಾರ್ಪೊರೇಟ್ ಔಟ್ರೀಚ್ ಕಾರ್ಯಕ್ರಮದ ಅಡಿಯಲ್ಲಿ ಮೂರು ಕಾರ್ಯಕ್ರಮಗಳನ್ನು ನಡೆಸಿದೆ ಎಂದು ಸಂಸ್ಥೆಯ ಅಧಿಕಾರಿಗಳು ತಿಳಿಸಿದ್ದಾರೆ.

ಇದಲ್ಲದೆ, ಸಂಸ್ಥೆಯು ತನ್ನ ಜಾಗತಿಕ ಹೆಜ್ಜೆಗುರುತುಗಳನ್ನು ಹೆಚ್ಚಿಸಲು ಆಗ್ನೇಯ ಏಷ್ಯಾ ಮತ್ತು ಗಲ್ಫ್ ಕಂಪನಿಗಳನ್ನು ತಲುಪುತ್ತಿದೆ ಎಂದು ಸಂಸ್ಥೆಯ ಅಧಿಕಾರಿಗಳು ಜೂನ್ 15ರಂದು ಬೆಂಗಳೂರಿನಲ್ಲಿ ಹಾಲಿಡೇ ಇನ್ ಹೋಟೆಲ್ನಲ್ಲಿ ಭವಿಷ್ಯ-ಸಿದ್ಧ ಮಾನವ ಸಂಪನ್ಮೂಲ, ನಾಳಿನ ಯಶಸ್ಸಿಗೆ ಪ್ರತಿಭೆಯನ್ನು ಪೋಷಣೆ ಥೀಮ್ ನಲ್ಲಿ ನಡೆದ ಒಂದು ದಿನದ ಹೆಚ್‌ಆರ್ ಸಮಾವೇಶದಲ್ಲಿ ತಿಳಿಸಿದರು.ಐಐಎಂ ಕಾಶಿಪುರದ ಪ್ಲೇಸ್ಮೆಂಟ್ ಮತ್ತು ಕಾರ್ಪೊರೇಟ್ ರಿಲೇಷನ್ಸ್ ಪ್ರೆಸಿಡೆಂಟ್ ಪ್ರೊ. ಉತ್ಕರ್ಷ್, ಸಂಸ್ಥೆಗಳೊಂದಿಗೆ ನಮ್ಮ ಬಾಂಧವ್ಯವನ್ನು ಬಲಪಡಿಸಲು ನಾವು ಕಾರ್ಪೊರೇಟ್ ಔಟ್ರೀಚ್ ಕಾರ್ಯಕ್ರಮದ ಅಡಿಯಲ್ಲಿ ಹಲವಾರು ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆ. ನಮ್ಮ ವಿದ್ಯಾರ್ಥಿಗಳು ನಮ್ಮ ಬ್ರ್ಯಾಂಡ್ ರಾಯಭಾರಿಗಳು ಮತ್ತು ಅವರನ್ನು ಉದ್ಯಮಕ್ಕೆ ಸಿದ್ಧಪಡಿಸುವುದು ಮತ್ತು ಉತ್ತಮ ಕೆಲಸದ ಅವಕಾಶಗಳನ್ನು ಒದಗಿಸುವುದು ನಮ್ಮ ಜವಾಬ್ದಾರಿಯಾಗಿದೆ ಎಂದು ನಾವು ನಂಬುತ್ತೇವೆ'' ಎಂದು ಹೇಳಿದರು.ನಿರಂತರ ಕಲಿಕೆಯ ಸಂಸ್ಕೃತಿಯನ್ನು ಬೆಳೆಸುವುದು: ವೃತ್ತಿ ಬೆಳವಣಿಗೆಗೆ ಉದ್ಯೋಗಿಗಳನ್ನು ಸಬಲೀಕರಣಗೊಳಿಸುವುದು ಎಂಬ ವಿಷಯದ ಕುರಿತು ಶನಿವಾರ ಬೆಂಗಳೂರಿನಲ್ಲಿ ನಡೆದ ಇತ್ತೀಚಿನ ವಾರ್ಷಿಕ ಹೆಚ್‌ಆರ್ ಸಮಾವೇಶದಲ್ಲಿ ಚರ್ಚೆ ನಡೆಸಲಾಯಿತು. ಟ್ಯಾಲೆಂಟ್ ಓಲಾದ ಮುಖ್ಯ ಮಾಹಿತಿ ಅಧಿಕಾರಿ ಸಚಿನ್ ಗಾರ್ಗ್ ಅವರು ಇತರ ಐದು ಕಂಪನಿಗಳ ಹೆಚ್‌ಆರ್ ಗಳೊಂದಿಗೆ ಕಾರ್ಯಕ್ರಮದಲ್ಲಿ ಗೌರವ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಪೋರ್ಟರ್ ಪೀಪಲ್ ಆಂಡ್ ಕಲ್ಚರ್ ಶ್ರೀ ರಾಕೇಶ್ ಗೋಪಾಲನಿ, ಟೋರಿ ಹ್ಯಾರಿಸ್ ನ ಸಿಎಚ್‌ಆರ್ ಓ ಶ್ರೀಮತಿ ಅಪರ್ಣಾ ಚೇತನ್, ಹೆಚ್ ಪಿಯ ಎಚ್‌ಆರ್ ಬಿಪಿ ಶ್ರೀಮತಿ ಅಮೃತಾ ಎಂ ಮತ್ತು ಫ್ಲಿಪ್ಕಾರ್ಟ್ ನ ಮಾನವ ಸಂಪನ್ಮೂಲ ವಿಭಾಗದ ಸಹಾಯಕ ನಿರ್ದೇಶಕರಾಜ ಮೊನಾಲಿಸಾ ಗೋಷ್ಠಿಯಲ್ಲಿ ಭಾಗವಹಿಸಿದರು. ತಕೇಡಾ ಫಾರ್ಮಾಸ್ಯೂಟಿಕಲ್ಸ್ ಸಪ್ಲೈ ಚೈನ್ ಸೀನಿಯರ್ ಪ್ರೊಜೆಕ್ಟ್ ಮ್ಯಾನೇಜರ್, ಐಐಎಂ ಕಾಶಿಪುರ್ ನ ಹಳೆಯ ವಿದ್ಯಾರ್ಥಿ ಶ್ರೀ ಶರದ್ ಪ್ರಕಾಶ್ ನಿರ್ವಹಣೆ ಮಾಡಿದರು.

ಹೆಚ್‌ಆರ್ ನಲ್ಲಿ ಎಐ ಇಂಟ್ರಡಕ್ಷನ್, ವರ್ಕ್ ಫ್ರಮ್ ಹೋಮ್ ಭವಿಷ್ಯ ಮತ್ತು ಮಾನವ ಸಂಪನ್ಮೂಲ ಉದ್ಯಮದ ಮುಂದಿರುವ ಸವಾಲುಗಳ ಕುರಿತು ಗೋಷ್ಠಿಯಲ್ಲಿ ಚರ್ಚೆ ನಡೆಯಿತು. ಪೋಲೀಸಿಂಗ್ನಿಂದ ಮಾನವೀಯತೆಯವರೆಗೆ, ಸಂಸ್ಥೆಗಳಲ್ಲಿನ ಉದ್ಯೋಗಿಗಳಿಗೆ ಸೇವೆಗಳು ಹೇಗೆ ಭವಿಷ್ಯದಲ್ಲಿ ಮಹತ್ವ ಪಡೆಯುತ್ತವೆ ಎಂಬುದರ ಕುರಿತು ಆಸಕ್ತಿದಾಯಕ ಚರ್ಚೆಗಳು ನಡೆದವು.

## ತಲೆಗೂದಲು ಸೊಂಪಾಗಿ ಬೆಳೆಯಲು ಇದೇ ಬೆಸ್ಟ್

### ಬ್ಯೂಟಿ ಟಿಪ್ಸ್



ಕೂದಲಿಗೆ ಎಣ್ಣೆ ಹಚ್ಚುವುದೆಂದರೆ ನಿಮಗೆ ಉದಾಸೀನವೇ, ಎಣ್ಣೆ ಹಾಕಿದರೆ ತಲೆನೋವು, ತಲೆಭಾರ ಎನ್ನುತ್ತೀರೇ ಈ ತಪ್ಪು ಕಲ್ಪನೆ ಬಿಟ್ಟು ಆರೋಗ್ಯದ ದೃಷ್ಟಿಯಿಂದ ಯೋಚಿಸಿ. ಉಗುರು ಬೆಚ್ಚಗಿನ ಬಿಸಿಯ ಎಣ್ಣೆಯಲ್ಲಿ ಮಸಾಜ್ ಮಾಡುವುದರಿಂದ ಅದ್ಭುತ ಪ್ರಯೋಜನಗಳಿವೆ ಇದರಿಂದ ರಕ್ತ ಸಂಚಾರ ಸರಾಗವಾಗಿ ನಡೆದು ಕೂದಲಿಗೆ ಪೋಷಕಾಂಶ ದೊರೆಯುತ್ತದೆ. ಕೂದಲು ಬಲಗೊಂಡು ವೇಗವಾಗಿ ಬೆಳೆಯುತ್ತದೆ. ಶಾಂಪೂ ಮತ್ತು ಕಂಡಿಷನರ್ ಕೆಲವೊಮ್ಮೆ ನೆತ್ತಿಯ ಚರ್ಮಕ್ಕೆ ಹಾನಿ ಮಾಡಬಹುದು. ಅದರೆ ಎಣ್ಣೆಯ ಮಸಾಜ್ ಅದನ್ನು ಸರಿಪಡಿಸುತ್ತದೆ. ನೆತ್ತಿಯ ಮೇಲೆ ಕಾಣಿಸಿಕೊಳ್ಳುವ ತಲೆಹೊಟ್ಟು ಸಮಸ್ಯೆಯನ್ನೂ ಇದು ನಿವಾರಿಸುತ್ತದೆ. ನೆತ್ತಿಯಲ್ಲಿರುವ ಸೆಬಾಸಿಯಸ್ ಗ್ರಂಥಿಗಳು ನೈಸರ್ಗಿಕ ಎಣ್ಣೆ ಉತ್ಪಾದನೆಗೆ ಉತ್ತೇಜನ ನೀಡುತ್ತವೆ. ಇದರಿಂದ ತಲೆಹೊಟ್ಟು ನಿವಾರಣೆಯಾಗುತ್ತದೆ. ಬಿಸಿ ಎಣ್ಣೆಯಿಂದ ನಿಮ್ಮ ತಲೆ ಹಾಗೂ ಕೂದಲಿನ ಮೇಲೆ ರಕ್ಷಣಾತ್ಮಕ ಪೊರೆ ರೂಪಗೊಂಡು ಇದು ಸೂರ್ಯನ ಯುವಿ ಕಿರಣಗಳಿಂದ ಕೂದಲಿಗೆ ಹಾನಿ ಆಗದಂತೆ ತಡೆಯುತ್ತದೆ. ಕೂದಲು ಒಣಗದಂತೆ ನೋಡಿಕೊಳ್ಳುತ್ತದೆ. ಕವಲೊಡೆಯುವುದು ನಿಂತು, ಹೊಳಪು ಪಡೆದುಕೊಳ್ಳುತ್ತದೆ. ಬಿಸಿ ಎಣ್ಣೆ ರಾತ್ರಿ ಹಾಕಿ ಬೆಳಿಗ್ಗೆ ತಲೆ ಸ್ನಾನ ಮಾಡುವುದು ಉತ್ತಮ ವಿಧಾನ. ಇಲ್ಲವಾದರೆ ಕನಿಷ್ಠ 4 ಗಂಟೆ ಹೊತ್ತು ಎಣ್ಣೆ ತಲೆಯಲ್ಲಿರಲಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಮನೆಯಲ್ಲಿ ಸಂತಸದ ವಾತಾವರಣ, ವೃತ್ತಿಯಲ್ಲಿ ಕೆಲಸದ ಒತ್ತಡಗಳು ಹೆಚ್ಚಾಗಬಹುದು, ಹೊಟೇಲ್ ಉದ್ಯಮಿಗಳಿಗೆ ಹೆಚ್ಚಿನ ಆದಾಯ.

**ವೃಷಭ:** ಖಾದಿಯ ವಸ್ತ್ರ ವ್ಯಾಪಾರಿಗಳಿಗೆ ಲಾಭ, ಜೀವನದಲ್ಲಿನ ಅಡೆತಡೆಗಳು ದೂರವಾಗುತ್ತದೆ. ಅವಸರದಲ್ಲಿ ತೆಗೆದುಕೊಂಡ ಹೆಜ್ಜೆ ಕಗ್ಗಂಟಾಗಬಹುದು.

**ಮಿಥುನ:** ವೈಮನಸ್ಯ ಉಂಟಾಗಬಹುದು, ಕೆಲಸ ಖಾಯಂ ಆಗುವುದು, ಮೌನದಿಂದ ಸಮಸ್ಯೆಗಳು ಪರಿಹಾರವಾಗುತ್ತದೆ

**ಕಟಕ:** ದೂರ ಪ್ರಯಾಣ ಸಾಧ್ಯತೆ, ಉನ್ನತ ವ್ಯಕ್ತಿಗಳ ಭೇಟಿ, ಋತುಮಾನದ ಕಾಯಿಲೆಗಳ ಬಗ್ಗೆ ಎಚ್ಚರ.

**ಸಿಂಹ:** ಆಸ್ತಿ ಸಮಸ್ಯೆಗಳು ಪರಿಹಾರವಾಗುತ್ತವೆ, ಮೂಳೆ ಸಮಸ್ಯೆ ಎದುರಾಗಬಹುದು, ವೃತ್ತಿಯಲ್ಲಿ ಆಡಳಿತಾತ್ಮಕ ಪರೀಕ್ಷೆ ತೆಗೆದುಕೊಳ್ಳಬಹುದು.

**ಕನ್ಯಾ:** ಯೋಗ್ಯ ಸಂಗಾತಿ ದೊರೆಯುವ ಸಾಧ್ಯತೆ, ಆದಾಯವು ಮಂದ ಗತಿಯಲ್ಲಿರುತ್ತದೆ, ಕಬ್ಬಿಣ ತಯಾರಿಸುವವರಿಗೆ ಬೇಡಿಕೆ.

**ತುಲಾ:** ಬೇರೆ ಇಲಾಖೆಗೆ ವರ್ಗಾವಣೆ ಸಾಧ್ಯತೆ, ಭೂಮಿ ಖರೀದಿಸಬಹುದು, ಕೆಲಸದ ಹೊರೆಯಿಂದ ತೊಂದರೆ

**ವೃಶ್ಚಿಕ:** ಹಿತಶತ್ರುಗಳು ಹೆಚ್ಚಾಗುವ ಸಾಧ್ಯತೆ, ಸಂಗಾತಿಯ ಬೆಂಬಲವಿರುತ್ತದೆ, ವಸ್ತ್ರಾಭರಣ, ಗೃಹೋಪಯೋಗಿ ಸಾಮಗ್ರಿಗಳ ಖರೀದಿ.

**ಧನಸ್ಸು:** ಹಿರಿಯರ ಆರೋಗ್ಯದಲ್ಲಿ ವ್ಯತ್ಯಾಸ, ಹೊಸ ಯೋಜನೆ ಸಫಲವಾಗಲಿದೆ, ತಂದೆಯಿಂದ ಸಹಕಾರ ದೊರೆಯುತ್ತದೆ.

**ಮಕರ:** ಸ್ಥಿತಪ್ರಜ್ಞರಾಗಿರುವುದು ಒಳ್ಳೆಯದು, ಯಂತ್ರೋಪಕರಣ ಉದ್ಯಮಿಗಳಿಗೆ ಅನುಕೂಲ, ಸಂಸಾರದಲ್ಲಿ ಸಾಮರಸ್ಯವಿರುತ್ತದೆ.

**ಕುಂಭ:** ಹೂಡಿಕೆ ಮಾರುಕಟ್ಟೆಯಿಂದ ಲಾಭ, ಆರೋಗ್ಯದ ಬಗ್ಗೆ ಕಾಳಜಿ ವಹಿಸಿ, ಪಾಲುದಾರಿಕೆಯಲ್ಲಿ ಲಾಭವಿರುತ್ತದೆ.

**ಮೀನ:** ಸಾಮಾಜಿಕ ಕಾರ್ಯಗಳಲ್ಲಿ ಭಾಗಿ, ಅತಿಯಾದ ಕೆಲಸದಿಂದ ದೈಹಿಕ ಆಯಾಸ, ದೂರ ಪ್ರಯಾಣಿಸುವಾಗ ಎಚ್ಚರಿಕೆಯಿಂದಿರಿ.

## ವಿಶ್ವ ಅಪ್ಪಂದಿರ ದಿನ




ಹುಟ್ಟಿದಾಗಿನಿಂದ ಮಕ್ಕಳ ಜೀವನವನ್ನು ಒಂದು ದಡ ಮುಟ್ಟಿಸುವವರೆಗೂ ಅವರಿಗಾಗಿ ತನ್ನ ಸುಖವನ್ನೇ ತ್ಯಾಗ ಮಾಡುವ ಅಪ್ಪಂದಿರಿಗೆ ಮೀಸಲಾದ ದಿನ ಫಾದರ್ಸ್ ಡೇ. ಪ್ರತಿ ವರ್ಷ ವಿಶ್ವಾದ್ಯಂತ ಜೂನ್ ತಿಂಗಳ 3ನೇ ವಾರದಂದು ತಂದೆಯಂದಿರ ದಿನ ಆಚರಿಸಲಾಗುತ್ತದೆ. ಈ ಬಾರಿ ಜೂನ್ 16 ಭಾನುವಾರ ಅಪ್ಪಂದಿರ ದಿನವನ್ನು ಆಚರಿಸಲಾಗುತ್ತಿದೆ. ತಂದೆಯಂದಿರ ದಿನ ಆಚರಿಸಲು ಎಲ್ಲಾ ಮಕ್ಕಳು ಕಾತರದಿಂದ ಕಾಯುತ್ತಿದ್ದಾರೆ. ಜೀವನ ಪೂರ್ತಿ ತಮಗಾಗಿ ದುಡಿದ ಅಪ್ಪನಿಗೆ ಈ ದಿನ ಅವರಿಗೆ ಇಷ್ಟವಾದ ತಿನಿಸುಗಳನ್ನು ತಿನಿಸುವ ಮೂಲಕ, ಅವರಿಗೆ ಇಷ್ಟವಾದ ಅಡುಗೆ ಮಾಡಿಕೊಡುವ ಮೂಲಕ ಅಪ್ಪ ಇಷ್ಟಪಡುವ ಸ್ಥಳಗಳಿಗೆ ಕರೆದುಕೊಂಡು ಹೋಗುವ ಮೂಲಕ, ಮೆಚ್ಚುವ ಗಿಫ್ಟ್‌ಗಳನ್ನು ನೀಡುವ ಮೂಲಕ ವಿಶೇಷವಾಗಿಸೋಣ. ಒಂದು ವೇಳೆ ನೀವು ನಿಮ್ಮ ಸೂಪರ್ ಹೀರೋಗೆ ಗಿಫ್ಟ್ ಕೊಡಬೇಕು ಎಂದುಕೊಂಡಿದ್ದಲ್ಲಿ ಇಲ್ಲಿ ಕೆಲವು ಐಡಿಯಾಗಳಿವೆ. ನೀವೇ ತಯಾರಿಸಿದ ಕಾರ್ಡ್ಗಳು: ನಿಮ್ಮ ತಂದೆಗೆ ನೀವೇ ನಿಮ್ಮ ಕೈಯಾರೆ ತಯಾರಿಸಿದ ಕಾರ್ಡ್ ತಯಾರಿಸಿ ಅವರಿಗೆ ಫಾದರ್ಸ್ ಡೇ ಶುಭ ಕೋರಬಹುದು. ಆ ಕಾರ್ಡ್ನಲ್ಲಿ ಅಪ್ಪನಿಗಾಗಿ ಒಂದು ಪುಟ್ಟ ಕವಿತೆ ಬರೆಯಿರಿ. ಅವರಿಗಾಗಿ ಒಂದು ಸಂದೇಶ ಬರೆಯಿರಿ. ನಿಮಗೆ ನಿಮ್ಮ ತಂದೆ ಎಷ್ಟು ಸ್ಪೆಷಲ್ ಅನ್ನೋದನ್ನು ಅವರಿಗೆ ಮನವರಿಕೆ ಮಾಡಿಕೊಡಿ.

**ಟಿ ಶರ್ಟ್:** ನೀವೇ ಆಯ್ಕೆ ಮಾಡಿದ ಟಿ ಶರ್ಟ್ ಮೇಲೆ ನಿಮ್ಮ ತಂದೆ ಜೊತೆಗಿನ ಫೋಟೋ ಪ್ರಿಂಟ್ ಮಾಡಿಸಿ, ಯಾವುದಾದರೂ ಕೋಟ್ಸ್ ಪ್ರಿಂಟ್ ಮಾಡಿಸಿ ಅದನ್ನು ನಿಮ್ಮ ಅಪ್ಪನಿಗೆ ಗಿಫ್ಟ್ ಆಗಿ ಕೊಡಬಹುದು.

**ಅಡುಗೆ ಮಾಡಿಕೊಡಿ:** ಎಲ್ಲರಿಗೂ ಒಂದಲ್ಲಾ ಒಂದು ಫುಡ್ ಇಷ್ಟವಿರುತ್ತದೆ. ಒತ್ತಡಗಳ ನಡುವೆ ನಿಮ್ಮ ತಂದೆ ಆ ತಿಂಡಿಯನ್ನು ಟೇಸ್ಟ್ ಮಾಡಬೇಕು ಎಂದುಕೊಂಡಿದ್ದರೆ ಫಾದರ್ಸ್ ಡೇ ಅದಕ್ಕೆ ಸರಿ ಹೊಂದುವ ದಿನ. ಇದರ ಜೊತೆ ನಿಮ್ಮ ತಂದೆಗೆ ಒಂದು ಚಾಕೊಲೇಟ್ ಕೂಡಾ ಗಿಫ್ಟ್ ನೀಡಬಹುದು.

**ಹೆಡ್ ಫೋನ್:** ಇತ್ತೀಚಿನ ದಿನಗಳಲ್ಲಿ ಬಹುತೇಕ ಎಲ್ಲಾ ಅಪ್ಪಂದಿರು ಮೊಬೈಲ್ ಬಳಸುತ್ತಾರೆ. ಕೆಲವರು ಹಾಡು ಕೇಳಿದರೆ ಕೆಲವರು ಪಾಡ್ಕಾಸ್ಟ್ ಮೂಲಕ ಕಥೆಗಳು, ಕಾದಂಬರಿ, ಪ್ರಮುಖ ಸುದ್ದಿಗಳನ್ನು ಕೇಳಲು ಇಷ್ಟಪಡುತ್ತಾರೆ. ಆದ್ದರಿಂದ ನಿಮ್ಮ ತಂದೆಗೆ ಒಂದೊಳ್ಳೆ ಹೆಡ್ ಫೋನ್ ಉಡುಗೊರೆಯನ್ನಾಗಿ ಕೊಡಿ.

**ಸನ್ ಗ್ಲಾಸ್:** ಕೆಲಸ, ವಾಕಿಂಗ್, ದೂರದ ಪ್ರಯಾಣ.. ಹೀಗೆ ಅಪ್ಪಂದಿರು ಮನೆಯಲ್ಲಿ ಕೂರದೆ ಹೊರಗೆ ಹೆಚ್ಚು ಓಡಾಡುತ್ತಾರೆ. ಬಿಸಿಲಿನ ಧಗೆಗೆ ತಂಪಾಗಲು ಅಥವಾ ವಾಹನಗಳಲ್ಲಿ ಪ್ರಯಾಣಿಸುವಾಗ ಕಣ್ಣಿಗೆ ಧೂಳು ಬೀಳದಂತೆ ತಡೆಯಲು ನಿಮ್ಮ ತಂದೆಗೆ ಒಂದು ಸನ್ ಗ್ಲಾಸ್ ಗಿಫ್ಟ್ ಮಾಡಿ.

# ಪಕ್ಷ ಬಿಟ್ಟುಹೋದವರನ್ನ ಮತ್ತೆ ಸೇರಿಸಲ್ಲ; ಉದ್ಧವ್ ಠಾಕ್ರೆ ಗುಡುಗು



**ಮುಂಬೈ:** ಲೋಕಸಭಾ ಚುನಾವಣೆ ಬಳಿಕ ಮೊದಲ ಬಾರಿಗೆ ಮಹಾ ವಿಕಾಸ್ ಅಘಾಡಿ ನಾಯಕರು ಜಂಟಿ ಸುದ್ದಿಗೋಷ್ಠಿ ನಡೆಸಿದರು. ಲೋಕಸಭಾ ಚುನಾವಣೆಯಲ್ಲಿ ಎಂವಿಎ ಮೈತ್ರಿ ಕೂಟ ಬೆಂಬಲಿಸಿದ್ದಕ್ಕಾಗಿ ಮಹಾರಾಷ್ಟ್ರ ಜನತೆಗೆ ಧನ್ಯವಾದ ಅರ್ಪಿಸಿದರು. ಜೊತೆಗೆ ಶಿವಸೇನೆ ಮುಖ್ಯಸ್ಥ ಉದ್ಧವ್ ಠಾಕ್ರೆ ಹಾಗೂ ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್ ಮುಂಬರುವ ವಿಧಾನಸಭಾ ಚುನಾವಣೆಯಲ್ಲೂ ಮೈತ್ರಿ ಮುಂದುವರಿಸುವ ಸುಳಿವು ನೀಡಿದರು. ಇದೇ ವೇಳೆ ಕೇಂದ್ರ ಸರ್ಕಾರದ ವಿರುದ್ಧ ಜಂಟಿಯಾಗಿ ವಾಗ್ದಾಳಿ ನಡೆಸಿದರು. ಶಿವಸೇನೆ ಮುಖ್ಯಸ್ಥ ಉದ್ಧವ್ ಠಾಕ್ರೆ, ಮಾತನಾಡಿ, 2022ರಲ್ಲಿ ತಮ್ಮ ಪಕ್ಷವನ್ನು ತೊರೆದು ಏಕನಾಥ್ ಶಿಂಧೆ ನೇತೃತ್ವದ ಪಾಳಯ ಸೇರಿ ಶಿವಸೇನೆ ಸರ್ಕಾರದ ವಿಭಜನೆಗೆ ಕಾರಣವಾದ ಶಾಸಕರನ್ನು ಪಕ್ಷಕ್ಕೆ ವಾಪಸ್ ತೆಗೆದುಕೊಳ್ಳುವುದಿಲ್ಲ. ಮಹಾ ವಿಕಾಸ್ ಅಘಾಡಿ ಮೈತ್ರಿಕೂಟ ವಿಧಾನ ಸಭೆಯಲ್ಲಿ ಒಟ್ಟಾಗಿ ಸ್ಪರ್ಧಿಸುತ್ತದೆ. ಬಿಜೆಪಿ ಎಷ್ಟು ಪೊಳ್ಳು ಎಂಬುದನ್ನು ರಾಜ್ಯದ ಜನರು ತೋರಿಸಿದ್ದಾರೆ. ಲೋಕಸಭಾ ಚುನಾವಣೆಯಿಂದ ಪ್ರಾರಂಭವಾಗಿರುವ ಮಹಾ ವಿಕಾಸ್ ಅಘಾಡಿ ಮೈತ್ರಿ ಕೂಟದ ಗೆಲುವು ಮುಂಬರುವ ಚುನಾವಣೆಗಳಲ್ಲೂ ಮುಂದುವರಿಯುತ್ತದೆ ಎಂದು ಹೇಳಿದ್ದಾರೆ. ಇನ್ನೂ ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್ ಮಾತನಾಡಿ, ಎನ್‌ಡಿಎ ಮೈತ್ರಿ ಕೂಟದ ಭಾಗವಾಗಿರುವ ತಮ್ಮ ಸೋದರಳಿಯ ಅಜಿತ್ ಪವಾರ್ ಅವರನ್ನು ಮತ್ತೆ ತಮ್ಮ ಪಕ್ಷಕ್ಕೆ ತೆಗೆದುಕೊಳ್ಳುವ ಯಾವುದೇ ಸಾಧ್ಯತೆಗಳಿಲ್ಲ ಎಂದು ಹೇಳಿದರು. ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಮಹಾ ವಿಕಾಸ್ ಅಘಾಡಿ ಕೂಟ ಎನ್‌ಡಿಎ ಅಭ್ಯರ್ಥಿಗಳಿಗೆ ಪ್ರಬಲ ಪೈಪೋಟಿ ನೀಡಿದೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲೂ ಮೈತ್ರಿ ಕೂಟವನ್ನು ಎದುರಿಸುವ ವಿಶ್ವಾಸವಿದೆ ಎಂದರು.

# ಇಂದಿರಾ ಗಾಂಧಿ ಭಾರತ ಮಾತೆ: ಕೇಂದ್ರ ಸಚಿವ ಸುರೇಶ್ ಗೋಪಿ ಬಣ್ಣನೆ



**ನವದೆಹಲಿ:** ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರು 'ಭಾರತ ಮಾತೆ' ಹಾಗೂ ಕಾಂಗ್ರೆಸ್‌ನ ಮಾಜಿ ಸಿಎಂ ದಿವಂಗತ ಕೆ.ಕರುಣಾಕರನ್ 'ಧೈರ್ಯಶಾಲಿ ಆಡಳಿತಗಾರ' ಎಂದು ಕೇಂದ್ರ ಸಚಿವ ಸುರೇಶ್ ಗೋಪಿ ನೀಡಿರುವ ಹೇಳಿಕೆ ಭಾರಿ ಸದ್ದು ಮಾಡುತ್ತಿದೆ. ಇಲ್ಲಿನ ಪುಂಕುನ್ನಂನಲ್ಲಿರುವ ಕರುಣಾಕರನ್ ಅವರ ಸ್ಮಾರಕ 'ಮುರಳಿ ಮಂದಿರಂ'ಗೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರುಣಾಕರನ್ ಮತ್ತು ಮಾರ್ಕ್ಸ್‌ವಾದಿ ಇ.ಕೆ.ನಾಯನಾರ್ ನನ್ನ ರಾಜಕೀಯ ಗುರುಗಳು ಎಂದು ಹೇಳಿದ್ದಾರೆ. ಕರುಣಾಕರನ್ ಸ್ಮಾರಕಕ್ಕೆ ಭೇಟಿ ನೀಡಿದ ಬಗ್ಗೆ ಯಾವುದೇ ರಾಜಕೀಯ ಅರ್ಥವನ್ನು ಕಲ್ಪಿಸಬೇಡಿ. ನನ್ನ ಗುರುಗಳಿಗೆ ಗೌರವ ಸಲ್ಲಿಸಲು ಇಲ್ಲಿಗೆ ಬಂದಿದ್ದೇನೆ ಎಂದು ಬಿಜೆಪಿ ನಾಯಕ ಸ್ಪಷ್ಟಪಡಿಸಿದ್ದಾರೆ. ಸುರೇಶ್ ಗೋಪಿ ಅವರು ತ್ರಿಶೂರ್ ಲೋಕಸಭಾ ಕ್ಷೇತ್ರದಲ್ಲಿ ಕೇರಳ ಕೇರಳ ಸಿಎಂ ಆಗಿದ್ದ ದಿ. ಕರುಣಾಕರನ್ ಅವರ ಪುತ್ರ ಕಾಂಗ್ರೆಸ್ ಅಭ್ಯರ್ಥಿ ಮುರಳೀಧರನ್ ಅವರನ್ನು ಮಣಿಸಿದ್ದರು. 74,686 ಮತಗಳ ಅಂತರದಿಂದ ಸುರೇಶ್ ಗೋಪಿ ಗೆಲುವು ದಾಖಲಿಸಿದ್ದರು.

# ದಕ್ಷಿಣ ಆಫ್ರಿಕಾ ಅಧ್ಯಕ್ಷರಾಗಿ ಮತ್ತೆ ಸಿರಿಲ್ ರಾಮಫೋಸಾ ಆಯ್ಕೆ



**ಜೊಹಾನಸ್ಬರ್ಗ್:** ದಕ್ಷಿಣ ಆಫ್ರಿಕಾದ ಅಧ್ಯಕ್ಷರಾಗಿ ಸಿರಿಲ್ ರಾಮಫೋಸಾ ಮತ್ತೊಮ್ಮೆ ಆಯ್ಕೆಯಾಗಿದ್ದಾರೆ. ಆಫ್ರಿಕನ್ ನ್ಯಾಷನಲ್ ಕಾಂಗ್ರೆಸ್ (ಎಎನ್ಸಿ) ಮತ್ತು 'ಡೆಮಾಕ್ರಟಿಕ್ ಅಲಯನ್ಸ್'(ಡಿಎ) ಪಕ್ಷ ತಮ್ಮ ನಡುವಿನ ಪೈಪೋಟಿಯನ್ನು ಬದಿಗೊತ್ತಿ ಸಮ್ಮಿಶ್ರ ಸರ್ಕಾರ ರಚಿಸುವ ಐತಿಹಾಸಿಕ ಒಪ್ಪಂದ ಮಾಡಿಕೊಂಡ ಬಳಿಕ, ಸಿರಿಲ್ ರಾಮಫೋಸಾ ಎರಡನೇ ಬಾರಿ ಮರು ಆಯ್ಕೆಯಾಗಿದ್ದಾರೆ. ಕಳೆದ ತಿಂಗಳು ನಡೆದ ಚುನಾವಣೆಯಲ್ಲಿ ರಾಮಫೋಸಾ ಅವರ ಎಎನ್ಸಿ ಪಕ್ಷವು 30 ವರ್ಷಗಳಲ್ಲಿ ಮೊದಲ ಬಾರಿಗೆ ಸಂಸತ್ತಿನಲ್ಲಿ ತನ್ನ ಬಹುಮತವನ್ನು ಕಳೆದುಕೊಂಡಿತ್ತಾದರೂ, ಶೇ 40ರಷ್ಟು ಮತಗಳನ್ನು ಪಡೆದಿತ್ತು. ಡೆಮಾಕ್ರಟಿಕ್ ಅಲಯನ್ಸ್ (ಡಿ.ಎ) ಶೇ 22ರಷ್ಟು ಮತಗಳನ್ನು ಪಡೆದು ಎರಡನೇ ಸ್ಥಾನ ಪಡೆಯಿತು. ರಾಷ್ಟ್ರೀಯ ಏಕತೆಯ ಹೊಸ ಸರ್ಕಾರವು ರಾಮಫೋಸಾ ನೇತೃತ್ವದ ಎಎನ್ಸಿ, ಡಿ.ಎ ಹಾಗೂ ಸಣ್ಣ ಪಕ್ಷಗಳನ್ನು ಒಳಗೊಂಡಿದೆ. 71 ವರ್ಷದ ರಾಮಫೋಸಾ ಅವರು ಶುಕ್ರವಾರ ನಡೆದ ಮತದಾನದಲ್ಲಿ ಆರ್ಥಿಕ ಸ್ವಾತಂತ್ರ್ಯ ಹೋರಾಟಗಾರರ (ಎಎಫ್‌ಎಫ್) ನಾಯಕ ಜೂಲಿಯಸ್ ಮಲೆಮಾ ವಿರುದ್ಧ ಜಯಗಳಿಸಿದರು. ರಾಮಫೋಸಾ 283 ಮತಗಳನ್ನು ಪಡೆದರೆ, ಮಲೆಮಾ 44 ಮತಗಳನ್ನು ಪಡೆದರು.

# ಅಮೆರಿಕಕ್ಕೆ ಸೌದಿ ಶಾಕ್, ಪೆಟ್ರೋ ಡಾಲರ್ ಒಪ್ಪಂದಕ್ಕೆ ಗುಡ್‌ಬೈ

**ರಿಯಾದ್:** ಮಹತ್ವದ ವಿದ್ಯಮಾನದಲ್ಲಿ ಸೌದಿ ಅರೇಬಿಯಾ ಅಮೆರಿಕದ ಜೊತೆ ಮಾಡಿಕೊಂಡಿದ್ದ 50 ವರ್ಷಗಳ ಹಳೆಯ ಪೆಟ್ರೋಡಾಲರ್ ಒಪ್ಪಂದವನ್ನು ಕೊನೆಗೊಳಿಸಲು ನಿರ್ಧರಿಸಿದೆ.

ಜೂನ್ 8, 1974 ರಂದು ಸಹಿ ಹಾಕಿದ್ದ ಒಪ್ಪಂದ ಜೂನ್ 9 ರಂದು ಮುಕ್ತಾಯಗೊಂಡಿದ್ದು ಈಗ ಸೌದಿ ಅರೇಬಿಯಾ ಈ ಒಪ್ಪಂದವನ್ನು ನವೀಕರಿಸದೇ ಇರುವ ತೀರ್ಮಾನವನ್ನು ತೆಗೆದುಕೊಂಡಿದೆ.'ಪೆಟ್ರೋಡಾಲರ್' ಎಂಬ ಪದವು ಜಾಗತಿಕ ಕಚ್ಚಾ ತೈಲ ವಹಿವಾಟುಗಳಿಗೆ ಕರೆನ್ಸಿಯಾಗಿ ಅಮೆರಿಕದ ಡಾಲರ್ ಬಳಕೆಯನ್ನು ಸೂಚಿಸುತ್ತದೆ. ಈ ಒಪ್ಪಂದದ ಪ್ರಕಾರ ವಿಶ್ವದ ಯಾವುದೇ ದೇಶವೂ ಸೌದಿ ಜೊತೆ ಕಚ್ಚಾ ತೈಲ ಖರೀದಿಸಬೇಕಾದರೆ ಡಾಲರ್ ಮೂಲಕವೇ ಖರೀದಿಸಬೇಕಿತ್ತು.ಅಮೆರಿಕದ ಡಾಲರ್ ಅವಲಂಬನೆ ತಪ್ಪಿಸಲು ಈಗ ದೇಶಗಳು ಸ್ಥಳೀಯ ಕರೆನ್ಸಿ ಜೊತೆ ವ್ಯವಹಾರ ನಡೆಸಲು ಆರಂಭಿಸಿದೆ. ಈಗಾಗಲೇ ಭಾರತ ಕೆಲ ದೇಶಗಳಲ್ಲಿ ರೂಪಾಯಿ ಮೂಲಕ ವ್ಯಾಪಾರ ನಡೆಸುತ್ತಿದೆ. ಅದೇ ರೀತಿ ಚೀನಾ ಯುವಾನ್ ಮೂಲಕ ನಡೆಸುತ್ತಿದೆ. ತೈಲ ಉತ್ಪಾದನೆ ಮಾಡುವ ಒಪೆಕ್ ರಾಷ್ಟ್ರಗಳ ಪೈಕಿ ದೊಡ್ಡ ದೇಶವಾದ ಸೌದಿ ಅರೇಬಿಯಾ ಪೆಟ್ರೋಡಾಲರ್ ಒಪ್ಪಂದವನ್ನು ನವೀಕರಿಸದ ಕಾರಣ ಡಾಲರ್ ಬೆಲೆ ಮತ್ತಷ್ಟು ಕುಗ್ಗಲಿದೆ.



**ಏನಿದು ಒಪ್ಪಂದ?:** ಅಮೆರಿಕ ಅಧ್ಯಕ್ಷ ರಿಚರ್ಡ್ ನಿಕ್ಸನ್ ಮತ್ತು ವಿದೇಶಾಂಗ ಕಾರ್ಯದರ್ಶಿ ಹೆನ್ರಿ ಕಿಸ್ಸಿಂಜರ್ ಮತ್ತು ಸೌದಿ ರಾಜಮನೆತನದ ಜೊತೆ ಸರಣಿ ಮಾತುಕತೆ ನಡೆದು ಜೂನ್ 8, 1974 ರಂದು ಒಪ್ಪಂದಕ್ಕೆ ಸಹಿ ಹಾಕಿದ ನಂತರ ಪೆಟ್ರೋಡಾಲರ್ ವ್ಯವಸ್ಥೆಯನ್ನು ಸ್ಥಾಪಿಸಲಾಯಿತು.

**ಸೌದಿ ಅರೇಬಿಯಾ ಸಹಿ ಹಾಕಿದ್ದು ಯಾಕೆ?:** ಆಟೋಮೊಬೈಲ್ ಕ್ಷೇತ್ರ ತೆರೆದುಕೊಳ್ಳುತ್ತಿದ್ದಂತೆ ಅಮೆರಿಕ ಮತ್ತು ಬ್ರಿಟಿಷರು ತೈಲ ನಿಕ್ಷೇಪಗಳನ್ನು ಹುಡುಕುತ್ತಿದ್ದರು. ಈ ಸಂದರ್ಭದಲ್ಲಿ ಭೂಮಿಯಿಂದ ತೈಲವನ್ನು ಕೊರೆಯುವ ತಂತ್ರಜ್ಞಾನ ಈ ದೇಶಗಳಿಗೆ ಮಾತ್ರ ತಿಳಿದಿತ್ತು. 1938ರಲ್ಲಿ ಅಮೆರಿಕದ ಕಂಪನಿ ಸೌದಿ ಅರೇಬಿಯಾದಲ್ಲಿ ತೈಲ ಕೊರೆಯಲು ಆರಂಭಿಸಿತು. ಸೌದಿ ಅರೇಬಿಯಾಗೆ ತಮ್ಮ ಬಳಿ ಇದ್ದ ಈ ಅಮೂಲ್ಯ ಸಂಪತ್ತು ಮುಂದೆ ವಿಶ್ವವನ್ನೇ ಆಳುತ್ತದೆ ಎಂಬ ಕಲ್ಪನೆ ಸಹ ಇರಲಿಲ್ಲ. ಈ ಸಂದರ್ಭದಲ್ಲಿ ಭೂಮಿಯಿಂದ ಕಚ್ಚಾ ತೈಲವನ್ನು ತೆಗೆದು ಸಂಸ್ಕರಿಸುವ ತಂತ್ರಜ್ಞಾನ ಅಮೆರಿಕ ಮತ್ತು ಬ್ರಿಟಿಷ್ ಕಂಪನಿಗಳಿಗೆ ಮಾತ್ರ ತಿಳಿದಿತ್ತು.

ಸೌದಿಯಲ್ಲಿರುವ ಎಲ್ಲಾ ತೈಲ ಕೊರೆಯುವ ಬಾವಿಗಳಿಗೆ ನಾವು ಸಂಪೂರ್ಣ ರಕ್ಷಣೆ ನೀಡುತ್ತೇವೆ. ಇದಕ್ಕೆ ಪ್ರತಿಯಾಗಿ ನೀವು ಎಲ್ಲಾ ದೇಶಗಳ ಜೊತೆ ತೈಲ ವ್ಯವಹಾರ ಮಾಡಲು ಡಾಲರ್ ಅನ್ನು ಬಳಸಬೇಕು ಎಂದು ಷರತ್ತನ್ನು ಅಮೆರಿಕ ವಿಧಿಸುತ್ತದೆ. ಬೇರೆ ದೇಶಗಳು ದಾಳಿ ಮಾಡಬಹುದು ಎಂಬ ಭಯದಿಂದ ಸೌದಿ ಈ ಷರತ್ತನ್ನು ಒಪ್ಪಿಕೊಂಡು ಒಪ್ಪಂದಕ್ಕೆ ಸಹಿ ಹಾಕುತ್ತದೆ. ಷರತ್ತಿನಿಂದಾಗಿ ಕಚ್ಚಾ ತೈಲ ವ್ಯವಹಾರ ಡಾಲರ್‌ನಲ್ಲೇ ನಡೆಯುತ್ತದೆ. ಪರಿಣಾಮ ವಿಶ್ವದಲ್ಲೇ ಡಾಲರ್ ವಿಶ್ವದ ಕರೆನ್ಸಿಯಾಗಿ ಬದಲಾಗುತ್ತದೆ.

# ಜಿ7 ಶೃಂಗಸಭೆ: ಮೋದಿ, ಟ್ರೂಡೊ ಸಂವಾದ



**ಟೊರಂಟೊ:** ಇಟಲಿಯ ಅಪುಲಿಯಾದಲ್ಲಿ ನಡೆಯುತ್ತಿರುವ ಜಿ7 ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಕೆನಡಾ ಪ್ರಧಾನಿ ಜಸ್ಟಿನ್ ಟ್ರೂಡೊ ಜತೆ ಸಂಕ್ಷಿಪ್ತ ಸಂವಾದ ನಡೆಸಿದರು ಎಂದು ವರದಿಯಾಗಿದೆ.

ಖಾಲಿಸ್ತಾನ್ ಪ್ರತ್ಯೇಕತಾವಾದಿ ಹರ್ದೀಪ್ ಸಿಂಗ್ ನಿಜ್ಜಾರ್ ಹತ್ಯೆಯಲ್ಲಿ ಭಾರತದ ಏಜೆಂಟರ ಸಂಪರ್ಕದ ಬಗ್ಗೆ ವಿಶ್ವಾಸಾರ್ಹ ಮಾಹಿತಿಯಿದೆ ಎಂದು ಕಳೆದ ವರ್ಷದ ಸೆಪ್ಟೆಂಬರ್ 18ರಂದು ಟ್ರೂಡೊ ಕೆನಡಾ ಸಂಸತ್ತಿನಲ್ಲಿ ಆರೋಪಿಸಿದ ಬಳಿಕ ಉಭಯ ಮುಖಂಡರ ಪ್ರಥಮ ಭೇಟಿ ಇದಾಗಿದೆ.

ಈ ಭೇಟಿ ಅಧಿಕೃತ ವೇಳಾಪಟ್ಟಿಯಲ್ಲಿ ಇರಲಿಲ್ಲ, ಇಬ್ಬರು ಮುಖಂಡರು(ಇಬ್ಬರ ಮುಖದಲ್ಲೂ ನಗು ಇಲ್ಲದ) ಒಟ್ಟಿಗೆ ಇರುವ ಫೋಟೋವನ್ನು ಮೋದಿ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ಪ್ರಧಾನಿ ಮೋದಿ ಮರು ಆಯ್ಕೆಗೊಂಡಿರುವುದಕ್ಕೆ ಪ್ರಧಾನಿ ಟ್ರೂಡೊ ಅಭಿನಂದಿಸಿದ್ದಾರೆ' ಎಂದು ಕೆನಡಾ ಪ್ರಧಾನಿಯ ಕಾರ್ಯಾಲಯದ ವಕ್ತಾರರು ಹೇಳಿದ್ದಾರೆ.

## ಮೋದಿ ಸರ್ಕಾರ ಪತನ: ಖರ್ಗೆ ಭವಿಷ್ಯ



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿಯವರ ಎನ್ಡಿಎ ನೇತೃತ್ವದ ಸರ್ಕಾರ ಸದ್ಯದಲ್ಲೇ ಪತನವಾಗಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸ್ಫೋಟಕ ಭವಿಷ್ಯ ನುಡಿದಿದ್ದಾರೆ. ಇತ್ತೀಚೆಗೆ ಪಶ್ಚಿಮ ಬಂಗಾಳದ ಸಿಎಂ ಮಮತಾ ಬ್ಯಾನರ್ಜಿ ಅವರೂ ಕೇವಲ 15 ದಿನಗಳಲ್ಲೇ ಎನ್ಡಿಎ ಸಮ್ಮಿಶ್ರ ಸರ್ಕಾರ ಬೀಳಲಿದೆ ಎಂದಿದ್ದರು.

ಇದರ ಬೆನ್ನಲ್ಲೇ ಖರ್ಗೆ, ಶೀಘ್ರವೇ ಈ ಸರ್ಕಾರ ಬೀಳಲಿದ್ದು, ಕಾದು ನೋಡೋಣ ಎಂದಿದ್ದಾರೆ.

ಇನ್ನು ದೇಶದ ಮತದಾರರು ಬಹುಮತದ ಸರ್ಕಾರವನ್ನು ಆಯ್ಕೆ ಮಾಡಿಲ್ಲ. ಆಕಸ್ಮಿಕವಾಗಿ ಬಿಜೆಪಿ ಮೈತ್ರಿಕೂಟವು ಸರ್ಕಾರ ರಚಿಸಿದೆ ಎಂದು ಖಾಸಗಿ ಸುದ್ದಿ ಸಂಸ್ಥೆಗೆ ನೀಡಿರುವ ಸಂದರ್ಶನವೊಂದರಲ್ಲಿ ಖರ್ಗೆ ಅವರು ಹೀಗೆ ಹೇಳಿಕೆ ನೀಡಿರುವುದು ವರದಿಯಾಗಿದೆ.

ಈ ಬಾರಿಯ ಲೋಕಸಭೆ ಚುನಾವಣೆ ಫಲಿತಾಂಶದಲ್ಲಿ ಬಿಜೆಪಿಗೆ ಸ್ಪಷ್ಟ ಬಹುಮತ ಬಾರದ ಹಿನ್ನೆಲೆಯಲ್ಲಿ ಅದು, ಎನ್ಡಿಎ ಮಿತ್ರ ಪಕ್ಷಗಳ ಬೆಂಬಲದೊಂದಿಗೆ ಸರ್ಕಾರ ರಚಿಸಿದೆ. ಆ ಮೂಲಕ ಸತತ 3ನೇ ಬಾರಿಗೆ ನರೇಂದ್ರ ಮೋದಿ ಅವರು ಪ್ರಧಾನಿಯೂ ಆಗಿದ್ದಾರೆ.

## ಮೋದಿ ಸಂಪುಟದಲ್ಲಿದ್ದಾರೆ ಕ್ರಿಮಿನಲ್‌ಗಳು: ಕಾಂಗ್ರೆಸ್



**ನವದೆಹಲಿ:** ಲೋಕಸಭೆ ಚುನಾವಣೆಯಲ್ಲಿ ಸೋತು ಸುಣ್ಣವಾಗಿ ವಿರೋಧ ಪಕ್ಷದ ಸ್ಥಾನದಲ್ಲಿ ಕುಳಿತಿರುವ ಕಾಂಗ್ರೆಸ್, ನರೇಂದ್ರ ಮೋದಿ ಸರ್ಕಾರದ ಸಚಿವ ಸಂಪುಟದ ವಿರುದ್ಧ ಕಿಡಿ ಕಾರಿದೆ.

ಬಿಜೆಪಿ ಸರ್ಕಾರದ ಸಚಿವ ಸಂಪುಟದ ಸದಸ್ಯರಲ್ಲಿ ಬಹುತೇಕರು ಕ್ರಿಮಿನಲ್ಗಳು ಇದ್ದಾರೆ ಎಂದಿರುವ ಕಾಂಗ್ರೆಸ್, ಬಿಜೆಪಿಯ ಸಚಿವರ ಮೇಲೆ ಹತ್ಯೆ, ಹತ್ಯೆಗೆ ಪ್ರಯತ್ನ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯಗಳಂತ ಆರೋಪಗಳನ್ನು ಎದುರಿಸುತ್ತಿದ್ದಾರೆ ಎಂದು ಟೀಕಿಸಿದೆ. ಕಾಂಗ್ರೆಸ್ ರಿಲೀಸ್ ಮಾಡಿರುವ ವಿಡಿಯೋದಲ್ಲಿ, ಇತ್ತೀಚಿಗಷ್ಟೆ ಕೇಂದ್ರ ಸಚಿವ ಸ್ಥಾನ ಅಲಂಕರಿಸುವ ವಿ.ಸೋಮಣ್ಣ ಅವರ ಪುತ್ರನ ವಿರುದ್ಧ ಕೇಳಿ ಬಂದಿರುವ ಆರೋಪವನ್ನು ಪ್ರಸ್ತಾಪಿಸಿದೆ. ಅಷ್ಟೇ ಅಲ್ಲದೇ ಮಾಜಿ ಸಿಎಂ ಯಡಿಯೂರಪ್ಪನವರ ಪುತ್ರ, ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರ ಹೆಸರನ್ನು ಉಲ್ಲೇಖಿಸಿದ ಕಿಡಿಕಾರಿದೆ.

# ರಫಾದಲ್ಲಿ ವಿನಾಶಕಾರಿ ಸ್ಫೋಟ; 8 ಇಸ್ರೇಲಿ ಸೈನಿಕರು ಸಾವು

**ಟೆಲ್ ಅವೀವ್:** ದಕ್ಷಿಣ ಗಾಜಾದ ರಫಾದಲ್ಲಿ ವಿನಾಶಕಾರಿ ಸ್ಫೋಟ ಸಂಭವಿಸಿ ಎಂಟು ಮಂದಿ ಇಸ್ರೇಲಿ ಸೈನಿಕರು ಮೃತಪಟ್ಟಿದ್ದಾರೆ.

ಮೃತರಲ್ಲಿ ಬೀಟ್ ಜಾನ್‌ನಿಂದ ಯುದ್ಧ ಎಂಜಿನಿಯರಿಂಗ್ ಕಾರ್ಪ್ಸ್‌ನ 601 ನೇ ಬೆಟಾಲಿಯನ್‌ನ ಡೆಪ್ಯೂಟಿ ಕಂಪನಿ ಕಮಾಂಡರ್ ಸಿಪಿಟಿ ವಾಸೆಮ್ ಮಹಮೂದ್ (23) ಕೂಡ ಒಬ್ಬರು ಎಂದು ಗುರುತಿಸಲಾಗಿದೆ. ಉಳಿದ ಏಳು ಸೈನಿಕರ ಹೆಸರನ್ನು ಕುಟುಂಬದವರಿಗೆ ಮಾಹಿತಿ ನೀಡಿದ ನಂತರ ಬಹಿರಂಗಪಡಿಸಲಾಗುವುದು ಎಂದು ಐಡಿಎಫ್ ತಿಳಿಸಿದೆ.

ಐಡಿಎಫ್ ತನಿಖೆಯ ಆರಂಭಿಕ ಸಂಶೋಧನೆಗಳು, ಸ್ಫೋಟ ಸಂಭವಿಸಿದಾಗ ಸೈನಿಕರು ನೇಮರ್ ಶಸ್ತ್ರಸಜ್ಜಿತ ಯುದ್ಧ ಎಂಜಿನಿಯರಿಂಗ್ ವಾಹನ ಒಳಗೆ ಇದ್ದರು ಎಂದು ತಿಳಿಸಿದೆ. ರಫಾದ ಟೆಲ್ ಸುಲ್ತಾನ್ ನೆರೆಹೊರೆಯಲ್ಲಿ ಹಮಾಸ್ ವಿರುದ್ಧ ತಡರಾತ್ರಿ ಕಾರ್ಯಾಚರಣೆ ನಡೆಸಲಾಗಿತ್ತು. ನಂತರ ಬೆಳಗ್ಗೆ 5 ಗಂಟೆಗೆ ಈ ಘಟನೆ ಸಂಭವಿಸಿದೆ. ಬೆಂಗಾವಲು ಪಡೆಯಲ್ಲಿ ಐದನೇ ಅಥವಾ ಆರನೇ ವಾಹನವಾಗಿ ಇರಿಸಲಾದ ನೇಮರ್ ಸಿಇವಿ ಸ್ಫೋಟಕ್ಕೆ ಒಳಗಾಗಿದೆ. ಸ್ಫೋಟವು ಪೂರ್ವ-ಸ್ಥಾಪಿತ ಬಾಂಬ್‌ನಿಂದ ಉಂಟಾಗಿದೆಯೇ ಅಥವಾ ಹಮಾಸ್ ಉಗ್ರರು ನೇರವಾಗಿ ವಾಹನದ ಮೇಲೆ ಸ್ಫೋಟಕ ಸಾಧನವನ್ನು ಇರಿಸಿದ್ದಾರೆಯೇ ಎಂಬುದು ಸ್ಪಷ್ಟವಾಗಿಲ್ಲ. ತನಿಖಾಧಿಕಾರಿಗಳು ಸಿಇವಿ ಹೊರಗೆ ಸಂಗ್ರಹಿಸಲಾದ ಸ್ಫೋಟಕಗಳು ಸ್ಫೋಟದ ತೀವ್ರತೆಗೆ ಕಾರಣವಾಗಿವೆಯೇ ಎಂಬುದನ್ನು ಪರಿಶೀಲಿಸುತ್ತಿದ್ದಾರೆ. ಘಟನೆಯ ಸಮಯದಲ್ಲಿ ಯಾವುದೇ ಗುಂಡಿನ ಚಕಮಕಿ ನಡೆದಿಲ್ಲ. ಸ್ಫೋಟದ ಸಮಯದಲ್ಲಿ ವಾಹನವು ಚಲಿಸುತ್ತಿತ್ತು ಎಂದು ಐಡಿಎಫ್ ತಿಳಿಸಿದೆ. ಹಮಾಸ್ ಬಂಡುಕೋರರ ವಿರುದ್ಧ ಇದುವರೆಗೆ ನಡೆದ ಕಾರ್ಯಾಚರಣೆಯಲ್ಲಿ ಇಸ್ರೇಲಿ ಸೈನಿಕರ ಸಾವಿನ ಸಂಖ್ಯೆ 307 ಕ್ಕೆ ಏರಿಕೆಯಾಗಿದೆ.

# ಉಕ್ರೇನ್ ನ್ಯಾಟೊ ಜತೆ ಸೇರದಿದ್ದರೆ ಕದನ ವಿರಾಮ ಘೋಷಣೆ: ಪುತಿನ್

**ಮಾಸ್ಕೋ:** ಉಕ್ರೇನ್ ನ್ಯಾಟೊ ಸಂಘಟನೆಗೆ ಸೇರಿಕೊಳ್ಳಬಾರದು ಹಾಗೂ ರಷ್ಯಾದಲ್ಲಿನ ತನ್ನ ಸೈನ್ಯಗಳನ್ನು ಹಿಂಪಡೆದುಕೊಂಡರೆ ಕೂಡಲೇ ಕದನ ವಿರಾಮ ಘೋಷಿಸುತ್ತೇವೆ ಎಂದು ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುತಿನ್ ತಿಳಿಸಿದ್ದಾರೆ. ಕಳೆದ ಎರಡು ವರ್ಷಗಳಿಂದ ರಷ್ಯಾ-ಉಕ್ರೇನ್ ನಡುವೆ ಯುದ್ಧ ನಡೆಯುತ್ತಿದ್ದು, ಯುದ್ಧದ ಅಂತ್ಯ ಹಾಗೂ ಶಾಂತಿ ಸ್ಥಾಪನೆಗೆ ರಷ್ಯಾ ಈ ಪ್ರಸ್ತಾವನೆ ಇಟ್ಟಿದೆ. ಅಶಾಂತಿಯ ದುರ್ಘಟನೆಗಳನ್ನು ನಿಲ್ಲಿಸಿ, ರಷ್ಯಾ ಹಾಗೂ ಉಕ್ರೇನ್ ನಡುವೆ ಏಕತೆ ಸ್ಥಾಪಿಸಲು ನಾವು ಬಯಸುತ್ತೇವೆ. ಉಕ್ರೇನ್ ತನ್ನ ಪ್ರದೇಶಗಳ ಬಗ್ಗೆ ನಿಖರ ಮಾಹಿತಿ ನೀಡಬೇಕು ಮತ್ತು ನ್ಯಾಟೊ ಸಂಘಟನೆಗೆ ಸೇರುವ ಯೋಜನೆ ಕೈ ಬಿಡಬೇಕು. 2022ರಲ್ಲಿ ರಷ್ಯಾ ವಶಪಡಿಸಿಕೊಂಡ 4 ಪ್ರದೇಶಗಳಲ್ಲಿ ಉಕ್ರೇನ್ ಸೈನ್ಯ ಉಳಿದುಕೊಂಡಿವೆ. ಶೀಘ್ರ ತನ್ನ ಸೈನ್ಯಗಳನ್ನು ಉಕ್ರೇನ್ ಹಿಂಪ ಡೆಯಬೇಕು. ಈ ಪ್ರಸ್ತಾವನೆಗೆ ಉಕ್ರೇನ್ ಒಪ್ಪದಿದ್ದರೆ, ಮುಂದಿನ ಅನಾಹುತಗಳಿಗೆ ಅವರೇ ಹೊಣೆಯಾಗುತ್ತಾರೆ ಎಂದು ಪುಟಿನ್ ಎಚ್ಚರಿಕೆ ನೀಡಿದ್ದಾರೆ. ರಷ್ಯಾದ ಈ ಪ್ರಸ್ತಾವನೆಗೆ ಉಕ್ರೇನ್ ಇನ್ನೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. 2022ರ ಫೆಬ್ರವರಿಯಿಂದ ರಷ್ಯಾ ಮತ್ತು ಉಕ್ರೇನ್ ನಡುವೆ ಸೇನಾ ಕಾರ್ಯಾಚರಣೆ ನಡೆಯುತ್ತಿದೆ. ಇದುವರೆಗೂ ಕದನ ವಿರಾಮ ಘೋಷಣೆಯಾಗಿಲ್ಲ.



# ಉಗುಳಿನಿಂದ ಗ್ರಾಹಕನ ಮುಖಕ್ಕೆ ಮಸಾಜ್ ಮಾಡಿದ ಕ್ಷೌರಿಕ!

**ಲಕ್ನೋ:** ಆಘಾತಕಾರಿ ಘಟನೆಯೊಂದರಲ್ಲಿ ಲಕ್ನೋದ ಸಲೂನ್‌ನಲ್ಲಿ ಕ್ಷೌರಿಕನೊಬ್ಬ ಗ್ರಾಹಕನ ಮುಖಕ್ಕೆ ತನ್ನದೇ ಆದ ಉಗುಳಿನಿಂದ ಮಸಾಜ್ ಮಾಡಿ ಇದೀಗ ಪೊಲೀಸರ ಅತಿಥಿಯಾಗಿದ್ದಾನೆ. ಆರೋಪಿ ಝೈದ್ ತನ್ನ ಕೈ ಮೇಲೆ ಉಗುಳುವುದು ಮತ್ತು ಗ್ರಾಹಕರ ಮುಖವನ್ನು ಉಜ್ಜಲು ಬಳಸಿರುವ ದೃಶ್ಯ ಸಲೂನ್‌ನ ಸಿಸಿಟಿವಿಯಲ್ಲಿ ಸೆರೆಯಾಗಿದೆ.



ಘಟನೆ ಸಂಬಂಧ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ಆರೋಪಿ ಝೈದ್ ನ ಕೃತ್ಯದಿಂದ ಗ್ರಾಹಕನಿಗೆ ಅನುಮಾನ ಬಂದಿದೆ. ಕೂಡಲೇ ಅವರು ಸಲೂನ್ ನಲ್ಲಿ ಅಳವಡಿಸಲಾಗಿದ್ದ ಸಿಸಿಟಿವಿ ಪರಿಶೀಲಿಸಿದ್ದಾರೆ. ಕ್ಷೌರಿಕ ತನ್ನ ಕೈಗೆ ಉಗುಳುವುದು ಮತ್ತು ಮುಖಕ್ಕೆ ಮಸಾಜ್ ಮಾಡಲು ಉಗುಳನ್ನು ಬಳಸುವುದನ್ನು ಕಂಡು ಗಾಬರಿಗೊಂಡು ಪೊಲೀಸರಿಗೆ ದೂರು ನೀಡಿದ್ದಾರೆ.ಗ್ರಾಹಕನ ದೂರಿನ ಆಧಾರದ ಮೇಲೆ ಲಕ್ನೋ ಪೊಲೀಸರು ಝೈದ್‌ನನ್ನು ಬಂಧಿಸಿದ್ದಾರೆ. ಸದ್ಯ ಈ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ. ಘಟನೆ ನಡೆದು ಕೆಲ ದಿನಗಳಾದರೂ ವೀಡಿಯೋ ಸದ್ಯ ಸಾಮಾಜಿಕ ಜಾಲತಾಣದಲ್ಲಿ ಸಖತ್ ವೈರಲ್ ಆಗುತ್ತಿದೆ. ಕ್ಷೌರಿಕನ ನಡೆಗೆ ಭಾರೀ ಆಕ್ರೋಶ ವ್ಯಕ್ತವಾಗುತ್ತಿದೆ.

# ಅಮೆರಿಕಾದಲ್ಲಿ ಚಿನ್ನದಂಗಡಿಗೆ ಕನ್ನ!




**ಕ್ಯಾಲಿಫೋರ್ನಿಯಾ:** ಕ್ಯಾಲಿಫೋರ್ನಿಯಾದ ಸನ್ನಿವೇಲ್ನಲ್ಲಿರುವ ಪುಣೆ ಮೂಲದ ಚಿನ್ನಾಭರಣಗಳ ಮಳಿಗೆಗೆ ನುಗ್ಗಿದ 20 ಮುಸುಕುಧಾರಿ ಧರೋಡೆಕೋರರು, ಚಿನ್ನಾಭರಣಗಳನ್ನು ಕಳ್ಳತನ ಮಾಡಿದ್ದಾರೆ ಎಂದು ವರದಿಯಾಗಿದೆ.

ಜೂನ್ 12ರಂದು ಮಧ್ಯರಾತ್ರಿ ಇವರು ಮಳಿಗೆಗೆ ನುಗ್ಗಿದ್ದ 20 ಖತರ್ನಾಕ್ ಕಳ್ಳರು ಸುತ್ತಿಗೆಯ ಮೂಲಕ ಅಂಗಡಿಯ ಗ್ಲಾಸ್ಗಳನ್ನು ಒಡೆದು ಆಭರಣಗಳನ್ನು ಬ್ಯಾಗ್ಗೆ ತುಂಬಿಕೊಂಡು ಪರಾರಿಯಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಐವರು ಆರೋಪಿಗಳನ್ನು ಬಂಧಿಸಿದ್ದಾರೆ ಎಂದು ತಿಳಿದು ಬಂದಿದೆ. ದೃಶ್ಯದಲ್ಲಿ ಗಮನಿಸಿದಂತೆ ಇಪ್ಪತ್ತು ಜನರ ಗುಂಪು ಏಕಕಾಲಕ್ಕೆ ಚಿನ್ನದ ಅಂಗಡಿಗೆ ನುಗ್ಗಿದ್ದು, ಅಂಗಡಿಯೊಳಗಿದ್ದ ವ್ಯಕ್ತಿಗೆ ಥಳಿಸಿ ಗಾಜುಗಳನ್ನು ಒಡೆದು, ಚಿನ್ನ, ವಜ್ರದ ಆಭರಣಗಳನ್ನು ಬ್ಯಾಗ್ಗೆ ತುಂಬಿಕೊಂಡು ಅಲ್ಲಿಂದ ಕಾಲ್ಕಿತ್ತಿದ್ದಾರೆ. ಈ ವೇಳೆ ದರೋಡೆಕೋರರನ್ನು ಬೆನ್ನಟ್ಟಿದ ಪೊಲೀಸರು, ಐವರು ಕಳ್ಳರನ್ನು ಹೆಡೆಮುರಿ ಕಟ್ಟಿದ್ದಾರೆ. ಬಂಧಿತ ಆರೋಪಿಗಳಿಂದ ಚಿನ್ನಾಭರಣವನ್ನು ವಶಕ್ಕೆ ಪಡೆದಿದ್ದು, ಉಳಿದ ಆರೋಪಿಗಳಿಗಾಗಿ ಬಲೆಬಿಸಿದ್ದಾರೆ ಎನ್ನಲಾಗಿದೆ.

# ಜಪಾನ್‌ನಲ್ಲಿ ಮಾರಕ ಮಾಂಸ ತಿನ್ನುವ ಬ್ಯಾಕ್ಟೀರಿಯಾ ಪತ್ತೆ

**ಜಪಾನ್:** ಜಪಾನ್‌ನ ಟೋಕಿಯೊದಲ್ಲಿಮಾಂಸ ತಿನ್ನುವ ಬ್ಯಾಕ್ಟೀರಿಯಾದಿಂದ ಉಂಟಾಗುವ ಅಪರೂಪದ ಮತ್ತು ಮಾರಣಾಂತಿಕ ಕಾಯಿಲೆಯು ಜಪಾನ್ನಲ್ಲಿ ವೇಗವಾಗಿ ಹರಡುತ್ತಿದ್ದು, ಆತಂಕಕ್ಕೆ ಕಾರಣವಾಗಿದೆ.

ಈ ವರ್ಷದ ಜೂನ್ 2ರವರೆಗೆ ದೇಶದಲ್ಲಿ 'ಸ್ಟ್ರೆಪ್ಟೋಕೊಕಲ್ ಟಾಕ್ಸಿಕ್ ಶಾಕ್ ಸಿಂಡ್ರೋಮ್(ಎಸ್ಟಿಎಸ್ಎಸ್)ನ ಪ್ರಕರಣ 977ಕ್ಕೆ ಹೆಚ್ಚಿದ್ದರೆ, ಕಳೆದ ಇಡೀ ವರ್ಷ 941 ಪ್ರಕರಣ ದಾಖಲಾಗಿತ್ತು ಎಂದು ಸಾಂಕ್ರಾಮಿಕ ರೋಗಗಳ ರಾಷ್ಟ್ರೀಯ ಸಂಸ್ಥೆ ಮಾಹಿತಿ ನೀಡಿದೆ.

ಸಾಮಾನ್ಯವಾಗಿ ಮಕ್ಕಳಲ್ಲಿ ಗಂಟಲು ನೋವು ಮತ್ತು ಊತದ ಸಮಸ್ಯೆ ಕಂಡುಬರುತ್ತದೆ. ಆದರೆ ಕೆಲವು ರೀತಿಯ ಬ್ಯಾಕ್ಟೀರಿಯಾಗಳು ಕೈಕಾಲು ನೋವು, ಊತ, ಜ್ವರ, ಕಡಿಮೆ ರಕ್ತದೊತ್ತಡ, ಉಸಿರಾಟದ ತೊಂದರೆ, ಅಂಗಾಂಗ ವೈಫಲ್ಯ ಮತ್ತು ಸಾವಿಗೆ ಕಾರಣವಾಗುತ್ತದೆ.

ಸ್ಟ್ರೆಪ್ಟೋಕೊಕಲ್ ಟಾಕ್ಸಿಕ್ ಶಾಕ್ ಸಿಂಡ್ರೋಮ್ ಆಕ್ರಮಣಕಾರಿ ಕಾಯಿಲೆಯಾಗಿದ್ದು,ಸೋಂಕು ತಗುಲಿದ 48 ಗಂಟೆಗಳ ಒಳಗೆ ವ್ಯಕ್ತಿ ಸಾವನ್ನಪ್ಪಬಹುದು. ಅದರಲ್ಲೂ ಹೆಚ್ಚಾಗಿ 30 ವರ್ಷಕ್ಕಿಂತ ಮೇಲ್ಪಟ್ಟ ವಯಸ್ಕರಲ್ಲಿ ಸಾವಿನ ಪ್ರಮಾಣವು 30% ರಷ್ಟಿದೆ ಎಂದು ಆರೋಗ್ಯಾಧಿಕಾರಿಗಳು ಹೇಳಿದ್ದಾರೆ.



# ಏಲಿಯನ್‌ಗಳ ಕುರಿತಾದ ಅಚ್ಚರಿಯ ಸಂಗತಿ ಬಹಿರಂಗ



**ಹಾರ್ವರ್ಡ್:** ಏಲಿಯನ್‌ಗಳ ಬಗ್ಗೆ ಸಾಕಷ್ಟು ಕುತೂಹಲ ಮೊದಲಿನಿಂದಲೂ ಇದೆ. ಭೂಮಿಯ ಮೇಲೆ ಈ ಜೀವಿಗಳು ಇವೆಯೋ ಇಲ್ಲವೋ ಎಂಬ ಗೊಂದಲ ಕೂಡ ಹೊಸದೇನಲ್ಲ. ಬಹಳಷ್ಟು ಸಮಯದಿಂದ ವಿಜ್ಞಾನ ಲೋಕ ಕೂಡ ಅನ್ಯಲೋಕದ ಜೀವಿಗಳನ್ನು ಹುಡುಕುತ್ತಿದೆ. ದಶಕಗಳ ಸಂಶೋಧನೆಯ ಹೊರತಾಗಿಯೂ ಇದಕ್ಕೆ ಸ್ಪಷ್ಟ ಉತ್ತರ ಸಿಕ್ಕಿಲ್ಲ. ಇದೀಗ ಹಾರ್ವರ್ಡ್ ವಿಶ್ವವಿದ್ಯಾನಿಲಯದ ಅಧ್ಯಯನವು ಏಲಿಯನ್ಗಳ ಕುರಿತಾದ ಅಚ್ಚರಿಯ ಸಂಗತಿಯನ್ನು ಬಿಚ್ಚಿಟ್ಟಿದೆ. ಭೂಮಿಯ ಮೇಲೆ ರಹಸ್ಯವಾಗಿ ಮಾನವರ ನಡುವೆಯೇ ಅನ್ಯಗ್ರಹ ಜೀವಿಗಳು ವಾಸಿಸುತ್ತಿರಬಹುದು ಎಂದು ಹೇಳಿದೆ. ಸಂಶೋಧಕರ ''ಅಪರಿಚಿತ ಅಸಂಗತ ವಿದ್ಯಮಾನಗಳು'' ಎಂಬ ಹೊಸ ಪ್ರಬಂಧದಲ್ಲಿ ಈ ಕುರಿತು ಬರೆಯಲಾಗಿದೆ. ಸಾಮಾನ್ಯವಾಗಿ ಗಈಔಗಳನ್ನು ಭೂಮ್ಯತೀತ ಜೀವಿಗಳು ಎಂದು ಕರೆಯಲಾಗುತ್ತದೆ,. ಇವು ಭೂಗತವಾಗಿ, ಚಂದ್ರನ ಮೇಲೆ ಅಥವಾ ಮನುಷ್ಯರ ನಡುವೆ ಇರಬಹುದು. ಗಈಔಗಳು ಅಥವಾ ಗುರುತಿಸಲಾಗದ ವೈಮಾನಿಕ ವಿದ್ಯಮಾನಗಳು ಭೂಮಿ ಆಧಾರಿತ ಅನ್ಯಲೋಕದ ಸ್ನೇಹಿತರನ್ನು ಭೇಟಿ ಮಾಡುವ ಅಂತರಿಕ್ಷ ನೌಕೆಗಳಾಗಿರಬಹುದು ಎಂಬ ಕಲ್ಪನೆಯನ್ನು ಸಂಶೋಧನೆ ಬಿಚ್ಚಿಟ್ಟಿದೆ. ಈ ಅಧ್ಯಯನವು ''ಕ್ರಿಪ್ಟೋಟೆರೆಸ್ಟ್ರಿಯಲ್'' ಎಂದು ಕರೆಯಲ್ಪಡುವ ಪರಿಕಲ್ಪನೆಯನ್ನು ಮತ್ತಷ್ಟು ಸಂಶೋಧಿಸಿದೆ. ಈ ಜೀವಿಗಳು ನಮ್ಮ ನಡುವೆ ಮಾನವ ವೇಷದಲ್ಲಿ ವಾಸಿಸುವ, ಭೂಮಿಯ ಭವಿಷ್ಯದಿಂದ ಹುಟ್ಟಿಕೊಂಡ ಅಥವಾ ಬುದ್ಧಿವಂತ ಡೈನೋಸಾರ್ಗಳ ವಂಶಸ್ಥರಾಗಿರಬಹುದು ಎಂದು ಹೇಳಲಾಗ್ತಿದೆ. ಕ್ರಿಪ್ಟೋಟೆರೆಸ್ಟ್ರಿಯಲ್‌ಗಳು ನಾಲ್ಕು ರೂಪಗಳಲ್ಲಿ ಬರಬಹುದು ಎಂದು ಅಧ್ಯಯನವು ಹೇಳುತ್ತದೆ. ಹ್ಯೂಮನ್ ಕ್ರಿಪ್ಟೋಟೆರೆಸ್ಟ್ರಿಯಲ್ ಗಳು: ತಾಂತ್ರಿಕವಾಗಿ ಮುಂದುವರಿದ ಪ್ರಾಚೀನ ಮಾನವ ನಾಗರಿಕತೆಯು ಬಹಳ ಹಿಂದೆಯೇ ನಾಶವಾಯಿತು. ಆದರೆ ಅವಶೇಷ ರೂಪದಲ್ಲಿ ಅಸ್ತಿತ್ವದಲ್ಲಿದೆ. ಅವುಗಳನ್ನೇ ಹ್ಯೂಮನ್ ಕ್ರಿಪ್ಟೋಟೆರೆಸ್ಟ್ರಿಯಲ್ ಎಂದು ಕರೆಯಲಾಗುತ್ತದೆ. ಹೋಮಿನಿಡ್ ಅಥವಾ ಥೆರೋಪಾಡ್ ಕ್ರಿಪ್ಟೋಟೆರೆಸ್ಟ್ರಿಯಲ್‌ಗಳು: ತಾಂತ್ರಿಕವಾಗಿ ಮುಂದುವರಿದ ಮಾನವರಲ್ಲದ ನಾಗರಿಕತೆಯು ಕೆಲವು ಭೂಮಂಡಲದ ಪ್ರಾಣಿಗಳನ್ನು ಒಳಗೊಂಡಿರುತ್ತದೆ. ಅದು ರಹಸ್ಯವಾಗಿ ವಾಸಕ್ಕೆ ವಿಕಸನಗೊಂಡಿದೆ. ಇವು ಕೋತಿಯಂತಹ ಹೋಮಿನಿಡ್ ಸಂತತಿಯಾಗಿರಬಹುದು ಅಥವಾ ''ಅಜ್ಞಾತ, ಬುದ್ಧಿವಂತ ಡೈನೋಸಾರ್‌ಗಳ'' ವಂಶಸ್ಥರಾಗಿರಬಹುದು ಎನ್ನಲಾಗಿದೆ.

# ಗಡಿಯ ಬಳಿ ಗೋಡೆ ಕಟ್ಟುತ್ತಿರುವ ಉತ್ತರ ಕೊರಿಯಾ

**ಸಿಯೋಲ್:** ಉತ್ತರ ಕೊರಿಯಾವು ಗಡಿಯ ಬಳಿ ಉಭಯ ದೇಶಗಳನ್ನು ಪ್ರತ್ಯೇಕಿಸುವ 'ಸೇನಾರಹಿತ ವಲಯ'ದ ಒಳಗೆ ರಸ್ತೆಗಳು ಹಾಗೂ ಗೋಡೆಯನ್ನು ಕಟ್ಟುತ್ತಿದೆ ಎಂದು ದಕ್ಷಿಣ ಕೊರಿಯಾದ ಮಾಧ್ಯಮ ಶನಿವಾರ ವರದಿ ಮಾಡಿವೆ. ಮಿಲಿಟರಿ ಗಡಿರೇಖೆಯ(ಎಂಡಿಎಲ್) ಉತ್ತರದಲ್ಲಿ ಈ ನಿರ್ಮಾಣ ಚಟುವಟಿಕೆ ನಡೆಯುತ್ತಿದೆ. ಇಲ್ಲಿ ನೆಲವನ್ನು ಅಗೆದು ಗೋಡೆ ಕಟ್ಟಲಾಗುತ್ತಿದೆ ಮತ್ತು ರಸ್ತೆಗಳನ್ನು ನಿರ್ಮಿಸಲಾಗುತ್ತಿದೆ. ಉತ್ತರ ಕೊರಿಯಾದ ಮಿಲಿಟರಿಯ ಚಟುವಟಿಕೆಗಳನ್ನು ನಿಕಟವಾಗಿ ಗಮನಿಸಲಾಗುತ್ತಿದೆ ಎಂದು ದಕ್ಷಿಣ ಕೊರಿಯಾದ ರಕ್ಷಣಾ ಇಲಾಖೆಯನ್ನು ಉಲ್ಲೇಖಿಸಿದ ವರದಿ ಹೇಳಿದೆ.



# ಇಸ್ರೇಲ್- ಹಮಾಸ್ ಯುದ್ಧ: ಮೃತಪಟ್ಟವರ ಸಂಖ್ಯೆ 37,296



**ಇಸ್ರೇಲ್:** ಪ್ಯಾಲೆಸ್ಟೀನ್ ಹಾಗೂ ಇಸ್ರೇಲ್ ನಡುವೆ ಎಂಟು ತಿಂಗಳಿನಿಂದ ನಡೆಯುತ್ತಿರುವ ಯುದ್ಧದಿಂದಾಗಿ 37,296 ಮಂದಿ ಮೃತಪಟ್ಟಿದ್ದಾರೆ ಎಂದು ಹಮಾಸ್ ಆಡಳಿತವಿರುವ ಗಾಜಾ ಆರೋಗ್ಯ ಇಲಾಖೆ ಶನಿವಾರ ತಿಳಿಸಿದೆ. ಕಳೆದ 24 ಗಂಟೆಗಳಲ್ಲಿ ಕನಿಷ್ಠ 30 ಮಂದಿ ಮೃತಪಟ್ಟಿದ್ದಾರೆ ಎಂದು ಹೇಳಿಕೆ ಬಿಡುಗಡೆ ಮಾಡಿರುವ ಆರೋಗ್ಯ ಇಲಾಖೆ, ಒಟ್ಟು 85,197 ನಾಗರಿಕರು ಗಾಯಗೊಂಡಿದ್ದಾರೆ ಎಂದೂ ಹೇಳಿದೆ. ಹಮಾಸ್ ಬಂಡುಕೋರರು ಇಸ್ರೇಲ್ ಮೇಲೆ ಕಳೆದ ವರ್ಷ ಅಕ್ಟೋಬರ್ 7ರಂದು ದಾಳಿ ನಡೆಸಿದ್ದರು. ಈ ವೇಳೆ ಸಾವಿರಾರು ಮಂದಿ ಮೃತಪಟ್ಟಿದ್ದರು. ಇದರ ಬೆನ್ನಲ್ಲೇ ಇಸ್ರೇಲ್ ಪ್ರತಿದಾಳಿ ನಡೆಸುತ್ತಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ರಾಜವರ್ಧನ್ ನಟನೆಯ 'ಹಿರಣ್ಯ' ಸಿನಿಮಾದ ಮೆಲೋಡಿ ಹಾಡು ರಿಲೀಸ್



'ಬಿಚ್ಚುಗತ್ತಿ' ಸಿನಿಮಾ ಮೂಲಕ ಭರವಸೆ ಹುಟ್ಟಿಸಿರುವ ಮ್ಯಾಸೀವ್ ಸ್ಟಾರ್ ರಾಜವರ್ಧನ್ ಇದೀಗ ಹಿರಣ್ಯ ಸಿನಿಮಾ ಮೂಲಕ ಪ್ರೇಕ್ಷಕರ ಎದುರು ಹಾಜರಲು ಸಜ್ಜಾಗಿದ್ದಾರೆ. ಇದೀಗ ಈ ಚಿತ್ರದ ಮೆಲೋಡಿ ನಂಬರ್ ಬಿಡುಗಡೆಯಾಗಿದೆ. ಪ್ರಮೋದ್ ಮರವಂತೆ ಸಾಹಿತ್ಯದಲ್ಲಿ ಮೂಡಿ ಬಂದಿರುವ 'ಪದೇ ಪದೇ' ಎಂಬ ಗೀತೆಗೆ ಸಂಚಿತ್ ಹೆಗ್ಡೆ ಧ್ವನಿಯಾಗಿದ್ದಾರೆ.

ಈ ಚಿತ್ರವನ್ನು ಪ್ರವೀಣ್ ಅವ್ಯೂಕ್ ನಿರ್ದೇಶನ ಮಾಡುತ್ತಿದ್ದಾರೆ. ಪೂರ್ಣ ಪ್ರಮಾಣದ ನಿರ್ದೇಶಕನಾಗಿ ಇದು ಅವರಿಗೆ ಮೊದಲ ಚಿತ್ರ. ಇದಕ್ಕೂ ಮುನ್ನ ಕಿರುಚಿತ್ರಗಳನ್ನು ಮಾಡಿ ಅವರು ಸೈ ಎನಿಸಿಕೊಂಡಿದ್ದಾರೆ. ವೇದಾಸ್ ಇನ್ಫಿನಿಟಿ ಪಿಚ್ಚರ್ ಬ್ಯಾನರ್‌ನಲ್ಲಿ ವಿಘ್ನೇಶ್ವರ್ ಮತ್ತು ವಿಜಯ್ ಕುಮಾರ್ ನಿರ್ಮಾಣ ಮಾಡುತ್ತಿದ್ದಾರೆ. 'ಬಿಗ್ ಬಾಸ್' ಖ್ಯಾತಿಯ ದಿವ್ಯಾ ಸುರೇಶ್ ಸ್ಪೆಷಲ್ ರೋಲ್‌ನಲ್ಲಿ ನಟಿಸಿದ್ದು, ಉಳಿದಂತೆ ಹುಲಿ ಕಾರ್ತಿಕ್, ಅರವಿಂದ್ ರಾವ್, ದಿಲೀಪ್ ಶೆಟ್ಟಿ ಮುಂತಾದವರು ಸಿನಿಮಾದ ಇತರ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಯುವನಟಿ ರಿಹಾನಾ ಅವರು ರಾಜವರ್ಧನ್‌ಗೆ ಜೋಡಿಯಾಗಿ ನಟಿಸಿದ್ದಾರೆ. 'ಹಿರಣ್ಯ' ಸಿನಿಮಾಗೆ ಯೋಗೇಶ್ವರನ್ ಆರ್. ಛಾಯಾಗ್ರಹಣವಿದೆ. ಈ ಚಿತ್ರದ ಹಾಡುಗಳಿಗೆ ಜ್ಯೂಡಾ ಸ್ಯಾಂಡಿ ಸಂಗೀತ ಸಂಯೋಜನೆಯಿದೆ. ಚಿತ್ರೀಕರಣ ಮುಗಿಸಿ ಪೋಸ್ಟ್ ಪ್ರೊಡಕ್ಷನ್ ಕೆಲಸದಲ್ಲಿ 'ಹಿರಣ್ಯ' ಟೀಮ್ ನಿರತರಾಗಿದ್ದಾರೆ.



# ವಿದ್ಯಾರ್ಥಿ ವಿದ್ಯಾರ್ಥಿನಿಯರ ಸ್ಟೂಡೆಂಟ್ ಪಾರ್ಟಿ ವೀಡಿಯೋ ಸಾಂಗ್!



ಅರುಣ್ ಅಮುಕ್ತ ನಿರ್ದೇಶನದ ವಿದ್ಯಾರ್ಥಿ ವಿದ್ಯಾರ್ಥಿನಿಯರೇ ಚಿತ್ರದ ಸ್ಟೂಡೆಂಟ್ ಪಾರ್ಟಿ ವೀಡಿಯೋ ಸಾಂಗ್ ಬಿಡುಗಡೆಗೊಂಡಿದೆ. ಅಚ್ಚುಕಟ್ಟಾದ ಪತ್ರಿಕಾಗೋಷ್ಠಿಯಲ್ಲಿ ಈ ಸಾಂಗ್ ಅನ್ನು ಅನಾವರಣಗೊಳಿಸಲಾಗಿದೆ. ನಿರ್ದೇಶಕ ಅರುಣ್ ಅಮುಕ್ತ, ಚಂದನ್ ಶೆಟ್ಟಿ, ಚೇತನ್ ಕುಮಾರ್ ಹಾಜರಿದ್ದ ಈ ವೇದಿಕೆಯಲ್ಲಿ ಒಟ್ಟಾರೆ ಸಿನಿಮಾ ರೂಪುಗೊಂಡಿದ್ದರ ಬಗ್ಗೆ, ಸದರಿ ಪಾರ್ಟಿ ಸಾಂಗ್ ನ ವಿಶೇಷತೆಗಳ ಬಗ್ಗೆ ಒಂದಷ್ಟು ಮಾಹಿತಿಗಳನ್ನು ಹಂಚಿಕೊಳ್ಳಲಾಗಿದೆ.

ಈಗ ಬಿಡುಗಡೆಗೊಂಡಿರೋ ಹಾಡು ರ್ಯಾಪ್ ಶೈಲಿಯಲ್ಲಿ ಮೂಡಿ ಬಂದಿದೆ. ಚೇತನ್ ಕುಮಾರ್ ಸಾಹಿತ್ಯಕ್ಕೆ ವಿಜೇತ್ ಕೃಷ್ಣ ಸಂಗೀತ ಸಂಯೋಜನೆ ಮಾಡಿದ್ದಾರೆ. ಚಂದನ್ ಶೆಟ್ಟಿ ಮತ್ತು ವಿಜೇತ್ ಕೃಷ್ಣ ಧ್ವನಿಯಾಗಿದ್ದಾರೆ. ಇದು ವಿಜೇತ್ ಕೃಷ್ಣ ಮತ್ತು ಚಂದನ್ ಶೆಟ್ಟಿ ಅವರುಗಳ ಎರಡನೇ ಸಮಾಗಮ. ವಿಜೇತ್ ಕೃಷ್ಣ, ಚಂದನ್ ಶೆಟ್ಟಿ ಮತ್ತು ಚೇತನ್ ಕುಮಾರ್ ದಶಕದ ಹಿಂದೆ ರೂಂ ಮೇಟ್ ಗಳಾಗಿದ್ದರಂತೆ. ಈ ಹಿಂದೆ ವಿಜೇತ್ ಮತ್ತು ಚಂದನ್ ಶೆಟ್ಟಿ ಸಮಾಗಮದಲ್ಲಿ ಒಂದೇ ಒಂದು ಪೆಗ್ಗಿಗೆ ಎಂಬ ಹಾಡು ಬಂದಿತ್ತು. ಅದು ಸೂಪರ್ ಹಿಟ್ ಆಗಿತ್ತು. ಈ ಹಾಡೂ ಅದೇ ರೀತಿ ಹಿಟ್ಟಾಗಲೆಂಬ ಆಶಯವನ್ನ ಚಂದನ್ ಶೆಟ್ಟಿ ವ್ಯಕ್ತ ಪಡಿಸಿದ್ದಾರೆ.

ಇನ್ನುಳಿದಂತೆ ಸಾಹಿತ್ಯ ಬರೆದಿರುವ ಚೇತನ್ ಕುಮಾರ್ ಅವರಿಗೆ ವಿಜೇತ್ ಕೃಷ್ಣ ಅವರ ಸಂಗೀತ ಅಂದ್ರೆ ಇಷ್ಟವಂತೆ. ಆ ಪ್ರೀತಿಯಿಂದಲೇ ಈ ಹಾಡು ಬರೆದಿದ್ದೇನೆಂದಿರುವ ಚೇತನ್, ಇದೂ ಜನಮನ ಗೆಲ್ಲಲೆಂದು ಹಾರೈಸಿದ್ದಾರೆ. ಈ ವೇದಿಕೆಯಲ್ಲಿ ಸದರಿ ಹಾಡಿನಲ್ಲಿ ನಟಿಸಿರುವ ಮನೋಜ್ ವಿವಾನ್, ಮನಸ್ವಿ, ಭಾವನಾ ಅಪ್ಪು, ಅಮರ್ ಕೂಡಾ ಹಾಜರಿದ್ದರು.

ವೆರೈಟಿ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಸುಬ್ರಮಣ್ಯ ಕುಕ್ಕೆ ಮತ್ತು ಎ.ಸಿ ಶಿವಲಿಂಗೇಗೌಡ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಶ್ರೀಕಾಂತ್ ಜಿ ಕಶ್ಯಪ್ ಕಾರ್ಯಕಾರಿ ನಿರ್ಮಾಪಕ, ಕುಮಾರ್ ಗೌಡ ಛಾಯಾಗ್ರಹಣ, ಭರ್ಜರಿ ಚೇತನ್ ಮತ್ತು ವಾಸುಕಿ ವೈಭವ್ ಸಾಹಿತ್ಯ, ಪವನ್ ಗೌಡ ಸಂಕಲನ, ಟೈಗರ್ ಶಿವು, ನರಸಿಂಹ ಸಾಹಸ ನಿರ್ದೇಶನ ಈ ಚಿತ್ರಕ್ಕಿರಲಿದೆ ಅರುಣ್ ಸುರೇಶ್ ಈ ಹಾಡಿಗೆ ಛಾಯಾಗ್ರಹಣ ಮಾಡಿದ್ದಾರೆ. ಚಂದನ್ ಶೆಟ್ಟಿ, ಅಮರ್, ಭಾವನಾ, ಮನಸ್ವಿ, ವಿವಾನ್, ಭವ್ಯ, ಸುನೀಲ್ ಪುರಾಣಿಕ್, ಅರವಿಂದ ರಾವ್, ಸಿಂಚನಾ, ರಘು ರಾಮನಕೊಪ್ಪ, ಪ್ರಶಾಂತ್ ಸಂಬರ್ಗಿ, ಕಾಕ್ರೋಚ್ ಸುಧಿ ಮುಂತಾದವರು ನಟಿಸಿದ್ದಾರೆ. ಇನ್ನುಳಿದಂತೆ ವಿಜೇತ್ ಕೃಷ್ಣ, ವಾಸು ದೀಕ್ಷಿತ್ ಸಂಗೀತ ನಿರ್ದೇಶನ ಈ ಚಿತ್ರಕ್ಕಿದೆ.

# ಕಮಲ್ ಹಾಸನ್ ಎದುರು ತೊಡೆತಟ್ಟಿದ ಅಕ್ಷಯ್ ಕುಮಾರ್





ಬಾಲಿವುಡ್ ಸೂಪರ್‌ಸ್ಟಾರ್ ಅಕ್ಷಯ್ ಕುಮಾರ್ ಬಾಕ್ಸ್ ಆಫೀಸ್‌ನಲ್ಲಿ ಇತ್ತೀಚೆಗೆ ಗೆಲುವು ಕಂಡಿಲ್ಲ. ಅವರಿಗೆ ದೊಡ್ಡ ಯಶಸ್ಸಿನ ಅಗತ್ಯವಿದೆ. ಅವರ ಬಳಿ ಈಗ 10ಕ್ಕೂ ಹೆಚ್ಚು ಸಿನಿಮಾಗಳಿವೆ. ವರ್ಷಕ್ಕೆ ನಾಲ್ಕೈದು ಸಿನಿಮಾಗಳು ರಿಲೀಸ್ ಆಗುತ್ತವೆ. ನಟ 'ಸರ್ಫಿರಾ' ಚಿತ್ರದೊಂದಿಗೆ ಪ್ರೇಕ್ಷಕರ ಎದುರು ಬರಲು ಅವರು ರೆಡಿ ಆಗಿದ್ದಾರೆ. ಈ ಚಿತ್ರದ ಬಗೆಗಿನ ವಿವರಗಳು ನಿರಂತರವಾಗಿ ಬರುತ್ತಲೇ ಇವೆ. ಇತ್ತೀಚೆಗಷ್ಟೇ ಈ ಚಿತ್ರದ ಟ್ರೇಲರ್ ಯಾವಾಗ ಬರಲಿದೆ ಎಂಬ ಅಧಿಕೃತ ಘೋಷಣೆ ಕೂಡ ಹೊರಬಿದ್ದಿದೆ. ಈ ವೇಳೆ ರಿಲೀಸ್ ದಿನಾಂಕದ ಬಗ್ಗೆಯೂ ಮಾಹಿತಿ ನೀಡಲಾಗಿದೆ.

'ಸರ್ಫಿರಾ' ಚಿತ್ರದ ಪೋಸ್ಟರ್ ಅನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ. 'ಜೀವನದಲ್ಲಿ ದೊಡ್ಡ ಕನಸು ಕಾಣುವ ವ್ಯಕ್ತಿಯ ಕಥೆ' ಎಂದು ಅಕ್ಷಯ್ ಬರೆದುಕೊಂಡಿದ್ದಾರೆ. 'ನನಗೆ ಈ ರೀತಿಯ ಕಥೆ, ಚಿತ್ರ ಮತ್ತು ಪಾತ್ರವನ್ನು ಮಾಡುವ ಅವಕಾಶ ಸಿಗೋದು ಜೀವನದಲ್ಲಿ ಒಮ್ಮೆ ಮಾತ್ರ. ಜೂನ್ 18 ರಂದು ಸರ್ಫಿರಾ ಚಿತ್ರದ ಟ್ರೈಲರ್ ಬರಲಿದೆ. ನೀವು ಈ ಚಿತ್ರವನ್ನು ಜುಲೈ 12 ರಂದು ಚಿತ್ರಮಂದಿರಗಳಲ್ಲಿ ವೀಕ್ಷಿಸಬಹುದು' ಎಂದು ಬರೆಯಲಾಗಿದೆ.

ಅಕ್ಷಯ್ ಕುಮಾರ್ ಅವರ 'ಬಡೇ ಮಿಯಾ ಚೋಟೆ ಮಿಯಾ' ಚಿತ್ರವು ಅಜಯ್ ದೇವಗನ್ ಅವರ 'ಮೈದಾನ್' ಚಿತ್ರದ ಎದುರು ರಿಲೀಸ್ ಆಗಿತ್ತು. ಆದರೆ ಎರಡೂ ಚಿತ್ರಗಳು ಗಲ್ಲಾಪೆಟ್ಟಿಗೆಯಲ್ಲಿ ಉತ್ತಮ ಗಳಿಕೆಯನ್ನು ಮಾಡಲಿಲ್ಲ. ಎರಡೂ ಸಿನಿಮಾಗಳು ಸೋತಿವೆ. ಈಗ ಅಕ್ಷಯ್ ಕುಮಾರ್ ನೇರವಾಗಿ ಸೌತ್ ಸ್ಟಾರ್ ಕಮಲ್ ಹಾಸನ್ ಅವರನ್ನು ಎದುರಿಸುತ್ತಿದ್ದಾರೆ.

ಕಮಲ್ ಹಾಸನ್ ಅವರ 'ಇಂಡಿಯನ್' ಸಿನಿಮಾ ಬ್ಲಾಕ್ ಬಸ್ಟರ್ ಎನಿಸಿಕೊಂಡಿತ್ತು. ಈಗ ಅದರ ಸೀಕ್ವೆಲ್ ಬರುತ್ತಿದೆ. ಜುಲೈ 12ರಂದು ಸಿನಿಮಾ ರಿಲೀಸ್ ಆಗುತ್ತಿದೆ. ಚಿತ್ರದ ಬಜೆಟ್ 250 ಕೋಟಿ ಎಂದು ಹೇಳಲಾಗುತ್ತಿದೆ. ಈ ಚಿತ್ರವನ್ನು ಎದುರಿಸುವುದು ಯಾರಿಗೂ ಸುಲಭವಲ್ಲ. ಆದರೆ ಈಗ ಅಕ್ಷಯ್ ಕುಮಾರ್ ಈ ಬಗ್ಗೆ ತಲೆಕೆಡಿಸಿಕೊಂಡಿಲ್ಲ. ಅವರ ನಟನೆಯ 'ಸರ್ಫಿರಾ' ಚಿತ್ರ 'ಇಂಡಿಯನ್ 2' ಎದುರು ರಿಲೀಸ್ ಆಗುತ್ತಿದೆ. ಸೌತ್ ಸೂಪರ್ ಸ್ಟಾರ್ ಸೂರ್ಯ ಕೂಡ ಚಿತ್ರದಲ್ಲಿ ನಟಿಸಿದ್ದಾರೆ.

# ಟಿ20 ವಿಶ್ವಕಪ್ ಪಂದ್ಯದೊಂದಿಗೆ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ



ನಮೀಬಿಯಾ ತಂಡದ ಸ್ಟಾರ್ ಆಲ್‌ರೌಂಡರ್ ಡೇವಿಡ್ ವೀಝು ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಆಂಟಿಗುವಾದ ನಾರ್ತ್ ಸೌಂಡ್‌ನಲ್ಲಿರುವ ಸರ್ ವಿವಿಯನ್ ರಿಚರ್ಡ್ಸ್ ಸ್ಟೇಡಿಯಂನಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ಪಂದ್ಯದಲ್ಲಿ ಕೊನೆಯ ಬಾರಿ ಕಣಕ್ಕಿಳಿಯುವ ಮೂಲಕ ವೀಝು ಇಂಟರ್‌ನ್ಯಾಷನಲ್ ಕ್ರಿಕೆಟ್ ಕೆರಿಯರ್ ಅಂತ್ಯಗೊಳಿಸಿದರು. 2013 ರಿಂದ 2016 ರವರೆಗೆ ಸೌತ್ ಆಫ್ರಿಕಾ ತಂಡವನ್ನು ಪ್ರತಿನಿಧಿಸಿದ್ದ ವೀಝು ಆ ಬಳಿಕ ನಮೀಬಿಯಾ ಪರ ಹೊಸ ಕೆರಿಯರ್ ಆರಂಭಿಸಿದ್ದರು. ಇದೀಗ ತಮ್ಮ 11 ವರ್ಷಗಳ ಸುದೀರ್ಘ ಅಂತಾರಾಷ್ಟ್ರೀಯ ಕ್ರಿಕೆಟ್ ವೃತ್ತಿಜೀವನಕ್ಕೆ ವಿದಾಯ ಹೇಳಿದ್ದಾರೆ.

**ಡೇವಿಡ್ ವೀಝು ವೃತ್ತಿಜೀವನ:** ಏಕದಿನ ಕ್ರಿಕೆಟ್‌ನಲ್ಲಿ 15 ಪಂದ್ಯಗಳನ್ನಾಡಿರುವ ಡೇವಿಡ್ ವೀಝು 330 ರನ್ ಮತ್ತು 15 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಹಾಗೆಯೇ 54 ಟಿ20 ಪಂದ್ಯಗಳಿಂದ 624 ರನ್ ಹಾಗೂ 59 ವಿಕೆಟ್ ಪಡೆದಿದ್ದಾರೆ.

**ಐಪಿಎಲ್‌ನಲ್ಲೂ ಮಿಂಚಿಂಗ್:** ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಆರ್‌ಸಿಬಿ, ಕೆಕೆಆರ್ ಪರ ಒಟ್ಟು 18 ಪಂದ್ಯಗಳನ್ನಾಡಿರುವ ಡೇವಿಡ್ ವೀಝು 148 ರನ್ ಹಾಗೂ 16 ವಿಕೆಟ್ ಕಬಳಿಸಿದ್ದಾರೆ. ವಿಶೇಷ ಎಂದರೆ ಎರಡು ದೇಶಗಳನ್ನು ಪ್ರತಿನಿಧಿಸಿ ಐಪಿಎಲ್‌ನಲ್ಲಿ ಸ್ಥಾನ ಪಡೆದ ಏಕೈಕ ಆಟಗಾರ ಎಂಬ ದಾಖಲೆ ಡೇವಿಡ್ ವೀಝು ಹೆಸರಿನಲ್ಲಿದೆ.

ಸೌತ್ ಆಫ್ರಿಕಾ ತಂಡದಲ್ಲಿದ್ದಾಗ 2015 ರಲ್ಲಿ ಡೇವಿಡ್ ವೀಝು ಆರ್‌ಸಿಬಿ ತಂಡಕ್ಕೆ ಆಯ್ಕೆಯಾಗಿದ್ದರು. ಅಲ್ಲದೆ ಎರಡು ಸೀಸನ್‌ಗಳಲ್ಲಿ ಕಣಕ್ಕಿಳಿದಿದ್ದ ವೀಝು ಒಟ್ಟು 15 ಪಂದ್ಯಗಳನ್ನಾಡಿ 16 ವಿಕೆಟ್‌ಗಳನ್ನು ಕಬಳಿಸಿದ್ದರು.

ಇದಾದ ಬಳಿಕ ನಮೀಬಿಯಾ ತಂಡವನ್ನು ಪ್ರತಿನಿಧಿಸಿದ್ದ ಡೇವಿಡ್ ವೀಝು, ಐಪಿಎಲ್ 2023 ರಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಕ್ಕೆ ಆಯ್ಕೆಯಾಗಿದ್ದರು. ಈ ಮೂಲಕ ಎರಡು ದೇಶಗಳನ್ನು ಪ್ರತಿನಿಧಿಸಿ ಐಪಿಎಲ್‌ನಲ್ಲಿ ಅವಕಾಶ ಪಡೆದ ಏಕೈಕ ಆಟಗಾರ ಎನಿಸಿಕೊಂಡಿದ್ದಾರೆ.

ಇದೀಗ ಅಂತಾರಾಷ್ಟ್ರೀಯ ಕ್ರಿಕೆಟ್ ಬದುಕಿಗೆ ವಿದಾಯ ಹೇಳಿರುವ ಡೇವಿಡ್ ವೀಝು ಮುಂಬರುವ ದಿನಗಳಲ್ಲಿ ಫ್ರಾಂಚೈಸಿ ಲೀಗ್‌ನಲ್ಲಿ ಮುಂದುವರೆಯುವ ಸಾಧ್ಯತೆಯಿದೆ.

# ಟೀಮ್ ಇಂಡಿಯಾದ ಮುಂದಿನ ಎದುರಾಳಿ ಯಾರು?



ಫ್ಲೋರಿಡಾದಲ್ಲಿ ನಡೆಯಬೇಕಿದ್ದ ಭಾರತ ಮತ್ತು ಕೆನಡಾ ತಂಡಗಳ ನಡುವಣ ಪಂದ್ಯವು ಮಳೆಗೆ ಅಹುತಿಯಾಗಿದೆ. ಇದರೊಂದಿಗೆ ಟೀಮ್ ಇಂಡಿಯಾದ ಮೊದಲ ಸುತ್ತಿನ ಪಂದ್ಯಗಳು ಮುಕ್ತಾಯಗೊಂಡಿದೆ. ಮೊದಲ ಸುತ್ತಿನಲ್ಲಿ ಭಾರತ ತಂಡವು ಒಟ್ಟು 3 ಪಂದ್ಯಗಳನ್ನಾಡಿದ್ದು, ಈ ಎಲ್ಲಾ ಪಂದ್ಯಗಳಲ್ಲೂ ಟೀಮ್ ಇಂಡಿಯಾ ಜಯಭೇರಿ ಬಾರಿಸಿದೆ.

ಮೊದಲ ಪಂದ್ಯದಲ್ಲಿ ಐರ್ಲೆಂಡ್ ವಿರುದ್ಧ ಗೆದ್ದಿದ್ದ ಟೀಮ್ ಇಂಡಿಯಾ, ಎರಡನೇ ಪಂದ್ಯದಲ್ಲಿ ಪಾಕಿಸ್ತಾನ್ ತಂಡವನ್ನು ಬಗ್ಗು ಬಡಿದಿತ್ತು. ಇನ್ನು ಮೂರನೇ ಪಂದ್ಯದಲ್ಲಿ ಯುಎಸ್‌ಎ ವಿರುದ್ಧ ಗೆದ್ದು ಬೀಗಿತ್ತು. ಹಾಗೆಯೇ ಕೆನಡಾ ವಿರುದ್ಧದ ನಾಲ್ಕನೇ ಪಂದ್ಯವು ಮಳೆಯಿಂದಾಗಿ ರದ್ದಾಗಿದೆ.

ಇದರೊಂದಿಗೆ ಒಟ್ಟು 6 ಅಂಕಗಳೊಂದಿಗೆ ಭಾರತ ತಂಡವು ಗ್ರೂಪ್-ಎ ಪಾಯಿಂಟ್ಸ್ ಟೇಬಲ್‌ನಲ್ಲಿ ಅಗ್ರಸ್ಥಾನ ಅಲಂಕರಿಸಿದೆ. ಈ ಅಗ್ರಸ್ಥಾನದೊಂದಿಗೆ ಸೂಪರ್-8 ಹಂತಕ್ಕೆ ಎಂಟ್ರಿ ಕೊಟ್ಟಿರುವ ಟೀಮ್ ಇಂಡಿಯಾ ದ್ವಿತೀಯ ಸುತ್ತಿನಲ್ಲಿ ಗ್ರೂಪ್- 1 ರಲ್ಲಿ ಕಣಕ್ಕಿಳಿಯಲಿದೆ.

ಅದರಂತೆ ಟೀಮ್ ಇಂಡಿಯಾದ ಅಫ್ಘಾನಿಸ್ತಾನ್, ಆಸ್ಟ್ರೇಲಿಯಾ ಮತ್ತು ಬಾಂಗ್ಲಾದೇಶ್ ಅಥವಾ ನೆದರ್‌ಲೆಂಡ್ಸ್ ವಿರುದ್ಧ ಕಣಕ್ಕಿಳಿಯಲಿದೆ. ಇಲ್ಲಿ ಬಾಂಗ್ಲಾದೇಶ್ ಮತ್ತು ನೆದರ್‌ಲೆಂಡ್ಸ್ ನಡುವೆ ಗ್ರೂಪ್-1 ರ ನಾಲ್ಕನೇ ಸ್ಥಾನಕ್ಕಾಗಿ ಪೈಪೋಟಿ ಇದ್ದು, ಹೀಗಾಗಿ ಇನ್ನೂ ಕೂಡ ಭಾರತದ ಎದುರಾಳಿ ಯಾರೆಂಬುದು ನಿರ್ಧಾರವಾಗಿಲ್ಲ.

**ಸೂಪರ್-8 ಸುತ್ತಿನ ಎದುರಾಳಿಗಳು:** ಭಾರತ ತಂಡವು ದ್ವಿತೀಯ ಸುತ್ತಿನ ತನ್ನ ಮೊದಲ ಪಂದ್ಯದಲ್ಲಿ ಅಫ್ಘಾನಿಸ್ತಾನ್ ತಂಡವನ್ನು ಎದುರಿಸಲಿದೆ. ಜೂನ್ 20 ರಂದು ನಡೆಯಲಿರುವ ಈ ಪಂದ್ಯಕ್ಕೆ ಬಾರ್ಬಡೋಸ್‌ನ ಕೆನ್ಸಿಂಗ್ಟನ್ ಸ್ಟೇಡಿಯಂ ಆತಿಥ್ಯವಹಿಸಲಿದೆ.

ಇನ್ನು ಟೀಮ್ ಇಂಡಿಯಾ ತನ್ನ ಎರಡನೇ ಪಂದ್ಯದಲ್ಲಿ ಬಾಂಗ್ಲಾದೇಶ್ ಅಥವಾ ನೆದರ್‌ಲೆಂಡ್ಸ್ ತಂಡವನ್ನು ಎದುರಿಸಲಿದೆ. ಈ ಪಂದ್ಯವು ಜೂನ್ 22 ರಂದು ಅಂಟಿಗುವಾದಲ್ಲಿ ನಡೆಯಲಿದೆ.

ಹಾಗೆಯೇ ಸೂಪರ್-8 ಸುತ್ತಿನ ತನ್ನ ಕೊನೆಯ ಪಂದ್ಯದಲ್ಲಿ ಭಾರತ ತಂಡದ ಎದುರಾಳಿ ಆಸ್ಟ್ರೇಲಿಯಾ. ಜೂನ್ 24 ರಂದು ನಡೆಯಲಿರುವ ಈ ಪಂದ್ಯಕ್ಕೆ ಸೆಂಟ್ ಲೂಸಿಯಾದ ಡಾರೆನ್ ಸ್ಯಾಮಿ ನ್ಯಾಷನಲ್ ಕ್ರಿಕೆಟ್ ಸ್ಟೇಡಿಯಂ ಆತಿಥ್ಯವಹಿಸಲಿದೆ.

# ವಿದ್ಯಾರ್ಥಿಗಳಿಗೆ ಅನ್ಯಾಯ

## ನೀಟ್ ಮರು ಪರೀಕ್ಷೆ, ತನಿಖೆಗೆ ಸಿಎಂ ಆಗ್ರಹ



**ಮೈಸೂರು:** ನೀಟ್ ಪರೀಕ್ಷೆಯಲ್ಲಿ ರ್‍ಯಾಂಕ್ ನೀಡುವುದರಲ್ಲಿ ಹಾಗೂ ನಿರಂತರ ಅಭ್ಯಾಸ ಮಾಡಿ ಬರೆದ ವಿದ್ಯಾರ್ಥಿಗಳಿಗೆ ದೊಡ್ಡ ಅನ್ಯಾಯವಾಗಿದೆ. ಈ ಬಗ್ಗೆ ತನಿಖೆಯಾಗಬೇಕು ಹಾಗೂ ಮರು ಪರೀಕ್ಷೆ ನಡೆಸಲು ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯಿಸಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೃಪಾಂಕ ಕೊಟ್ಟು ಉತ್ತೀರ್ಣ ಮಾಡುವುದು ಕೆಟ್ಟ ಅಭ್ಯಾಸ. ಎನ್‌ಟಿಎ ಪರೀಕ್ಷೆಯನ್ನು ಸರಿಯಾಗಿ ನಡೆಸದೇ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ ಎಂದು ತಿಳಿಸಿದರು. ಬರ ಪರಿಹಾರದ ಬಗ್ಗೆ ಪ್ರತಿಕ್ರಿಯಿಸಿ, ಬರ ಪರಿಹಾರದ ಬಾಕಿ ಮೊತ್ತವನ್ನು ರೈತರಿಗೆ ವಿತರಿಸಲಾಗುತ್ತಿದೆ ಎಂದು ಉತ್ತರಿಸಿದರು.

ದಕ್ಷಿಣ ಭಾರತದ ಏಳು ಜನರು ಕೇಂದ್ರದಲ್ಲಿ ಸಚಿವರಾಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಏನು ಮಾಡಿದರೂ ದಕ್ಷಿಣ ಭಾರತದಲ್ಲಿ ಬಿಜೆಪಿಯನ್ನು ಜನ ಬೆಂಬಲಿಸುವುದಿಲ್ಲ. ಏಕೆಂದರೆ ಬಿಜೆಪಿಯು ಆರ್‌ಎಸ್‌ಎಸ್‌ನ ರಾಜಕೀಯ ಮುಖವಾಡ. ಹಾಗಾಗಿ ಉತ್ತರ ಭಾರತದಲ್ಲಿ ಬಿಜೆಪಿಗೆ ಹಿನ್ನಡೆಯಾಗಿದೆ. ಆರ್‌ಎಸ್‌ಎಸ್‌ನ ಮುಖ್ಯಸ್ಥರು ಅಹಂಕಾರಕ್ಕೆ ಜನ ಸರಿಯಾದ ಪಾಠ ಕಲಿಸಿದ್ದಾರೆ ಎಂದು ಹೇಳಿದ್ದಾರೆ ಎಂದರು.

ಅರುಂಧತಿ ರಾಯ್ ವಿರುದ್ಧ ಪ್ರಕರಣದ ಬಗ್ಗೆ ಪ್ರತಿಕ್ರಿಯೆ ನೀಡಿ, ಬಿಜೆಪಿಯದ್ದು ದ್ವೇಷದ ರಾಜಕಾರಣ. ಹೆದರಿಸುವುದು ಬೆದರಿಸುವುದು, ಇಡಿ, ಸಿಬಿಐ ಬಳಕೆ ಮಾಡುವುದನ್ನು ಮೊದಲಿನಿಂದಲೂ ಮಾಡಿಕೊಂಡು ಬರುತ್ತಿದ್ದಾರೆ. ಅದಕ್ಕಾಗಿ ಜನ ಈ ಬಾರಿ ಅವರಿಗೆ ಬಹುಮತ ಕೊಡಲಿಲ್ಲ ಎಂದರು.

ದ್ವೇಷದ ರಾಜಕಾರಣ ಬಿಜೆಪಿ ಕೆಲಸ

ದೇವೇಗೌಡರ ಕುಟುಂಬದ ನಂತರ ಯಡಿಯೂರಪ್ಪ ಅವರ ಕುಟುಂಬವನ್ನು ಗುರಿಮಾಡಲಾಗಿದೆ ಎಂದು ಕೇಂದ್ರ ಸಚಿವ ಎಚ್ .ಡಿ.ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯೆ ನೀಡಿ, ನಮ್ಮ ಮೇಲೆ, ಡಿ.ಕೆ. ಶಿವಕುಮಾರ್, ರಾಹುಲ್ ಗಾಂಧಿ ಅವರ ಮೇಲೆ ಕೇಸು ಹಾಕಿರುವುದನ್ನು ಏನೆಂದು ಕರೆಯಬೇಕು. ರಾಹುಲ್ ಗಾಂಧಿ ಅವರ ಸಂಸದ ಸ್ಥಾನವನ್ನೇ ರದ್ದುಗೊಳಿಸಿದ್ದನ್ನು ಏನೆಂದು ಕರೆಯುವುದು ಎಂದು ಪ್ರಶ್ನಿಸಿದರು.

ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಜೈಲಿಗೆ ಕಳಿಸಿದ್ದನ್ನು ಏನೆಂದು ಕರೆಯಬೇಕು. ದ್ವೇಷದ ರಾಜಕಾರಣವೂ ಇಲ್ಲ, ಪ್ರೀತಿಯ ರಾಜಕಾರಣ ಎಂದು ಕರೆಯಬೇಕೋ. ಸೇಡಿನ ರಾಜಕಾರಣ ಮಾಡುವುದು ಅವರು, ನಾವು ಯಾವತ್ತೂ ಸೇಡಿನ ರಾಜಕಾರಣ ಮಾಡುವುದಿಲ್ಲ ಎಂದರು.

ನಾನು ನಿನ್ನೆ ಮೊನ್ನೆ ರಾಜಕೀಯಕ್ಕೆ ಬಂದಿಲ್ಲ. ದ್ವೇಷದ ರಾಜಕಾರಣವನ್ನು ನಾನು ಇಂದಿನವರೆಗೆ ಯಾರ ಮೇಲೂ ಮಾಡಿಲ್ಲ. ಅದು ಬಿಜೆಪಿಯವರ ಕೆಲಸ ಎಂದರು.

ಎಸ್.ಸಿ.ಎಸ್.ಟಿ ಮೆರಿಟ್ ವಿದ್ಯಾರ್ಥಿ ವೇತನವನ್ನು ಶೇ. 60ರಿಂದ ಶೇ 75 ಕ್ಕೆ ಏರಿಸಿದ್ದು, 6 ಲಕ್ಷ ಸೀಲಿಂಗ್ ಲಿಮಿಟ್ ನಿಗದಿಪಡಿಸಿರುವುದರಿಂದ ಲಕ್ಷಾಂತರ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತದೆ ಎಂಬ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು ಎಂದರು.

ಎಂಜಿನಿಯರಿಂಗ್ ಮತ್ತು ಮೆಡಿಕಲ್ ಕಾಲೇಜಿನ ಶುಲ್ಕ ಶೇ.10%ರಷ್ಟು ಹೆಚ್ಚಾಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ಬಗ್ಗೆ ನನಗೆ ಗೊತ್ತಿಲ್ಲ ವಿಚಾರ ಮಾಡುವುದಾಗಿ ತಿಳಿಸಿದರು.

**ಶೀಘ್ರದಲ್ಲೇ ಜಿ.ಪಂ, ತಾ.ಪಂ ಚುನಾವಣೆ:** ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿಗಳ ಚುನಾವಣೆ ಬಗ್ಗೆ ಪ್ರತಿಕ್ರಿಯೆ ನೀಡಿ, ಚುನಾವಣೆಯನ್ನು ಆದಷ್ಟು ಶೀಘ್ರದಲ್ಲಿ ಮಾಡುತ್ತೇವೆ ಎಂದರು.

# ಕೃಷಿ ಇಲಾಖೆ ರಾಯಭಾರಿ ಹುದ್ದೆಯಿಂದ ಕೊಲೆ ಆರೋಪಿ ದರ್ಶನ್ ವಜಾ!



**ಬೆಂಗಳೂರು:** ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಪೊಲೀಸ್ ಕಸ್ಟಡಿ ಪಾಲಾಗಿರುವ ನಟ ದರ್ಶನ್ ಕರ್ನಾಟಕ ರಾಜ್ಯ ಅರಣ್ಯ ಮತ್ತು ವನ್ಯಜೀವಿ ರಾಯಭಾರಿಯೂ ಆಗಿದ್ದರು. ದರ್ಶನ್ 2021ರ ಫೆಬ್ರವರಿಯಲ್ಲಿ ಬಿಜೆಪಿ ಆಡಳಿತಾವಧಿಯಲ್ಲಿ ದರ್ಶನ್ ಕೃಷಿ ಇಲಾಖೆಯ ರಾಯಭಾರಿಯಾಗಿದ್ದರು. ಇದೀಗ ರೇಣುಕಾಚಾರ್ಯ ಕೊಲೆ ಪ್ರಕರಣದಲ್ಲಿ ದರ್ಶನ್ ಬಂಧನವಾಗಿದೆ. ಕೊಲೆ ಆರೋಪ ಎದುರಿಸುತ್ತಿರುವ ನಟ ದರ್ಶನ್ ಅವರು ಕೃಷಿ ಇಲಾಖೆಯ ರಾಯಭಾರಿ ಹುದ್ದೆಯಿಂದ ವಜಾ ಮಾಡುವುದು ಖಚಿತವಾಗಿದೆ. ದರ್ಶನ್ ಇನ್ನು ಕೃಷಿ ರಾಯಭಾರಿಯಾಗಿ ಮುಂದುವರಿಯುವ ಪ್ರಶ್ನೆಯೇ ಇಲ್ಲ ಎಂದು ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ.

ಈ ಬಗ್ಗೆ ಎಂ.ಬಿ ಪಾಟೀಲ್ ಮಾತನಾಡಿ ?ದರ್ಶನ್‌ಗೆ ರಾಜಮರ್ಯಾದೆಯ ಪ್ರಶ್ನೆಯೇ ಇಲ್ಲ. ಆರೋಪಿ ಆರೋಪಿಯೇ. ಆರೋಪ ಸಾಬೀತಾದರೆ ಅವರಿಗೆ ಶಿಕ್ಷೆ ಆಗುತ್ತದೆ. ದರ್ಶನ್ ಕೃಷಿ ಇಲಾಖೆ ರಾಯಭಾರಿಯಾಗಿ ಮುಂದುವರಿಯುವ ಪ್ರಶ್ನೆಯೇ ಇಲ್ಲ. ಈ ರೀತಿಯ ಘಟನೆ ಆದ ಬಳಿಕ ರಾಯಭಾರಿಯಾಗಿ ಮುಂದುವರಿಸಲು ಆಗುವುದಿಲ್ಲ? ಎಂದು ಸ್ಪಷ್ಟವಾಗಿ ಹೇಳಿದ್ದಾರೆ.

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಬಂಧನವಾಗಿರುವ ನಟ ದರ್ಶನ್ ವಿರುದ್ಧ ಮತ್ತೊಂದು ಗಂಭೀರ ಆರೋಪ ಕೇಳಿಬಂದಿತ್ತು. ವನ್ಯಜೀವಿ ಧಾಮದಲ್ಲಿ ಖಾಸಗಿ ವಾಹನ ಬಳಕೆ ಬಳಕೆ, ಅರಣ್ಯ ಸಿಬ್ಬಂದಿ ಜತೆ ಬಾಡೂಟ, ಎಣ್ಣೆ ಪಾರ್ಟಿ ಮಾಡುವ ಮೂಲಕ ಅರಣ್ಯ ಮತ್ತು ವನ್ಯಜೀವಿ ಕಾಯ್ದೆ ಉಲ್ಲಂಘಿಸಿದ್ದಾರೆ ಎನ್ನಲಾಗಿತ್ತು. ನಟ ದರ್ಶನ್ ಅವರು ಕರ್ನಾಟಕ ರಾಜ್ಯ ಅರಣ್ಯ ಮತ್ತು ವನ್ಯಜೀವಿ ರಾಯಭಾರಿಯೂ ಆಗಿದ್ದು, ಜಿಲ್ಲೆಯ ಮುತ್ತೋಡಿ, ಭದ್ರ ವನ್ಯಜೀವಿ ತಾಣದಲ್ಲಿ ಖಾಸಗಿ ವಾಹನ ಬಳಕೆ ಮಾಡಿದ್ದಾರೆ. ಅಲ್ಲದೇ ಸೂಕ್ಷ್ಮ ಪ್ರದೇಶಗಳಲ್ಲಿ ಅರಣ್ಯ ಸಿಬ್ಬಂದಿ ಜತೆ ಬಾಡೂಟ, ಎಣ್ಣೆ ಪಾರ್ಟಿ ಮಾಡಿದ್ದಾರೆ ಎನ್ನಲಾಗಿತ್ತು. ವನ್ಯಜೀವಿ ಧಾಮಗಳಿಗೆ ದರ್ಶನ್ ಭೇಟಿ ನೀಡಿದ ಫೋಟೋಗಳು ಸದ್ಯ ವೈರಲ್ ಆಗಿದ್ದವು.

ಅರಣ್ಯದ ಸೂಕ್ಷ್ಮ ಪ್ರದೇಶದಲ್ಲಿ ಖಾಸಗಿ ಕಾರುಗಳ ಬಳಕೆ ನಿಷಿದ್ಧ. ಆದರೂ ದರ್ಶನ್ ಅವರಿಗೆ ಖಾಸಗಿ ವಾಹನ ಬಳಸಲು ಅನುಮತಿ ನೀಡಲಾಗಿದೆ ಎಂದು ಚಿಕ್ಕಮಗಳೂರಿನ ಅರಣ್ಯ ಸಿಬ್ಬಂದಿ ವಿರುದ್ಧ ಸಾರ್ವಜನಿಕರು ಗಂಭೀರ ಆರೋಪ ಮಾಡಿದ್ದರು. ಸಾಮಾನ್ಯ ಜನರಿಗೆ ಮಾತ್ರ ಕಠಿಣ ನಿಯಮಗಳು, ಸೆಲೆಬ್ರಿಟಿಗಳಿಗಾದರೆ ನಿಯಮ ಅನ್ವಯಿಸಲ್ಲವೇ ಎಂದು ಜನರು ಪ್ರಶ್ನಿಸಿಸಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com